ಸಂಪುಟ: 05 ಸಂಚಿಕೆ: 26 ಪುಟಗಳು: 08 ಗುರುವಾರ 10 ಏಪ್ರಿಲ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಒಬ್ಬರನ್ನು ಸೋಲಿಸುವುದು ಬಲು ಸುಲಭ. ಆದರೆ, ಮತ್ತೊಬ್ಬರನ್ನು ಗೆಲ್ಲುವುದು ಬಲು ಕಷ್ಟ.

## ಮೆಟ್ರೋ ಟಿಕೆಟ್ ದರ ಬೆಳಗಿನ ಜಾವ ಒಂದು, ಮಧ್ಯಾಹ್ನ ಇನ್ನೊಂದು

• **ಉದಯವಾಹಿನಿ, ಬೆಂಗಳೂರು**

ನಮ್ಮ ಮೆಟ್ರೋ ಟಿಕೆಟ್ ಪ್ರಯಾಣ ವೇಳೆ ಬೆಳಗಿನ ಜಾವ ಒಂದು, ಮಧ್ಯಾಹ್ನ ಇನ್ನೊಂದು, ರಾತ್ರಿ ಮತ್ತೊಂದು ದರ ಪಡೆಯಲಾಗುತ್ತದೆ. ಬೆಂಗಳೂರು ಮೆಟ್ರೋದಲ್ಲಿ ಸ್ಮಾರ್ಟ್ ಕಾರ್ಡ್ ಬಳಸಿಕೊಂಡು ಪ್ರಯಾಣ ಮಾಡುವ ಹಲವರಿಗೆ ಈ ಅನುಭವ ಆಗಿರುತ್ತದೆ. ಕಡಿಮೆ ದರವಾಗಿದ್ದರೆ ಉಳಿಯಿತು ಎಂದುಕೊಂಡು, ಹೆಚ್ಚಾದರೆ ಮತ್ತೆ ದರ ಏರಿಸಿದರು ಎಂದುಕೊಂಡು ಹಲವರು ಮುಂದೆ ಸಾಗುತ್ತಿದ್ದಾರೆ. ಆದರೆ, ಇದರ ಅಸಲಿತ್ತು ಬೇರೆನೇ ಇದೆ. ಬಿಎಂಆರ್‌ಸಿಎಲ್ ಫೆಬ್ರವರಿಯಲ್ಲಿ ನಮ್ಮ ಮೆಟ್ರೋ ಟಿಕೆಟ್ ದರವನ್ನು ಪರಿಷ್ಕರಣೆ ಮಾಡಿದೆ. ಈ ವೇಳೆ ಹೊಸದೊಂದು ನಿಯಮ ಜಾರಿಗೊಳಿಸಿದೆ. ನಾನ್ ಪೀಕ್ ಅವರ್‌ನಲ್ಲಿ (ಪ್ರಯಾಣಿಕರ ದಟ್ಟಣೆ ಕಡಿಮೆ) ಟಿಕೆಟ್ ದರದ ಮೇಲೆ ಇಂತಿಷ್ಟು ರೂಪಾಯಿ ರಿಯಾಯಿತಿಯನ್ನು ನೀಡಲಾಗುತ್ತಿದೆ. ಹೀಗಾಗಿ ಟಿಕೆಟ್ ದರವು ಬೆಳಿಗ್ಗೆ, ಮಧ್ಯಾಹ್ನ, ಸಂಜೆ ಹಾಗೂ ರಾತ್ರಿ ಅವಧಿಯಲ್ಲಿ ಬೇರೆ ಬೇರೆ ಇರುತ್ತದೆ.

**ಎಷ್ಟಿದೆ ವ್ಯತ್ಯಾಸ:** ನಮ್ಮ ಮೆಟ್ರೋ ಟಿಕೆಟ್ ದರದಲ್ಲಿ ಸ್ಮಾರ್ಟ್ ಕಾರ್ಡ್ ಹೊಂದಿರುವವರಿಗೆ ಶೇಕಡಾ 5 ರಷ್ಟು ರಿಯಾಯಿತಿ ನೀಡಲಾಗುತ್ತದೆ. ನಾನ್ ಪೀಕ್ ಅವರ್‌ನಲ್ಲಿ ಸಂಚರಿಸುವ ಪ್ರಯಾಣಿಕರಿಗೆ ಹೆಚ್ಚುವರಿ ಶೇಕಡಾ 5 ರಷ್ಟು ರಿಯಾಯಿತಿ ನೀಡಲಾಗುತ್ತದೆ. ಒಟ್ಟು ಶೇಕಡಾ 10 ರಷ್ಟು ರಿಯಾಯಿತಿ ಸಿಗುತ್ತದೆ.

## ದಕ್ಷಿಣ ಕನ್ನಡ, ಕೊಡಗಿನಲ್ಲಿ ಮಳೆ ಹಾವೇರಿಯಲ್ಲಿ 30 ಕುರಿ ಸಾವು

• **ಉದಯವಾಹಿನಿ, ಬೆಂಗಳೂರು**

ರಾಜ್ಯದ ಕೆಲ ಜಿಲ್ಲೆಗಳಲ್ಲಿ ಕೂಡಾ ಮಳೆಯಾಗಿದೆ. ಹಾವೇರಿಯಲ್ಲಿ ಸಿಡಿಲು ಬಡಿದು 30 ಕುರಿಗಳು ಸಾವನ್ನಪ್ಪಿವೆ. ಮಂಗಳೂರು ನಗರ ಸೇರಿದಂತೆ ದಕ್ಷಿಣ ಕನ್ನಡ ಜಿಲ್ಲೆಯ ಹಲವೆಡೆ ಮಳೆ ಆರ್ಭಟ ಮಾಡಿದೆ. ಎಲ್ಲೆಡೆ ಸಿಡಿಲು ಗುಡುಗು ಸಹಿತ ಭಾರೀ ಗಾಳಿ ಮಳೆಯಾಗಿದೆ. ಜಿಲ್ಲೆಯ ಕಡಬ ತಾಲ್ಲೂಕಿನಾದ್ಯಂತ ಭಾರೀ ಮಳೆ ಸುರಿದಿದ್ದು, ಕಡಬ, ಕೋಡಿಂಬಾಳ, ನೆಲ್ಯಾಡಿಯಲ್ಲಿ ಸುರಿದ ಭಾರೀ ಮಳೆಗೆ ಜನ ಜೀವನ ಅಸ್ತವ್ಯಸ್ತಗೊಂಡಿದೆ. ಭಾರೀ ಮಳೆಗೆ ನೆಲ್ಯಾಡಿ ಪೇಟೆ ಸಂಪೂರ್ಣ ಜಲಾವೃತವಾಗಿದೆ.

ಕಡಬದ ಪಂಜೋಡಿಯಲ್ಲಿ ಗಾಳಿ ಮಳೆಗೆ ವಿದ್ಯುತ್ ಕಂಬಗಳು ಧರೆಗುರುಳಿವೆ. ಮಂಗಳೂರು ನಗರದಲ್ಲೂ ಕೆಲ ಕಾಲ ಭಾರೀ ಗಾಳಿ ಜೊತೆ ಮಳೆಯಾಗಿದೆ. ನಿನ್ನೆ ಪುತ್ತೂರಿನಲ್ಲಿ ಭಾರೀ ಮಳೆಯಾಗಿತ್ತು. ಪುತ್ತೂರಿನ ಬಪ್ಪಳಿಗೆ ಬಳಿ ಭಾರೀ ಗಾಳಿ ಮಳೆಗೆ ಮನೆ ಮೇಲೆ ತೆಂಗಿನ ಮರ ಬಿದ್ದು, ಮನೆ ಹಾನಿಗೀಡಾಗಿದೆ. ಮನೆಯವರು ಹೊರಗೆ ಕೆಲಸ ಮಾಡುತ್ತಿದ್ದ ವೇಳೆ ಮರ ಬಿದ್ದ ಕಾರಣ ಭಾರೀ ದುರಂತ ತಪ್ಪಿದೆ.

**ಮಡಿಕೇರಿಯಲ್ಲೇನಾಯ್ತು..:** ಕೊಡಗಿನ ಸುತ್ತಮುತ್ತಲಿನ ಪ್ರದೇಶದಲ್ಲಿ ಮಳೆ ಸುರಿದಿದ್ದು ಇಳೆ ತಂಪಾಗಿದೆ. ಮಡಿಕೇರಿ, ಸುಂಟಿಕೊಪ್ಪ, ಗಾಳಿಬೀಡು, ಮದೆನಾಡು ಸೇರಿದಂತೆ ಹಲವೆಡೆ ಮಳೆ ಬಿದ್ದಿದೆ. ಗುಡುಗು ಸಿಡಿಲಿನೊಂದಿಗೆ ಸುರಿಯುತ್ತಿರುವ ಮಳೆಯಿಂದಾಗಿ ವಾಹನ ಸವಾರರು ಪರದಾಡುವಂತಾಯಿತು.

**ಹಾವೇರಿ ಜಿಲ್ಲೆಯಲ್ಲಿ ಸಿಡಿಲಿಗೆ 30 ಕುರಿ ಸಾವು:** ಹಾವೇರಿಯ ಹಿರೇಕೆರೂರು ತಾಲ್ಲೂಕಿನ ಹುಲಬಿಕೊಂಡ ಗ್ರಾಮದಲ್ಲಿ ಸಿಡಿಲು ಬಡಿದು 30 ಕುರಿಗಳು ಸಾವನ್ನಪ್ಪಿವೆ. ಹಾನಗಲ್ ತಾಲ್ಲೂಕಿನ ಕುರಿಗಾಯಿ ಈಟೇಪ್ಪ ಬನ್ನಿ ಎಂಬವರಿಗೆ ಸೇರಿದ ಕುರಿಗಳು ಸಾವಿಗೀಡಾಗಿವೆ. ಸ್ಥಳಕ್ಕೆ ಶಾಸಕ ಯು.ಬಿ. ಬಣಕಾರ ಭೇಟಿ ನೀಡಿದ್ದು, ಸೂಕ್ತ ಪರಿಹಾರ ನೀಡುವಂತೆ ಒತ್ತಾಯಿಸಿದ್ದಾರೆ. ಹಿರೇಕೆರೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## 57 ವರ್ಷಗಳ ನಂತರ ಸಿಕ್ತು ನೂರಾರು ಕೋಟಿ ರೂ. ಆಸ್ತಿ

• **ಉದಯವಾಹಿನಿ, ಕೋಲಾರ**

ಮಾಲೂರು ಪಟ್ಟಣದ ಹೊಸೂರು ರಸ್ತೆಯ ರೈಲ್ವೆ ಬ್ರಿಡ್ಜ್ ಬಳಿ ಸರ್ಕಾರ 57 ವರ್ಷಗಳ ನಂತರ ರೈತರಿಂದ ಭೂಮಿ ಸ್ವಾಧೀನಪಡಿಸಿಕೊಂಡಿತ್ತು. ಈ ಭೂಮಿ ಈಗಿನ ಲೆಕ್ಕಾಚಾರದಲ್ಲಿ ನೂರಾರು ಕೋಟಿ ರೂಪಾಯಿ ಬೆಲೆ ಬಾಳುತ್ತದೆ. ಆದರೆ, ಈ ಭೂಮಿ ಪಿಡಬ್ಲ್ಯುಡಿ ಇಲಾಖೆಗೆ ಸೇರಿದ ಹಲವು ಜನರಿಂದ ಒತ್ತುವರಿಯಾಗಿದೆ. ಕಂದಾಯ ಇಲಾಖೆ ಅಧಿಕಾರಿಗಳು ಒತ್ತುವರಿಯಾದ ಜಾಗದ ಗಡಿ ಗುರುತು ಮಾಡಿದ್ದು, ಸ್ಥಳೀಯರಿಂದ ವಿರೋಧ ವ್ಯಕ್ತವಾಗಿದೆ. ಮಾಲೂರು ಪಟ್ಟಣದ ಹೊಸೂರು ರಸ್ತೆಯ ರೈಲ್ವೆ ಬ್ರಿಡ್ಜ್ ಬಳಿ ರಸ್ತೆ ಹಾಗೂ ಹೊಸ ರೈಲ್ವೆ ಲೈನ್ ನಿರ್ಮಾಣಕ್ಕಾಗಿ ಸರ್ಕಾರ 1968-70 ರಲ್ಲಿ ರೈತರಿಗೆ ಪರಿಹಾರ ನೀಡಿ ಭೂ ಸ್ವಾಧೀನಪಡಿಸಿಕೊಂಡಿತ್ತು. ರಸ್ತೆ ಹಾಗೂ ರೈಲ್ವೆ ಲೈನ್ ನಿರ್ಮಾಣ ಮಾಡಿದ ನಂತರ 16.13 ಎಕರೆ ಜಾಗ ಉಳಿದಿದೆ. ಆದರೆ, ಈ ಜಾಗವನ್ನು ಪಿಡಬ್ಲ್ಯುಡಿ ಇಲಾಖೆ ಯಾವುದೇ ಕೆಲಸಕ್ಕೆ ಬಳಕೆ ಮಾಡದ ಹಿನ್ನೆಲೆಯಲ್ಲಿ ಹಲವರು ಒತ್ತುವರಿ ಮಾಡಿಕೊಂಡಿದ್ದಾರೆ. ಸುಮಾರು 24 ಸರ್ವೆ ನಂಬರ್‌ಗಳಲ್ಲಿ ಭೂಮಿ ಒತ್ತುವರಿಯಾಗಿದೆ ಎಂದು ಕಂದಾಯ ಇಲಾಖೆ ವರದಿ ನೀಡಿದೆ. ಅಲ್ಲದೇ, ಒತ್ತುವರಿ ಮಾಡಿದವರಲ್ಲಿ ಸಾಕಷ್ಟು ಜನ ಪ್ರಭಾವಿಗಳೇ ಇದ್ದು, ಅವರಲ್ಲಿ ಕಾಂಗ್ರೇಸ್, ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಹಿನ್ನೆಲೆ ಇರುವವರು ಇದ್ದಾರೆ ಎನ್ನಲಾಗಿದೆ. ಸದ್ಯ, ಪಿಡಬ್ಲ್ಯುಡಿ ಇಲಾಖೆ ಒತ್ತುವರಿಯಾಗಿರುವ ತಮ್ಮ ಭೂಮಿಯ ಗಡಿ ಗುರುತು ಮಾಡಲು ಸ್ಥಳಕ್ಕೆ ಬಂದಿದ್ದರು.

# ಭ್ರಷ್ಟಾಚಾರದಲ್ಲಿ ಕರ್ನಾಟಕ ದೇಶದಲ್ಲೇ ನಂ.1





**ಸರ್ಕಾರಕ್ಕೆ ವಿಜಯೇಂದ್ರ ಟಾಂಗ್**

# ಸರ್ಕಾರದ ಕರಾಳ ಮುಖವಾಡ ಬಿವೈವಿ ಕೆಂಡ

• ಬಿಜೆಪಿ-ಜೆಡಿಎಸ್ ಮೈತ್ರಿಗೆ ಸಂಬಂಧಿಸಿದಂತೆ ಯಾವ ಗೊಂದಲವೂ ಇಲ್ಲ • ಸರ್ಕಾರದ ಕರಾಳ ಮುಖವಾಡ ಕಾಂಗ್ರೇಸ್ ಶಾಸಕರೇ ಬಿಚ್ಚಿಟ್ಟಿದ್ದಾರೆ • ಕಾಂಗ್ರೇಸ್ ಶಾಸಕ ಬಸವರಾಜ ರಾಯರೆಡ್ಡಿಗೆ ಹೃದಯ ಪೂರ್ವಕ ಧನ್ಯವಾದ ಸಲ್ಲಿಸಿದ ನಿಖಿಲ್ ಕುಮಾರಸ್ವಾಮಿ • ಸ್ಪಷ್ಟನೆ ನೀಡುವ ಬರದಲ್ಲಿ ರಾಯರೆಡ್ಡಿ ಮತ್ತೊಂದು ಎಡವಟ್ಟು

• **ಉದಯವಾಹಿನಿ, ಬೆಂಗಳೂರು**

ಮುಖ್ಯಮಂತ್ರಿ ಸಿದ್ದರಾಮಯ್ಯನವರೇ, ಭ್ರಷ್ಟಾಚಾರ, ಲೂಟಿಕೋರತನ ರಾಜ್ಯ ಕಾಂಗ್ರೇಸ್ ಸರ್ಕಾರದ ಅವಿಭಾಜ್ಯ ಅಂಗ ಎಂಬುದನ್ನು ಸ್ವತಃ ನಿಮ್ಮ ಆರ್ಥಿಕ ಸಲಹೆಗಾರರೂ ಆಗಿರುವ ಶಾಸಕ ಬಸವರಾಜ ರಾಯರೆಡ್ಡಿ ಅವರೇ ಸ್ಪಷ್ಟವಾಗಿ ಬಹಿರಂಗಪಡಿಸಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಟಾಂಗ್ ನೀಡಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್ ಖಾತೆಯಲ್ಲಿ ಪ್ರತಿಕ್ರಿಯಿಸಿರುವ ಅವರು, ದೇಶದಲ್ಲೇ ಕರ್ನಾಟಕ ಭ್ರಷ್ಟಾಚಾರದಲ್ಲಿ ನಂ.1 ಎಂದು ಹೇಳುವ ಮೂಲಕ ಈ ಸರ್ಕಾರದ ಕರಾಳ ಭ್ರಷ್ಟತೆಯ ಮುಖವಾಡ ಬಯಲು ಮಾಡಿ, ರಾಜ್ಯದ ಘನತೆ ಕುಗ್ಗಿದ ಸ್ವರೂಪವನ್ನು ಬಿಚ್ಚಿಟ್ಟಿದ್ದಾರೆ. ಆ ಮೂಲಕ ರಾಷ್ಟ್ರಮಟ್ಟದಲ್ಲಿ ರಾಜ್ಯ ನಿಮ್ಮ ಆಡಳಿತದಲ್ಲಿ ಸಂಪೂರ್ಣ ಭ್ರಷ್ಟತೆಯ ಕಪ್ಪು ಮಸಿ ಮೆತ್ತಿಕೊಂಡಿರುವುದನ್ನು ಅನಾವರಣ ಮಾಡಿ, ಕರ್ನಾಟಕ ವಿಶ್ವಮಟ್ಟದಲ್ಲಿ ತಲೆತಗ್ಗಿಸುವ ಪರಿಸ್ಥಿತಿ ಇರುವುದನ್ನು ವಿವರಿಸಿದ್ದಾರೆ ಎಂದು ಹೇಳಿದ್ದಾರೆ.

**ವಾಸ್ತವ ಸ್ಥಿತಿ ಮೇಲೆ ಬೆಳಕು ಚೆಲ್ಲಿದ್ದಾರೆ:** ಜನಪ್ರತಿನಿಧಿಗಳು ಹೇಗೆ ಇರುತ್ತಾರೋ ಅದರಂತೆಯೇ ಅಧಿಕಾರಿಗಳೂ ಇರುತ್ತಾರೆ. ಮುಖ್ಯಮಂತ್ರಿ ಏನೇ ಹೇಳಿದರೂ ಭ್ರಷ್ಟಾಚಾರದ ಕುರಿತು ನನ್ನ ವೈಯಕ್ತಿಕ ಅಭಿಪ್ರಾಯ ಇದೇ ಇರುತ್ತದೆ. ಯಥಾ ರಾಜ ತಥಾ ಮಂತ್ರಿಗಳು, ಅಧಿಕಾರಿಗಳು ಎಂಬ ಮಾತು ನಿಮ್ಮ ಆಡಳಿತದಲ್ಲಿ ಅಕ್ಷರಶಃ ಅನ್ವಯಿಸುತ್ತಿದೆ ಎನ್ನುವುದನ್ನು ಹೇಳುವ ಮೂಲಕ ವಾಸ್ತವ ಸ್ಥಿತಿಯ ಮೇಲೆ ನೇರವಾಗಿ ಬೆಳಕು ಚೆಲ್ಲಿದ್ದಾರೆ' ಎಂದು ಟೀಕಿಸಿದ್ದಾರೆ. 'ಹಿಂದಿನ ನಮ್ಮ ಬಸವರಾಜ ಬೊಮ್ಮಾಯಿ ಅವರ ನೇತೃತ್ವದ ಬಿಜೆಪಿ ಸರ್ಕಾರವನ್ನು ಶೇ.40ರಷ್ಟು ಸರ್ಕಾರ ಎಂಬ ಸುಳ್ಳು ಅಪಪ್ರಚಾರಗಳನ್ನು ನಡೆಸಿ, ರಾಜ್ಯದ ಜನತೆಯ ದಿಕ್ಕು ತಪ್ಪಿಸಿ ಜಗತ್ತಿನಲ್ಲಿ ನಾವೇ ಸತ್ಯವಂತರು' ಎಂದು ಡಂಗುರ ಸಾರಿ, ಅಧಿಕಾರಕ್ಕೆ ಬಂದ ನಿಮ್ಮ ನೈಜ ಮುಖವಾಡ ಇದೀಗ ಕಳಚಿ ಬಿದ್ದಿದೆ ಎಂದು ವಿಜಯೇಂದ್ರ ವಾಗ್ದಾಳಿ ನಡೆಸಿದ್ದಾರೆ.

ಭ್ರಷ್ಟತೆಯ ಕೆನ್ನಾಲಿಗೆ ರಾಜ್ಯದಲ್ಲಿ ಪ್ರತಿಯೊಂದು ವಸ್ತುಗಳ ಬೆಲೆ ಏರಿಸುವ ಮೂಲಕ ಜನಸಾಮಾನ್ಯರು ಹಾಗೂ ಕಡುಬಡವರ ದೈನಂದಿನ ಬದುಕಿನ ಸ್ಥಿತಿಯನ್ನು ಸುಡುತ್ತಿದೆ. ಇದಕ್ಕಾಗಿ ನಿಮ್ಮ ಸರ್ಕಾರದ ವಿರುದ್ಧ ಜನಬೆಂಬಲಿತ 'ಬಿಜೆಪಿ ಜನಾಕ್ರೋಶದ ಹೋರಾಟದ ಯಾತ್ರೆ' ರಾಜ್ಯಾದ್ಯಂತ ಯಶಸ್ವಿಯಾಗಿ ಮುನ್ನಡೆದಿದೆ ಎಂದು ಹೇಳಿದ್ದಾರೆ. ನಿಮ್ಮ ಆಡಳಿತದಿಂದ ರಾಜ್ಯವನ್ನು ಮುಕ್ತಗೊಳಿಸದೇ ಕರುನಾಡಿಗೆ ಮುಕ್ತಿಯಿಲ್ಲ ಎಂಬ ನಿರ್ಧಾರಕ್ಕೆ ರಾಜ್ಯದ ಜನ ಬಂದಿದ್ದಾರೆ. ಸದ್ಯದಲ್ಲೇ ಜನಾಕ್ರೋಶದ ಬಿಸಿ ನಿಮ್ಮ ಸರ್ಕಾರವನ್ನು ಸುಟ್ಟು ಪತನಗೊಳಿಸಲಿದೆ ಎಂದು ಭವಿಷ್ಯ ನುಡಿದಿದ್ದಾರೆ.

**ಅಭಿವೃದ್ಧಿ ಕೆಲಸದಲ್ಲಿ ಭ್ರಷ್ಟಾಚಾರ ನಿಲ್ಲಬೇಕು:** ಅಬಕಾರಿ ಇಲಾಖೆ, ಸಾರಿಗೆ ಇಲಾಖೆಯಲ್ಲಿ ಭ್ರಷ್ಟಾಚಾರ ಆಗ್ತಿತ್ತು. ಮುಖ್ಯಮಂತ್ರಿಗಳು ಇದಕ್ಕೆ ಈಗ ಕಡಿವಾಣ ಹಾಕುತ್ತಿದ್ದಾರೆ. ಮಾಜಿ ಮುಖ್ಯಮಂತ್ರಿ ನಿಜಲಿಂಗಪ್ಪ, ಕೆಂಗಲ್ ಹನುಮಂತಯ್ಯ ಅವರ ಮೇಲೆಯೂ ಭ್ರಷ್ಟಾಚಾರದ ಆಪಾದನೆ ಬಂದಿತ್ತು. ಅಭಿವೃದ್ಧಿ ಕೆಲಸದಲ್ಲಿ ಭ್ರಷ್ಟಾಚಾರ ನಿಲ್ಲಬೇಕು. ಎಲ್ಲೆಲ್ಲಿ ತಪ್ಪಾಗಿದೆ ಸರಿಪಡಿಸಲು ಸಲಹೆ ನೀಡುತ್ತೇನೆ ಎಂದು ಹೇಳಿದರು. ನಮ್ಮ ಸರ್ಕಾರದ ಮೇಲೆ ಆರೋಪ ಮಾಡಲು ಬಿಜೆಪಿಗೆ ಯಾವ ನೈತಿಕತೆಯೂ ಇಲ್ಲ. ಬಿಜೆಪಿ ಸರ್ಕಾರದಲ್ಲಿ ಎಷ್ಟು ಜನ ಮಂತ್ರಿಗಳು ಜೈಲಿಗೆ ಹೋಗಿ ಬಂದಿಲ್ಲ... ಬಿಜೆಪಿಯವರಿಗೆ ಭ್ರಷ್ಟಾಚಾರದ ಬಗ್ಗೆ ಮಾತನಾಡುವ ಹಕ್ಕಿಲ್ಲ. ಮಾಜಿ ಸಚಿವ ಬಿ. ನಾಗೇಂದ್ರ ವಿರುದ್ಧ ಆರೋಪ ಕೇಳಿ ಬಂದಿದೆ. ಅದರ ಬಗ್ಗೆ ತನಿಖೆ ಆಗುತ್ತಿದೆ. ಹಿಂದಿನ ಸರ್ಕಾರದಿಂದ ಕರ್ನಾಟಕ ಕೆಟ್ಟಿದೆ. ಇದನ್ನು ಸಿಎಂ ಸಿದ್ದರಾಮಯ್ಯ ಸರಿ ಮಾಡಬೇಕು, ಸರಿಪಡಿಸುತ್ತಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವಾಗ್ದಾಳಿ ನಡೆಸಿದರು.

### ಉಪ ಚುನಾವಣೆಯ ವೇಳೆ ಗೃಹಲಕ್ಷ್ಮಿ ಹಣ

ದೇಶದ ಪ್ರಧಾನಿ ನರೇಂದ್ರ ಮೋದಿ ರೈತರ ಖಾತೆಗೆ ನೇರವಾಗಿ ಸಹಾಯ ಧನ ನೀಡುವ ಭರವಸೆಯಂತೆ ಕೊಟ್ಟ ಮಾತನ್ನು ಉಳಿಸಿಕೊಂಡಿದ್ದಾರೆ. ಆದರೆ ಕಾಂಗ್ರೇಸ್ ಸರ್ಕಾರ ಮೂರು ಉಪ ಚುನಾವಣೆಗಳಲ್ಲಿ 48 ಗಂಟೆಗಳ ಮೊದಲು 3 ತಿಂಗಳ ಗೃಹ ಲಕ್ಷ್ಮಿ ಹಣವನ್ನು ಮಹಿಳೆಯರ ಅಕೌಂಟಿಗೆ ಹಾಕಿದ್ದರು ಎಂದು ಆಕ್ರೋಶ ವ್ಯಕ್ತಡಿಸಿದ್ದರು. ಮರಣ, ಜನನ ಪ್ರಮಾಣ ಪತ್ರದ ಶುಲ್ಕ ಏರಿಕೆ ಆಗಿದೆ. ವಿದ್ಯುತ್ ದರ ಏರಿಕೆ ಆಗಿದೆ, ಕಸ ವಿಲೇವಾರಿ ಶುಲ್ಕವೂ ಹೆಚ್ಚಳವಾಗಿದೆ. ಹೀಗಾದಲ್ಲಿ ರಾಜ್ಯದಲ್ಲಿ ಆರ್ಥಿಕ ಸಂಕಷ್ಟದ ತುರ್ತು ಪರಿಸ್ಥಿತಿ ದೂರ ಇಲ್ಲ. ಅಭಿವೃದ್ಧಿ ಎಂಬುದು ರಾಜ್ಯದಲ್ಲಿ ಇಲ್ಲ. ಶಾಸಕರಿಗೆ ಅನುದಾನ ನೀಡಲಾಗ್ತಿಲ್ಲ ಎಂದು ಆರೋಪಿಸಿದರು.

### ಬಿಜೆಪಿ ಹಾಗೂ ಜೆಡಿಎಸ್ ನಡುವೆ ಅಸಮಾಧಾನ ಇಲ್ಲ

ರಾಜ್ಯದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಎಚ್‌ಡಿ ದೇವೇಗೌಡರ ಒಪ್ಪಿಗೆಯಂತೆ ಮಾಡಲಾಗಿದೆ. ರಾಜ್ಯದ ಜನತೆ ಮೈತ್ರಿಯನ್ನು ಒಪ್ಪಿದ್ದಾರೆ. ಮುಡಾ ಹೋರಾಟದಲ್ಲಿ ಸಮನ್ವಯ ಸಮಿತಿ ಆಗಬೇಕು ಎಂಬ ಚರ್ಚೆ ಮಾಡಿದ್ದೆವು. ಈವರೆಗೆ ಸಮನ್ವಯ ಸಮಿತಿ ರಚನೆ ಆಗಿಲ್ಲ. ಆದಷ್ಟು ಶೀಘ್ರದಲ್ಲೇ ರಚನೆ ಮಾಡಲಾಗುವುದು ಎಂದರು.

### ಸರ್ಕಾರದ ವಿರುದ್ಧ ಹೋರಾಟ

ರಾಜ್ಯ ಕಾಂಗ್ರೇಸ್ ಸರ್ಕಾರದ ವಿರುದ್ಧ ಜೆಡಿಎಸ್ ಶನಿವಾರ ವಿಧಾನಸೌಧ ಚಲೋ ಹಮ್ಮಿಕೊಂಡಿದೆ ಎಂದು ಇದೇ ವೇಳೆ ನಿಖಿಲ್ ತಿಳಿಸಿದರು. ರಾಜ್ಯ ಸರ್ಕಾರ ಕಳೆದ ಎರಡು ವರ್ಷಗಳಿಂದ ನಿರಂತರವಾಗಿ ಹಂತ ಹಂತವಾಗಿ ಜನರಿಗೆ ಬೆಲೆ ಏರಿಕೆ ಸಂಕಷ್ಟಕ್ಕೆ ದೂಡಿದೆ. ಜೆಡಿಎಸ್ ತನ್ನ ಜವಾಬ್ದಾರಿಯನ್ನು ಹಾಗೂ ಕನ್ನಡಿಗರ ಭಾವನೆಯನ್ನು ಹೊರ ಹಾಕುವ ಕೆಲಸ ಮಾಡಲಿದೆ. ಈ ನಿಟ್ಟಿನಲ್ಲಿ 'ಸಾಕಪ್ಪ ಸಾಕು ಕಾಂಗ್ರೇಸ್ ಸರ್ಕಾರ ಸಾಕು' ಎಂಬ ಅಭಿಯಾನ ಶುರು ಮಾಡಿಕೊಂಡಿದ್ದೇವೆ' ಎಂದು ವಿವರಿಸಿದರು. ಕಾಂಗ್ರೇಸ್ ಸರ್ಕಾರದ ವೈಫಲ್ಯ, ಭ್ರಷ್ಟಾಚಾರದ ವಿರುದ್ಧ ಅಭಿಯಾನವಾಗಿದೆ. ಈ ಅಭಿಯಾನ ಒಂದು ದಿನಕ್ಕೆ ಸೀಮಿತವಾಗಿಲ್ಲ. ಸ್ವಪಕ್ಷೀಯ ಸಚಿವರನ್ನು ಹನಿಟ್ರ್ಯಾಪ್ ಮಾಡಲಾಗಿದೆ. ಹೈಕಮಾಂಡ್ ಗೆ ಹನಿಟ್ರ್ಯಾಪ್ ಮಾಡಲಾಗಿದೆ. ಹಾಗೂ ಜನರಿಗೆ ತೆರಿಗೆ ಟ್ರ್ಯಾಪ್ ಮಾಡಲಾಗಿದೆ. ಈ ಎಲ್ಲಾ ವೈಫಲ್ಯಗಳನ್ನು ಮುಂದಿಟ್ಟುಕೊಂಡು ಹೋರಾಟ ನಡೆಸಲಿದ್ದೇವೆ ಎಂದು ತಿಳಿಸಿದರು.

### ಸಿದ್ದರಾಮಯ್ಯಗೆ ಮಾಜಿ ಸಿಎಂ ಪುತ್ರರ ಕ್ಲಾಸ್!

ಕಾಲಚಕ್ರ ತಿರುಗಿದಂತೆ ಕರ್ನಾಟಕದಲ್ಲಿ ರಾಜ್ಯ ರಾಜಕೀಯದಲ್ಲಿ ಅದೇ ಹಳೆಯ ಸನ್ನಿವೇಶಗಳು ರಿಪೀಟ್ ಆಗುತ್ತಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿರೋಧ ಪಕ್ಷದ ನಾಯಕರಾಗಿದ್ದಾಗ ಕೇಳಿದ್ದ ಅಥವಾ ಮಾತನಾಡಿದ್ದ ವಿಷಯಗಳು ಇದೀಗ ಅವರೇ ಉತ್ತರಿಸುವಂತೆ ಆಗಿದೆ. ಹೌದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿರೋಧ ಪಕ್ಷದ ನಾಯಕರಾಗಿದ್ದಾಗ ವಿಧಾನಸಭೆಯಲ್ಲಿ ತೊಡೆ ತಟ್ಟಿದ್ದರು. ಆಡಳಿತ ಪಕ್ಷದ ನಾಯಕರು ಹಾಗೂ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದ ಸಿದ್ದರಾಮಯ್ಯ ಅವರಿಗೆ ಇದೀಗ ಅದೇ ಮಾದರಿಯ ಪರಿಸ್ಥಿತಿಗಳು ಎದುರಾಗಿವೆ. ಮುಡಾ ಹಗರಣದ ವಿಚಾರಣೆ ಸಂದರ್ಭದಲ್ಲಿ ರಾಜೀನಾಮೆ ಯಾಕೆ ಕೊಡಬೇಕು ಅಂತ ಸಿದ್ದರಾಮಯ್ಯ ಅವರು ಪ್ರಶ್ನೆ ಮಾಡಿದ್ದರು. ಇದೀಗ ಮತ್ತೊಂದು ವಿಷಯದಲ್ಲಿ ಅದೇ ರೀತಿಯ ಪರಿಸ್ಥಿತಿ ಎದುರಾಗಿ ಅತ್ತೆಗೊಂದು ಕಾಲ.. ಸೊಸೆಗೊಂದು ಕಾಲ ಎನ್ನುವಂಗೆ ಇದೀಗ ಕರ್ನಾಟಕ ಬಿಜೆಪಿ ರಾಜ್ಯಾಧ್ಯಕ್ಷರಿಗೆ ಕಾಲ ಬಂದಿದೆ. ಯಾವ ಪ್ರಶ್ನೆಯನ್ನು ಸಿದ್ದರಾಮಯ್ಯ ಅವರು ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರಿಗೆ ಕೇಳಿದ್ದರೋ ಅದೇ ಪ್ರಶ್ನೆಯನ್ನು ಇದೀಗ ಬಿ.ವಿ ವಿಜಯೇಂದ್ರ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕೇಳಿದ್ದಾರೆ. ಈ ಮೂಲಕ ಅಪ್ಪನಿಗೆ ಕೊಟ್ಟಿದ್ದ ತಿರುಗೇಟನ್ನು ಬಿ.ವೈ.ವಿಜಯೇಂದ್ರ ಅವರು ತಿರುಗಿಸಿ ಕೊಟ್ಟಿದ್ದಾರೆ.



# ರಾಜ್ಯಪಾಲರಿಗೆ ಸುಪ್ರೀಂ ಅಂಕುಶ; ಇದು ಮೋದಿಗೂ, ಎಲ್ಲಾರಿಗೂ ಪಾಠ

■ ರಾಜ್ಯಪಾಲರ ಹುದ್ದೆ ಕರ್ತವ್ಯಕ್ಕೆ ಮೂರು ತಿಂಗಳ ಕಾಲ ಮಿತಿ ■ ನರೇಂದ್ರ ಮೋದಿ ನೇತೃತ್ವದ ಕೇಂದ್ರದ ಬಿಜೆಪಿ ಸರ್ಕಾರಕ್ಕೆ ಎಚ್ಚರಿಕೆ

• **ಉದಯವಾಹಿನಿ, ಬೆಂಗಳೂರು**

ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿ ಕಾರ್ಯನಿರ್ವಹಿಸುತ್ತಿದ್ದ ತಮಿಳುನಾಡಿನ ರಾಜ್ಯಪಾಲರಾದ ಆರ್.ಎನ್. ರವಿ ಅವರನ್ನು ತರಾಟೆಗೆ ತೆಗೆದುಕೊಂಡು, ಏಕಪಕ್ಷೀಯವಾಗಿ ಅವರು ಕೈಗೊಂಡಿರುವ ತೀರ್ಮಾನಗಳನ್ನು ರದ್ದುಪಡಿಸಿರುವ ಸುಪ್ರೀಂ ಕೋರ್ಟ್ ತೀರ್ಪು ದೇಶದ ಎಲ್ಲಾ ರಾಜ್ಯಪಾಲರು ಮತ್ತು ತೆರೆಯ ಹಿಂದೆ ಆಟವಾಡುತ್ತಿದ್ದ ನರೇಂದ್ರ ಮೋದಿ ನೇತೃತ್ವದ ಕೇಂದ್ರದ ಬಿಜೆಪಿ ಸರ್ಕಾರಕ್ಕೆ ಎಚ್ಚರಿಕೆಯ ಪಾಠವಾಗಿದೆ.

**ರಾಜ್ಯಪಾಲರ ಕ್ರಮವು ಅಕ್ರಮ**

ಸುಪ್ರೀಂಕೋರ್ಟಿನ ತೀರ್ಪು ರಾಜ್ಯಪಾಲ ಹುದ್ದೆಯ ಕರ್ತವ್ಯಗಳ ಇತಿ-ಮಿತಿಯನ್ನು ಸ್ಪಷ್ಟವಾಗಿ ವ್ಯಾಖ್ಯಾನಿಸಿರುವ ಕಾರಣದಿಂದಾಗಿ ಈ ಬಗ್ಗೆ ಇದ್ದ ಗೊಂದಲಗಳು ನಿವಾರಣೆಯಾಗಿದೆ. ರಾಜ್ಯ ಸರ್ಕಾರ ಅಂಗೀಕರಿಸಿದ ಮಸೂದೆಗಳಿಗೆ ರಾಷ್ಟ್ರಪತಿಗಳ ಅಂಕಿತ ಪಡೆಯುವ ಪ್ರಕ್ರಿಯೆ ಗರಿಷ್ಠ ಮೂರು ತಿಂಗಳ ಅವಧಿಯೊಳಗೆ ನಡೆಯಬೇಕು ಎಂದು ಕಾಲಮಿತಿಯನ್ನು ಸುಪ್ರೀಂ ಕೋರ್ಟ್ ನಿಗದಿಪಡಿಸಿರುವುದರಿಂದ ಇಲ್ಲಿಯವರೆಗಿನ ಗೊಂದಲಗಳು ನಿವಾರಣೆಯಾಗಿದೆ.

ಬಿಜೆಪಿಯೇತರ ಪಕ್ಷಗಳು ಅಧಿಕಾರದಲ್ಲಿರುವ ರಾಜ್ಯಗಳಲ್ಲಿ ರಾಜ್ಯಪಾಲರು ಸಂವಿಧಾನದ ಆಶಯ ಮತ್ತು ಸಾಂವಿಧಾನಿಕ ಹುದ್ದೆಯ ಘನತೆ-ಗೌರವವನ್ನು ಗಾಳಿಗೆ ತೂರಿ ಕೇಂದ್ರ ಸರ್ಕಾರದ ಕೈಗೊಂಬೆಗಳಾಗಿ ವರ್ತಿಸುತ್ತಿರುವ ಆರೋಪಗಳು ಇತ್ತೀಚಿನ ದಿನಗಳಲ್ಲಿ ಹೆಚ್ಚು ಹೆಚ್ಚು ಕೇಳಿ ಬರತೊಡಗಿವೆ. ಇದರಿಂದಾಗಿ ಗೌರವಾನ್ವಿತ ರಾಜ್ಯಪಾಲರ ಹುದ್ದೆ ಜನತೆಯ ವಿಶ್ವಾಸವನ್ನು ಕಳೆದುಕೊಳ್ಳುವಂತಾಗಿದೆ.

ತಮ್ಮ ಪಕ್ಷವನ್ನು ಜನ ತಿರಸ್ಕರಿಸಿದ ರಾಜ್ಯಗಳಲ್ಲಿ ತಮ್ಮ ಅಣತಿಯನ್ನು ಪಾಲಿಸುವ ರಾಜ್ಯಪಾಲರನ್ನು ನೇಮಿಸಿ ಅವರ ಮೂಲಕ ಪರೋಕ್ಷವಾಗಿ ಆಡಳಿತವನ್ನು ನಿಯಂತ್ರಿಸಲು ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಮಾಡುತ್ತಿರುವ ಪ್ರಯತ್ನ ಪ್ರಜಾಪ್ರಭುತ್ವ ವ್ಯವಸ್ಥೆಗೆ ಬಗೆಯುತ್ತಿರುವ ದ್ರೋಹವಾಗಿದೆ.



ಕರ್ನಾಟಕದಲ್ಲಿ ಕೂಡಾ ವಿಧಾನಮಂಡಲ ಅಂಗೀಕರಿಸಿದ ಕೆಲವು ಮಸೂದೆಗಳ ಬಗ್ಗೆ ರಾಷ್ಟ್ರಪತಿಗಳ ಅಂಕಿತ ಪಡೆಯಲು ರಾಜ್ಯಪಾಲರು ವಿಳಂಬ ಧೋರಣೆಯನ್ನು ಅನುಸರಿಸುತ್ತಿರುವುದು ಸಂಘರ್ಷಕ್ಕೆ ಕಾರಣವಾಗಿದೆ. ಹೀಗಿದ್ದರೂ ನಮ್ಮ ಸರ್ಕಾರ ಅನಗತ್ಯವಾಗಿ ಈ ಬೆಳವಣಿಗೆಗೆ ರಾಜಕೀಯ ಬೆರೆಸದೆ ಸಂಯಮದಿಂದ ನಡೆದುಕೊಂಡಿದೆ. ರಾಜ್ಯ ಸರ್ಕಾರ ಮತ್ತು ರಾಜಭವನದ ನಡುವಿನ ಅನಗತ್ಯ ಸಂಘರ್ಷವನ್ನು ಸುಪ್ರೀಂ ಕೋರ್ಟ್ ನ ಈ ತೀರ್ಪು ಶಾಶ್ವತವಾಗಿ ಕೊನೆಗೊಳಿಸಲಿದೆ ಎಂದು ನಂಬಿದ್ದೇನೆ.

ತಮಿಳುನಾಡಿನ ರಾಜ್ಯಪಾಲ ಆರ್.ಎನ್. ರವಿ ಅವರು 10 ಮಸೂದೆಗಳನ್ನು ರಾಷ್ಟ್ರಪತಿಯವರ ಪರಿಶೀಲನೆಗಾಗಿ ತಡೆಹಿಡಿದು ಇರಿಸಿಕೊಂಡಿದ್ದು ಸಂವಿಧಾನಕ್ಕೆ ವಿರುದ್ಧವಾದದ್ದು. ರಾಜ್ಯಪಾಲರ ಕ್ರಮವು ಅಕ್ರಮ, ಮನಸೋಇಚ್ಛೆ ತೀರ್ಮಾನ. ಹೀಗಾಗಿ, ಆ ಕ್ರಮವನ್ನು ಅಸಿಂಧುಗೊಳಿಸಲಾಗಿದೆ ಎಂದು ನ್ಯಾಯಮೂರ್ತಿಗಳಾದ ಜೆ.ಬಿ. ಪಾರ್ದೀವಾಲಾ ಮತ್ತು ಆರ್. ಮಹಾದೇವನ್ ಅವರು ಇರುವ ವಿಭಾಗೀಯ ಪೀಠವು ಹೇಳಿತ್ತು.

ವಿಧಾನ ಮಂಡಲದ ತೀರ್ಮಾನಕ್ಕೆ ಅಡ್ಡಿ ಸೃಷ್ಟಿಸಬಾರದು, ಜನರ ಇಚ್ಛೆಗೆ ಅಡ್ಡಿ ಉಂಟುಮಾಡಬಾರದು. ಸಂವಿಧಾನದ 200ನೆಯ ವಿಧಿಯ ಅಡಿಯಲ್ಲಿ ರಾಜ್ಯಪಾಲರಿಗೆ ವಿವೇಚನಾ ಅಧಿಕಾರ ಇಲ್ಲ.

ಅವರು ರಾಜ್ಯದ ಮಂತ್ರಿ ಪರಿಷತ್ತಿನ ಸಲಹೆ ಮತ್ತು ನೆರವಿಗೆ ಅನುಗುಣವಾಗಿ ಕರ್ತವ್ಯ ನಿರ್ವಹಿಸಬೇಕು ಎಂದು ನ್ಯಾಯಮೂರ್ತಿಗಳಾದ ಜೆ.ಬಿ. ಪಾರ್ದೀವಾಲಾ ಮತ್ತು ಆರ್. ಮಹಾದೇವನ್ ಅವರು ಇರುವ ವಿಭಾಗೀಯ ಪೀಠವು ಹೇಳಿತ್ತು.

# ಉತ್ತರ ಕರ್ನಾಟಕಕ್ಕೆ 2 ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಭಾಗ್ಯ!

■ ಬೆಳಗಾವಿ, ಹುಬ್ಬಳ್ಳಿಯ ವಿಮಾನ ನಿಲ್ದಾಣಗಳನ್ನು ಉನ್ನತೀಕರಿಸಲು ಸರ್ಕಾರ ನಿರ್ಧಾರ ■ ಪ್ರಯಾಣಿಕರ ದಟ್ಟಣೆ ಕೂಡ ಇದೆ

• **ಉದಯವಾಹಿನಿ, ಬೆಂಗಳೂರು**

ರಾಜ್ಯ ಸರ್ಕಾರ ಉತ್ತರ ಕರ್ನಾಟಕದ ಜನರಿಗೆ ಗುಡ್ ನ್ಯೂಸ್ ನೀಡಿದೆ. ಉತ್ತರ ಕರ್ನಾಟಕದಲ್ಲಿ ಎರಡು ಕಡೆ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ತರಲು ಮುಂದಾಗಿದೆ. ಈ ಬಗ್ಗೆ ಸಚಿವ ಎಂಬಿ ಪಾಟೀಲ್ ಅವರು ಮಾಹಿತಿ ನೀಡಿದ್ದಾರೆ.

ರಾಜ್ಯದ ಹುಬ್ಬಳ್ಳಿ ಮತ್ತು ಬೆಳಗಾವಿ ವಿಮಾನ ನಿಲ್ದಾಣಗಳನ್ನು ಅಂತಾರಾಷ್ಟ್ರೀಯ ಮಟ್ಟಕ್ಕೆ ಏರಿಸಬೇಕಾದ ಅಗತ್ಯವಿದೆ. ಈ ಸಂಬಂಧ ಕೇಂದ್ರ ಸರಕಾರಕ್ಕೆ ಪತ್ರ ಬರೆಯುವಂತೆ ಇಲಾಖೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

ಇವೆರಡೂ ಅಂತರಾಷ್ಟ್ರೀಯ ವಿಮಾನ ನಿಲ್ದಾಣಗಳಾಗಲು ಅರ್ಹತೆ ಪಡೆದಿವೆ. ಪ್ರಯಾಣಿಕರ ದಟ್ಟಣೆ ಕೂಡ ಇದೆ. ಸದ್ಯ ಈ ಭಾಗದವರು ವಿದೇಶಕ್ಕೆ ಹೋಗಬೇಕಾದರೆ ಸಮೀಪ ಅಂದ್ರೆ ಗೋವಾಕ್ಕೆ ಹೋಗಬೇಕು. ಅದರ ಬದಲು ಈ ನಿಲ್ದಾಣಗಳನ್ನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಗಳಾಗಿ ಘೋಷಿಸಬೇಕು ಎಂದು ಸಚಿವರು ಹೇಳಿದರು.

ಬೆಂಗಳೂರಿನಲ್ಲಿ ಎರಡನೇ ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ನಿರ್ಮಾಣದ ಚರ್ಚೆ ಜೋರಾಗಿದ್ದು, ಸ್ಥಳ ಆಯ್ಕೆಗೆ ಸರ್ಕಾರ ವೇಗ ನೀಡಿದೆ. ಎಲ್ಲಾವೂ ಬೆಂಗಳೂರಿನಲ್ಲೇ ಮಾಡಿದರೆ ಹೇಗೆ, ಉತ್ತರ ಕರ್ನಾಟಕದ ಕಡೆಗೂ ನೋಡಿ ಅಂತಾ ಜನರು ಹಾಗೂ ಜನಪ್ರತಿನಿಧಿಗಳು ಸರ್ಕಾರದ ಮೇಲೆ ಒತ್ತಡ ಹಾಕಿದ್ದರು. ಇದರ ಬೆನ್ನಲ್ಲೇ ರಾಜ್ಯ ಸರ್ಕಾರ ಉತ್ತರ ಕರ್ನಾಟಕದ ಎರಡು ವಿಮಾನ ನಿಲ್ದಾಣಗಳನ್ನು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಗಳನ್ನಾಗಿ ಮೇಲ್ದರ್ಜೆಗೇರಿಸಲು ಮುಂದಾಗಿದೆ.

ಯಾವುದೇ ವಿಮಾನ ನಿಲ್ದಾಣವನ್ನು ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ಕೆಟಗರಿಗೆ ಸೇರಿಸಲು ಪ್ರಮುಖವಾಗಿ ಕೇಂದ್ರ ಸರ್ಕಾರ ಮೂಲಸೌಕರ್ಯದ ಜೊತೆಗೆ ಪ್ರಯಾಣಿಕರ ದಟ್ಟಣೆಯನ್ನು ಗಮನಿಸುತ್ತದೆ. ಪ್ರಯಾಣಿಕರ ದಟ್ಟಣೆ ಹೆಚ್ಚಿದ್ದು, ವಿಮಾನಯಾನ ಸಂಸ್ಥೆಗಳು ಬೇಡಿಕೆ ಇಟ್ಟರೆ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನಾಗಿ ಏರ್‌ಪೋರ್ಟ್ ಅನ್ನು ಮೇಲ್ದರ್ಜೆಗೇರಿಸಬಹುದು. ಇದರ ಜೊತೆ ಗ್ರೌಂಡ್ ಲೈಟನಿಂಗ್ ಸೌಕರ್ಯ, ಅತ್ಯಾಧುನಿಕ ಲ್ಯಾಂಡಿಂಗ್ ವ್ಯವಸ್ಥೆ ಹಾಗೂ ರನ್‌ವೇ ಸಾಕಷ್ಟು ಉದ್ದ ಇರಬೇಕು. ಇದರ ಜೊತೆ ವಿದೇಶಿ ನಾಗರೀಕರ ವಲಸೆ ಪ್ರಕ್ರಿಯೆ ನೋಡಿಕೊಳ್ಳುವ ವ್ಯವಸ್ಥೆ ಮತ್ತು ಆರೋಗ್ಯ ಸೇವೆ ವಿಮಾನ ನಿಲ್ದಾಣದಲ್ಲಿ ಇರಬೇಕು. ಅದಲ್ಲದೇ ಪ್ರಾಣಿ ಹಾಗೂ ಸಸ್ಯದ ಕ್ವಾರಂಟೀನ್ ಸೇವೆ ಕೂಡ ವಿಮಾನ ನಿಲ್ದಾಣದಲ್ಲಿ ಲಭ್ಯವಿರಬೇಕು ಎಂದು ಕೇಂದ್ರ ಸರ್ಕಾರ ಹೇಳಿದೆ. ಈ ಎಲ್ಲಾದಕ್ಕೂ ಟಿಕ್ ಮಾರ್ಕ್ ಮಾಡಿದರೆ ಡೊಮೆಸ್ಟಿಕ್ ಏರ್‌ಪೋರ್ಟ್ ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ಆಗಲಿದೆ. ಏರ್‌ಪೋರ್ಟ್ ಅಥಾರಿಟಿ ಆಫ್ ಇಂಡಿಯಾ ಈ ಬಗ್ಗೆ ಪರಿಶೀಲನೆ ನಡೆಸಿ ವರದಿ ಕೊಟ್ಟ ಬಳಿಕ ಕೇಂದ್ರ ವಿಮಾನಯಾನ ಸಚಿವಾಲಯ ಅಂತಾರಾಷ್ಟ್ರೀಯ ಏರ್‌ಪೋರ್ಟ್‌ಗಳನ್ನಾಗಿ ಘೋಷಿಸಲಿದೆ.

### ಏನೆಲ್ಲಾ ಬೇಕು

- ಪ್ರಯಾಣಿಕರ ದಟ್ಟಣೆ
- ಏರ್‌ಲೈನ್ಸ್ ಸಂಸ್ಥೆಗಳ ಬೇಡಿಕೆ
- ಗ್ರೌಂಡ್ ಲೈಟನಿಂಗ್ ಸೌಕರ್ಯಗಳು
- ಅತ್ಯಾಧುನಿಕ ಲ್ಯಾಂಡಿಂಗ್ ವ್ಯವಸ್ಥೆ
- ಸಮರ್ಪಕ ರನ್‌ವೇ ಉದ್ದ
- ವಲಸೆ ಹಾಗೂ ಆರೋಗ್ಯ ಸೇವೆ
- ಪ್ರಾಣಿ ಮತ್ತು ಸಸ್ಯ ಕ್ವಾರಂಟೀನ್ ಸೇವೆ



### ಎರಡೂ ಏರ್‌ಪೋರ್ಟ್‌ಗೂ ಅರ್ಹತೆ ಇದೆ

ಹುಬ್ಬಳ್ಳಿ ಹಾಗೂ ಬೆಳಗಾವಿ ಏರ್‌ಪೋರ್ಟ್‌ಗಳು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಆಗುವ ಎಲ್ಲಾ ಅರ್ಹತೆಯನ್ನು ಹೊಂದಿವೆ. ಬೇಕಿರುವ ಪ್ರಯಾಣಿಕರ ದಟ್ಟಣೆ ಕೂಡ ಈ ಎರಡು ಏರ್‌ಪೋರ್ಟ್‌ಗಳಿಗೆ ಇದೆ. ಸದ್ಯ ಇಲ್ಲಿನ ಜನ ಅಂತಾರಾಷ್ಟ್ರೀಯ ಪ್ರಯಾಣಕ್ಕಾಗಿ ಗೋವಾ ಏರ್‌ಪೋರ್ಟ್‌ಗೆ ಹೋಗಬೇಕಿದೆ. ಆದ್ದರಿಂದ ಈ ಎರಡು ಏರ್‌ಪೋರ್ಟ್‌ಗಳಿಗೆ ಅಂತಾರಾಷ್ಟ್ರೀಯ ಮಾನ್ಯತೆ ಕೊಡಬೇಕಿದೆ. ಈ ಹಿನ್ನೆಲೆ ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಿದೆ. ಬಳಿಕ ಏರ್‌ಪೋರ್ಟ್ ಅಥಾರಿಟಿ ಆಫ್ ಇಂಡಿಯಾದ ಅಧಿಕಾರಿಗಳು ವಿಮಾನ ನಿಲ್ದಾಣಗಳನ್ನು ಪರಿಶೀಲಿಸಿ ಅಂತಿಮ ನಿರ್ಧಾರವನ್ನು ಕೈಗೊಳ್ಳಲಿದ್ದಾರೆ. ದೇಶಾದ್ಯಂತ ವಿಮಾನಯಾನವನ್ನು ಉತ್ತೇಜಿಸುವ ಉದ್ದೇಶ ಹೊಂದಿರುವ ಮೋದಿ ಸರ್ಕಾರ ಎಲ್ಲಾ ಅರ್ಹತೆಗಳಿದ್ದರೆ ಶೀಘ್ರದಲ್ಲಿಯೇ ಈ ಎರಡು ವಿಮಾನ ನಿಲ್ದಾಣಗಳನ್ನು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಗಳನ್ನಾಗಿ ಘೋಷಿಸುವ ನಿರೀಕ್ಷೆ ಇದೆ. ಇದರಿಂದ ಉತ್ತರ ಕರ್ನಾಟಕ ಸೇರಿ ಮಹಾರಾಷ್ಟ್ರ, ಗೋವಾ ಜನರಿಗೂ ಅನುಕೂಲ ಆಗಲಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.99 ₹/L ಬಂಗಾರ: ₹9,044/Gram24ct ₹8,290/Gram22ct ಬೆಳ್ಳಿ: ₹93.00/Gram

# ಕಸ ಸಂಗ್ರಹ ಶುಲ್ಕದ ಆದೇಶ ಪರಿಷ್ಕರಣೆ

## ವಸತಿ, ವಸತಿಯೇತರ ಹಾಗೂ ವಾಣಿಜ್ಯ ಕಟ್ಟಡಗಳಿಂದ ಕಸ ವಿಲೇವಾರಿಗೆ ಬಳಕೆದಾರರ ಶುಲ್ಕದ ದರ ನಿಗದಿ

• ಉದಯವಾಹಿನಿ, ಬೆಂಗಳೂರು

ವಸತಿಯೇತರ ಸ್ವತ್ತುಗಳಿಗೆ ಘನತ್ಯಾಜ್ಯ ನಿರ್ವಹಣಾ ಬಳಕೆದಾರರ ಶುಲ್ಕವನ್ನು (ಡಬ್ಲ್ಯುಯುಎಫ್) ಪ್ರತಿ ತಿಂಗಳಿಗೆ ಎಂದು ಹೊರಡಿಸಿದ್ದ ಆದೇಶವನ್ನು ಮಾರ್ಪಡಿಸಿರುವ ಬಿಬಿಎಂಪಿ, ವಾರ್ಷಿಕ ಶುಲ್ಕ ಎಂದು ಪರಿಷ್ಕರಿಸಲು ನಿರ್ಧರಿಸಿದೆ. ವಸತಿಯೇತರ ಕಟ್ಟಡಗಳಿಗೆ ರೂ.2 ಸಾವಿರದಿಂದ ರೂ.35 ಲಕ್ಷದವರೆಗೆ ಪ್ರತಿ ತಿಂಗಳು ಶುಲ್ಕವನ್ನು ವಿಧಿಸಲಾಗುತ್ತದೆ ಎಂದು ಏ.5ರಂದು ಹೊರಡಿಸಿದ್ದ ಆದೇಶದಲ್ಲಿ ತಿಳಿಸಲಾಗಿತ್ತು. ಅದನ್ನು ಪರಿಷ್ಕರಿಸಿ ವಾರ್ಷಿಕವಾಗಿ ವಿಧಿಸುವ ಶುಲ್ಕ ಎಂದು ಪರಿಷ್ಕರಿಸಿದೆ.

2024ರಲ್ಲಿ ಬಿಬಿಎಂಪಿ ಘನತ್ಯಾಜ್ಯ ನಿರ್ವಹಣೆ ಉಪ ನಿಯಮಗಳನ್ನು (ಬೈ-ಲಾ) ಅಧಿಸೂಚಿಸಲಾಗಿದ್ದು, ಅದರಲ್ಲಿ ಯಾರಿಗೆ ಎಷ್ಟು ಸೆಸ್ ಹಾಗೂ ಬಳಕೆದಾರರ ಶುಲ್ಕವನ್ನು ವಿಧಿಸಬೇಕು ಎಂಬುದನ್ನು ಪ್ರಕಟಿಸಲಾಗಿದೆ.

ಅದಕ್ಕಿಂತ ಕಡಿಮೆ ಶುಲ್ಕವನ್ನು ಬಿಬಿಎಂಪಿ ಐದು ವರ್ಷದ ನಂತರ ಜಾರಿ ಮಾಡಿದೆ. ಬೈ-ಲಾದಂತೆ ಎಲ್ಲಾ ವಸತಿ ಕಟ್ಟಡಗಳಿಗೆ ಪ್ರತಿ ತಿಂಗಳಿಗೆ 200 ರೂ. ಬಳಕೆದಾರರ ಶುಲ್ಕವಿದೆ. ಬಿಬಿಎಂಪಿ ಜಾರಿ ಮಾಡಿರುವ ಬಳಕೆದಾರರ ಶುಲ್ಕದಂತೆ 600 ಚದರಡಿಯಷ್ಟು ಕಟ್ಟಡ ಹೊಂದಿರುವವರಿಗೆ ತಿಂಗಳಿಗೆ 10,601 ಚದರಡಿಯಿಂದ 1000 ಚದರಡಿವರೆಗಿನ ಕಟ್ಟಡಕ್ಕೆ ತಿಂಗಳಿಗೆ 50 ರೂ. ವಿಧಿಸಲಾಗಿದೆ. ಬಡವರ್ಗದ ಜನರಿಗೆ ಇದು ಹೆಚ್ಚಿನ ಹೊರೆಯಾಗುವುದಿಲ್ಲ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.


ಉದಯವಾಹಿನಿ ಚಿತ್ರ

> ಹೋಟೆಲ್, ಲಾಡ್ಜ್ ಮತ್ತು ಸ್ಟಾರ್ ಹೋಟೆಲ್‌ಗಳಿಗೂ ಚದರ ಅಡಿಗೆ ಅನುಗುಣವಾಗಿ ಬಳಕೆದಾರರ ಶುಲ್ಕವನ್ನು ನಿಗದಿಪಡಿಸಲಾಗಿದೆ. ಈ ಕಟ್ಟಡಗಳಿಗೂ ಆಸ್ತಿ ತೆರಿಗೆಯ ಗರಿಷ್ಠ ಶೇ.60ರಷ್ಟು ಮಿತಿಯನ್ನು ವಿಧಿಸಲಾಗಿದೆ. ಆದರೆ, ತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ಹೊಂದಿರುವ ಕಟ್ಟಡಗಳು ಬಳಕೆದಾರರ ಶುಲ್ಕವನ್ನು ಪಾವತಿಸುವ ಅಗತ್ಯವಿಲ್ಲ ಎಂದು ಬಿಬಿಎಂಪಿ ಅಧಿಕಾರಿಗಳು ತಿಳಿಸಿದ್ದಾರೆ.

### 30 X 40 ಅಡಿ ನಿವೇಶನಕ್ಕೆ ವರ್ಷಕ್ಕೆ 720 ರೂ. ಶುಲ್ಕ

**ಖಾಲಿ ನಿವೇಶನಗಳಿಗೆ 2024-25ರ ಆರ್ಥಿಕ ವರ್ಷದವರೆಗೆ ಯಾವುದೇ ಘನತ್ಯಾಜ್ಯ ಸೆಸ್ ಇರಲಿಲ್ಲ. ಆದರೆ, 2025-26ನೇ ಸಾಲಿನಿಂದ ಸೆಸ್ ಮತ್ತು ಬಳಕೆದಾರರ ಶುಲ್ಕವನ್ನು ವಿಧಿಸಲು ಪ್ರಾರಂಭಿಸಲಾಗಿದೆ. ವಾರ್ಷಿಕವಾಗಿ ಪ್ರತಿ ಚದರಡಿಗೆ 60 ಪೈಸೆಯಂತೆ ಖಾಲಿ ನಿವೇಶನದ ಮಾಲೀಕರು ಬಳಕೆದಾರರ ಶುಲ್ಕವನ್ನು ಪಾವತಿಸಬೇಕು. ಉದಾಹರಣೆಗೆ, 1,200 ಚದರ ಅಡಿಯ (30 ಅಡಿ X 40 ಅಡಿ) ನಿವೇಶನಕ್ಕೆ ವರ್ಷಕ್ಕೆ 720 ರೂ. ತ್ಯಾಜ್ಯ ನಿರ್ವಹಣಾ ಬಳಕೆದಾರರ ಶುಲ್ಕ ಆಗುತ್ತದೆ.**

ಒಂದು ವೇಳೆ ನೀವು ಸ್ವಂತ ಮನೆಯಲ್ಲಿ ವಾಸವಿದ್ದು, ಮೇಲಿನ ಅಥವಾ ಕೆಳಗಿನ ಭಾಗವನ್ನು ಬಾಡಿಗೆಗೆ ನೀಡಿದ್ದರೆ, ಅದನ್ನು ವಸತಿಯೇತರ ಆಸ್ತಿ ಎಂದು ಪರಿಗಣಿಸಲಾಗುತ್ತದೆ. ಅಂತಹ ಆಸ್ತಿಗಳಿಗೆ, ಆಸ್ತಿ ತೆರಿಗೆಯ ಗರಿಷ್ಠ ಶೇ. 60ರಷ್ಟನ್ನು ಬಳಕೆದಾರರ ಶುಲ್ಕವಾಗಿ ಪಾವತಿಸಬೇಕಾಗುತ್ತದೆ.

ಒಂದು ವೇಳೆ ಕಟ್ಟಡವನ್ನು ಸಂಪೂರ್ಣವಾಗಿ ಬಾಡಿಗೆಗೆ ನೀಡಿದ್ದರೆ, ಆಸ್ತಿ ತೆರಿಗೆಯ ಗರಿಷ್ಠ ಶೇ.30ರಷ್ಟನ್ನು ಪಾವತಿಸಬೇಕಾಗುತ್ತದೆ.

ಕುಡಿಯೋ ನೀರಿನ ದರ ಏರಿಕೆ ಅನಿವಾರ್ಯ ಎಂದ ಡಿಕೆ ಶಿವಕುಮಾರ್, ದರ ಏರಿಕೆ ಬಗ್ಗೆಯೂ ಸಮರ್ಥನೆ!

ಹಿಂದೆ, ಘನತ್ಯಾಜ್ಯ ನಿರ್ವಹಣೆ ಬೈ-ಲಾದ ಪ್ರಕಾರ, ಪ್ರತಿ ಚದರಡಿಗೆ ತಿಂಗಳಿಗೆ 20 ಪೈಸೆಯಂತೆ ನಿಗದಿಪಡಿಸಲಾಗಿತ್ತು. ಅದರಂತೆ, ಪ್ರತಿ ತಿಂಗಳಿಗೆ 240 ರೂ.ನಂತೆ ವರ್ಷಕ್ಕೆ 2,880 ರೂ. ಪಾವತಿಸಬೇಕಾಗುತ್ತಿತ್ತು. ಆದರೆ, ಬಿಬಿಎಂಪಿ ಈಗ ಜಾರಿಗೊಳಿಸಿರುವ ಹೊಸ ಶುಲ್ಕದ ಪ್ರಕಾರ, ಕೇವಲ 720 ರೂ. ಪಾವತಿಸಿದರೆ ಸಾಕು. ಈ ಹಿಂದೆ ಸೆಸ್ ಮತ್ತು ಬಳಕೆದಾರರ ಶುಲ್ಕ ಎರಡೂ ಇಲ್ಲದ ಕಾರಣ, ಈ ಬಾರಿ ಆಸ್ತಿ ತೆರಿಗೆ ಶೇ.20 ರಿಂದ ಶೇ.200ರಷ್ಟು ಹೆಚ್ಚಾಗುವ ಸಾಧ್ಯತೆಯಿದೆ.

# ಸಂಚಾರ ನಿಯಮ ಉಲ್ಲಂಘನೆ, ದಂಡ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಕಾರಿನಲ್ಲಿ ಚಲಿಸುವಾಗ ಸಂಚಾರ ನಿಯಮ ಉಲ್ಲಂಘಿಸಿ ಸನ್ ರೂಫ್‌ನಿಂದ ಹೊರಗೆ ನಿಂತು ಪ್ರಯಾಣಿಸುತ್ತಿದ್ದವರ ವಿರುದ್ಧ ಬೆಂಗಳೂರು ಸಂಚಾರ ಪೊಲೀಸರು ಪ್ರಕರಣ ದಾಖಲಿಸಿಕೊಂಡು ದಂಡ ವಿಧಿಸಿದ್ದಾರೆ. ಈ ಸಂಬಂಧ ಸಾಮಾಜಿಕ ಜಾಲತಾಣ ಎಕ್ಸ್‌ನ ಅಧಿಕೃತ ಖಾತೆಯಲ್ಲಿ ಬೆಂಗಳೂರು ಸಂಚಾರ ಪೊಲೀಸರು ಪೋಸ್ಟ್ ಹಂಚಿಕೊಂಡಿದ್ದಾರೆ. 'ಒಂದು ತಪ್ಪು ನಡೆಯಿಂದಾಗಿ ಅಪಾಯಗಳು ಎದುರಾಗಬಹುದು. ಮನರಂಜನೆಗಾಗಿ ಈ ರೀತಿ ವರ್ತನೆ ಸರಿಯಿಲ್ಲ. ಇದು ಎಲ್ಲರಿಗೂ ಅಪಾಯಕಾರಿ. ರೋಮಾಂಚನಕ್ಕಾಗಿ ಜೀವಗಳನ್ನು ಪಣಕ್ಕಿಡಬೇಡಿ' ಎಂದು ಪೊಲೀಸರು ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ವೀಡಿಯೋದಲ್ಲಿ ಕಾಣಿಸಿಕೊಂಡ ದೃಶ್ಯಗಳನ್ನು ಆಧರಿಸಿ, ಆರ್.ಟಿ ನಗರ ಸಂಚಾರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ಅಜಾರೂಕತೆಯಿಂದ ವಾಹನ ಚಾಲನೆ ಮಾಡಿದ ಸವಾರನ ವಿರುದ್ಧ ಬೆಂಗಳೂರು ಸಂಚಾರ ಪೊಲೀಸರು ಪ್ರಕರಣ ದಾಖಲಿಸಕೊಂಡು ದಂಡ ವಿಧಿಸಿದ್ದು, ಇದು ಟಿಕೆಟ್ ಅಲ್ಲ. ಪ್ರಕರಣಕ್ಕೆ ದಂಡ ವಿಧಿಸಲಾಗಿದೆ ಎಂದೂ ತಿಳಿಸಲಾಗಿದೆ.

# ಪತ್ನಿ ಆತ್ಮಹತ್ಯೆ : ಪತಿ ಬಂಧನ

• ಉದಯವಾಹಿನಿ, ಬೆಂಗಳೂರು

ಹೆಬ್ಬಾಳದ ಕನಕ ನಗರದಲ್ಲಿ ಗೃಹಿಣಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದು, ಪತಿಯನ್ನು ಹೆಬ್ಬಾಳ ಠಾಣೆಯ ಪೊಲೀಸರು ಬಂಧಿಸಿದ್ದಾರೆ. ಬಹರ್ ಆಸ್ಮಾ (30) ಆತ್ಮಹತ್ಯೆ ಮಾಡಿಕೊಂಡವರು. ಇವರ ಪತಿ ಬಷೀರ್ ಉಲ್ಲಾ ಎಂಬಾತನನ್ನು ಬಂಧಿಸಲಾಗಿದೆ. ಆರೋಪಿ ತಾಯಿ ಜಬೀನ್ ತಾಜ್, ಅಣ್ಣ ಅರ್ಷದ್ ಉಲ್ಲಾ, ಮಜರ್ ಖಾನ್, ತರ್ಬೆಜ್ ಖಾನ್, ಹರ್ಷಿಯಾ ಹಾಗೂ ನೌಷದ್ ವಿರುದ್ಧವೂ ಪ್ರಕರಣ ದಾಖಲಾಗಿದ್ದು ಅವರನ್ನೂ ವಿಚಾರಣೆ ನಡೆಸಲಾಗುವುದು ಎಂದು ಪೊಲೀಸರು ಹೇಳಿದರು. **ಬೇಳಾಲು:** ಕಾಡಿನಲ್ಲಿ ಪತ್ತೆಯಾಗಿದ್ದ ಮಗುವಿನ ತಂದೆ-ತಾಯಿ ವಿವಾಹ ಸಿನಿಮಾ ಯುವತಿಯ ಜತೆಗೆ ಬಷೀರ್ ಉಲ್ಲಾಗೆ ಸ್ನೇಹವಿದ್ದು, ಆತನ ಕಿರುಕುಳದಿಂದಲೇ ಆಸ್ಮಾ ಮೃತಪಟ್ಟಿದ್ದಾರೆ ಎಂದು ಆರೋಪಿಸಿ ಅವರ ಪೋಷಕರು ದೂರು ನೀಡಿದ್ದಾರೆ. 'ಎರಡು ವರ್ಷಗಳ ಹಿಂದೆ ಕುಟುಂಬದ ಹಿರಿಯರು ನಿಶ್ಚಯಿಸಿದಂತೆ ಆಸ್ಮಾ ಹಾಗೂ ಬಷೀರ್ ಉಲ್ಲಾ ಮದುವೆ ನಡೆದಿತ್ತು. ಆಸ್ಮಾ ಎಂ.ಎ ಪದವಿ ಪಡೆದಿದ್ದರು. ಖಾಸಗಿ ಕಂಪನಿಯೊಂದರಲ್ಲಿ ಬಷೀರ್ ಕೆಲಸ ಮಾಡುತ್ತಿದ್ದ. ಯುವತಿಯ ಜತೆಗೆ ಬಷೀರ್‌ಗೆ ಸ್ನೇಹವಿತ್ತು. ಬಷೀರ್ ಮೊಬೈಲ್ ಪರಿಶೀಲಿಸಿದಾಗ ಸಾಕ್ಷ್ಯಗಳು ಸಿಕ್ಕಿದ್ದವು. ಅದನ್ನು ನೋಡಿದ್ದ ಆಸ್ಮಾ ಅವರು ಪತಿಯನ್ನು ಪ್ರಶ್ನೆ ಮಾಡಿದ್ದರು. ಆಗ ಆತ ಹಲ್ಲೆ ಮಾಡಿದ್ದ' ಎಂದು ಆಸ್ಮಾ ಪೋಷಕರು ಆರೋಪಿಸಿದ್ದಾರೆ.

# ಅಂಗಡಿಯ ಬಾಗಿಲು ಒಡೆದು ಕಳ್ಳತನ

• ಉದಯವಾಹಿನಿ, ಬೆಂಗಳೂರು

ಕಳವು ಮಾಡಿದ್ದ ಕಾರು ಹಾಗೂ ಬೈಕ್‌ಗಳಲ್ಲಿ ಬಂದು ಮನೆ, ಅಂಗಡಿಗಳಿಗೆ ನುಗ್ಗಿ ಕಳ್ಳತನ ಮಾಡುತ್ತಿದ್ದ ಬೇಗೂರಿನ ಉಲ್ಲಾಸ್ ಅಲಿಯಾಸ್ ಡಾಲಿ(24), ಯಶವಂತಪುರ ನಿವಾಸಿ ಕಿರಣ್ (23) ಎಂಬುವರನ್ನು ಎಸ್.ಜೆ.ಪಾರ್ಕ್ ಠಾಣೆ ಪೊಲೀಸರು ಬಂಧಿಸಿದ್ದಾರೆ.ಠಾಣಾ ವ್ಯಾಪ್ತಿಯ ಅಂಗಡಿಯೊಂದರ ಬಾಗಿಲು ಒಡೆದು ರೂ.7 ಸಾವಿರ ನಗದು ದೋಚಿ ಪರಾರಿ ಆಗಿದ್ದರು. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡು ಹೇರೋಹಳ್ಳಿ ಬಸ್ ನಿಲ್ದಾಣದ ಬಳಿ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಪೊಲೀಸರು ಹೇಳಿದರು. ಎಂಟು ವರ್ಷಗಳಿಂದ ಆರೋಪಿಗಳು ಕಳ್ಳತನ ಮಾಡುತ್ತಿದ್ದರು. ಈ ಹಿಂದೆ ಬಾಲಾಪರಾಧಿಗಳಾಗಿ ಮಕ್ಕಳ ಕಲ್ಯಾಣ ಮಂಡಳಿ ಸೇರಿದ್ದರು. ಅಲ್ಲಿ ಇಬ್ಬರೂ ಪರಿಚಯವಾಗಿದ್ದರು. ಬಿಡುಗಡೆಯಾದ ಬಳಿಕ ಇಬ್ಬರೂ ಕಳ್ಳತನಕ್ಕೆ ಇಳಿದಿದ್ದರು ಎಂದು ಪೊಲೀಸರು ಹೇಳಿದರು. ಆರೋಪಿಗಳ ವಿರುದ್ಧ ನಗರದ ವಿವಿಧ ಪೊಲೀಸ್ ಠಾಣೆಗಳಲ್ಲಿ 11ಕ್ಕೂ ಹೆಚ್ಚು ಕಳ್ಳತನ ಪ್ರಕರಣಗಳು ದಾಖಲಾಗಿದ್ದು, ಬಂಧಿತರಿಂದ ರೂ.6 ಸಾವಿರ ನಗದು, 25 ಗ್ರಾಂ. ಚಿನ್ನಾಭರಣ, 124 ಗ್ರಾಂ. ಬೆಳ್ಳಿಯ ಸಾಮಗ್ರಿ, ಹಾಗೂ ಬೈಕ್ ವಶಕ್ಕೆ ಪಡೆಯಲಾಗಿದೆ ಎಂದು ಪೊಲೀಸರು ಹೇಳಿದರು.

# ಕೊಲೆ ಪ್ರಕರಣ: ಆರೋಪಿ ಬಂಧನ

• ಉದಯವಾಹಿನಿ, ಬೆಂಗಳೂರು

ಕಬ್ಬಿಣದ ಸಲಾಕೆಯಿಂದ ಹೊಡೆದು ವ್ಯಕ್ತಿಯನ್ನು ಕೊಲೆ ಮಾಡಿದ್ದ ಆರೋಪಿಗಳ ಪೈಕಿ ಒಬ್ಬನನ್ನು ಕೆಂಗೇರಿ ಠಾಣೆ ಪೊಲೀಸರು ಬಂಧಿಸಿದ್ದಾರೆ.ಕಾಟನ್‌ಪೇಟೆಯ ಭಕ್ತಿಗಾರ್ಡನ್‌ನ ನಿವಾಸಿ ದಾದಾಪೀರ್ (25) ಎಂಬಾತನನ್ನು ಬಂಧಿಸಲಾಗಿದೆ. ಮತ್ತೊಬ್ಬ ಆರೋಪಿ, ಪಾದರಾಯನಪುರದ ನಿವಾಸಿ ಉಮ್ಮೆಸಲ್ಮಾ (22) ಎಂಬಾತ ತಲೆಮರೆಸಿಕೊಂಡಿದ್ದಾನೆ. ಆತನ ಬಂಧನಕ್ಕೆ ಕಾರ್ಯಾಚರಣೆ ನಡೆಸಲಾಗುತ್ತಿದೆ ಎಂದು ಪೊಲೀಸರು ಹೇಳಿದರು.

ಮೈಸೂರು ರಸ್ತೆಯ ಅಂಚೆಪಾಳ್ಯದ ನಿವಾಸಿ ಸಮೀರ್ (26) ಎಂಬುವರನ್ನು ಕೊಲೆ ಮಾಡಿ ಬನಶಂಕರಿ ಆರನೇ ಹಂತದ ಏಳನೇ ಬ್ಲಾಕ್‌ನ ತುರಹಳ್ಳಿ ಅರಣ್ಯ ಪಕ್ಕದ ರಸ್ತೆಯಲ್ಲಿ ಮೃತದೇಹ ಎಸೆದು ಪರಾರಿ ಆಗಿದ್ದರು. ಕೊಲೆ ಪ್ರಕರಣ ದಾಖಲಿಸಿಕೊಂಡು ಪೊಲೀಸರು ತನಿಖೆ ನಡೆಸಿದ್ದರು. 'ಕೆಲವು ವರ್ಷಗಳ ಹಿಂದೆ ಸಮೀರ್ ಮದುವೆ ಆಗಿದ್ದರು. ಸಮೀರ್ ಅವರ ಪತ್ನಿ ಜತೆಗೆ ಆರೋಪಿ ದಾದಾಪೀರ್ ಸ್ನೇಹ ಬೆಳೆಸಿಕೊಂಡಿದ್ದ. ಸ್ನೇಹ ಮುಂದುವರೆಸಲು ಸಮೀರ್ ಅಡ್ಡಿ ಆಗಲಿದ್ದಾರೆ ಎಂದು ಭಾವಿಸಿ ಕೊಲೆಗೆ ಸಂಚು ರೂಪಿಸಿ ಕೃತ್ಯ ಎಸಗಲಾಗಿತ್ತು. ಕೃತ್ಯದಲ್ಲಿ ಸಮೀರ್‌ನ ಪತ್ನಿಯ ಕೈವಾಡ ಇರುವ ಸಾಧ್ಯತೆಯಿದ್ದು, ಆಕೆಯನ್ನೂ ವಿಚಾರಣೆ ನಡೆಸಲಾಗುತ್ತಿದೆ' ಎಂದು ಪೊಲೀಸರು ತಿಳಿಸಿದರು.

# ಭಾನುಪ್ರಕಾಶ್ ಶರ್ಮಾ, ತಂಡದವರಿಂದ ಮಾತಯಾಚನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾಗೆ ನಡೆಯುತ್ತಿರುವ ಅಧ್ಯಕ್ಷಿಯ ಚುನಾವಣೆಗೆ ಸ್ಪರ್ದಿಸುತ್ತಿರುವ ಭಾನುಪ್ರಕಾಶ್ ಶರ್ಮಾ ಮತ್ತು ತಂಡದವರಿಂದ ಮತ ಯಾಚನೆಯನ್ನು ಅಕ್ಷಯ ವಿಪ್ರ ಮಹಾಸಭಾದಲ್ಲಿ ಮಾಡಿದರು. ಜೆ ಪಿ ನಗರದಲ್ಲಿರುವ ಅಕ್ಷಯ ವಿಪ್ರ ಮಹಾಸಭಾದ ಕಚೇರಿಗೆ ಭಾನುಪ್ರಕಾಶ್ ಮತ್ತು ತಂಡ ಆಗಮಿಸಿ ಮತ ಯಾಚಿಸಿದರು, ಭಾನುಪ್ರಕಾಶ್ ಶರ್ಮಾ ಮಾತನಾಡಿ ರಾಜ್ಯದಲ್ಲಿ 55ಲಕ್ಷ ಕ್ಕೂ ಹೆಚ್ಚು ಬ್ರಾಹ್ಮಣರಿದ್ದು ಕೇವಲ 62ಸಾವಿರ ಮಾತ್ರ ಸದಸ್ಯರಿದ್ದು ಅದನ್ನು ಕನಿಷ್ಠ ಐದು ಲಕ್ಷಕ್ಕೇರಿಸುವ ಗುರಿಯನ್ನು ಹೊಂದಿದ್ದು ಅದರ ಜತೆಗೆ ಪದ್ಮನಾಭನಗರದಲ್ಲಿ ಸುವರ್ಣ ಭವನವನ್ನು ನಿರ್ಮಿಸಿ ನಮ್ಮ ಜನಾಂಗಕ್ಕೆ ಅವಶ್ಯಕತೆಗೆ ತಕ್ಕಂತೆ ಕಾರ್ಯಕ್ರಮಗಳನ್ನು ಮಾಡಲಾಗುವುದು ಎಂದು ಅವರು ಹೇಳಿದರು. ಈ ಸಂದರ್ಭದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾ ಅಧ್ಯಕ್ಷ ಅಭ್ಯರ್ಥಿಗಳಾದ ಪವಮಾನ, ಡಿ.ವಿ, ಶಶಿಕಲಾ ಬಿ.ಎ, ಸುನಿಲ್ ವೆಂಕಟಸುಬ್ಬಯ್ಯ ಸೇರಿದಂತೆ ವಿಪ್ರ ಮುಖಂಡರಾದ ಪುಟ್ಟಣ್ಣ, ಸವಿತಾ ನರಸಿಂಹ, ಶ್ರೀಲಕ್ಷ್ಮಿ ಮಹಾಸಭಾದ ಅಧ್ಯಕ್ಷ ಕೆ. ರಾಘವೇಂದ್ರ ರಾವ್ ಪ್ರಧಾನ ಕಾರ್ಯದರ್ಶಿ ಎನ್. ಎಸ್. ಸುಧೀಂದ್ರರಾವ್, ಸೇತುಮಾಧವ, ಅರುಣ್ ಕುಮಾರ್, ಟಿ ಎನ್. ಶಾಂತಕುಮಾರ್,ರಾಧಾಕೃಷ್ಣ ರೂಪನಾಗೇಶ್ ಸೇರಿದಂತೆ ಮತ್ತಿತರರು ಉಪಸ್ಥಿರಿದ್ದರು.

# ಪ್ರಯಾಣಿಕರ ದಟ್ಟಣೆ ಹೆಚ್ಚಿಸಿದ ಶಕ್ತಿ ಯೋಜನೆ

• ಉದಯವಾಹಿನಿ, ಬೆಂಗಳೂರು

ಉಚಿತ ಬಸ್ ಒದಗಿಸುವ ಶಕ್ತಿ ಯೋಜನೆ ಆರಂಭದ ಬಳಿಕ ಸಾರಿಗೆ ಬಸ್‌ಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರ ಸಂಖ್ಯೆ ಹೆಚ್ಚಾಗಿದ್ದು, ಬಹುತೇಕ ಎಲ್ಲಾ ಸಾರಿಗೆ ಬಸ್‌ಗಳು ಜನದಟ್ಟಣೆಯೊಂದಿಗೆ ಓಡಾಡುತ್ತಿವೆ. ಇದರಿಂದ ಹಳೆಯ ಬಸ್‌ಗಳ ಮೇಲೆ ಹೊರೆ ಹೆಚ್ಚಾಗಿದೆ. ಯೋಜನೆಯಿಂದಾಗಿ ಪ್ರತಿದಿನ 25 ಲಕ್ಷ ಹೆಚ್ಚುವರಿ ಪ್ರಯಾಣಿಕರು ಸಾರಿಗೆ ಬಸ್ ಗಳಲ್ಲಿ ಪ್ರಯಾಣಿಸುತ್ತಿದ್ದಾರೆ. ವಾರ್ಷಿಕವಾಗಿ 900 ಕೋಟಿಗೂ ಹೆಚ್ಚುವರಿ ಪ್ರಯಾಣಿಕರು ಪ್ರಯಾಣಿಸುತ್ತಿದ್ದಾರೆ. ಸಾರಿಗೆ ಇಲಾಖೆ ಇರುವ ವ್ಯವಸ್ಥೆಯಲ್ಲೇ ಪರಿಸ್ಥಿತಿ ನಿಭಾಯಿಸುತ್ತಿದೆ.

ಪ್ರಸ್ತುತ 26,000 ಬಸ್‌ಗಳಲು ಓಡಾಡುತ್ತಿವೆ. ಪ್ರತಿವರ್ಷ ಶೇ.10ರಷ್ಟು ಬಸ್‌ಗಳನ್ನು ಬದಲಾಯಿಸಬೇಕು. ಇದಲ್ಲದೆ, ಹಿಂದಿನ ಬಿಜೆಪಿ ಸರ್ಕಾರದ ಮೂರು ವರ್ಷ ಮತ್ತು ಹತ್ತು ತಿಂಗಳ ಅವಧಿಯಲ್ಲಿ, ಯಾವುದೇ ಹೊಸ ಬಸ್‌ಗಳನ್ನು ಖರೀದಿಸಿಲ್ಲ. ಇದರ ಪರಿಣಾಮ ಬಸ್ ಸಂಖ್ಯೆ ಇದೀಗ 21,000ಕ್ಕೆ ಇಳಿದಿದೆ.

ಬಸ್ ಸಮಸ್ಯೆ ನಿವಾರಣೆಗೆ ಬಾಡಿಗೆ ಬಸ್ ನೆರವು ಪಡೆಯಲು ಚಿಂತನೆ ನಡೆಸಿದ್ದು, ಇದಕ್ಕೆ ರಾಮಲಿಂಗಾ ರೆಡ್ಡಿಯವರು ನಿರಾಕರಿಸಿದ್ದಾರೆಂದು ತಿಳಿದುಬಂದಿದೆ.


ಉದಯವಾಹಿನಿ ಚಿತ್ರ

ಬಾಡಿಗೆ ಬದಲು ಹೊಸ ಬಸ್‌ಗಳ ಖರೀದಿಸುವಂತೆ ಮುಖ್ಯಮಂತ್ರಿಗಳಿಗೆ ಒತ್ತಾಯಿಸಿದ್ದಾರೆಂದು ವರದಿಗಳು ತಿಳಿಸಿವೆ. ಬಜೆಟ್‌ನಲ್ಲಿ ಈ ಕುರಿತು ಪ್ರಸ್ತಾಪಿಸಲಾಗಿದ್ದು, 4,000 ಹೊಸ ಬಸ್ ಖರೀದಿ ಮಾಡಲು ಸರ್ಕಾರ ಚಿಂತನೆ ನಡೆಸುತ್ತಿದೆ ಎಂದು ತಿಳಿದುಬಂದಿದೆ.

ಪ್ರಸ್ತುತ ಕಾಂಗ್ರೆಸ್ ನಾಯಕರು ಅಹಮದಾಬಾದ್‌ನಲ್ಲಿ ನಡೆಯುತ್ತಿರುವ ಎಐಸಿಸಿ ಸಭೆಯಲ್ಲಿ ಬ್ಯುಸಿಯಾಗಿದ್ದು, ಸಭೆ ಬಳಿಕ ಹಿಂತಿರುಗಿದ ನಂತರ ಶುಕ್ರವಾರ ನಡೆಯುವ ಸಂಪುಟ ಸಭೆಯಲ್ಲಿ ಈ ಬಗ್ಗೆ ನಿರ್ಧಾರ ತೆಗೆದುಕೊಳ್ಳಲಿದ್ದಾರೆಂದು ತಿಳಿದುಬಂದಿದೆ.

> 4,000 ಬಸ್‌ಗಳ ಖರೀದಿಸಲು ನಿರ್ಧರಿಸಲಾಗಿದ್ದು, ಪ್ರತಿ ಬಸ್‌ಗೆ 50 ಲಕ್ಷ ರೂ.ಗಳಂತೆ 2,000 ಕೋಟಿ ರೂ. ವೆಚ್ಚವಾಗುತ್ತದೆ. ರಾಜ್ಯಾದ್ಯಂತ, ವಿಶೇಷವಾಗಿ ಉತ್ತರ ಕರ್ನಾಟಕದಲ್ಲಿ ಪರಿಸ್ಥಿತಿ ಕಠಿಣವಾಗಿದ್ದು, ಅಲ್ಲಿ ಬಸ್ ಗಳನ್ನು ನಿಯೋಜಿಸುವ ಅಗತ್ಯವಿದೆ. ಬೆಳಗಾವಿ ಮತ್ತು ಕಲ್ಯಾಣ ಕರ್ನಾಟಕದಂತಹ ಪ್ರದೇಶಗಳಲ್ಲಿ ಪರಿಸ್ಥಿತಿ ಕಠಿಣವಾಗಿದೆ. ಖಾಸಗಿ ಬಸ್‌ಗಳು ಕೂಡ ಅಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. ಹೀಗಾಗಿ ಈ ಪ್ರದೇಶಗಳಿಗೆ ಆದ್ಯತೆ ಮೇರೆಗೆ ಬಸ್‌ಗಳನ್ನು ನಿಯೋಜನೆಗೊಳಿಸಲಾಗುತ್ತದೆ ಮೂಲಗಳು ಮಾಹಿತಿ ನೀಡಿವೆ.

4,000 ಹೊಸ ಬಸ್‌ಗಳಲ್ಲಿ ಬೆಳಗಾವಿಗೆ 700, ಕಲ್ಯಾಣ ಕರ್ನಾಟಕಕ್ಕೆ 700 ಮತ್ತು ದಕ್ಷಿಣ ಜಿಲ್ಲೆಗಳಿಗೆ 600 ನಿಯೋಜನೆಗೊಳಿಸಲು ಸರ್ಕಾರ ನಿರ್ಧರಿಸಿದೆ ಎಂದು ತಿಳಿದುಬಂದಿದೆ.

# 500 ಕೋಟಿ ಕಿಕ್‌ಬ್ಯಾಕ್ ಆರೋಪ

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣದ ತನಿಖೆ ಎದುರಿಸುತ್ತಿರುವ ಸಿಎಂ ಸಿದ್ದರಾಮಯ್ಯ ವಿರುದ್ಧ ಈಗ ಮತ್ತೊಂದು ಗಂಭೀರ ಆರೋಪ ಕೇಳಿಬಂದಿದೆ. ಗಣಿ ಗುತ್ತಿಗೆ ನವೀಕರಣ ವಿಷಯದಲ್ಲಿ ಸಿಎಂ 500 ಕೋಟಿ ರೂ. ಕಿಕ್‌ಬ್ಯಾಕ್ ಪಡೆದಿದ್ದಾರೆ ಎಂಬುದು ಈಗ ಕೇಳಿಬಂದಿರುವ ಆರೋಪವಾಗಿದೆ. ಸಿಎಂ ಕಿಕ್ ಬ್ಯಾಕ್ ಪಡೆದಿರುವ ಆರೋಪದ ಬಗ್ಗೆ ತನಿಖೆ ನಡೆಸಲು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಬೇಕು ಎಂದು ಸಾಮಾಜಿಕ ಕಾರ್ಯಕರ್ತ ರಾಮಮೂರ್ತಿ ಗೌಡ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ಪತ್ರ ಬರೆದಿದ್ದಾರೆ.

ಇದು ಸಿಎಂ ಸಿದ್ದರಾಮಯ್ಯ ಹಿಂದಿನ ಅವಧಿಯಲ್ಲಿ ನಡೆದಿದೆ ಎನ್ನಲಾಗುತ್ತಿರುವ ಆರೋಪವಾಗಿದೆ. 2015ರಲ್ಲಿ ಮುಖ್ಯಮಂತ್ರಿಯಾಗಿದ್ದ ಸಂದರ್ಭ ಸಿದ್ದರಾಮಯ್ಯ 8 ಗಣಿ ಗುತ್ತಿಗೆ ನವೀಕರಣ ಮಾಡಿದ್ದರು. ಹಗರಣದಲ್ಲಿ ತನಿಖೆ ಎದುರಿಸುತ್ತಿರುವ ಗಣಿ ಕಂಪೆನಿಗಳ ಲೈಸೆನ್ಸ್ ಕೂಡ ನವೀಕರಣ ಮಾಡಲಾಗಿತ್ತು. ಲೈಸೆನ್ಸ್ ನವೀಕರಣ ಮಾಡಿಕೊಟ್ಟಿದ್ದಕ್ಕೆ ಸಿದ್ದರಾಮಯ್ಯ ಸುಮಾರು 500 ಕೋಟಿ ರೂ. ಕಿಕ್‌ಬ್ಯಾಕ್ ಪಡೆದಿದ್ದಾರೆ ಎಂದು ರಾಮಮೂರ್ತಿ ಗೌಡ ಆರೋಪಿಸಿದ್ದಾರೆ. ಸಿಎಂ ಸಿದ್ದರಾಮಯ್ಯ ನಿರ್ಧಾರದಿಂದ ಸರ್ಕಾರದ ಬೊಕ್ಕಸಕ್ಕೆ 5000 ಕೋಟಿ ನಷ್ಟ ಆಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಸಿಎಂ ಸಿದ್ದರಾಮಯ್ಯ ವಿರುದ್ಧ ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ 1988ರ ಸೆಕ್ಷನ್ 7, 9, 11, 12 ಮತ್ತು 15 ಅಡಿ ಪ್ರಾಸಿಕ್ಯೂಚನ್‌ಗೆ ಅನುಮತಿ ಕೊಡಿ ಎಂದು ಮನವಿ ಮಾಡಲಾಗಿದೆ.



# ಬೆಲೆ ಏರಿಕೆ: ಗೃಹ ಬಳಕೆದಾರರಿಗೆ ತಿಂಗಳಿಗೆ 20-30 ರೂ. ಹೆಚ್ಚುವರಿ ಹೊರೆ

• ಉದಯವಾಹಿನಿ, ಬೆಂಗಳೂರು

ಬೇಸಿಗೆಯಲ್ಲಿ ಜನರು ನೀರಿಗಾಗಿ ಪರದಾಡುತ್ತಿದ್ದಾರೆ, ಈ ನಡುವೆ ಬಿಡಬ್ಲ್ಯುಎಸ್‌ಎಸ್ ಬಿ ನಿರೀಕ್ಷೆಯಂತೆಯೇ ನೀರಿನ ದರ ಹೆಚ್ಚಳ ಮಾಡುವುದನ್ನು ಸ್ಪಷ್ಟಪಡಿಸಿದೆ.

ಬೆಲೆ ಏರಿಕೆ ಬಗ್ಗೆ ಮಾತನಾಡಿರುವ ಬಿಡಬ್ಲ್ಯುಎಸ್‌ಎಸ್ ಬಿ ಅಧ್ಯಕ್ಷ ರಾಮ್ ಪ್ರಸಾತ್ ಮನೋಹರ್, ಗೃಹ ಬಳಕೆ ಕನೆಕ್ಷನ್‌ಗೆ ಲೀಟರ್‌ಗೆ ಗರಿಷ್ಠ ಒಂದು ಪೈಸೆ ಹೆಚ್ಚಳವಾಗಲಿದೆ ಎಂದು ತಿಳಿಸಿದ್ದಾರೆ. ಬೆಲೆ ಏರಿಕೆಯ ಪರಿಣಾಮವಾಗಿ ಒಟ್ಟಾರೆಯಾಗಿ ಗೃಹ ಬಳಕೆದಾರರಿಗೆ ತಿಂಗಳಿಗೆ 20-30 ರೂ. ಹೆಚ್ಚುವರಿ ಹೊರೆಯಾಗುವ ಸಾಧ್ಯತೆ ಇದೆ. ನೀರು ಬಳಕೆಯ ಆಧಾರದ ಮೇಲೆ ಸ್ಲ್ಯಾಬ್‌ಗಳನ್ನು ನಿಗದಿಪಡಿಸಲಾಗಿದ್ದು, ಎಷ್ಟು ಬಳಕೆಗೆ ಎಷ್ಟು ದರ ಏರಿಕೆಯಾಲಿದೆ ಎಂಬ ಬಗ್ಗೆ ರಾಮ್ ಪ್ರಸಾತ್ ಮನೋಹರ್ ವಿವರಗಳನ್ನು ನೀಡಿದ್ದಾರೆ.


ಉದಯವಾಹಿನಿ ಚಿತ್ರ

### ನೀರಿನ ದರ ಏರಿಕೆ ವಿವರ ಹೀಗಿದೆ?

- **0-8 ಸಾವಿರದೊಳಗೆ ಸ್ಲ್ಯಾಬ್‌ಗೆ ಲೀಟರ್‌ಗೆ 0.15 ಪೈಸೆ ಹೆಚ್ಚಳ.**
- **8-25 ಸಾವಿರದೊಳಗಿನ ಸ್ಲ್ಯಾಬ್‌ಗೆ ಲೀಟರ್‌ಗೆ 0.40 ಪೈಸೆ**
- **25 ಸಾವಿರ ಲೀಟರ್‌ಗಿಂತ ಹೆಚ್ಚು ಬಳಕೆ ಮಾಡಿದ್ರೆ 0.80 ಪೈಸೆ ಏರಿಕೆ.**
- **50 ಸಾವಿರದಿಂದ 1 ಲಕ್ಷ ಲೀಟರ್ ನೀರು ಬಳಕೆಗೆ 1 ಪೈಸೆ ಹೆಚ್ಚಳ.**

ಇನ್ನು ಮುಂದಿನ ದಿನಗಳಲ್ಲಿ ಪ್ರತಿ ವರ್ಷ ಏಪ್ರಿಲ್ 1ರಿಂದ ಶೇ. 3ರಷ್ಟು ನೀರಿನ ದರ ಹೆಚ್ಚಳವಾಗಲಿದೆ. ವಾಣಿಜ್ಯ ಬಳಕೆದಾರರಿಗೆ ಪ್ರತಿ ತಿಂಗಳು 50-60 ರೂ. ಹೊರೆಯಾಗಬಹುದು ಎಂದು ರಾಮ್ ಪ್ರಸಾತ್ ಮನೋಹರ್ ಹೇಳಿದ್ದಾರೆ. ಬೆಂಗಳೂರು ಜಲ ಮಂಡಳಿ 2014 ರಿಂದ ಈವರೆಗೆ ನಗರದಲ್ಲಿ ನೀರು ಪೂರೈಕೆ ದರ ಹೆಚ್ಚಳ ಮಾಡಿಲ್ಲ. ಮಂಡಳಿ ಆರ್ಥಿಕವಾಗಿ ತೀವ್ರ ಸಂಕಷ್ಟದಲ್ಲಿದೆ. ಹೀಗಾಗಿ ಲೀಟರಿಗೆ ಒಂದು ಪೈಸೆಯಷ್ಟಾದರೂ ದರ ಏರಿಕೆ ಮಾಡಲೇಬೇಕಾಗಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಇತ್ತೀಚೆಗೆ ಹೇಳಿದ್ದರು.

# ಮನೆಗೆ ಬೀಗ ಹಾಕಿ ಹೋಗುವ ಮುನ್ನ ಎಚ್ಚರ!

• ಉದಯವಾಹಿನಿ, ಬೆಂಗಳೂರು

ಏಪ್ರಿಲ್ ತಿಂಗಳು ಬಂತೆಂದರೆ ಶಾಲಾ-ಕಾಲೇಜುಗಳಿಗೆ ರಜೆಯ ಸಮಯ. ಬೇಸಿಗೆ ರಜೆ ಬಂತೆಂದರೆ ದೂರದ ಊರುಗಳಿಗೆ, ಪ್ರವಾಸಗಳಿಗೆ ಹೋಗುವವರ ಸಂಖ್ಯೆ ಹೆಚ್ಚು. ನಗರ ವಾಸಿಗಳು ಮನೆಗಳಿಗೆ ಬೀಗ ಹಾಕಿ ವಾರಗಟ್ಟಲೆ ಹೊರಗೆ ಹೋಗುವುದುಂಟು.



ಇಂತಹ ಸಂದರ್ಭದಲ್ಲಿ ಮನೆಯ ಭದ್ರತೆ ಬಗ್ಗೆ ಜಾಗರೂಕರಾಗಿರಬೇಕು, ನಗರಗಳಲ್ಲಿ ಕಳ್ಳಕಾಕರ ಭೀತಿ ಹೆಚ್ಚು ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ ದಯಾನಂದ್ ಎಚ್ಚರಿಕೆಗಳನ್ನು ನೀಡಿದ್ದಾರೆ. ನಗರದಲ್ಲಿ ಇತ್ತೀಚೆಗೆ ನಡೆದ ಅಪರಾಧ ಕೃತ್ಯಗಳ ಮತ್ತು ಕಳ್ಳತನ ಪ್ರಕರಣಗಳ ಬಗ್ಗೆ ಪತ್ರಿಕಾಗೋಷ್ಠಿ ಮೂಲಕ ಮಾಹಿತಿ ನೀಡಿದ ಅವರು, ಸಾರ್ವಜನಿಕರು ಏನೇನು ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು ಎಂಬ ಬಗ್ಗೆ ಸಲಹೆಯನ್ನೂ ನೀಡಿದ್ದಾರೆ. ವಿಶೇಷವಾಗಿ, ಮನೆಗೆ ಬೇಗ ಹಾಕಿ ಊರಿಗೆ ಅಥವಾ ಪ್ರವಾಸಕ್ಕೆ ತೆರಳುವ ಮುನ್ನ ಬೆಂಗಳೂರು ನಿವಾಸಿಗಳು ಹೆಚ್ಚಿನ ಎಚ್ಚರಿಕೆ ವಹಿಸಬೇಕು ಎಂದು ಅವರು ಸೂಚನೆ ನೀಡಿದ್ದಾರೆ. ದೀರ್ಘ ಅವಧಿಗೆ ಪ್ರವಾಸ ತೆರಳುವ ಸಂದರ್ಭದಲ್ಲಿ ಮನೆಯಲ್ಲಿ ಬೆಲೆಬಾಳುವ ವಸ್ತುಗಳನ್ನು ಇಡಬೇಡಿ. ಅವುಗಳನ್ನು ಬ್ಯಾಂಕಿನಲ್ಲಿ ಅಥವಾ ಲಾಕರ್‌ಗಳಲ್ಲಿ ಇಡುವುದು ಸೂಕ್ತ ಎಂದು ಅವರ ಸಲಹೆ ನೀಡಿದ್ದಾರೆ.

### ಹೆಚ್ಚು ದಿನ ಪ್ರವಾಸ ಹೋಗುವುದಿದ್ದರೆ ಪೊಲೀಸರಿಗೆ ಮಾಹಿತಿ ನೀಡಿ

**ಮನೆಗೆ ಗುಣಮಟ್ಟದ ಬೀಗ ಅಳವಡಿಸಬೇಕು. ಸಿಸಿಟಿವಿ ಕ್ಯಾಮೆರಾ ಅಳವಡಿಸಿಕೊಳ್ಳಿ. ಬೀಗದ ಕೀಯನ್ನು ಮನೆ ಪಕ್ಕದಲ್ಲಿ ಎಲ್ಲೋ ಇಟ್ಟು ಹೋಗುವ ಅಭ್ಯಾಸ ಮಾಡಬೇಡಿ. ಒಂದಕ್ಕಿಂತ ಹೆಚ್ಚು ದಿನ ಪ್ರವಾಸ ಹೋಗುವುದಿದ್ದರೆ ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡಿ ತೆರಳಿ. ಇಂಥ ಸಂದರ್ಭದಲ್ಲಿ ಆ ಪ್ರದೇಶದಲ್ಲಿ ಗಸ್ತು ನಡೆಸುವುದು ಪೊಲೀಸರಿಗೂ ಸುಲಭವಾಗುತ್ತದೆ ಎಂದು ಹೇಳಿದ್ದಾರೆ.**

# ಸರ್ಕಾರದಿಂದ ಶೀಘ್ರವೇ ಪ್ರವಾಸ ಮಾರ್ಗದರ್ಶಿ ಯೋಜನೆ

• ಉದಯವಾಹಿನಿ, ಬೆಂಗಳೂರು

ಸಾರ್ವಜನಿಕರು ಭವ್ಯವಾದ ವಿಧಾನಸೌಧದ ಪ್ರವಾಸಕ್ಕೆ ಹೋಗಲು ರಾಜ್ಯ ಸರ್ಕಾರವು ಶೀಘ್ರದಲ್ಲೇ ಅವಕಾಶ ನೀಡಲಿದೆ. ರಾಷ್ಟ್ರಪತಿ ಭವನ ಮತ್ತು ನವದೆಹಲಿಯ ಸಂಸತ್ತಿನ ಮಾದರಿಯಲ್ಲಿ ಪ್ರವಾಸ ಮಾರ್ಗದರ್ಶಿ ನಡೆಸಲಾಗುವುದು.

ಪ್ರವಾಸಿಗರನ್ನು ಆಕರ್ಷಿಸಲು ಕಳೆದ ಭಾನುವಾರದಿಂದ ಸಾರ್ವಜನಿಕ ರಜಾದಿನಗಳಲ್ಲಿ ವಿಧಾನಸೌಧಕ್ಕೆ ದೀಪಾಲಂಕಾರ ಮಾಡಲಾಗುತ್ತಿದೆ. ವಿದೇಶಗಳು ಮತ್ತು ಕರ್ನಾಟಕದ ಹೊರಗಿನಿಂದ ಅನೇಕ ಪ್ರವಾಸಿಗರು ವಿಧಾನಸೌಧಕ್ಕೆ ಭೇಟಿ ನೀಡಿ ಸೌಧದ ಮುಂದೆ ಛಾಯಾಚಿತ್ರಗಳಿಗೆ ಪೋಸ್ ನೀಡಿದರೂ, ಅವರನ್ನು ಒಳಗೆ ಬಿಡಲು ಅನುಮತಿ ಇರುವುದಿಲ್ಲ. ಗೈಡೆಡ್ ಟೂರ್ ನಿಂದ ಈಗ ಪ್ರವಾಸಿಗರು 70 ವರ್ಷಗಳಷ್ಟು ಹಳೆಯದಾದ ಭವ್ಯವಾದ ಕಟ್ಟಡದ ಒಳಗೆ ಹೋಗಲು ಅನುವು ಮಾಡಿಕೊಡುತ್ತದೆ.



ವಿಧಾನಸೌಧವನ್ನು ಒಳಗಿನಿಂದ ನೋಡಬೇಕು ಮತ್ತು ಕಟ್ಟಡದ ಇತಿಹಾಸ ಮತ್ತು ಮಹತ್ವವನ್ನು ಸಾರ್ವಜನಿಕರು ತಿಳಿದುಕೊಳ್ಳಬೇಕು ಎಂಬುದು ಸರ್ಕಾರದ ಬಯಕೆಯಾಗಿದೆ ಎಂದು ಸರ್ಕಾರಿ ಮೂಲಗಳು ತಿಳಿಸಿವೆ.

ಪ್ರವಾಸೋದ್ಯಮ ಇಲಾಖೆಯು ಅಂತಹ ಪ್ರವಾಸಗಳನ್ನು ನಡೆಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯಿಂದ ಅನುಮತಿಯನ್ನು ಕೋರಿತ್ತು ಮತ್ತು ಅನುಮೋದನೆ ನೀಡಲಾಗಿದೆ. ಸರ್ಕಾರಿ ಕೆಲಸಕ್ಕೆ ಅಡ್ಡಿಯಾಗದಂತೆ, ಭಾನುವಾರ, ಎರಡನೇ ಶನಿವಾರ ಮತ್ತು ಇತರ ಸರ್ಕಾರಿ ರಜಾದಿನಗಳಲ್ಲಿ ಬೆಳಿಗ್ಗೆ 8 ರಿಂದ ಸಂಜೆ 6 ರವರೆಗೆ ಪ್ರವಾಸಗಳನ್ನು ನಡೆಸಬಹುದು ಎಂದು ಡಿಪಿಎಆರ್ ತನ್ನ ಆದೇಶದಲ್ಲಿ ತಿಳಿಸಿದೆ.

# ಗರ್ಭವತಿ ಅಭ್ಯರ್ಥಿಗೆ ಆಕೆಯ ಇಚ್ಛಾ ಸ್ಥಳದಲ್ಲಿ KPSC ಪರೀಕ್ಷೆ ಬರೆಯಲು ಅವಕಾಶ

## ಗರ್ಭವತಿ ಅಭ್ಯರ್ಥಿಗೆ ವೈದ್ಯರು ಸೂಚಿಸಿದ್ದ ಪ್ರಕರಣಕ್ಕೆ ಸಂಬಂಧಿಸಿ ದಂತೆ ಹೈಕೋರ್ಟ್ ತೀರ್ಪು

• ಉದಯವಾಹಿನಿ, ಬೆಂಗಳೂರು

ಗರ್ಭವತಿಯಾಗಿರುವ ಅಭ್ಯರ್ಥಿಗೆ ಮಾತ್ರ ಪರೀಕ್ಷೆ ನಡೆಸಲು ಸಾಧ್ಯವಿಲ್ಲ ಎಂಬ ಕರ್ನಾಟಕ ಲೋಕ ಸೇವಾ ಆಯೋಗದ ನಿಲುವಿಗೆ ಹೈಕೋರ್ಟ್ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ, ಕಲಬುರಗಿಯಿಂದ ಬೆಂಗಳೂರು ಅಥವಾ ಧಾರವಾಡದ ಗೊತ್ತುಪಡಿಸಿದ ಕೇಂದ್ರಗಳಿಗೆ ಪ್ರಯಾಣಿಸಿದರೆ ಜೀವಕ್ಕೆ ಅಪಾಯವಿದೆ ಎಂದು ಗರ್ಭವತಿ ಅಭ್ಯರ್ಥಿಗೆ ವೈದ್ಯರು ಸೂಚಿಸಿದ್ದ ಪ್ರಕರಣಕ್ಕೆ ಸಂಬಂಧಿಸಿ ದಂತೆ ಹೈಕೋರ್ಟ್ ಈ ತೀರ್ಪು ನೀಡಿದೆ.

ನ್ಯಾಯಮೂರ್ತಿ ಡಾ.ಚಿಲ್ಲಕೂರ್ ಸುಮಲತಾ ಅವರು ಕೆಪಿಎಸ್‌ಸಿ ತನ್ನ ಆಯ್ಕೆ ಮತ್ತು ಅನುಕೂಲಕ್ಕೆ ಅನುಗುಣವಾಗಿ ಕಲಬುರಗಿಯಲ್ಲಿ ಎಲ್ಲಿಯಾದರೂ ಪರೀಕ್ಷೆಯನ್ನು ನಡೆಸುವಂತೆ ಮತ್ತು ಏಪ್ರಿಲ್ 9 ರೊಳಗೆ ಪರೀಕ್ಷಾ ಕೇಂದ್ರದ ಬಗ್ಗೆ ಅರ್ಜಿದಾರರಿಗೆ ತಿಳಿಸುವಂತೆ ನಿರ್ದೇಶಿಸಿದ್ದಾರೆ.

ವಿಚಾರಣೆ ನಡೆಸಿದ ನ್ಯಾಯಾಧೀಶರು, ನಮ್ಮ ದೇಶವು ಚುನಾವಣೆಗಳು ಮತ್ತು ಉಪಚುನಾವಣೆಗಳನ್ನು ನಡೆಸಲು ಕೋಟ್ಯಂತರ ರೂಪಾಯಿಗಳನ್ನು ಖರ್ಚು ಮಾಡುತ್ತದೆ. ಯೋಜನೆ ದೂರದೃಷ್ಟಿಯ ಕೊರತೆಯಿಂದಾಗಿ, ಸಾರ್ವಜನಿಕ ಹಣವನ್ನು ಆಗಾಗ್ಗೆ ವ್ಯರ್ಥ ಮಾಡಲಾಗುತ್ತದೆ. ಆದರೆ ಅರ್ಹ ಅಭ್ಯರ್ಥಿಗೆ ಪರೀಕ್ಷೆಯನ್ನು ನಡೆಸಲು ಹಣವನ್ನು ಖರ್ಚು ಮಾಡಲು ಸಾಧ್ಯವಿಲ್ಲ ಎಂದು ಹೇಳುವುದು ಯಾವ ನ್ಯಾಯವಾಗಿದೆ. ಮಹಿಳೆಯರಿಗೆ ವಿಶೇಷ ಚಿಕಿತ್ಸೆ ಅಗತ್ಯವಿದೆ ಎಂಬ ಅಂಶವನ್ನು ಪರಿಗಣಿಸಿ, ಸಂವಿಧಾನದ ನಿರ್ಮಾತೃಗಳು ಭಾಗ 3ರ ಅಡಿಯಲ್ಲಿ ಮಹಿಳೆಯರಿಗೆ ಪ್ರತ್ಯೇಕವಾಗಿ ಕೆಲವು ಸವಲತ್ತುಗಳನ್ನು ಕಲ್ಪಿಸಿದ್ದಾರೆ ಎಂದು ಉಲ್ಲೇಖಿಸಿದರು.




### ಪ್ರಕರಣವೇನು?

**ಕಲಬುರಗಿಯ 31 ವರ್ಷದ ಮಹಾಲಕ್ಷ್ಮಿ ಅವರು ತಮ್ಮ ವೈದ್ಯಕೀಯ ಸ್ಥಿತಿಯ ಕಾರಣದಿಂದಾಗಿ ಏಪ್ರಿಲ್ 15 ರಿಂದ 19 ರವರೆಗೆ ನಡೆಯಲಿರುವ ಗ್ರೂಪ್-ಎ ಹುದ್ದೆಗಳ ಮುಖ್ಯ ಪರೀಕ್ಷೆಗೆ ಬರೆಯಲು ಕಲಬುರಗಿಯಲ್ಲಿಯೇ ಅವಕಾಶ ನೀಡಬೇಕೆಂದು ಕೆಪಿಎಸ್‌ಸಿಗೆ ನಿರ್ದೇಶನಗಳನ್ನು ಕೋರಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.**

ಸಂವಿಧಾನದ 14 ನೇ ವಿಧಿಯ ಪ್ರಕಾರ, ಸಂವಿಧಾನದ 15(3) ನೇ ವಿಧಿಯು ಮಹಿಳೆಯರು ಮತ್ತು ಮಕ್ಕಳಿಗೆ ವಿಶೇಷ ನಿಬಂಧನೆಗಳನ್ನು ಮಾಡಲು ರಾಜ್ಯಕ್ಕೆ ಅಧಿಕಾರ ನೀಡುತ್ತದೆ. ರಾಜ್ಯದ ಅಡಿಯಲ್ಲಿರುವ ಯಾವುದೇ ಹುದ್ದೆಗೆ ಉದ್ಯೋಗ ಅಥವಾ ನೇಮಕಾತಿಗೆ ಸಂಬಂಧಿಸಿದ ವಿಷಯಗಳಲ್ಲಿ ಎಲ್ಲಾ ನಾಗರಿಕರಿಗೆ ಸಮಾನ ಅವಕಾಶವಿರುತ್ತದೆ ಎಂದು ಸಂವಿಧಾನದ 16ನೇ ವಿಧಿ ಹೇಳುತ್ತದೆ. ಸಂವಿಧಾನದ ಭಾಗ IVರಲ್ಲಿರುವ 39ನೇ ವಿಧಿಯು, ತನ್ನ ನಾಗರಿಕರು, ಪುರುಷರು ಮತ್ತು ಮಹಿಳೆಯರಿಗೆ ಸಮಾನವಾಗಿ, ಸಾಕಷ್ಟು ಜೀವನೋಪಾಯದ ಹಕ್ಕನ್ನು ಭದ್ರಪಡಿಸುವ ಕಡೆಗೆ ತನ್ನ ನೀತಿಯನ್ನು ನಿರ್ದೇಶಿಸಬೇಕು ಎಂಬುದಾಗಿ ಹೇಳುತ್ತದೆ. ಈ ಆರೋಗ್ಯಕರ ನಿಬಂಧನೆಗಳನ್ನು ಕಡೆ ಗಣಿಸಲಾಗುವುದಿಲ್ಲ.

ಅರ್ಜಿದಾರರಿಗೆ ಅವಕಾಶ ನಿರಾಕರಿಸುವುದು ಸಂವಿಧಾನದ 14, 15 ಮತ್ತು 16ನೇ ವಿಧಿಗಳ ಅಡಿಯಲ್ಲಿ ಖಾತರಿಪಡಿಸಲಾದ ಅವರ ಮೂಲಭೂತ ಹಕ್ಕುಗಳ ಉಲ್ಲಂಘನೆಯಾಗಿದೆ ಎಂದು ನ್ಯಾಯಾಲಯ ಹೇಳಿದೆ.

ಸಾರ್ವಜನಿಕ ಕಚೇರಿಗಳು, ವಿದ್ಯುತ್ ಸರಬರಾಜು ಇಲ್ಲದ ಅಥವಾ ಸಿಸಿಟಿವಿ ಕ್ಯಾಮೆರಾಗಳನ್ನು ವ್ಯವಸ್ಥೆ ಮಾಡಲಾಗದ ಸ್ಥಳದಲ್ಲಿ ಪರೀಕ್ಷೆ ಬರೆಯಲು ಅನುಮತಿ ನೀಡುವಂತೆ ಅರ್ಜಿದಾರರು ನ್ಯಾಯಾಲಯವನ್ನು ವಿನಂತಿಸುತ್ತಿಲ್ಲ. ಆದ್ದರಿಂದ, ಅರ್ಜಿದಾರರು ವಾಸಿಸುವ ನಗರದಲ್ಲಿ ಪರೀಕ್ಷೆಯನ್ನು ನಡೆಸುವ ಜವಾಬ್ದಾರಿಯನ್ನು ತೆಗೆದುಕೊಳ್ಳಲು ಸರ್ಕಾರ ನಿರಾಕರಿಸುವಂತಿಲ್ಲ

# ಮೂರು ಗ್ರಾಮಗಳಲ್ಲಿ ನೀರಿನ ಅಭಾವ

## ಕಳೆದ 10 ವರ್ಷಗಳ ಹಿಂದೆ ಮಹಿಳೆಯರು ಕೊಡ ಹಿಡಿದು, ಕುಡಿಯುವ ನೀರಿಗಾಗಿ ಪ್ರತಿಭಟನೆ

• ಉದಯವಾಹಿನಿ, ಬಾಗೇಪಲ್ಲಿ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಮೂರು ಗ್ರಾಮಗಳಲ್ಲಿ ಕುಡಿವ ನೀರಿನ ಸಮಸ್ಯೆ ಇದೆ. ಇಲ್ಲಿ ಪರ್ಯಾಯ ವ್ಯವಸ್ಥೆ ಮಾಡಬೇಕು. ಜನ, ಜಾನುವಾರುಗಳಿಗೆ ಕುಡಿಯುವ ನೀರು ಸಿಗುವಂತೆ ವ್ಯವಸ್ಥೆ ಮಾಡಬೇಕೆಂದು ಎಂದು ಶಾಸಕ ಎಸ್.ಎನ್. ಸುಬ್ಬಾರೆಡ್ಡಿ, ತಾಲ್ಲೂಕು ಆಡಳಿತ ಹಾಗೂ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಟಾಸ್ಕ್‌ಫೋರ್ಸ್‌ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.ಅಧಿಕಾರಿಗಳ ಮಾಹಿತಿಯಂತೆ ತಾಲ್ಲೂಕಿನ ಲಘುಮದೇಪಲ್ಲಿ, ಮೂಗಚಿನ್ನೇಪಲ್ಲಿ ಹಾಗೂ ಬೈರೇಪಲ್ಲಿಯಲ್ಲಿ ಕುಡಿಯುವ ನೀರಿನ ಅಭಾವ ಇದೆ. ಇವುಗಳನ್ನು ಹೊರತುಪಡಿಸಿದರೆ, ಎಲ್ಲಾ ಗ್ರಾಮಗಳಲ್ಲಿ ಸದ್ಯಕ್ಕೆ ನೀರಿನ ಸಮಸ್ಯೆ ಇಲ್ಲ ಎಂದರು. ಕಳೆದ 10 ವರ್ಷಗಳ ಹಿಂದೆ ಮಹಿಳೆಯರು ಕೊಡ ಹಿಡಿದು, ಕುಡಿಯುವ ನೀರಿಗಾಗಿ ಪ್ರತಿಭಟನೆ ನಡೆಸಿದ್ದರು. ಆದರೆ ಇದೀಗ ನೀರಿನ ಸಮಸ್ಯೆ ಇಲ್ಲ. ನೀರಿನ ಸಮಸ್ಯೆ ಇದ್ದರೆ, ಕೊಳವೆಬಾವಿ ಕೊರೆಯಿಸಲು ಟಾಸ್ಕ್‌ಫೋರ್ಸ್

ನಿಧಿಯಲ್ಲಿ ಕೊಳವೆಬಾವಿ ಕೊರೆಯಿಸಲಾಗುವುದು. ಜಿಲ್ಲಾ ಪಂಚಾಯಿತಿ ಕುಡಿಯುವ ನೀರಿನ ಶಾಖೆ, ಬೆಸ್ಕಾಂ, ಗ್ರಾಮ ಪಂಚಾಯಿತಿ ಅಧಿಕಾರಿಗಳು ಗ್ರಾಮಗಳಲ್ಲಿ ಮೊಕ್ಕಾಂ ಮಾಡಿ, ಕುಡಿಯುವ ನೀರು ಸಮರ್ಪಕವಾಗಿ ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.25 ವಾರಗಳಿಗೆ ಆಗುವಷ್ಟು ಜಾನುವಾರುಗಳಿಗೆ ಮೇವು ಸಂಗ್ರಹಣೆ ಮಾಡಲಾಗಿದೆ. ಕುಡಿಯುವ ನೀರು ಅಮೂಲ್ಯವಾದ ಸಂಪತ್ತು ಆಗಿದೆ. ಜನರು ನೀರನ್ನು ವ್ಯಥಾ ಆಗದಂತೆ ಜನರು ಎಚ್ಚೆತ್ತುಕೊಳ್ಳಬೇಕು. ನೀರಿನ ಸಂಗ್ರಹಣೆ ಮಾಡಬೇಕು. ಜಾನುವಾರುಗಳಿಗೆ, ಪಕ್ಷಿಗಳಿಗೆ, ಪ್ರಾಣಿಗಳಿಗೆ ನೀರು, ಮೇವು ಹಾಕಬೇಕು ಎಂದು ಮನವಿ ಮಾಡಿದರು. ತಹಶೀಲ್ದಾರ್ ಮನೀಷಾ ಎನ್ ಪತ್ರಿ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಜಿ.ವಿ.ರಮೇಶ್, ಸರ್ಕಲ್ ಇನ್ಸ್‌ಪೆಕ್ಟರ್ ಪ್ರಶಾಂತ್ ವರ್ಣಿ, ಜಿಲ್ಲಾ ಪಂಚಾಯತ್ ಕುಡಿಯುವ ನೀರಿನ ಶಾಖೆಯ ತಾಂತ್ರಿಕ ಇಲಾಖೆಯ ಸಹಾಯಕ ಇಂಜಿನಿಯರ್ ಮಹೇಶ್, ಕೃಷಿ ಇಲಾಖೆ ಸಹಾಯಕ ನಿರ್ದೇಶಕಿ ಜಿ.ಲಕ್ಷ್ಮೀ, ಬೆಸ್ಕಾಂ ಇಂಜಿನಿಯರ್ ಸೋಮಶೇಖರ್, ಪುರಸಭೆ ಮುಖ್ಯಾಧಿಕಾರಿ ಎಂ.ಶ್ರೀನಿವಾಸ್, ತಾಲ್ಲೂಕು ಸಮನ್ವಾಧಿಕಾರಿ ವೆಂಕಟರಾಮಪ್ಪ ಮತ್ತಿತರರು ಇದ್ದರು.

ಎಸ್.ಎನ್.ಸುಬ್ಬಾರೆಡ್ಡಿ, ಶಾಸಕಒಳಚರಂಡಿ ಯೋಜನೆಗೆ ನೀರು ಹರಿಸಲು ಪ್ರಾಯೋಗಿಕವಾಗಿ ಪರೀಕ್ಷೆ ಮಾಡಲಾಗುವುದು. ಸಾಧಕ ಬಾಧಕಗಳ ಪರಿಶೀಲನೆ ನಂತರ ಒಳಚರಂಡಿ ಜನರ ಬಳಕೆಗೆ ಮುಕ್ತವಾಗಲಿದೆ 22ಕ್ಕೆ ಜನಸ್ಪಂದನೆ ಏಪ್ರಿಲ್ 22 ರಂದು ತಾಲ್ಲೂಕಿನ ದೇವರಗುಡಿಪಲ್ಲಿ ಗ್ರಾಮದಲ್ಲಿ ಜನಸ್ಪಂದನ ಹಮ್ಮಿಕೊಳ್ಳಲಾಗಿದೆ. ಅಧಿಕಾರಿಗಳ ಮಾಹಿತಿಯಂತೆ ಮೂರು ಸಾವಿರ ಅರ್ಹ ಫಲಾನುಭವಿಗಳಿಗೆ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳನ್ನು ವಿತರಿಸಲಾಗುವುದು. ಅಧಿಕಾರಿಗಳು ಸಿಬ್ಬಂದಿ ಮನೆಗಳಿಗೆ ಭೇಟಿ ಮಾಡಿದ್ದಾರೆ. ಅಗತ್ಯ ಪೂರ್ವ ಸಿದ್ಧತೆಗಳನ್ನು ಹಮ್ಮಿಕೊಳ್ಳಲಾಗಿದೆ. ಪಂಚಾಯಿತಿಯ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಎಸ್.ಎನ್.ಸುಬ್ಬಾರೆಡ್ಡಿ ಮನವಿ ಮಾಡಿದರು.

> **ಪರಗೋಡು ಬ್ಯಾರೇಜಿನಿಂದ ಪಟ್ಟಣದ ಮೂರು ಓವರ್ ಹೆಡ್ ಟ್ಯಾಂಕ್‌ನಿಂದ ನೀರು ಸರಬರಾಜು ಮಾಡಲು ಒಂದೇ ಪೈಪ್ ಲೈನ್ ಇದೆ. ಇದರಿಂದ ಪಟ್ಟಣದಲ್ಲಿ ವಾರಗಟ್ಟಲೇ ನೀರು ಸರಬರಾಜು ಆಗುತ್ತಿಲ್ಲ. ಇದರಿಂದ ಕುಡಿಯುವ ನೀರಿಗೆ ತೊಂದರೆ ಇದೆ ಎಂಬ ದೂರು ಸಾರ್ವಜನಿಕರಿಂದ ಕೇಳಿ ಬಂದಿದ್ದು ಈಗಾಗಲೇ ಪೈಪ್‌ಲೈನ್‌ಗೆ, ಕೊಳವೆಬಾವಿಗಳಿಗೆ ಸಂಪರ್ಕ ಕಲ್ಪಿಸಲು ಸರ್ಕಾರಕ್ಕೆ ರೂ.12 ಕೋಟಿ ಅನುದಾನಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಅನುದಾನ ಬಂದ ಕೂಡಲೇ ಪೈಪ್‌ಲೈನ್ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ತಿಳಿಸಿದರು.**
> **10 ದಿನಗಳ ಒಳಗೆ ಇಂದಿರಾಕ್ಯಾಂಟೀನ್ ಟೆಂಡರ್ ಆಗಿದೆ. ಮುಂದಿನ ದಿನಗಳಲ್ಲಿ ಇಂದಿರಾ ಕ್ಯಾಂಟೀನ್ ಲೋಕಾರ್ಪಣೆ ಮಾಡಲಾಗುವುದು ಎಂದರು.**

# ಗ್ಯಾರಂಟಿ ನೆಪದಲ್ಲಿ ಹಣ ದುರ್ಬಳಕೆಯಾಗುತ್ತಿದೆ: ನಿಖಿಲ್

• ಉದಯವಾಹಿನಿ, ಕೆ.ಆರ್.ಪೇಟೆ.



ಕ್ಷೇತ್ರ ಜೆಡಿಎಸ್ ಭದ್ರಕೋಟೆ ಅದಕ್ಕಾಗಿ ಕ್ಷೇತ್ರಕ್ಕೆ ಅನುದಾನ ನೀಡದೆ ರಾಜ್ಯ ಸರ್ಕಾರ ವಂಚಿಸುತ್ತಿದೆ ಎಂದು ಜೆಡಿಎಸ್ ರಾಜ್ಯ ಯುವ ಘಟಕದ ನಿಖಿಲ್ ಕುಮಾರಸ್ವಾಮಿ ತಿಳಿಸಿದರು. ತಾಲ್ಲೂಕಿನ ಕಿಕ್ಕೇರಿ ಹೋಬಳಿಯ ಅಂಕನಹಳ್ಳಿಯಲ್ಲಿ ಶ್ರೀ ರಂಗಮಂಟಪ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿ ಜೆಡಿಎಸ್ ಶಾಸಕರಿಗೆ ಕ್ಷೇತ್ರವನ್ನು ಅಭಿವೃದ್ಧಿ ಮಾಡಬೇಕು ಎಂಬ ಹಂಬಲವಿದೆ ಆದರೆ ಕಾಂಗ್ರೆಸ್ ಸರ್ಕಾರ ಅನುದಾನ ನೀಡದೆ ಮೋಸ ಮಾಡುತ್ತಿದೆ ಎಂದು ದೂರಿದರು.

ನಾಡಿನ ಜನತೆಯ ಕಣ್ಣೀರು ಒರೆಸುವ ಬದಲು ಗ್ಯಾರಂಟಿ, ಭಾಗ್ಯದ ನೆಪದಲ್ಲಿ ಹಣ ದುರ್ಬಳಕೆಯಾಗುತ್ತಿದೆ. ಕಾಂಗ್ರೆಸ್ ಸರ್ಕಾರದ ವೈಫಲ್ಯವನ್ನು ಉಸ್ತುವಾರಿ ಸಚಿವ ಎನ್.ಚೆಲುವರಾಯಸ್ವಾಮಿ ಮುಚ್ಚುತ್ತಿದ್ದಾರೆ ಸಚಿವರ ಮನವಿಯಂತೆ ಜನತೆ ಪೆನ್ನು ಪೇಪರ್ ಕೊಟ್ಟಿದ್ದಾರೆ. ಆದರೆ, ಇವರು ಮಾಡಿರುವ ಸಾಧನೆ ಏನು ಎಂದು ಪ್ರಶ್ನಿಸಿದರು. ಕುಮಾರಣ್ಣ ಕೇಂದ್ರ ಸಚಿವರಾಗಿ ಬಹಳ ಜವಾಬ್ದಾರಿಯಿಂದ ಕೆಲಸ ಮಾಡುತ್ತಿದ್ದಾರೆ. ಇದನ್ನು ಸಹಿಸದೆ ಟೀಕೆ ಮಾಡಲು ಈ ಸರ್ಕಾರದ ಸಚಿವರು ಮುಂದಾಗಿದ್ದಾರೆ. ಸರ್ಕಾರದ ದುರಾಡಳಿತ, ಭ್ರಷ್ಟಾಚಾರದಿಂದ ಜನತೆ ರೋಸಿ ಹೋಗಿದ್ದಾರೆ. ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸಲಿದ್ದಾರೆ ಎಂದು ತಿಳಿಸಿದರು. ಕಾಂಗ್ರೆಸ್ ಸರ್ಕಾರದ 2 ಸಾವಿರ ಗೃಹಲಕ್ಷ್ಮೀ ಯೋಜನೆ ಗಿಮಿಕ್ ಆಗಿದೆ. ನಮ್ಮ ತೆರಿಗೆ ಹಣ ಚನ್ನಪಟ್ಟಣ. ಸಂಡೂರು ಜೊತೆಗೆ ಅಕ್ಕಪಕ್ಕದ ರಾಜ್ಯಗಳ ಚುನಾವಣೆಗಳಿಗೆ ಶ್ವೇಚ್ಚಾಚಾರವಾಗಿ ಖರ್ಚಾಗುತ್ತಿದೆ. ಎಸ್‌ಸಿ, ಎಸ್‌ಟಿ ಹಣ ದುರುಪಯೋಗವಾಗುತ್ತಿದೆ ಎಂದು ದೂರಿದರು. ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಕುಟುಂಬ ಎಂದೂ ಮಂಡ್ಯ ಜನತೆಯನ್ನು ಮರೆಯಲಾರದು. ಕ್ಷೇತ್ರದ ಅಭಿವೃದ್ಧಿಗೆ ಸಾಕಷ್ಟು ಅನುದಾನವನ್ನು ನೀಡಲಾಗಿದೆ. ಮುಂದೆ ಒಳ್ಳೆಯ ಕಾಲ ಬರಲಿದೆ. ಕ್ಷೇತ್ರದ ಅಭಿವೃದ್ಧಿಗೆ ಅನುದಾನ ತರಲು ತಮ್ಮ ಬೆಂಬಲವಿದೆ ಎಂದು ತಿಳಿಸಿದರು. ಶಾಸಕ ಹೆಚ್.ಟಿ.ಮಂಜು ಮಾತನಾಡಿ ಅನುದಾನ ನೀಡಲು ಕಾಂಗ್ರೆಸ್ ಸರ್ಕಾರ ಮೀನಾಮೇಷ ಮಾಡುತ್ತಿದೆ. ಅನುದಾನಕ್ಕಾಗಿ ವಿಧಾನಸೌಧಕ್ಕೆ ಪಾದಯಾತ್ರೆ ಮಾಡಲಾಗುವುದು. ಪಾದಯಾತ್ರೆಯಲ್ಲಿ ತಾಲ್ಲೂಕಿನ ಚಿಂತಕರು, ಕಾರ್ಯಕರ್ತರು ಒಗ್ಗಟ್ಟಿನಿಂದ ಭಾಗವಹಿಸಲಿದ್ದಾರೆ ಎಂದರು. ಕ್ಷೇತ್ರಕ್ಕೆ ಅನುದಾನ ತರುವವರೆಗೆ ನಮ್ಮ ಹೋರಾಟ ನಿಲ್ಲದು, ಕಾಡಿಬೇಡಿದಾಗ ನೀಡಿದ ಒಂದೆರಡು ಕೋಟಿ ರೂ. ಗಳಿಂದ ಕ್ಷೇತ್ರದ ಅಭಿವೃದ್ಧಿ ಮಾಡಲು ಹೇಗೆ ಸಾಧ್ಯ, ಜನತೆ ತಮ್ಮ ಮೇಲೆ ಬಹಳ ಭರವಸೆ ಇಟ್ಟಿದ್ದಾರೆ. ಮುಖ ತೋರಿಸುವುದು ಹೇಗೆ ಎಂಬ ಕೊರಗು ಕಾಡುತ್ತಿದೆ ಎಂದು ಸರ್ಕಾರದ ವಿರುದ್ಧ ಕಿಡಿಕಾರಿದರು.

## ಮಿನಿ ನ್ಯೂಸ್

### ದಸೂಡಿ ಹನುಮಪ್ಪನ ತೇರು ಸಂಭ್ರಮ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಹುಳಿಯಾರು

ಹೋಬಳಿಯ ದಸೂಡಿ ಗ್ರಾಮದ ಆಂಜನೇಯ ಜಾತ್ರಾ ಮಹೋತ್ಸವದ ಅಂಗವಾಗಿ ಬುಧವಾರ ರಥೋತ್ಸವ ನಡೆಯಿತು. ರಥೋತ್ಸವದ ಅಂಗವಾಗಿ ಬೆಳಗ್ಗೆಯಿಂದ ಪೂಜಾ ವಿಧಿ-ವಿಧಾನಗಳು ನಡೆಯಿತು. ಗೌಡಗೆರೆ ದುರ್ಗಮ್ಮ ನೇತೃತ್ವದಲ್ಲಿ ಪೂಜೆ ನಡೆಯಿತು. ನಂತರ ಉತ್ಸವಮೂರ್ತಿಯನ್ನು ದೇಗುಲ ಮುಂಭಾಗದಲ್ಲಿ ವಿವಿಧ ಹೂಗಳಿಂದ ಅಲಂಕೃತಗೊಂಡಿದ್ದ ರಥದಲ್ಲಿ ಕುಳ್ಳಿರಿಸಲಾಯಿತು. ಸಂಪ್ರದಾಯದಂತೆ ರಥೋತ್ಸವದ ಧ್ವಜ ಹಾಗೂ ಹೂವಿನ ಹಾರಗಳನ್ನು ಭಕ್ತರ ಸಮ್ಮುಖದಲ್ಲಿ ಹರಾಜು ಮಾಡಲಾಯಿತು. ರಥೋತ್ಸವ ಕಾರ್ಯಕ್ರಮದಲ್ಲಿ ವಿವಿಧ ಜನಪ್ರತಿನಿಧಿಗಳು, ದೇಗುಲ ಸಮಿತಿ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

### ಕಂಟೇನರ್ ಲಾರಿಯಲ್ಲಿದ್ದ ಮೂರು ಹಸು ಸಾವು

• ಉದಯವಾಹಿನಿ, ಶಿರಾ

ರಾಷ್ಟ್ರೀಯ ಹೆದ್ದಾರಿ 48ರ ಹೆಗ್ಗನಹಳ್ಳಿ ಸಮೀಪ ಬುಧವಾರ ಬೆಳಗ್ಗೆ ನಿಂತಿದ್ದ ಲಾರಿಗೆ ಹಿಂದಿನಿಂದ ಬಂದ ಮತ್ತೊಂದು ಕಂಟೇನರ್ ಲಾರಿ ಡಿಕ್ಕಿ ಹೊಡೆದು ಅದರಲ್ಲಿ ಇದ್ದ 3 ಸೀಮೆ ಹಸುಗಳು ಸ್ಥಳದಲ್ಲೇ ಮೃತಪಟ್ಟಿವೆ. ವಿಜಯನಗರ ಜಿಲ್ಲೆಯ ಕೊಟ್ಟೂರು ತಾಲ್ಲೂಕಿನ ಮಲ್ಲಪ್ಪಗೌಡ ಎನ್ನುವರು ಮಂಡ್ಯ ಜಿಲ್ಲೆಯ ಕೆ.ಎಂ.ದೊಡ್ಡಿಯಿಂದ ಹಸುಗಳನ್ನು ಲಾರಿಯಲ್ಲಿ ತೆಗೆದುಕೊಂಡು ಬರುತ್ತಿದ್ದಾಗ ಅಪಘಾತ ಸಂಭವಿಸಿದೆ. 3 ಹಸು ಸ್ಥಳದಲ್ಲೇ ಮೃತಪಟ್ಟರೆ ಒಂದು ಸೀಮೆ ಹಸು ತೀವ್ರವಾಗಿ ಗಾಯಗೊಂಡಿದ್ದು ಪಶು ವೈದ್ಯರು ಚಿಕಿತ್ಸೆ ನೀಡಿದ್ದಾರೆ. ಕಳ್ಳಂಬೆಳ್ಳ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

### ಮರಳೇಶ್ವರಸ್ವಾಮಿ ರಥೋತ್ಸವ

• ಉದಯವಾಹಿನಿ, ಕೊಳ್ಳೇಗಾಲ

ಇಲ್ಲಿನ ಮೀನಾಕ್ಷಿ ಸಮೇತ ಮರಳೇಶ್ವರಸ್ವಾಮಿ ರಥೋತ್ಸವ ಬುಧವಾರ ವಿಜೃಂಭಣೆಯಿಂದ ಜರುಗಿತು. ನಗರದ ಮರಳೇಶ್ವರ ದೇವಸ್ಥಾನದಲ್ಲಿ ಸ್ವಾಮಿ ಉತ್ಸವಮೂರ್ತಿಗೆ ಹೂವಿನಿಂದ ಅಲಂಕಾರ ಮಾಡಿ ರಥದ ಮೇಲೆ ಇಟ್ಟು ರಥೋತ್ಸವ ನಡೆಸಲಾಯಿತು. ಮುಂಜಾನೆಯಿಂದ ಬ್ರಾಹ್ಮ ಮುಹೂರ್ತದಲ್ಲಿ ರಥ ಸಂಪ್ರೋಕ್ಷಣೆ, ಗಣಪತಿ ಪೂಜೆ ಪುಣ್ಯಾಹ, ರುದ್ರಾಭಿಷೇಕ, ಕ್ಷೀರಾಭಿಷೇಕ, ಶಿವಯಾಗ, ಬಲಿಪ್ರಧಾನ ನಡೆಸಿ ಪೂಜೆ ಸಲ್ಲಿಸಿ ಮಹಾಮಂಗಳಾರತಿ ಮಾಡಿದರು.

ದೇವಸ್ಥಾನಕ್ಕೆ ಆಗಮಿಸಿದ್ದ ಭಕ್ತರಿಗೆ ಪ್ರಸಾದ ವಿನಿಯೋಗ ಮಾಡಿದರು. ಬಳಿಕ ರಥದ ಬೀದಿಗಳಲ್ಲಿ ರಥವನ್ನು ಮಹಿಳೆಯರು ಹಾಗೂ ಮಕ್ಕಳು ಎಳೆಯುವ ಮೂಲಕ ಹರಕೆ ಪೂರೈಸಿದರು. ಇಂದಿನ ಪೂಜಾ ಕೈಂಕರ್ಯವನ್ನು ಪ್ರಧಾನ ಅರ್ಚಕ ಡಾ.ನಾಗೇಂದ್ರ ಭಟ್ಟ ಹರಿಹರ ಭಟ್ಟ, ಶಿವರಾಮ್ ಭಟ್ಟ ನೇರವೇರಿಸಿದರು. ಈ ವೇಳೆ ತಹಶೀಲ್ದಾರ್ ಬಸವರಾಜು, ಎಲ್ಲಾ ಸಮುದಾಯದ ಮುಖಂಡರು ಇದ್ದರು.

# ಚನ್ನಕೇಶ್ವರಸ್ವಾಮಿ ದೇವಾಲಯಕ್ಕೆ ಪ್ರವೇಶ: ದಲಿತರ ಆಗ್ರಹ

• ಉದಯವಾಹಿನಿ, ಶ್ರೀರಂಗಪಟ್ಟಣ

ತಾಲ್ಲೂಕಿನ ಹುಂಜನೆರೆ ಗ್ರಾಮದ ಚನ್ನಕೇಶ್ವರಸ್ವಾಮಿ ದೇವಾಲಯ ಮುಜರಾಯಿ ಇಲಾಖೆಗೆ ಸೇರಿದ್ದು. ದಲಿತರಿಗೆ ವರ್ಷದ ಎಲ್ಲಾ ದಿನವೂ ಮುಕ್ತ ಪ್ರವೇಶ ನೀಡಬೇಕು' ಎಂದು ಗ್ರಾಮಸ್ಥರು ಹಾಗೂ ದಲಿತ ಸಂಘರ್ಷ ಸಮಿತಿಯ ಮುಖಂಡರು ಆಗ್ರಹಿಸಿದರು.

ಪಟ್ಟಣದಲ್ಲಿ ತಹಶೀಲ್ದಾರ್ ಪರಶುರಾಮ ಸತ್ತಿಗೇರಿ ಮತ್ತು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಮೇಘ ಅವರಿಗೆ ಮನವಿ ಸಲ್ಲಿಸಿದ ಮುಖಂಡರು, 'ದೇವಾಲಯ ಮುಜರಾಯಿ ಇಲಾಖೆಗೆ ಸೇರಿದ್ದರೂ ಗ್ರಾಮದ ದಲಿತರಿಗೆ ಪ್ರವೇಶವಿಲ್ಲ. ಶಾಸಕ ರಮೇಶ ಬಂಡಿಸಿದ್ದೇಗೌಡ ಅವರಿಗೆ ತಿಳಿಸಿದ ಬಳಿಕ, ವಿಶೇಷ ದಿನಗಳಲ್ಲಿ ಮಾತ್ರ ಅವಕಾಶ ನೀಡಲು ಒಪ್ಪಿಗೆ ಸಿಕ್ಕಿದೆ. ವರ್ಷದ ಎಲ್ಲಾ ದಿನವೂ ದಲಿತರು ಇಲ್ಲಿ ಪೂಜೆ ಸಲ್ಲಿಸಲು ಅವಕಾಶ ಮಾಡಿಕೊಡಬೇಕು.


ಉದಯವಾಹಿನಿ ಚಿತ್ರ

ದೇವಾಲಯದ ಮುಂದೆ ಫಲಕ ಹಾಕಬೇಕು ಎಂದು ಮುಖಂಡರಾದ ಚನ್ನಪ್ಪ ಮತ್ತು ಸಿದ್ದಲಿಂಗು ಒತ್ತಾಯಿಸಿದರು.

'ಮುಜರಾಯಿ ಇಲಾಖೆಗೆ ಸೇರಿದ ಯಾವುದೇ ದೇವಾಲಯದಲ್ಲೂ ಪ್ರವೇಶದ ವಿಷಯದಲ್ಲಿ ತಾರತಮ್ಯ ಮಾಡುವಂತಿಲ್ಲ. ತಾರತಮ್ಯ ಮಾಡಿದವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುತ್ತದೆ. ಶೀಘ್ರ ದಲಿತರು ಮತ್ತು ಸವರ್ಣೀಯರ ಸಭೆ ನಡೆಸಿ ಗೊಂದಲ ಬಗೆಹರಿಸಲಾಗುವುದು ಎಂದು ತಹಶೀಲ್ದಾರ್ ಪರಶುರಾಮ ಸತ್ತಿಗೇರಿ ಭರವಸೆ ನೀಡಿದರು.ಅಪೆಕ್ಸ್ ಬ್ಯಾಂಕ್ ಮಾಜಿ ನಿರ್ದೇಶಕ ಅರಕೆರೆ ಶಿವಯ್ಯ, ರೈತ ಸಂಘದ ತಾಲ್ಲೂಕು ಘಟಕದ ಸಂಚಾಲಕ ಪಾಂಡು, ಬೆಳಗೊಳ ಬಸವಯ್ಯ, ಕುಬೇರಪ್ಪ, ಕೆ.ಶೆಟ್ಟಿಹಳ್ಳಿ ಅಪ್ಪಾಜಿ, ಸುರೇಶ್, ಸೋಮೇಶ್ ಪಾಲ್ಗೊಂಡಿದ್ದರು.

> **ಯುಗಾದಿ ಉತ್ಸವ ಸೇರಿ ವಿಶೇಷ ದಿನಗಳಲ್ಲಿ ಮಾತ್ರ ದಲಿತರಿಗೆ ಪ್ರವೇಶ ಮತ್ತು ಪೂಜೆ ಸಲ್ಲಿಸಲು ಅವಕಾಶ ನೀಡಲಾಗುತ್ತದೆ. ಉಳಿದ ದಿನಗಳಲ್ಲೂ ದಲಿತರಿಗೆ ಪೂಜೆ ಮಾಡಲು ಕ್ರಮ ವಹಿಸಬೇಕು' ಎಂದು ದಸಂಸ ಮುಖಂಡ ಎಂ. ಚಂದ್ರಶೇಖರ್, ಗಂಜಾಂ ರವಿಚಂದ್ರ, ಮಹದೇವಸ್ವಾಮಿ ಮನವಿ ಮಾಡಿದರು.**

# ರಾಜ್ಯದ ಆರ್ಥಿಕ ಸ್ಥಿತಿ ಸದೃಢ: ಪರಂ

• ಉದಯವಾಹಿನಿ, ಮಂಡ್ಯ



ಬಂಡವಾಳ ಹೂಡಿಕೆಯಲ್ಲಿ ಮತ್ತು ಜಿಎಸ್‌ಟಿ ಕಟ್ಟುವುದರಲ್ಲಿ ದೇಶದಲ್ಲೇ ಕರ್ನಾಟಕ ರಾಜ್ಯ ಎರಡನೇ ಸ್ಥಾನದಲ್ಲಿದೆ. ರಾಜ್ಯದ ಆರ್ಥಿಕ ಸ್ಥಿತಿ ಸಶಕ್ತವಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದರು. ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ, ಮಾಧ್ಯಮದವರನ್ನು ಉದ್ದೇಶಿಸಿ ಅವರು ಮಾತನಾಡಿದರು. ಮಹಿಳಾ ಸಬಲೀಕರಣ ಉದ್ದೇಶದಿಂದ ಗೃಹಲಕ್ಷ್ಮಿ ಯೋಜನೆಯಡಿ ರೂ.2 ಸಾವಿರ, ಗೃಹಜ್ಯೋತಿಯಡಿ 200 ಯುನಿಟ್‌ವರೆಗೆ ಉಚಿತ ವಿದ್ಯುತ್, 10 ಕೆ.ಜಿ. ಉಚಿತ ಅಕ್ಕಿ ಸಿಗುತ್ತಿದೆ.

ಇಷ್ಟೆಲ್ಲ ಸವಲತ್ತುಗಳನ್ನು ನೀಡಿದರೂ ಜನ ಆಕ್ರೋಶಗೊಳ್ಳುತ್ತಾರೆಯೇ ಯಾವುದಾದರೂ ಅಭಿವೃದ್ಧಿ ಕಾರ್ಯಗಳು ನಿಂತಿವೆಯೇ ಇದು ಬಿಜೆಪಿಯವರ ಆಕ್ರೋಶ' ಎಂದು ತಿರುಗೇಟು ನೀಡಿದರು.

ಜನ ಆಕ್ರೋಶಗೊಂಡಿದ್ದರೆ ಉಪ ಚುನಾವಣೆಯಲ್ಲಿ ನಮ್ಮನ್ನು ತಿರಸ್ಕರಿಸಬಹುದಿತ್ತಲ್ಲವೇ? ಮಾಜಿ ಮುಖ್ಯಮಂತ್ರಿಗಳ (ಬಸವರಾಜ ಬೊಮ್ಮಾಯಿ) ಮಗನನ್ನೇ ಸೋಲಿಸಿದ್ದಾರೆ. ಬೆಲೆ ಏರಿಕೆ ವಿರುದ್ಧ ಬಿಜೆಪಿಯವರು ಹೋರಾಟ ಮಾಡುತ್ತಿರುವುದು ವಿಪರ್ಯಾಸ ಎಂದರು. ದಲಿತರ ಅನುದಾನ ದಲಿತರಿಗೆ ಬಳಸುತ್ತಿದ್ದೇವೆ. ರೂ.51 ಸಾವಿರ ಕೋಟಿಯನ್ನು ಗ್ಯಾರಂಟಿಗೆ ಖರ್ಚು ಮಾಡಿದ್ದೇವೆ. ಯಾವುದೇ ತೆರಿಗೆ ಇಲ್ಲದೇ ಖರ್ಚು ಮಾಡಲಾಗಿದೆ. ಕೇಂದ್ರದವರು ಜಿಎಸ್‌ಟಿ ಹಣ ನೀಡಿಲ್ಲ ಎಂಬ ಕಾರಣಕ್ಕೆ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಲು ಆಗುವುದಿಲ್ಲ. ರಾಜ್ಯದ ಜನರಿಗೆ ಮೋಸ ಮಾಡಲು ಆಗುವುದಿಲ್ಲ ಎಂದು ಹೇಳಿದರು. ಮೈಸೂರು ರಾಷ್ಟ್ರೀಯ ಹೆದ್ದಾರಿ ಆರಂಭವಾದ ಎರಡು ತಿಂಗಳಲ್ಲಿ 59 ಜನ ಸತ್ತಿದ್ದರು. ಇದಕ್ಕೆ ಕಾರಣ ಯಾರು? ರಾಜ್ಯ ಪೊಲೀಸ್ ಇಲಾಖೆ ಮತ್ತು ಸಾರಿಗೆ ಇಲಾಖೆ ಎಚ್ಚೆತ್ತುಕೊಂಡು ಕ್ರಮ ಕೈಗೊಂಡಿದ್ದರಿಂದ ಅಪಘಾತಗಳು ನಿಂತಿವೆ ಎಂದು ತಿಳಿಸಿದರು.

# ಮಹಿಳಾ ಸಬಲೀಕರಣಕ್ಕೆ ಮನರೇಗಾ ಸಹಕಾರಿ

• ಉದಯವಾಹಿನಿ, ಗುಡಿಬಂಡೆ

ಗ್ರಾಮೀಣ ಪ್ರದೇಶದ ಮಹಿಳೆಯರ ಜೀವನ ಮಟ್ಟ ಸುಧಾರಣೆಗೆ ಮತ್ತು ಅವರ ಕುಟುಂಬಕ್ಕೆ ಆರ್ಥಿಕ ಶಕ್ತಿ ನೀಡಲು ಮನರೇಗಾ ಸಹಕಾರಿಯಾಗಿದೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಅರ್ಚನಾ ತಿಳಿಸಿದರು.

ತಾಲ್ಲೂಕು ಅಭಿಯಾನ ನಿರ್ವಹಣಾ ಘಟಕ, ಪರಿವರ್ತನ ಅಭಿಯಾನ ಘಟಕ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಉಲ್ಲೋಡು ಗ್ರಾಮ ಪಂಚಾಯಿತಿಯಲ್ಲಿ ಹಮ್ಮಿಕೊಂಡಿದ್ದ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ 'ಸ್ತ್ರೀ ಚೇತನ' ವಿಶೇಷ ಅಭಿಯಾನ ಉದ್ಘಾಟಿಸಿ ಮಾತನಾಡಿದರು.


ಉದಯವಾಹಿನಿ ಚಿತ್ರ

ಮಹಿಳಾ ಕೂಲಿಕಾರ್ಮಿಕರಿಗೆ ಪ್ರತ್ಯೇಕವಾಗಿ ಮಹಿಳಾ ಸಮುದಾಯ ಕಾಮಗಾರಿ ಆರಂಭಿಸಲಾಗಿದೆ. ಈ ಯೋಜನೆಯಡಿಯಲ್ಲಿ ಕಾಯಕ ಬಂಧುಗಳ ನೇಮಕದಲ್ಲಿ ಮಹಿಳೆಯರಿಗೆ ಪ್ರಾತಿನಿಧ್ಯ ನೀಡಲಾಗಿದೆ. ಮಹಿಳೆಯರಿಗೆ ಮನರೇಗಾ ಯೋಜನೆಯಡಿಯಲ್ಲಿ ಲಿಂಗ ತಾರತಮ್ಯ ಇಲ್ಲದೆ ಸಮಾನ ಕೂಲಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಖಾಸಗಿ ಬ್ಯಾಂಕ್‌ಗಳಲ್ಲಿ ಹೆಚ್ಚು ಬಡ್ಡಿ ವಿಧಿಸಲಾಗುತ್ತಿದೆ. ಹಾಗಾಗಿ ಸ್ವಸಹಾಯ ಸಂಘಗಳಲ್ಲಿ ಕಡಿಮೆ ಬಡ್ಡಿಯಲ್ಲಿ ಸಾಲ ಪಡೆದುಕೊಂಡು ಕುಟುಂಬ ಹಾಗೂ ಮಕ್ಕಳ ವಿದ್ಯಾಭ್ಯಾಸ ಜೊತೆಗೆ ಕೈಗಾರಿಕೆ, ಉದ್ದಿಮೆಯಲ್ಲಿ ಸೇರಿದಂತೆ ಎಲ್ಲಾ ರಂಗದಲ್ಲೂ ಮಹಿಳೆಯರು ಆರ್ಥಿಕವಾಗಿ ಸಬಲರಾಗಬೇಕು ಎಂದು ತಿಳಿಸಿದರು. ಖಾಸಗಿ ಬ್ಯಾಂಕ್‌ಗಳಲ್ಲಿ ಹೆಚ್ಚು ಬಡ್ಡಿ ವಿಧಿಸಲಾಗುತ್ತಿದೆ.

ಹಾಗಾಗಿ ವ್ಯಸಹಾಯ ಸಂಘಗಳಲ್ಲಿ ಕಡಿಮೆ ಬಡ್ಡಿಯಲ್ಲಿ ಸಾಲ ಪಡೆದುಕೊಂಡು ಕುಟುಂಬ ಹಾಗೂ ಮಕ್ಕಳ ವಿದ್ಯಾಭ್ಯಾಸ ಜೊತೆಗೆ ಕೈಗಾರಿಕೆ, ಉದ್ದಿಮೆಯಲ್ಲಿ ಸೇರಿದಂತೆ ಎಲ್ಲಾ ರಂಗದಲ್ಲೂ ಮಹಿಳೆಯರು ಆರ್ಥಿಕವಾಗಿ ಸಬಲರಾಗಬೇಕು ಎಂದು ತಿಳಿಸಿದರು.

> **ಮಹಿಳಾ ಕೂಲಿಕಾರ್ಮಿಕರಿಗೆ ಪ್ರತ್ಯೇಕವಾಗಿ ಮಹಿಳಾ ಸಮುದಾಯ ಕಾಮಗಾರಿ ಆರಂಭಿಸಲಾಗಿದೆ. ಈ ಯೋಜನೆಯಡಿಯಲ್ಲಿ ಕಾಯಕ ಬಂಧುಗಳ ನೇಮಕದಲ್ಲಿ ಮಹಿಳೆಯರಿಗೆ ಪ್ರಾತಿನಿಧ್ಯ ನೀಡಲಾಗಿದೆ. ಮಹಿಳೆಯರಿಗೆ ಮನರೇಗಾ ಯೋಜನೆಯಡಿಯಲ್ಲಿ ಲಿಂಗ ತಾರತಮ್ಯ ಇಲ್ಲದೆ ಸಮಾನ ಕೂಲಿ ನೀಡಲಾಗುತ್ತಿದೆ ಎಂದು ತಿಳಿಸಿದರು.**

# ಡಿ.ಮಾದೇಗೌಡರವರಿಗೆ ಅಭಿನಂದನಾ ಕಾರ್ಯಕ್ರಮ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮೈಸೂರು

ಮಾಜಿ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ ಮಾಜಿ ಸದಸ್ಯ ಡಿ.ಮಾದೇಗೌಡರವರಿಗೆ ಹಮ್ಮಿಕೊಳ್ಳಲಾದ ಅಭಿನಂದನಾ ಕಾರ್ಯಕ್ರಮದ ಪ್ರಚಾರ ವಾಹನಕ್ಕೆ ಮೈಸೂರು ಮಿತ್ರ ದಿನಪತ್ರಿಕೆ ಸಂಸ್ಥಾಪಕರಾದ ಕೆ.ಬಿ.ಗಣಪತಿ ರವರು ಚಾಲನೆ ನೀಡಿದರು. ವಿಜಯನಗರದಲ್ಲಿರುವ ಶ್ರೀ ಯೋಗಾನರಸಿಂಹ ಸ್ವಾಮಿ ದೇವಾಲಯದ ಸನ್ನಿಧಿಯಲ್ಲಿ ಶ್ರೀ ಭಾಷ್ಯಂ ಸ್ವಾಮೀಜಿ ರವರ ಸಾನಿಧ್ಯದಲ್ಲಿ ಹಸಿರು ನಿಶಾನೆ ತೋರಿದರು.ಡಿ.ಮಾದೇಗೌಡರ ಅಭಿನಂದನಾ ಸಮಿತಿಯು ಕಲಾಮಂದಿರದಲ್ಲಿ ಏ.13ರಂದು ಕಾರ್ಯಕ್ರಮ ಹಮ್ಮಿಕೊಂಡಿದೆ.

ಮೈಸೂರು ನಗರದ ಅಭಿವೃದ್ದಿಗಾಗಿ ಶ್ರಮಿಸಿದ ಮಾದೇಗೌಡರ ಕಾರ್ಯ ಪ್ರಶಂಸಿಸಿ ಉಘೇ ಮಾದೇಗೌಡ್ರು ಎಂಬ ಘೋಷ ವಾಕ್ಯದಡಿ ಸಮಾರಂಭ ಹಮ್ಮಿಕೊಳ್ಳಲಾಗಿದೆ.ಅರ್ಹ ಫಲಾನುಭವಿಗಳಿಗೆ ಮನೆಗಳನ್ನ ಮಂಜೂರು ಮಾಡಿ ಸಾಕಷ್ಟು ಜನಮನ್ನಣೆ ಗಳಿಸಿದ ಹಿನ್ನಲ ನಿರ್ಮಾಣವಾದ ಆಶ್ರಯ ಮನೆಗಳ ಮಾದರಿಯಂತೆ ಪ್ರಚಾರ ವಾಹನವನ್ನ ವಿಶೇಷವಾಗಿ ಸಿದ್ದಪಡಿಸಲಾಗಿದೆ.ನಂತರ ಮಾತನಾಡಿದ ಕೆಬಿಜಿ ರವರು ಡಿ.ಮಾದೇಗೌಡ್ರು ತಮ್ಮ ಆದರ್ಶ ಜೀವನದ ಮೂಲಕ ಮೈಸೂರಿನ ಆದರ್ಶ ವ್ಯಕ್ತಿಯಾಗಿದ್ದಾರೆ. ಈ ಹಿಂದೆ ಮುಖ್ಯಮಂತ್ರಿ ರಾಮಕೃಷ್ಣ ಹೆಗ್ಗಡೆಯವರು ರಾಜಕಾರಣಿಗಳು ಮೌಲ್ಯ ಆಧಾರಿತ ರಾಜಕೀಯ ಮಾಡಬೇಕು ಎಂದು ಹೇಳಿದಂತೆ ಮಾದೇಗೌಡರು ಜೀವನ ಮಾಡುತ್ತಿದ್ದಾರೆ ಎಂದರು.

ಸಿಐಟಿಬಿಯ ಸದಸ್ಯರಾಗಿದ್ದ ಕೆಂಪೇಗೌಡರು ವಿಶ್ವಮಾನವ ಜೋಡಿ ರಸ್ತೆ ನಿರ್ಮಾಣ ಮಾಡಿದರೆ, ಬಿ.ಎನ್.ಕೆಂಗೇಗೌಡರು ದೇವರಾಜ ಅರಸು ರಸ್ತೆ, ಸರಸ್ವತಿಪುರಂ ನಿರ್ಮಾಣ ಮಾಡಿದ್ದಾರೆ.

ಆದರೆ ಮಾದೇಗೌಡರು, ವಿಜಯನಗರ, ರಾಮಕೃಷ್ಣ ನಗರ, ವಿವೇಕಾನಂದ ನಗರ, ಹೆಬ್ಬಾಳ್ ಬಡಾವಣೆಯನ್ನು ನಿರ್ಮಾಣ ಮಾಡುವ ಮೂಲಕ ಎಲ್ಲರಿಗಿಂತಲೂ ಹೆಚ್ಚು ಕೆಲಸ ಮಾಡಿದ್ದಾರೆ. ಹಾಗೇ ರಾಮಕೃಷ್ಣನಗರದ ಪರಮಹಂಸ ವೃತ್ತ ನಿರ್ಮಾಣವಾಗಲು ಅವರೇ ಕಾರಣ ಎಂದು ತಿಳಿಸಿದರು.

> **ನಂತರ ಯೋಗನರಸಿಂಹಸ್ವಾಮಿ ದೇವಾಲಯದ ಆಡಳಿತಾಧಿಕಾರಿ ಶ್ರೀನಿವಾಸ್ ಮಾತನಾಡಿ, ಪ್ರಚಾರ ಮಾಡಲು ಸಾಕಷ್ಟು ಆಯಾಮಗಳಿ. ಆದರೂ ವಿಶೇಷ ವಾಹನ ಮೂಲಕ ಪ್ರಚಾರ ಮಾಡುತ್ತಿರುವುದು ಸಂತಸದ ವಿಚಾರವಾಗಿದೆ. ಈ ವಾಹನ ಮೈಸೂರಿನ ಪ್ರತಿಯೊಂದು ಬಡಾವಣೆಗೆ ತಲುಪಬೇಕು. ಶಿಕ್ಷಕರು ವಿದ್ಯಾರ್ಥಿಗಳ ನಡುವೇ ಹೇಗೆ ಬಾಂಧವ್ಯವಿದೆ ಹಾಗೇ ಆಶ್ರಯ ಮನೆಗಳ ಫಲಾನುಭಾವಿಗಳು ಕಾರ್ಯಕ್ರಮಕ್ಕೆ ಬಂದು ಕೃತಜ್ಞತೆ ಸಲ್ಲಿಸಿ ಎಂದರು.**

ಇದೇ ವೇಳೆ ಮಾದೇಗೌಡರು ಮಾತನಾಡಿ, ಭರತ ಖಂಡದಲ್ಲಿ ಕಿಂಚಿತ್ತು ಉಪಕಾರ ಮಾಡಿದರೂ ಸ್ಮರಿಸುತ್ತಾರೆ. ಅದರಂತೆ ಜನರು ನಾನು ಮಾಡಿದ ಸಣ್ಣ ಸೇವೆಯನ್ನು ಇಂದಿಗೂ ಸ್ಮರಿಸುತ್ತಾರೆ. ಅದನ್ನು ಕಂಡಾಗ ಬಹಳ ಸಂತೋಷವಾಗುತ್ತದೆ ಎಂದರು.

ಗಾಂಧೀಜಿ ಅವರು ಹೇಳಿದಂತೆ ವಸತಿ, ಊಟ, ಶಿಕ್ಷಣ ಮುಖ್ಯವಾಗಿ ದೇಶದ ಪ್ರತಿಯೊಬ್ಬ ನಾಗರೀಕರಿಗೂ ಒದಗಿಸಬೇಕು. ಆದರೆ ಇಂದು ವಸತಿ ನಿರೀಕ್ಷಿತ ಮಟ್ಟದಲ್ಲಿ ಸಿಗುತ್ತಿಲ್ಲ. ಅಂದು ರಾಮಕೃಷ್ಣ ಹೆಗ್ಗಡೆ ಅವರು ನೀಡಿದ ಪ್ರೇರಣೆಯಿಂದ ನಾನು ಅಷ್ಟು ಕೆಲಸ ಮಾಡಲು ಸಾಧ್ಯವಾಯಿತು ಎಂದು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಅಭಿನಂದನಾ ಸಮಿತಿ ಅಧ್ಯಕ್ಷ ಲಯನ್ ಎಂ.ವಿ.ದೇವಿಪ್ರಸಾದ್, ಪಾಲಿಕೆ ಮಾಜಿ ಸದಸ್ಯ ಪ್ರಶಾಂತ್ ಗೌಡ, ಜಿಲ್ಲಾ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ, ವಿಜಯನಗರ ಮಂಜು, ಕುಮಾರ್ ಗೌಡ, ಕಾಂಗ್ರೆಸ್ ಮುಖಂಡ ಮಂಚೇಗೌಡನ ಕೊಪ್ಪಲು ರವಿ ಮತ್ತಿತರರು ಉಪಸ್ಥಿತರಿದ್ದರು.

# ತಿರುಪತಿ ದೇಗುಲಕ್ಕೆ ಕೆಜಿಎಫ್ ರೈತರಿಂದ 11 ಟನ್ ತರಕಾರಿ ರವಾನೆ

• ಉದಯವಾಹಿನಿ, ಬೇತಮಂಗಲ

ಬಡವರ ಪಾಲಿನ ಬಂಗಾರು ತಿರುಪತಿ (ಗುಟ್ಟಹಳ್ಳಿ)ಯ ವೆಂಕಟರಮಣಸ್ವಾಮಿ ದೇವಾಲಯದಲ್ಲಿ ಆಂಧ್ರದ ತಿರುಮಲ-ತಿರುಪತಿ ದೇವಾಲಯದಲ್ಲಿ ಕಲ್ಯಾಣೋತ್ಸವ ನಡೆಯಲಿದ್ದು, ಈ ಕಾರ್ಯಕ್ರಮದ ಅನ್ನದಾನಕ್ಕಾಗಿ ಕೆಜಿಎಫ್ ತಾಲ್ಲೂಕಿನ ರೈತರು ಸುಮಾರು 11 ಟನ್ ತರಕಾರಿ ರವಾನಿಸಿದರು.

ತರಕಾರಿ ಕಳುಹಿಸುವ ಟಿಟಿಡಿಯ ವಾಹನಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಯುವ ಮುಖಂಡ ಅರುಣ್ ರೆಡ್ಡಿ. ಇದೇ ಮೊದಲ ಬಾರಿಗೆ ಕೆಜಿಎಫ್ ತಾಲ್ಲೂಕಿನಿಂದ ತಿರುಪತಿಯ ದೇಗುಲಕ್ಕೆ ವಿವಿಧ ಬಗೆಯ ತರಕಾರಿಗಳನ್ನು ನೇರವಾಗಿ ರೈತರಿಂದ ಕಲ್ಯಾಣೋತ್ಸವದ ಅನ್ನದಾನಕ್ಕೆ ಕಳುಹಿಸಲಾಗಿದೆ ಎಂದರು.

ಮುಖಂಡರಾದ ಪೂಗಾನಹಳ್ಳಿ ಮಂಜುನಾಥ್, ಗ್ರಾ.ಪಂ ಸದಸ್ಯ ನರೇಂದ್ರ, ಯುವ ಮುಖಂಡ ಅಭಿಲಾಷ್ ರೆಡ್ಡಿ, ರೆಡ್ಡಿ ಸಂಘದ ಅಧ್ಯಕ್ಷ ಪ್ರಸನ್ನರೆಡ್ಡಿ, ಕೃಷ್ಣಾರೆಡ್ಡಿ, ಮಂಜುನಾಥ್, ಗಂಗಿ ರೆಡ್ಡಿ, ರೈತ ಮುಖಂಡ ಹರಿಕುಮಾರ್, ದೇಗುಲ ಪೇಷ್ಕರ್ ಸುರೇಶ್, ಮಂಜುನಾಥ್, ತಾ.ಪಂ ಮಾಜಿ ಅಧ್ಯಕ್ಷ ಶಂಕರಪ್ಪ, ಬಿಆರ್‌ಪಿ ಶಂಕರ್, ದಾದೇನಹಳ್ಳಿ ನರೇಶ್ ರವಣರೆಡ್ಡಿ ಸೇರಿದಂತೆ ಅನೇಕ ಭಕ್ತಾದಿಗಳು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

# ಸಿಇಟಿ ಪರೀಕ್ಷೆಗೆ 15 ಕೇಂದ್ರ; 7,302 ವಿದ್ಯಾರ್ಥಿಗಳು ನೋಂದಣಿ

## ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಯುಜಿ ಸಿಇಟಿ ಪರೀಕ್ಷೆಗಳ ಪೂರ್ವ ಸಿದ್ಧತಾ ಸಭೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಜಿಲ್ಲೆಯಲ್ಲಿ ಏ.16 ಮತ್ತು 17ರಂದು ನಡೆಯಲಿರುವ ಯುಜಿ ಸಿಇಟಿ ಪರೀಕ್ಷೆಯನ್ನು ಯಾವುದೇ ಲೋಪಗಳಿಲ್ಲದೆ ಸುಗಮವಾಗಿ ನಡೆಸಲು ಜಿಲ್ಲಾಡಳಿತ ಸಿದ್ಧತೆಗಳನ್ನು ಮಾಡಿಕೊಂಡಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದರು.

ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಯುಜಿ ಸಿಇಟಿ ಪರೀಕ್ಷೆಗಳ ಪೂರ್ವ ಸಿದ್ಧತಾ ಸಭೆಯಲ್ಲಿ ಮಾತನಾಡಿದರು. ಜಿಲ್ಲೆಯ ಒಟ್ಟು 15 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. 7.302 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ. ಪರೀಕ್ಷಾ ಕೇಂದ್ರಗಳಲ್ಲಿ ಪಾರದರ್ಶಕತೆ ಕಾಪಾಡುವ ದೃಷ್ಟಿಯಿಂದ ಸಿಸಿ ಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಕೇಂದ್ರಗಳ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯಲ್ಲಿನ ಜೆರಾಕ್ಸ್‌ಸೆಂಟರ್‌ಗಳನ್ನು ಮುಚ್ಚುವಂತೆ ಸೂಚಿಸಲಾಗಿದೆ. ವಿದ್ಯಾರ್ಥಿಗಳು ಯಾವುದೇ ವದಂತಿಗಳಿಗೆ ಕಿವಿಗೊಡದೆ ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಬೇಕು ಎಂದರು.

16ರಂದು ಬೆಳಿಗ್ಗೆ 10:30 ರಿಂದ 11:50 ರವರೆಗೆ ಭೌತವಿಜ್ಞಾನ, ಮಧ್ಯಾಹ್ನ 2.30 ರಿಂದ 3.50ರವರೆಗೆ ರಸಾಯನ ವಿಜ್ಞಾನ, 17ರಂದು ಬೆಳಿಗ್ಗೆ 10.30 ರಿಂದ 11.50 ರವರೆಗೆ ಗಣಿತ, ಮಧ್ಯಾಹ್ನ 2.30 ರಿಂದ 3:50 ರವರೆಗೆ ಜೀವವಿಜ್ಞಾನ ವಿಷಯಗಳ ಪರೀಕ್ಷೆಗಳು ನಡೆಯಲಿವೆ. ಪರೀಕ್ಷೆಗೆ ವೆಬ್ ಕಾಸ್ಟಿಂಗ್ ಕಡ್ಡಾಯ ಆಗಿರುವುದರಿಂದ ಪ್ರತಿ ಕೊಠಡಿಯಲ್ಲಿ ಸಿಸಿ ಟಿ.ವಿ ಕ್ಯಾಮೆರಾಗಳನ್ನು ಅಳವಡಿಸಲಾಗುವುದು ಎಂದು ತಿಳಿಸಿದರು. ವಿಜ್ಞಾನ ವಿಷಯದ ಉಪನ್ಯಾಸಕರನ್ನು ಕೊಠಡಿ ಮೇಲ್ವಿಚಾರಕರನ್ನಾಗಿ ನೇಮಿಸಿಕೊಳ್ಳಬಾರದು.

ಪರೀಕ್ಷೆ ದಿನ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ರೀತಿ ಬಸ್ ಸೌಲಭ್ಯ ಒದಗಿಸಬೇಕು ಎಂದು ಸಾರಿಗೆ ಇಲಾಖೆಗೆ ತಿಳಿಸಿದರು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ, ಹೆಚ್ಚುವರಿ ಜಿಲ್ಲಾಧಿಕಾರಿ ಡಾ. ಎನ್. ಭಾಸ್ಕರ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮರಿಸ್ವಾಮಿ, ವಿವಿಧ ಇಲಾಖೆಗಳ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಪಾಲ್ಗೊಂಡಿದ್ದರು.


ಉದಯವಾಹಿನಿ ಚಿತ್ರ

> **ಪರೀಕ್ಷಾರ್ಥಿಗಳಿಗೆ ಆಸನ ವ್ಯವಸ್ಥೆ, ಗಾಳಿ, ಬೆಳಕು, ಕುಡಿಯುವ ನೀರು, ಶೌಚಾಲಯ ಇನ್ನಿತರೆ ಮೂಲ ಸೌಲಭ್ಯಗಳನ್ನು ಒದಗಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ. ಪ್ರತಿ ಪರೀಕ್ಷಾ ಕೇಂದ್ರಕ್ಕೂ ಶಾಂತಿ ಮತ್ತು ಸುವ್ಯವಸ್ಥೆ ಪಾಲನೆಗೆ ಪೊಲೀಸ್ ಸಿಬ್ಬಂದಿ ನೇಮಿಸಲಾಗುವುದು. ಎಲ್ಲಾ ಕೊಠಡಿಗಳಲ್ಲಿ ಗಡಿಯಾರ ಅಳವಡಿಸಲು ಸೂಚಿಸಲಾಗಿದೆ ಎಂದರು.**

### ಎಲೆಕ್ಟ್ರಾನಿಕ್ ಉಪಕರಣ ನಿಷೇಧ

**ಪರೀಕ್ಷೆಗೆ ಹಾಜರಾಗುವ ಮತ್ತು ಗೈರು ಹಾಜರಾಗುವ ಅಭ್ಯರ್ಥಿಗಳ ವಿವರಗಳನ್ನು ಆನ್‌ಲೈನ್ ಮೂಲಕ ದಾಖಲಿಸಲು ಕ್ರಮ ವಹಿಸಬೇಕು. ಆಸನ ವ್ಯವಸ್ಥೆಯ ಬಗ್ಗೆ ಮಾಹಿತಿಯನ್ನು ಕಾಲೇಜು ಆವರಣದಲ್ಲಿ 3 ರಿಂದ 4 ಕಡೆ ಸೂಚನಾ ಫಲಕದಲ್ಲಿ ಪ್ರಕಟಿಸುವ ಮೂಲಕ ವಿದ್ಯಾರ್ಥಿಗಳು ಗುಂಪು ಸೇರುವುದನ್ನು ತಡೆಗಟ್ಟಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು. ಮೊಬೈಲ್ ಸ್ಮಾರ್ಟ್ ವಾಚ್ ಇನ್ನಿತರೆ ಎಲೆಕ್ಟ್ರಾನಿಕ್ ಉಪಕರಣಗಳನ್ನು ಕೇಂದ್ರಕ್ಕೆ ತರುವುದನ್ನು ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಕೊಠಡಿ ಒಳಗೆ ಯಾವುದೇ ರೀತಿಯ ಕೈಗಡಿಯಾರ ಕಟ್ಟಿಕೊಂಡು ತೆಗೆದುಕೊಂಡು ಹೋಗುವಂತಿಲ್ಲ ಎಂದರು.**

ಅಂತರಾಳದಿಂದ... EDITORIAL

# ಬೆಲೆಯೇರಿಕೆ: ಪಕ್ಷಾತೀತ ಪ್ರತಿಭಟನೆಯೊಂದೇ ದಾರಿ

ರಾಜ್ಯ ಸರಕಾರದ ಬೆಲೆಯೇರಿಕೆ ನೀತಿಯ ವಿರುದ್ಧ ಬಿಜೆಪಿ ಹಮ್ಮಿಕೊಂಡಿದ್ದ ಅಹೋರಾತ್ರಿ ಹೋರಾಟ, ಜನಾಕ್ರೋಶ ಯಾತ್ರೆಗೆ ಸ್ವತಃ ಪ್ರಧಾನಿ ನರೇಂದ್ರ ಮೋದಿಯವರೇ ಭಾರೀ ಆಘಾತವನ್ನು ನೀಡಿದ್ದಾರೆ. ರಾಜ್ಯದಲ್ಲಿ ಡೀಸೆಲ್ ಮೇಲೆ ತೆರಿಗೆ, ಹಾಲಿನ ಬೆಲೆಯೇರಿಕೆ, ವಿದ್ಯುತ್, ನೀರಿನ ದರ ಏರಿಕೆ ಇತ್ಯಾದಿಗಳನ್ನು ವಿರೋಧಿಸಿ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ನೇತೃತ್ವದಲ್ಲಿ ಪ್ರತಿಭಟನೆ, ರ್‍ಯಾಲಿಗೆ ಚಾಲನೆ ನೀಡಲಾಗಿತ್ತು. ಗ್ಯಾರಂಟಿ ಯೋಜನೆಗಳನ್ನು ನೀಡುವ ಮೂಲಕ ಸರಕಾರ ಆರ್ಥಿಕವಾಗಿ ದಿವಾಳಿಯಾಗಿದ್ದು ಇದನ್ನು ತುಂಬುವುದಕ್ಕಾಗಿ ಈ ಬೆಲೆಯೇರಿಕೆಯನ್ನು ಮಾಡಲಾಗುತ್ತಿದೆ ಎಂದು ಆರೋಪಿಸುತ್ತಾ ಗ್ಯಾರಂಟಿ ಯೋಜನೆಗಳ ಮೇಲೂ ಬಿಜೆಪಿಯು ಪರೋಕ್ಷ ದಾಳಿಯನ್ನು ನಡೆಸುತ್ತಿದೆ. ಇದೇ ಹೊತ್ತಿನಲ್ಲಿ ಕೇಂದ್ರ ಸರಕಾರವು ಮನೆಬಳಕೆ ಎಲ್ಪಿಜಿಗೆ 50 ರೂ. ಏರಿಕೆ ಮಾಡಿದ್ದು, ಪೆಟ್ರೋಲ್, ಡೀಸೆಲ್ ಅಬಕಾರಿ ಸುಂಕವನ್ನು 2 ರೂಪಾಯಿಗೆ ಹೆಚ್ಚಳ ಮಾಡಿದೆ. ಬೆಲೆಯೇರಿಕೆಗಾಗಿ ರಾಜ್ಯದ ವಿರುದ್ಧ ಪ್ರತಿಭಟನೆ ನಡೆಸುತ್ತಿರುವ ರಾಜ್ಯ ಬಿಜೆಪಿ ನಾಯಕರು, ಗೃಹ ಬಳಕೆಯ ಎಲ್ಪಿಜಿಯ ಬೆಲೆಯೇರಿಕೆಗಾಗಿ ಕೇಂದ್ರದ ವಿರುದ್ಧವೂ ಪ್ರತಿಭಟನೆ ನಡೆಸಲಿದ್ದಾರೆಯೇ ಎಂದು ರಾಜ್ಯದ ಜನತೆ ಕೇಳುತ್ತಿದ್ದಾರೆ. ನರೇಂದ್ರ ಮೋದಿಯವರು ಪ್ರಧಾನಿಯಾಗುತ್ತಿದ್ದಂತೆಯೇ 'ದೇಶಕ್ಕಾಗಿ ಸಬ್ಸಿಡಿಯನ್ನು ತ್ಯಾಗ ಮಾಡಿ' ಎಂದು ಜನತೆಗೆ ಕರೆ ಕೊಟ್ಟರು. ಹಾಗೆ ತ್ಯಾಗ ಮಾಡಿದ ಸಬ್ಸಿಡಿಯ ಹಣದಿಂದ ಉಚಿತವಾಗಿ ಬಡವರಿಗೆ ಸಿಲಿಂಡರ್ ಹಂಚುವುದಾಗಿ ಭರವಸೆ ನೀಡಿದರು. ಇದನ್ನು ನಂಬಿದ ದೇಶದ ಕೋಟ್ಯಂತರ ಜನರು ತಮ್ಮ ಸಬ್ಸಿಡಿಯನ್ನು ತ್ಯಾಗ ಮಾಡಿ, ಬಡವರ ಮನೆ ಬೆಳಗಲು ಮುಂದಾದರು. ಆದರೆ ನೋಡಿದರೆ, ಉಜ್ವಲಾ ಯೋಜನೆ ಸಂಪೂರ್ಣ ವಿಫಲವಾಗಿದೆ.

**ಬಿಜೆಪಿ ನಾಯಕರ ಮೌನ, ಬೆಲೆಯೇರಿಕೆಯ ಕುರಿತ ಅವರ ಆತಂಕ, ಆಕ್ರೋಶಗಳನ್ನು ನಗೆಪಾಟಲಿಗೀಡು ಮಾಡಿದೆ.ಮನೆ ಬಳಕೆಯ ಅನಿಲ ಸಿಲಿಂಡರ್ ಬೆಲೆಯನ್ನು ಕೇಂದ್ರ ಸರಕಾರವು 50 ರೂ.ಗೆ ಹೆಚ್ಚಿಸಿದ್ದು, ಪರಿಷ್ಕೃತ ದರವು ಮಂಗಳವಾರದಿಂದಲೇ ಅನ್ವಯವಾಗಿದೆ. ಅಡುಗೆ ಅನಿಲ ಬೆಲೆಯಲ್ಲಿನ ಹೆಚ್ಚಳವು ಉಜ್ವಲಾ ಯೋಜನೆಯ ಫಲಾನುಭವಿಗಳು ಮತ್ತು ಸಾಮಾನ್ಯ ಬಳಕೆದಾರರಿಗೆ ಅನ್ವಯಿಸಲಿದೆ. ಸಚಿವರ ಪ್ರಕಾರ ಬಡ ಮಹಿಳೆಯರಿಗಾಗಿರುವ ಉಜ್ವಲಾ ಬಳಕೆದಾರರಿಗೆ 14.2 ಕೆ.ಜಿ.ಯ ಪ್ರತೀ ಸಿಲಿಂಡರ್ ದರವು 500ರಿಂದ 550 ರೂ. ಆಗಲಿದ್ದು ಇತರರಿಗೆ 853 ರೂ. ಆಗಲಿದೆ ಎಂದು ಸಚಿವಾಲಯ ತಿಳಿಸಿದೆ.**

ಒಂದೆಡೆ ಉಜ್ವಲಾ ಯೋಜನೆಯಲ್ಲಿ ಭಾರೀ ಅಕ್ರಮಗಳು ಕಂಡುಬಂದಿದ್ದರೆ, ಇನ್ನೊಂದೆಡೆ ಉಜ್ವಲಾ ಯೋಜನೆಯಡಿಯಲ್ಲಿಯೂ ಬಡವರು ದುಬಾರಿ ಬೆಲೆ ಕೊಟ್ಟು ಸಿಲಿಂಡರ್ ಕೊಳ್ಳುವಂತಹ ಸ್ಥಿತಿ ನಿರ್ಮಾಣವಾಗಿದೆ. 2010ಕ್ಕೆ ಮೊದಲು ಇಡೀ ದೇಶದ ಜನರೇ ಸಬ್ಸಿಡಿಯನ್ನು ಅನುಭವಿಸುತ್ತಿದ್ದರು. ಆಧಾರ್ ಲಿಂಕ್ ಮಾಡುವ ಮೂಲಕ ಸಬ್ಸಿಡಿಯನ್ನು ತಮ್ಮ ಬ್ಯಾಂಕ್ ಖಾತೆಗಳಿಗೆ ಹಾಕುತ್ತೇವೆ ಎಂದು ನಂಬಿಸಿ ಹಂತಹಂತವಾಗಿ ಎಲ್ಲರ ಸಬ್ಸಿಡಿಗಳಿಗೂ ಕತ್ತರಿ ಹಾಕಲಾಯಿತು. ಉಜ್ವಲಾ ಯೋಜನೆಯಲ್ಲಿ ಸಿಲಿಂಡರ್ ಪಡೆದವರು ದುಬಾರಿ ಬೆಲೆ ಕೊಟ್ಟು ಸಿಲಿಂಡರ್ ಕೊಳ್ಳಲಾಗದೆ ಮತ್ತೆ ಸೌದೆ ಒಲೆಯ ಮೊರ ಹೋಗುತ್ತಿದ್ದಾರೆ. ಸಬ್ಸಿಡಿ ಕಳೆದುಕೊಂಡ ಮಧ್ಯಮವರ್ಗದ ಸ್ಥಿತಿ ಇನ್ನಷ್ಟು ಚಿಂತಾಜನಕವಾಗಿದೆ.ಇತ್ತ ಪೆಟ್ರೋಲ್, ಡೀಸೆಲ್ ಬೆಲೆಯೇರಿಕೆಯ ಕುರಿತಂತೆಯೂ ಕೇಂದ್ರ ಸರಕಾರ ನ್ಯಾಯಯುತವಾಗಿ ನಡೆದುಕೊಂಡು ಬಂದಿಲ್ಲ.

ಅಂತರ್‌ರಾಷ್ಟ್ರೀಯ ಮಟ್ಟದಲ್ಲಿ ಕಚ್ಚಾತೈಲದ ಬೆಲೆ ಏರಿಕೆ ಮತ್ತು ಇಳಿಕೆಗನುಗುಣವಾಗಿ ದೇಶದಲ್ಲಿ ಪೆಟ್ರೋಲ್ ಬೆಲೆಯೇರಿಕೆ, ಇಳಿಕೆ ಆಗುತ್ತಿರುತ್ತದೆ. ಸರಕಾರ ಮಧ್ಯ ಪ್ರವೇಶಿಸುವುದಿಲ್ಲ ಎಂದು ಹೇಳುತ್ತಲೇ ಲಾಕೌನ್ ಹೊತ್ತಿಗೆ ಅಂತರ್‌ರಾಷ್ಟ್ರೀಯ ಮಟ್ಟದಲ್ಲಿ ಕಚ್ಚಾತೈಲ ಬೆಲೆ ಭಾರೀ ಪ್ರಮಾಣದಲ್ಲಿ ಇಳಿಕೆಯಾದಾಗ ಅಬಕಾರಿ ಸುಂಕವನ್ನು ಹೆಚ್ಚಳ ಮಾಡಿ ದೇಶದಲ್ಲಿ ಪೆಟ್ರೋಲ್ ಬೆಲೆ ಇಳಿಕೆಯಾಗದಂತೆ ನೋಡಿಕೊಂಡಿತು. ಅಂತರ್‌ರಾಷ್ಟ್ರೀಯ ಮಟ್ಟದ ಕಚ್ಚಾತೈಲದ ಬೆಲೆಗೆ ಹೋಲಿಸಿದರೆ, ಭಾರತದಲ್ಲಿ ಪೆಟ್ರೋಲ್ ಬೆಲೆಯನ್ನು ಈಗಲೂ ಇಳಿಕೆ ಮಾಡುವ ಅವಕಾಶ ಸರಕಾರಕ್ಕಿದೆ. ಆದರೆ ಅದಕ್ಕೆ ಪ್ರಯತ್ನಿಸದೆ, ಅಬಕಾರಿ ಸುಂಕವನ್ನು ಇನ್ನಷ್ಟು ಏರಿಕೆ ಮಾಡಿದೆ. ಕೇಂದ್ರ ಸರಕಾರದ ಮಟ್ಟಿಗೆ ಈ ಏರಿಕೆ ಒಂದು ಆರಂಭ ಮಾತ್ರ. ಈಗಾಗಲೇ ಅಮೆರಿಕ ಪ್ರತಿಸುಂಕವನ್ನು ಹಾಕಿರುವುದರಿಂದ ದೇಶದಲ್ಲಿ ಇನ್ನಷ್ಟು ಆರ್ಥಿಕ ಬಿಕ್ಕಟ್ಟುಗಳು ಎದುರಾಗುವ ಸಾಧ್ಯತೆಗಳಿವೆ. ಮುಂದಿನ ದಿನಗಳಲ್ಲಿ ನಡೆಯಲಿರುವ ಬೆಲೆ ಏರಿಕೆಗೆ ಕೇಂದ್ರ ಸರಕಾರ ಅಮೆರಿಕದ ಕಡೆಗೆ ಕೈತೋರಿಸಿ ತನ್ನ ಹೊಣೆಗಾರಿಕೆಯಿಂದ ಜಾರಿಕೊಳ್ಳುವ ಸಾಧ್ಯತೆಗಳಿವೆ. ವಿಪರ್ಯಾಸವೆಂದರೆ, ಕೇಂದ್ರ ಸರಕಾರ ಯರ್‍ರಾಬಿರ್‍ರಿಯಾಗಿ ಬೆಲೆಯೇರಿಕೆ ಮಾಡುತ್ತಿದ್ದರೂ ಇದರ ವಿರುದ್ಧ ಜನಾಂದೋಲನ ರೂಪುಗೊಳ್ಳದೇ ಇರುವುದು. ಕೆಲವು ರಾಜಕೀಯ ಪಕ್ಷಗಳು ಪ್ರತಿಭಟನೆ ನಡೆಸಿದರೂ ಅವು ಪಕ್ಕಾ ರಾಜಕೀಯ ದುರುದ್ದೇಶವನ್ನು ಹೊಂದಿರುತ್ತದೆಯೇ ಹೊರತು, ಜನರ ಹಿತಾಸಕ್ತಿಯನ್ನು ದೃಷ್ಟಿಯಲ್ಲಿಟ್ಟುಕೊಂಡಿರುವುದಿಲ್ಲ. ಕೇಂದ್ರ ಸರಕಾರ ಬೆಲೆಯೇರಿಕೆ ಮಾಡಿದಾಗ ಮೌನವಾಗಿದ್ದುಕೊಂಡು ರಾಜ್ಯ ಸರಕಾರದ ಬೆಲೆಯೇರಿಕೆಯ ವಿರುದ್ಧ ಮಾತ್ರ ಬೀದಿಗಿಳಿದರೆ ಆ ಪ್ರತಿಭಟನೆಯನ್ನು ಜನರಾದರೂ ಗಂಭೀರವಾಗಿ ತೆಗೆದುಕೊಳ್ಳುತ್ತಾರೆಯೆ? ಈ ಹಿಂದೆಲ್ಲ ಜನರ ಆಕ್ರೋಶಗಳಿಗೆ ಎಡಪಂಥೀಯ ಒಲವುಳ್ಳ ಸಂಘಟನೆಗಳು ಧ್ವನಿಯಾಗುತ್ತಿದ್ದವು. ಆದರೆ ಇಂದು ಎಡಪಂಥೀಯ ಚಳವಳಿಗಳೂ ಧ್ವನಿ ಕಳೆದುಕೊಂಡಿವೆ. ಇದೇ ಸಂದರ್ಭದಲ್ಲಿ ಪ್ರತಿಭಟನಾಕಾರರನ್ನು ಕಾನೂನಿನ ದುರುಪಯೋಗದ ಮೂಲಕ ಬಗ್ಗು ಬಡಿಯಲು ಸರಕಾರ ಭಾಗಶಃ ಯಶಸ್ವಿಯಾಗಿದೆ.

# ಆಧುನಿಕ ಕೃಷಿಯಿಂದ ಸೋತ ಪ್ರಕೃತಿ; ಸುಸ್ಥಿರತೆಗೆ ನೈಸರ್ಗಿಕ ಕೃಷಿ ಒಂದೇ ಮಾರ್ಗ

ಮನುಷ್ಯನ ದುರಾಸೆ ಹೆಚ್ಚಾದಂತೆಲ್ಲಾ ಪ್ರಕೃತಿ ಸೋಲುತ್ತಾ ಹೋಗುತ್ತಿದೆ. ವಿವೇಚನೆ ಇಲ್ಲದ ವಿಜ್ಞಾನಿಗಳು ಮತ್ತು ದೂರಾಲೋಚನೆ ಇಲ್ಲದ ಆಡಳಿತಸ್ತರು ಪ್ರಕೃತಿಯ ಸೋಲನ್ನು ತಡೆಯುವ ನಿಟ್ಟಿನಲ್ಲಿ ಕೈಚೆಲ್ಲಿದ್ದಾರೆ. ಪ್ರಾಚೀನ ಕಾಲದ, ಸ್ವಾತಂತ್ರೋತ್ತರ, ಸ್ವಾತಂತ್ರ್ಯ ನಂತರ ಮನುಷ್ಯನ ಮನಸ್ಥಿತಿ ಪ್ರಕೃತಿಯ ಜೊತೆ ಹೇಗಿತ್ತು ಈಗ ಏನಾಗಿದೆ ಎಂಬ ತುಲನಾತ್ಮಕ ಅಧ್ಯಯನ ಮಾಡ ಬೇಕಾಗಿದೆ.

ಪ್ರಕೃತಿಯನ್ನು ಆರಾಧಿಸುತ್ತಾ ತಮ್ಮ ಅಗತ್ಯತೆಗಾಗಿ ಪ್ರಕೃತಿಯನ್ನು ಬಳಸಿ ಕೊಳ್ಳುತ್ತಿದ್ದರು ನಮ್ಮ ಪ್ರಾಚೀನರು. ತಮ್ಮ ಅಗತ್ಯತೆಗಾಗಿ ಪ್ರಕೃತಿಯನ್ನು ದುಡಿಸಿಕೊಂಡ ಸ್ವಾತಂತ್ರೋತ್ತರ ರೈತರು ಪ್ರಕೃತಿಯಿಂದ ಪಡೆದದ್ದನ್ನು ಪುನಃ ಪಡೆದಲ್ಲಿಗೆ ನೀಡಿ ಮಣ್ಣಿನ ಋಣ ತೀರಿಸುತ್ತಿದ್ದರು. ಆಧುನಿಕ ಸ್ಪರ್ಶ ಸಿಕ್ಕ ನಮ್ಮ ಆಧುನಿಕ ಕೃಷಿಕರಲ್ಲಿ ಫ್ಯಾಷನ್ ಗುಣ ಹೆಚ್ಚಾಯಿತು. ತಮ್ಮ ಮೋಜು ಮಸ್ತಿಗಾಗಿ ಇವರಲ್ಲಿ ಕೊಳ್ಳುಬಾಕುತನ ಹೆಚ್ಚಾಗಿ ತನ್ನೆಲ್ಲಾ ಆ(ದುರಾ)ಸೆಗಳನ್ನು ಪೂರೈಸುವ ಉತ್ಪಾದನ ಯಂತ್ರದಂತೆ ಮಣ್ಣನ್ನು ದುಡಿಸಿಕೊಳ್ಳತೊಡಗಿದ್ದಾರೆ. ಉತ್ಪಾದನೆ ತೆಗೆಯುವ ವಿಚಾರದಲ್ಲಿ ನಮ್ಮ ಆಧುನಿಕ ಕೃಷಿಕರಲ್ಲಿ ಸ್ಪರ್ಧಾತ್ಮಕ ಮನೋಭಾವ ಹೆಚ್ಚಾಗಿದೆ. ಅಧಿಕ ಉತ್ಪಾದನೆಗಾಗಿ ಅತಿಯಾದ ರಾಸಾಯನಿಕ ಗೊಬ್ಬರ ಮತ್ತು ಔಷದ ಜೊತೆಗೆ ಕಳೆನಾಶಕಗಳನ್ನು ಬಳಸಿ ಮಣ್ಣಿನ ರಕ್ಷಣೆಗಿದ್ದ ವೈವಿಧ್ಯತೆಯನ್ನೇ ನಾಶ ಮಾಡುತ್ತಿದ್ದಾರೆ. ಇದರಿಂದ ಮಣ್ಣು ಪೂರ್ಣ ಸೋತು ತನ್ನ ನೈಸರ್ಗಿಕ ಕ್ರಿಯೆಗಳನ್ನು ನಿಲ್ಲಿಸಿ ಜಡ ವಸ್ತುವಾಗಿದೆ. ಸ್ವಾತಂತ್ರೋತ್ತರದ ಕೃಷಿ ರೈತರ ಬದುಕಿನ ಒಂದು ಭಾಗವಾಗಿತ್ತು. ನಿಸರ್ಗ ಮತ್ತು ವೃತ್ತಿಯ ಸಮನ್ವಯತೆ ಇತ್ತು. ಸ್ವಾತಂತ್ರ್ಯ ನಂತರ ಆಧುನಿಕ ಸ್ಪರ್ಶ ಸಿಕ್ಕುವ ತನಕ ಅದೇ ಪರಿಸ್ಥಿತಿ ಮುಂದುವರಿದಿತ್ತು. ಪಾಶ್ಚಿಮಾತ್ಯ ಸಂಸ್ಕೃತಿಯ ಪ್ರಭಾವಕ್ಕೆ ಸಿಕ್ಕ ರೈತನಿಗೆ ಕೃಷಿ ಕ್ಷೇತ್ರ ತನ್ನ ಮೋಜು ಮಸ್ತಿಗೆ ಬೇಕಾದ ಸಂಪನ್ಮೂಲವನ್ನು ಪೂರೈಸುವ ಆರ್ಥಿಕ ವಲಯವಾಯಿತು. ಜಾಗತೀಕರಣದ ಹಿನ್ನೆಲೆಯಲ್ಲಿ ಕೃಷಿ ಕ್ಷೇತ್ರ ಪೂರ್ಣ ಪ್ರಮಾಣದ ಕೈಗಾರಿಕೆಯ ಸ್ವರೂಪ ಪಡೆಯಿತು. ಅಧಿಕ ಇಳುವರಿಯೇ ಎಲ್ಲರ ಧ್ಯೇಯವಾಯಿತು. ಸಾಂಪ್ರದಾಯಿಕ ಕೃಷಿಯಲ್ಲಿ ಉತ್ಪಾದನೆ ಜೊತೆಗೆ ಮಣ್ಣಿನ ಆರೋಗ್ಯದ ಕಡೆ ಒತ್ತು ಕೊಡಲಾಗುತ್ತಿತ್ತು. ಆಧುನಿಕ ಕೃಷಿಯಲ್ಲಿ ಮಣ್ಣಿನ ಆರೋಗ್ಯವನ್ನು ಪೂರ್ಣ ಕಡೆಗಣಿಸಲಾಯಿತು. ಆಧುನಿಕ ಕೃಷಿಯನ್ನು ಪ್ರಚಾರ ಮಾಡಿದ ವಿಜ್ಞಾನಿಗಳು ಸಹ ಇದಕ್ಕೆ ಗಮನಕೊಡಲಿಲ್ಲ. ಈ ಕಾರಣಕ್ಕೆ ನಾನು ವಿವೇಚನೆ ಇಲ್ಲದ ವಿಜ್ಞಾನಿಗಳು ಎಂದು ಟೀಕಿಸುವುದು. ಆಧುನಿಕ ಕೃಷಿ ಪರಿಚಯಿಸಿದ ವಿಜ್ಞಾನಿಗಳಿಗೆ ನಿಸರ್ಗದ ಸಮತೋಲನಕ್ಕೆ ಆರೋಗ್ಯವಾದ ಮಣ್ಣು ಮುಖ್ಯ ಎಂಬ ವಿವೇಚನೆ ಬರಲೇ ಇಲ್ಲ.

**ಯುವಕರೆ ಎಚ್ಚೆತ್ತುಕೊಳ್ಳಿ:** ದೇಶದ ಎಲ್ಲಾ ಹವಾಮಾನದ ವಲಯಗಳಲ್ಲಿ ಕೃಷಿ ಮಾಡುವ ಯುವ ರೈತರಂತು ಕೃಷಿ ಎಂದರೆ ಅಧಿಕ ಉತ್ಪಾದನೆ ಎಂಬುದೊಂದನ್ನೆ ದೃಷ್ಟಿಯಲ್ಲಿ ಇಟ್ಟುಕೊಂಡಿದ್ದಾರೆ. ಇವರುಗಳಿಗೆ ನಿಸರ್ಗದ ಬಗ್ಗೆ ಕಾಳಜಿಯೇ ಇಲ್ಲ. ದೇಶೀಯ ಕೃಷಿಯ ಬಗ್ಗೆ ಅರಿವೇ ಇಲ್ಲ. ಅಧಿಕ ಉತ್ಪಾದನೆಗಾಗಿ ರಾಸಾಯನಿಕ ಗೊಬ್ಬರ ದ ಒಳಸುರಿವನ್ನು ಹೆಚ್ಚು ಮಾಡಿದ್ದಾರೆ. ಜೊತೆಗೆ ಫಲ ಕೊಡುವ ಗಿಡ ಬಳ್ಳಿಗಳು ರೋಗದಿಂದ ಬಳಲದಿರಲಿ ಎಂಬ ಕಾರಣಕ್ಕೆ 3-4 ವಿಷ ಔಷಧಿಗಳನ್ನು ಸಿಂಪರಣೆ ಮಾಡುತ್ತಿದ್ದಾರೆ. ಈ ಅಭ್ಯಾಸ ದೀರ್ಘಾವದಿ ಗೆ ಸೂಕ್ತವಲ್ಲ ಎಂದು ಗೊತ್ತಿಲ್ಲದೆ ಕೃಷಿ ಮಾಡುವ ಯುವಕರ ಗುಂಪು ಒಂದೆಡೆಯಾದರೆ ಇದು ಗೊತ್ತಿದ್ದು ಅಧಿಕ ಲಾಭ ಮಾಡಿ ನಗರಗಳಲ್ಲಿ ಆಸ್ತಿ ಕೊಂಡು ಐಶಾರಾಮಿ ಬದುಕು ಕಟ್ಟಿಕೊಳ್ಳುವ ಕನಸು ಹೊಂದಿರುವ ಮತ್ತೊಂದು ಗುಂಪು ಇದೆ. ಯುವಕರ ಈ ಮನೋಗುಣ ಬದಲಾಗಬೇಕು ಇಲ್ಲದಿದ್ದರೆ ಆರ್ಥಿಕತೆ, ಆರೋಗ್ಯ ಮತ್ತು ನಿಸರ್ಗದ ಮೇಲೆ ದೊಡ್ಡ ಪೆಟ್ಟು ಬೀಳುತ್ತದೆ. ಅಧಿಕ ಲಾಭದಾಸೆಗೆ ಅತಿಯಾಗಿ ರಾಸಾಯನಿಕ ಗೊಬ್ಬರ, ಔಷಧ ಮತ್ತು ಕಳೆನಾಶಕಗಳನ್ನು ಬಳಸಿದ ಪರಿಣಾಮ ಈಗ ಏನಾಗಿದೆ ನೋಡಿ. ಚಿಕ್ಕಮಗಳೂರು ನಗರದ ಯುರೋಲಜಿಸ್ಟ್ ಡಾ.ಮೋಹನ್ ಕುಮಾರ್ ಅಭಿಪ್ರಾಯ ಭಯಮೂಡಿಸುತ್ತದೆ. ಕಳೆದ 20 ವರ್ಷಗಳ ಹಿಂದೆ ವರ್ಷಕ್ಕೆ ಒಂದೊ ಎರಡೊ ಸಕ್ಕರೆ, ಹೃದಯ ಸಂಬಂಧಿ ಕಾಯಿಲೆಯ (ರೈತರಲ್ಲದ)ರೋಗಿಗಳು ಆಸ್ಪತ್ರೆಗೆ ಬರುತ್ತಿದ್ದರು. ಈಗ ಈ ಕಾಯಿಲೆಗಳು ಸಾಮಾನ್ಯವಾಗಿವೆ. ಅದೇ ರೀತಿ ಹಿಂದೆ ವರ್ಷಕ್ಕೆ ಒಂದೊ ಎರಡೊ ಕಿಡ್ನಿ ವೈಫಲ್ಯದ ರೋಗಿಗಳು ಆಸ್ಪತ್ರೆಗೆ ದಾಖಲಾಗುತ್ತಿದ್ದರು. ಈಗ ತಿಂಗಳಿಗೆ 7 ರಿಂದ 8 ರೋಗಿಗಳು ನಮ್ಮಲ್ಲಿಗೆ ಬರುತ್ತಾರೆ.

ಇದರಲ್ಲಿ ರೈತರೇ ಹೆಚ್ಚು ಎಂಬ ಆತಂಕ ವ್ಯಕ್ತಪಡಿಸುತ್ತಾರೆ. ಸಾಮಾಜಿಕ ಕಾಳಜಿಯುಳ್ಳ ಡಾ. ಮೋಹನ್ ಕುಮಾರ್ ಅವರು, ರೈತರಲ್ಲೆ ಕಿಡ್ನಿ ವೈಫಲ್ಯತೆ ಹೆಚ್ಚಾಗಲು ಕಾರಣ ಏನು ಎಂಬ ಶೋಧನೆ ಮಾಡಿ, ರಾಸಾಯನಿಕ ಔಷಧ ಮತ್ತು ಕಳೆನಾಶಕಗಳನ್ನು ಸಿಂಪರಣೆ ಮಾಡುವಾಗ ಮುಖ ಕವಚ ಮತ್ತು ಕೈ ಕವಚವನ್ನು ಹಾಕಿಕೊಳ್ಳದಿರುವುದರಿಂದ ರೈತರಲ್ಲಿ ಹೆಚ್ಚು ಅನಾರೋಗ್ಯ ಸ್ಥಿತಿ ಉಲ್ಬಣವಾಗಲು ಕಾರಣವಾಗಿದೆ ಎಂಬ ಸತ್ಯವನ್ನು ಕಂಡುಕೊಂಡಿದ್ದಾರೆ. ರೈತರು ರಾಸಾಯನಿಕ ಕೃಷಿಯಿಂದ ವಿಮುಖವಾಗಿ ನೈಸರ್ಗಿಕ ಕೃಷಿಗೆ ಬದಲಾಗದಿದ್ದರೆ ಕಷ್ಟ ಎಂಬ ಎಚ್ಚರಿಕೆಯನ್ನ ಕೊಟ್ಟಿದ್ದಾರೆ.

ಜನ ಜಾನುವಾರುಗಳ ಆರೋಗ್ಯ ಮಣ್ಣಿನ ಆರೋಗ್ಯದ ಮೇಲೆ ಅವಲಂಬಿತ ವಾಗಿದೆ. ಮಣ್ಣಿನ ಆರೋಗ್ಯ ಕೃಷಿಕರ ಮೇಲೆ ಅವಲಂಬಿತವಾಗಿದೆ. ಈ ಕಾರಣಕ್ಕೆ ಈಗಿನ ಅಧಿಕ ಉತ್ಪಾದನೆಯ ಆಸೆಗಾಗಿ ನಾಳೆಯ ಬದುಕನ್ನು ನಾಶ ಮಾಡಿಕೊಳ್ಳಬಾರದಲ್ಲವೇ? ಪಂಚಭೂತಗಳನ್ನು ಅವಲಂಬಿಸಿದ ನೈಸರ್ಗಿಕ ಕೃಷಿಯನ್ನು ಮಾಡಿ ಪಂಚಭೂತಗಳ ಸಮತೋಲನಕ್ಕೆ ಅವಕಾಶ ಮಾಡಿ ಕೊಡ ಬೇಕಾಗಿದೆ. ಅಧಿಕ ಇಳುವರಿಯ ಭ್ರಮೆಯಲ್ಲಿ ರಾಸಾಯನಿಕ ಕೃಷಿ ಮಾಡುವುದನ್ನು ಬಿಟ್ಟು ಕಡಿಮೆ ಖರ್ಚಿನ ನೈಸರ್ಗಿಕ ಕೃಷಿ ಮಾಡಿ ವಾಡಿಕೆ ಇಳುವರಿಯ ಪಡೆದು ಸುಸ್ಥಿರರಾಗೋಣ



ವಿಶ್ವಾಸ್.ಡಿ.ಗೌಡ

# ಒಲೆಕ್ಟ್ರಾಗೆ ದೇಶದ ಅತಿದೊಡ್ಡ ಇ.ವಿ. ಬಸ್‌ಗಳ ಸರಬರಾಜು ಆದೇಶ



ಉದಯವಾಹಿನಿ ಚಿತ್ರ

• ಉದಯ ವಾಹಿನಿ, ಬೆಂಗಳೂರು,

ದೇಶದ ಎಲೆಕ್ಟ್ರಿಕಲ್ ಬಸ್‌ಗಳ ಉತ್ಪಾದನೆ, ಮಾರಾಟ ಮತ್ತು ಸಾರ್ವತ್ರಿಕ ಸೇವೆಯಲ್ಲಿ ಮುಂಚೂಣಿಯಲ್ಲಿರುವ ಒಲೆಕ್ಟ್ರಾ ಸಂಸ್ಥೆಗೆ ಇದೀಗ ದೇಶದ ಅತಿ ದೊಡ್ಡ ಇವಿ ಬಸ್ ಸರಬರಾಜು ಆದೇಶ ದೊರಕಿದೆ.

ಭಾರತದಲ್ಲಿ ಎಲೆಕ್ಟ್ರಿಕ್ ಮೊಬಿಲಿಟಿ ಪರಿಹಾರಗಳಲ್ಲಿ ಮುಂಚೂಣಿಯಲ್ಲಿರುವ ಒಲೆಕ್ಟ್ರಾ ಗ್ರೀನ್ ಟೆಕ್ ಲಿಮಿಟೆಡ್, ಹಿಮಾಚಲ ರಸ್ತೆ ಸಾರಿಗೆ ನಿಗಮದಿಂದ (ಎಚ್ ಆರ್ ಟಿಸಿ) 297 ಹವಾನಿಯಂತ್ರಿತವಲ್ಲದ (ಎಸಿ ಅಲ್ಲದ), 9 ಮೀಟರ್ ಎಲೆಕ್ಟ್ರಿಕ್ ಬಸ್ ಗಳಿಗೆ ಪ್ರತಿಷ್ಠಿತ ಆದೇಶವನ್ನು ಪಡೆಯುವ ಮೂಲಕ ಮಹತ್ವದ ಮೈಲಿಗಲ್ಲನ್ನು ದಾಟಿದೆ.

ಈ ಆದೇಶವು ರಾಜ್ಯ ಸಾರಿಗೆ ನಿಗಮವು ಎಲೆಕ್ಟ್ರಿಕ್ ಬಸ್ ಗಳನ್ನು ಖರೀದಿಸಿರುವ ಭಾರತದ ಮೊದಲ ಮತ್ತು ಅತಿದೊಡ್ಡ ಖರೀದಿಯಾಗಿದೆ, ಹಿಮಾಚಲ ಪ್ರದೇಶದ ಸವಾಲಿನ ಗುಡ್ಡಗಾಡು ಪ್ರದೇಶಗಳಲ್ಲಿ ನ್ಯಾವಿಗೇಟ್ ಮಾಡಲು ವಿಶೇಷವಾಗಿ ವಿನ್ಯಾಸಗೊಳಿಸಲಾದ ಈ ಎಲೆಕ್ಟ್ರಿಕ್ ಬಸ್ಸುಗಳು 30 ಪ್ರಯಾಣಿಕರ ಆಸನ ಸಾಮರ್ಥ್ಯವನ್ನು ನೀಡುತ್ತವೆ ಮತ್ತು ಒಂದು ಬಾರಿ ಚಾರ್ಜ್ ಮಾಡಿದರೆ 180 ಕಿಲೋ ಮೀಟರ್ ವರೆಗೆ ಪ್ರಯಾಣಿಸಬಹುದಾಗಿದೆ. ಈ ಆರ್ಡರ್ ಮೌಲ್ಯ 424 ಕೋಟಿ ರೂ. ಗಳಾಗಿದ್ದು, ಇದು ಸಂಪೂರ್ಣ ಖರೀದಿ ಮಾದರಿಯಲ್ಲಿ ಅತಿದೊಡ್ಡ ಸಿಂಗಲ್-ಸ್ಟೇಟ್ ಎಲೆಕ್ಟ್ರಿಕ್ ಬಸ್ ಖರೀದಿಗಳಲ್ಲಿ ಒಂದಾಗಿದೆ. ಈ ನಿಯೋಜನೆಯು ದೇಶದಲ್ಲಿ ಸ್ವಚ್ಛ ಮತ್ತು ಸುಸ್ಥಿರ ಸಾರ್ವಜನಿಕ ಸಾರಿಗೆಯನ್ನು ಉತ್ತೇಜಿಸುವಲ್ಲಿ ಪ್ರಮುಖ ಹೆಜ್ಜೆಯಾಗಿದೆ. ಎಲೆಕ್ಟ್ರಿಕ್ ಬಸ್‌ಗಳಿಗಾಗಿ ಭಾರತದ ಮೊದಲ ಮತ್ತು ಅತಿದೊಡ್ಡ ಆದೇಶವನ್ನು ಸ್ವೀಕರಿಸಲು ನಾವು ಸಂತೋಷಪಡುತ್ತೇವೆ. ಇದು ನಿಜವಾಗಿಯೂ ನಮಗೆ ಹೆಮ್ಮೆಯ ಕ್ಷಣವಾಗಿದೆ ಮತ್ತು ಒಲೆಕ್ಟ್ರಾ ಅವರ ಸಾಮರ್ಥ್ಯಗಳಲ್ಲಿ ಇಟ್ಟಿರುವ ನಂಬಿಕೆಗೆ ಸಾಕ್ಷಿಯಾಗಿದೆ. ನಮ್ಮ ಉತ್ಪಾದನಾ ಸಾಮರ್ಥ್ಯವನ್ನು ವಿಸ್ತರಿಸುವುದು ಮತ್ತು ನಮ್ಮ ತಾಂತ್ರಿಕ ಅಂಚನ್ನು ಹೆಚ್ಚಿಸುವುದು ನಮ್ಮ ನಿರಂತರ ಗಮನವಾಗಿದೆ. ಈ ಪ್ರಯಾಣದುದ್ದಕ್ಕೂ ನಮ್ಮನ್ನು ಬೆಂಬಲಿಸಿದ ನಮ್ಮ ಎಲ್ಲಾ ವ್ಯವಹಾರ ಪಾಲುದಾರರು, ಮಾರಾಟಗಾರರು ಮತ್ತು ಷೇರುದಾರರಿಗೆ ನನ್ನ ಪ್ರಾಮಾಣಿಕ ಧನ್ಯವಾದಗಳನ್ನು ಅರ್ಪಿಸುತ್ತೇನೆ. ಈ ಮೈಲಿಗಲ್ಲನ್ನು ಸಾಧಿಸುವಲ್ಲಿ ನಿಮ್ಮ ನಂಬಿಕೆ ಮತ್ತು ಸಹಯೋಗ ಪ್ರಮುಖ ಪಾತ್ರ ವಹಿಸಿದೆ. ಒಟ್ಟಾಗಿ, ನಾವು ಸ್ವಚ್ಛ, ಹಸಿರು ಮತ್ತು ಹೆಚ್ಚು ಸುಸ್ಥಿರ ಭವಿಷ್ಯವನ್ನು ನಿರ್ಮಿಸುವುದನ್ನು ಮುಂದುವರಿಸುತ್ತೇವೆ ಎಂದು ಒಲೆಕ್ಟ್ರಾ ಗ್ರೀನ್ ಟೆಕ್ ಲಿಮಿಟೆಡ್‌ನ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಕೆ.ವಿ. ಪ್ರದೀಪದ ಹರ್ಷ ವ್ಯಕ್ತಪಡಿಸಿದ್ದಾರೆ. ಎಚ್‌ಆರ್‌ಟಿಸಿಯ ಕಾರ್ಯನಿರ್ವಾಹಕ ನಿರ್ದೇಶಕ ಡಾ.ಮುರಾರಿ ಲಾಲ್ (ಎಚ್ಪಿಎಎಸ್) ಅವರಿಂದ ಒಲೆಕ್ಟ್ರಾ ಔಪಚಾರಿಕವಾಗಿ ಲೆಟರ್ ಆಫ್ ಅವಾರ್ಡ್ (ಎಲ್‌ಒಎ) ಸ್ವೀಕರಿಸಿದೆ.

# ಹನುಮಾನ ಜಯಂತಿಯ ಮಹತ್ವ



ರಾಜಾ ದಶರಥನು ಪುತ್ರಪ್ರಾಪ್ತಿಗಾಗಿ 'ಪುತ್ರಕಾಮೇಷ್ಟಿ ಯಜ್ಞ'ವನ್ನು ಮಾಡಿದನು. ಆಗ ಯಜ್ಞದಿಂದ ಅಗ್ನಿ ದೇವನು ಪ್ರತ್ಯಕ್ಷನಾಗಿ ದಶರಥನ ರಾಣಿಯರಿಗಾಗಿ ಪಾಯಸವನ್ನು ನೀಡಿದನು. ದಶರಥನ ರಾಣಿಯರಂತೆಯೇ ತಪಸ್ಸನ್ನು ಮಾಡುವ ಅಂಜನೀಗೂ ಪಾಯಸವು ದೊರಕಿತ್ತು ಮತ್ತು ಅದರಿಂದಲೇ ಮಾರುತಿಯ ಜನ್ಮವಾಗಿತ್ತು. ಆ ದಿನ ಚೈತ್ರ ಪೌರ್ಣಿಮೆಯಾಗಿತ್ತು. ಈ ದಿನವನ್ನು 'ಹನುಮಾನ್ ಜಯಂತಿ' ಎಂದು ಆಚರಿಸುತ್ತಾರೆ.

**ತಿಥಿ :** ಕೆಲವು ಪಂಚಾಂಗಗಳ ಪ್ರಕಾರ ಆಶ್ವಯುಜ ಕೃಷ್ಣ ಚತುರ್ದಶಿಯು ಹನುಮಂತನ ಜನ್ಮತಿಥಿಯಾಗಿದೆ ಮತ್ತು ಇನ್ನೂ ಕೆಲವರ ಪ್ರಕಾರ ಚೈತ್ರ ಹುಣ್ಣಿಮೆಯು ಹನುಮಂತನ ಜನ್ಮತಿಥಿಯಾಗಿದೆ. ಕರ್ನಾಟಕದಲ್ಲಿ ಹನುಮಂತ ಜಯಂತಿಯನ್ನು ಚೈತ್ರ ಹುಣ್ಣಿಮೆಯಂದು ಆಚರಿಸುತ್ತಾರೆ. **ಮಹತ್ವ:** ಹನುಮಂತ ಜಯಂತಿಯಂದು ಹನುಮಂತತತ್ತ್ವವು ಎಂದಿಗಿಂತ 1000 ಪಟ್ಟು ಹೆಚ್ಚು ಕಾರ್ಯನಿರತವಾಗಿರುತ್ತದೆ. ಈ ತಿಥಿಗೆ 'ಶ್ರೀ ಹನುಮತೇ ನಮಃ ।' ನಾಮಜಪ, ಹಾಗೆಯೇ ಹನುಮಂತನ ಇತರ ಉಪಾಸನೆಯನ್ನು ಭಾವಪೂರ್ಣವಾಗಿ ಮಾಡುವುದರಿಂದ ಹನುಮಂತತತ್ತ್ವದ ಲಾಭವು ಹೆಚ್ಚೆಚ್ಚು ದೊರೆಯಲು ಸಹಾಯವಾಗುತ್ತದೆ.

**ಉತ್ಸವವನ್ನು ಆಚರಿಸುವ ಪದ್ಧತಿ :** ಈ ದಿನ ಹನುಮಂತನ ದೇವಸ್ಥಾನದಲ್ಲಿ ಸೂರ್ಯೋದಯಕ್ಕೆ ಮೊದಲೇ ಕೀರ್ತನೆಯು ಪ್ರಾರಂಭವಾಗುತ್ತದೆ. ಸೂರ್ಯೋ ದಯಕ್ಕೆ ಕೀರ್ತನೆ ಮುಕ್ತಾಯ ಗೊಳ್ಳುತ್ತದೆ ಮತ್ತು ಹನುಮಂತನ ಜನ್ಮವಾಗುತ್ತದೆ. ನಂತರ ಹನುಮಂತನ ಮೂರ್ತಿಯನ್ನು ಪೂಜಿಸುತ್ತಾರೆ ಮತ್ತು ಎಲ್ಲರಿಗೂ ಪ್ರಸಾದವನ್ನು ಕೊಡುತ್ತಾರೆ.

**ಕಾರ್ಯ ಮತ್ತು ವೈಶಿಷ್ಟ್ಯಗಳು:** ಸರ್ವಶಕ್ತಿವಂತ : ಹುಟ್ಟಿದ ಕೂಡಲೇ ಮಾರುತಿಯು ಸೂರ್ಯನನ್ನು ನುಂಗಲು ಹಾರಿದನು ಎಂಬ ಕಥೆಯಿದೆ, ಇದರಿಂದ ವಾಯುಪುತ್ರ ಮಾರುತಿಯು ಸೂರ್ಯನನ್ನು ಜಯಿಸು ವವನಾಗಿದ್ದನು ಎನ್ನುವುದು ತಿಳಿಯುತ್ತದೆ.

ಪೃಥ್ವಿ, ಆಪ, ತೇಜ, ವಾಯು, ಆಕಾಶ ಈ ತತ್ತ್ವಗಳಲ್ಲಿ ವಾಯು ತತ್ತ್ವವು ತೇಜತತ್ತ್ವಕ್ಕಿಂತಲೂ ಹೆಚ್ಚು ಸೂಕ್ಷ್ಮ, ಅಂದರೆ ಹೆಚ್ಚು ಶಕ್ತಿಯುಳ್ಳದ್ದಾಗಿದೆ.

**ಭೂತ ಮತ್ತು ಮಾರುತಿ:** ಎಲ್ಲಾ ದೇವತೆಗಳಲ್ಲಿ ಕೇವಲ ಮಾರುತಿಗೆ ಮಾತ್ರ ಕೆಟ್ಟ ಶಕ್ತಿಗಳು ತೊಂದರೆಗಳನ್ನು ಕೊಡುವುದಿಲ್ಲ. ಲಂಕೆಯಲ್ಲಿ ಲಕ್ಷಗಟ್ಟಲೆ ರಾಕ್ಷಸರಿದ್ದರು, ಆದರೆ ಅವರಿಗೆ ಮಾರುತಿಗೆ ತೊಂದರೆ ಕೊಡಲು ಸಾಧ್ಯವಾಗಲಿಲ್ಲ. ಆದ್ದರಿಂದ ಮಾರುತಿಗೆ ಭೂತಗಳ ಸ್ವಾಮಿ ಎನ್ನುತ್ತಾರೆ. ಯಾರನ್ನಾದರೂ ಭೂತವು ಹಿಡಿದಿದ್ದರೆ, ಆ ವ್ಯಕ್ತಿಯನ್ನು ಮಾರುತಿಯ ದೇವಸ್ಥಾನಕ್ಕೆ ಒಯ್ಯುತ್ತಾರೆ ಅಥವಾ ಮಾರುತಿ ಸ್ತೋತ್ರವನ್ನು ಪಠಿಸುತ್ತಾರೆ.

ಇದರಿಂದ ಅವನ ತೊಂದರೆಗಳು ಕಡಿಮೆಯಾಗದಿದ್ದರೆ ಅವನ ಮೇಲಿನಿಂದ ತೆಂಗಿನಕಾಯಿಯನ್ನು ನಿವಾಳಿಸಿ ಮಾರುತಿಯ ದೇವಸ್ಥಾನದಲ್ಲಿ ಒಡೆಯುತ್ತಾರೆ. ಅವನ ಮೇಲಿನಿಂದ ತೆಂಗಿನಕಾಯಿಯನ್ನು ನಿವಾಳಿಸುವುದರಿಂದ ಅವನಲ್ಲಿದ್ದ ಕೆಟ್ಟ ಶಕ್ತಿಯು ತೆಂಗಿನಕಾಯಿಯಲ್ಲಿ ಪ್ರವೇಶಿಸುತ್ತದೆ ಮತ್ತು ಆ ತೆಂಗಿನಕಾಯಿಯನ್ನು ಮಾರುತಿಯ ದೇವಸ್ಥಾನದಲ್ಲಿ ಒಡೆಯುವುದರಿಂದ ಅದರಲ್ಲಿರುವ ಕೆಟ್ಟ ಶಕ್ತಿಯು ಮಾರುತಿಯ ಸಾಮರ್ಥ್ಯದಿಂದ ನಾಶವಾಗುತ್ತದೆ. ನಂತರ ಆ ತೆಂಗಿನಕಾಯಿಯನ್ನು ವಿಸರ್ಜನೆ ಮಾಡುತ್ತಾರೆ.

**ಮಹಾಪರಾಕ್ರಮಿ:** ರಾಮ-ರಾವಣರ ಯುದ್ಧದಲ್ಲಿ ಬ್ರಹ್ಮಾಸ್ತ್ರದಿಂದ ರಾಮ, ಲಕ್ಷ್ಮಣ, ಸುಗ್ರೀವ ಇತ್ಯಾದಿ ವೀರರು ಮೂರ್ಛೆ ಹೋದಾಗ ಜಾಂಬವಂತನು ಹನುಮಂತನ ಪರಾಕ್ರಮದ ಬಗ್ಗೆ ಹೀಗೆ ವರ್ಣನೆ ಮಾಡಿದ್ದನು - ವಾನರಶ್ರೇಷ್ಠ ಹನುಮಂತನು ಜೀವಂತವಾಗಿದ್ದಾಗ ಎಲ್ಲಾ ಸೈನ್ಯವು ಮರಣ ಹೊಂದಿದರೂ ಅವರು ಮರಣ ಹೊಂದದಂತೆ ಆಗಿದೆ; ಆದರೆ ಹನುಮಂತನು ಪ್ರಾಣತ್ಯಾಗ ಮಾಡಿದರೆ ನಾವು ಜೀವಂತವಾಗಿದ್ದರೂ ಮೃತರಾದಂತೆಯೇ ಆಗಿದೆ. ಹನುಮಂತನು ಜಂಬು-ಮಾಲಿ, ಅಕ್ಷ, ಧೂಮ್ರಾಕ್ಷ, ನಿಕುಂಭ ಇತ್ಯಾದಿ ಬಲಾಢ್ಯ ವೀರರನ್ನು ನಾಶ ಮಾಡಿದನು. ಅವನು ರಾವಣನನ್ನೂ ಮೂರ್ಛಿತಗೊಳಿಸಿದನು. ಸಮುದ್ರ ಉಡ್ಡಾಣ, ಲಂಕೆಯ ದಹನ, ದ್ರೋಣಗಿರಿ ಪರ್ವತವನ್ನು ತರುವುದು ಇತ್ಯಾದಿ ಘಟನೆಗಳು ಹನುಮಂತನ ಶೌರ್ಯದ ಪ್ರತೀಕವಾಗಿವೆ.

**ಉಪಾಸನೆ:** ಉದ್ದೇಶ : ಮಾರುತಿಯಲ್ಲಿನ ಪ್ರಕಟ ಶಕ್ತಿಯು (ಶೇ.72) ಇತರ ದೇವತೆಗಳ ಪ್ರಕಟ ಶಕ್ತಿಯ (ಶೇ.10) ತುಲನೆಯಲ್ಲಿ ಅಧಿಕ ಪ್ರಮಾಣದಲ್ಲಿರುವುದರಿಂದ ಮುಂದಿನ ಕಾರಣಗಳಿಗಾಗಿ ಮಾರುತಿಯ ಉಪಾಸನೆಯನ್ನು ಮಾಡುತ್ತಾರೆ. **ರೋಗನಿವಾರಣೆ :** ರೋಗಿ ವ್ಯಕ್ತಿಗಳಿಗೆ ಒಳ್ಳೆಯದಾಗಲು ಅವರನ್ನು ಹನುಮಂತನ ದೇವಸ್ಥಾನಕ್ಕೆ ಕರೆದೊಯ್ಯುವ ಪದ್ಧತಿಯಿದೆ. ರೋಗಗಳಿಂದ ಮುಕ್ತರಾಗಲು ವೀರಹನುಮಂತನ ಮಂತ್ರವನ್ನೂ ಪಠಿಸುತ್ತಾರೆ. ಮಾರುತಿಗೆ ಮಾಡಬೇಕಾದ ಕೆಲವು ಪ್ರಾರ್ಥನೆಗಳು ಹೇ ಮಾರುತಿ, ನೀನು ಹೇಗೆ ಶ್ರೀರಾಮಚಂದ್ರನ ದಾಸ್ಯಭಕ್ತಿಯನ್ನು ಮಾಡಿದೆಯೋ, ಹಾಗೆಯೇ ನನಗೂ ಭಕ್ತಿಯನ್ನು ಮಾಡಲು ಕಲಿಸು, ಇದೇ ನಿನ್ನ ಚರಣಗಳಲ್ಲಿ ಪ್ರಾರ್ಥನೆ ಹೇ ಮಾರುತಿ, ರಾಷ್ಟ್ರರಕ್ಷಣೆ-ಧರ್ಮರಕ್ಷಣೆಗಾಗಿ ನೀನು ನನಗೆ ಭಕ್ತಿ ಶಕ್ತಿಯನ್ನು ಕೊಡು, ಇದೇ ನಿನ್ನ ಚರಣಗಳಲ್ಲಿ ಪ್ರಾರ್ಥನೆ

# ರಾಮಾಯಣ



## ದಶರಥ ರಾಯನ ದು:ಖ

• ಹಿಂದಿನ ಸಂಚಿಕೆಯಿಂದ 78 ನೆಯ ಅಧ್ಯಾಯ

ಆ ಮಾತನ್ನು ಕೇಳಿ ದಶರಥರಾಯನು ಶ್ರೀರಾಮನನ್ನು ತಬ್ಬಿಕೊಂಡು ಮುಖಕಾಂತಿಗುಂದಿ ಮೂರ್ಛಿತನಾಗಿ ಬಿದ್ದು ಬಿಟ್ಟನು. ಅದನ್ನು ಕಂಡು ಕೈಕೇಯಿದೇವಿಯ ಹೊರತು ಮಿಕ್ಕ ರಾಜಸ್ತ್ರೀಯರೆಲ್ಲರೂ ರೋದನವನ್ನು ಮಾಡುತ್ತಿದ್ದರು. ಆ ಅವಸ್ಥೆಯನ್ನು ಕಂಡು ಸುಮಂತ್ರನು ಮೂರ್ಛಿತನಾಗಿ ಬಿದ್ದನು. ಆ ಸಮಯದಲ್ಲಿ ಆ ಅರಮನೆಯಲ್ಲಿ ಹಾಹಾಕಾರವು ಹುಟ್ಟಿ ಕೋಲಾಹಲಧ್ವನಿಯುಂಟಾಯಿತು.

**ಸುಮಂತ್ರನು ಕೈಕೇಯ ದೇವಿಗೆ ಹೇಳಿದ ನೀತಿ**

ಆಮೇಲೆ ಸುಮಂತ್ರನು ಪ್ರಜ್ಞೆಹೊಂದಿ ದಶರಥರಾಯನ ದುಃಖವನ್ನು ಕಂಡು ಅತ್ಯಂತ ದುಃಖಿತನಾದನು. ಅವನು ನಿಟ್ಟುಸಿರುಬಿಡುತ್ತ ಕೋಪಾತಿಶಯದಿಂದ ಅಂಗೈಯಲ್ಲಿ ಅಂಗೈಯನ್ನೊತ್ತುತ್ತ ಹಲ್ಲನ್ನು ಕಡಿಯುತ್ತ ಕೋಪದಿಂದ ಕಣ್ಣುಗಳನ್ನು ಕೆಂಪುಮಾಡಿಕೊಂಡು ನಿಷ್ಠುರವಾದ ಮಾತುಗಳೆಂಬ ಕೂರಲಗಿನಿಂದ ಕೈಕೇಯಾದೇವಿಯ ಮನಸ್ಸನ್ನು ಕತ್ತರಿಸುವ ಹಾಗೆ ಮಾತನಾಡಿದನು: ಎಲೈ ಕೈಕೇಯಾದೇವಿ, ನಿನ್ನ ಪತಿಯಾದ ದಶರಥರಾಯನನ್ನು ತಿರಸ್ಕರಿಸಿ ಸಮಸ್ತ ಜಗತ್ತುಗಳಿಗೂ ಒಡೆಯನಾಗಿ ಮಹಾತ್ಮನಾದ ಆತನ ಮಾತನ್ನು ಕೇಳದಿದ್ದೀಯೆ. ನೀನು ಯಾವ ಕೃತ್ಯವನ್ನಾದರೂ ಪಾಪಭಯವಿಲ್ಲದೆ ಮಾಡುವಂಥವಳು. ಪತಿಯಾದ ದಶರಥರಾಯನನ್ನು ಕೆಡಿಸಿದವಳು. ಕಡೆಗೆ ಇಕ್ಷ್ವಾಕುವಂಶವನ್ನೇ ಕೆಡಿಸಿದವಳೆಂದು ತಿಳಿಯಬೇಕು. ದಶರಥರಾಯನು ದೇವೇಂದ್ರನಂತೆ ಯಾರಿಗೂ, ಜಯಿಸುವುದಕ್ಕೆ ಅಸಾಧ್ಯನಾದವನು, ಪರ್ವತದ ಹಾಗೆ ಸ್ಥಾನದಿಂದ ಕದಲಿಸುವುದಕ್ಕೆ ಶಕ್ಯನಲ್ಲ ಸಮುದ್ರದಂತೆ ಕಲಕಲುಅಸಾಧ್ಯನಾದವನು. ಅಂಥ ದಶರಥರಾಯನನ್ನು ನಿಷ್ಟುರವಚನಗಳಿಂದ ದುಃಖಪಡಿಸುತ್ತಿದ್ದೀಯೆ. ಬೇಡಿದ ಭಾಗ್ಯವನ್ನು ಕೊಡುವಂಥ ಪತಿಯನ್ನು ತಿರಸ್ಕರಿಸಬೇಡ. ಲೋಕದಲ್ಲಿ ಸ್ತ್ರೀಯರಿಗೆ ಮಕ್ಕಳಿಗಿಂತಲೂ ಪತಿಯೇ ಶ್ರೇಷ್ಠನಾದವನು. ಆದ್ದರಿಂದ ಸ್ತ್ರೀಯರು ಪತಿಯ ಇಚ್ಛೆಗೆ ತಕ್ಕಹಾಗೆ ನಡೆಯಬೇಕಲ್ಲದೆ ಆತನ ಮಾತನ್ನು ಮೀರಬಾರದು. ಇಕ್ಷ್ವಾಕುವಂಶದ ರಾಜರಲ್ಲಿ ತಂದೆಯು ವೃದ್ಧನಾದಮೇಲೆ ಯೌವನಸ್ಥನಾದ ಮಗನಿಗೆ ಪಟ್ಟವನ್ನು ಕಟ್ಟಿ ತಾನು ವನಾಂತರವನ್ನೈದುವುದೇ ಮರ್ಯಾದೆಯು. ನಿನ್ನ ಅಜ್ಞಾನದಿಂದ ದಶರಥರಾಯನಲ್ಲಿ ಆ ಮರ್ಯಾದೆಯನ್ನು ಕೆಡಿಸಿದೆ. ನಿನ್ನ ಮಗನಾದ ಭರತನೊಬ್ಬನೇ ಬಾಳಲಿ! ನಾವು ಶ್ರೀರಾಮನು ಹೋದ ದಾರಿಗೊಂಡು ಹೋಗುತ್ತೇವೆ. ನೀನು ಲೋಕದಲ್ಲಿ ಯಾರೂ ಮಾಡದ ದುಷ್ಕರ್ಮವನ್ನು ಮಾಡುತ್ತಿದ್ದೀಯೆ. ಇಂಥ ರಾಜ್ಯವು ಬ್ರಾಹ್ಮಣರಿರುವುದಕ್ಕೆ ಯೋಗ್ಯವಲ್ಲ. ಧರ್ಮಾತ್ಮನಾದ ಶ್ರೀರಾಮನಿಗೆ ಆದ ರಾಜ್ಯಾಧಿಪತ್ಯವನ್ನು ಕ್ಷಣಮಾತ್ರದಲ್ಲಿ ನಿನ್ನ ಮಗನಾದ ಭರತನಿಗೆ ಕೊಟ್ಟೆ. ಭರತನಿಗೆ ಪಟ್ಟಾಭಿಷೇಕವಾಗಿ ಶ್ರೀರಾಮನು ವನವಾಸಕ್ಕೆ ಹೋದರೆ ಮಹಾತ್ಮರಾದ ಬ್ರಾಹ್ಮಣರೂ ಋಷಿಗಳೂ ನಿನ್ನನ್ನು ಬಹಳವಾಗಿ ನಿಂದಿಸುವರು. ಲೋಕದಲ್ಲಿ ಮಾವಿನಮರವನ್ನು ಛೇದಿಸಿ ಬೇವಿನ ಸಸಿಯನ್ನಿಟ್ಟು ಹಾಲನ್ನೆರೆದು ಸಾಕಿದರೆ ಆ ಬೇವಿನಮರವು ಮಧುರವಾದ ಫಲವನ್ನು ಕೊಡಲಾರದು. ಅದಲ್ಲದೆ ನಿನ್ನ ತಾಯಿಯ ಹುಟ್ಟುಗುಣವನ್ನು ನಾನು ಬಲ್ಲೆನು, ನಿನ್ನಲ್ಲಿ ತಾಯಿಯ ಗುಣವಲ್ಲದೆ ಮತ್ತೊಂದು ಗುಣವಿಲ್ಲ. ಲೋಕದಲ್ಲಿ ಬೇವಿನಮರದಿಂದ ಜೇನುತುಪ್ಪ ಸುರಿಯುವುದುಂಟೆ ನಿನಗೆ ನಿನ್ನ ತಾಯಿಯ ಗುಣವೇ ಸಂಭವಿಸಿತಲ್ಲದೆ ಮತ್ತೊಂದಲ್ಲ.

ಮುಂದುವರಿಯುವುದು...

# ಜೈನ ಸಾಹಿತ್ಯವು ಭಾರತದ ಬೌದ್ಧಿಕ ವೈಭವದ ಬೆನ್ನೆಲುಬು: ನರೇಂದ್ರ ಮೋದಿ

## ಜೈನ್ ಇಂಟರ್‌ನ್ಯಾಷನಲ್ ಟ್ರೇಡ್ ಆರ್ಗನೈಸೇಶನ್ ನಿಂದ ವಿಶ್ವ ನವಕಾರ ಮಂತ್ರ ಪಠಣ

• ಉದಯ ವಾಹಿನಿ, ಬೆಂಗಳೂರು,

ಜೈನ್ ಇಂಟರ್‌ನ್ಯಾಷನಲ್‌ಟ್ರೇಡ್ ಆರ್ಗನೈಸೇಶನ್ ಜೀತೊ ನಿಂದ ವಿಶ್ವ ನವಕಾರ ಮಂತ್ರ ದಿನಕ್ಕಾಗಿ ಮೆಗಾ ಜಾಗತಿಕ ಪಠಣ ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಿತು. ಬೆಳಿಗ್ಗೆ 8 ರಿಂದ 9:36 ರವರೆಗೆ ಪವಿತ್ರ ನವಕಾರ ಮಂತ್ರವನ್ನು ಒಗ್ಗಟ್ಟಿನಿಂದ ಪಠಿಸಿತು. ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಈ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ವಿಡಿಯೋ ಕಾನ್ಫರೆನ್ಸ್ ಮೂಲಕ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ದೇಶದ 6 ಸಾವಿರ ಮತ್ತು ವಿವಿಧ 108 ದೇಶಗಳಲ್ಲಿ ಏಕಕಾಲದಲ್ಲಿ ಮಂತ್ರಪಠಣ ನಡೆಯಿತು.



ಪ್ರಧಾನಿ ನರೇಂದ್ರ ಮೋದಿ ಮಾತನಾಡಿ, ನವಕರ್ ಮಹಾಮಂತ್ರದ ತತ್ವಶಾಸ್ತ್ರವು ಅಭಿವೃದ್ಧಿ ಹೊಂದಿದ ಭಾರತದ ದೃಷ್ಟಿಕೋನಕ್ಕೆ ಪೂರಕವಾಗಿದೆ. ಸ್ಥಳೀಯ ಉತ್ಪನ್ನಗಳನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯುವ ಅಗತ್ಯವಿದೆ. ಸ್ಥಳೀಯ ಉತ್ಪನ್ನ ಉತ್ತೇಜನ, ಪರಿಸರ ಸಂರಕ್ಷಣೆ ಸೇರಿದಂತೆ ಉತ್ತಮ ಯೋಗಕ್ಷೇಮಕ್ಕೆ 9 ಸಂಕಲ್ಪಗಳನ್ನು ಮಾಡುವಂತೆ ಜನತೆಗೆ ಮನವಿ ಮಾಡಿದರು.

ನೀರನ್ನು ಉಳಿಸುವುದು, ತಾಯಿಯ ಹೆಸರಿನಲ್ಲಿ ಮರವೊಂದನ್ನು ಪೋಷಿಸುವುದು, ಸ್ವಚ್ಛತೆಯ ಧ್ಯೇಯ, ಸ್ಥಳೀಯ ಉತ್ಪನ್ನಗಳಿಗೆ ಉತ್ತೇಜನ, ದೇಶೀಯ ಪ್ರವಾಸೋದ್ಯಮ, ನೈಸರ್ಗಿಕ ಕೃಷಿ, ಆರೋಗ್ಯಕರ ಜೀವನಶೈಲಿ ಅಳವಡಿಸಿಕೊಳ್ಳುವುದು, ಯೋಗ ಮತ್ತು ಕ್ರೀಡೆಗಳನ್ನು ಜೀವನದ ಭಾಗವಾಗಿಸುವುದು ಮತ್ತು ಬಡವರಿಗೆ ಸಹಾಯ ಮಾಡುವುದು ಇದರಲ್ಲಿ ಸೇರಿವೆ ಎಂದರು. ಭಾರತದ ಇತಿಹಾಸ, ಹೆಗ್ಗುರುತು ಮತ್ತು ಆಧ್ಯಾತ್ಮಿಕ ಪ್ರಯಾಣದಲ್ಲಿ ಜೈನ ಧರ್ಮದ ಮಹತ್ವವನ್ನು ಪ್ರಸ್ತಾಪಿಸಿದ ಅವರು, ಜೈನ ಸಾಹಿತ್ಯವು ಭಾರತದ ಬೌದ್ಧಿಕ ವೈಭವದ ಬೆನ್ನೆಲುಬಾಗಿದೆ. ಜ್ಞಾನವನ್ನು ಸಂರಕ್ಷಿಸುವ ಸರ್ಕಾರದ ಬದ್ಧತೆಯಂತೆ ಪ್ರಾಕೃತ್ ಮತ್ತು ಪಾಲಿ ಭಾಷೆಗೆ ಶಾಸ್ತ್ರೀಯ ಭಾಷಾ ಸ್ಥಾನಮಾನ ನೀಡಲಾಗಿದೆ. ಜೈನ ಸಮುದಾಯವು ಶತಮಾನಗಳಿಂದ ಸುಸ್ಥಿರ ಜೀವನಶೈಲಿ ಪಾಲಿಸಿಕೊಂಡು ಬಂದಿದೆ. ಇದು ಭಾರತದ ಮಿಷನ್ ಲೈಫ್‌ಗೆ ಹೊಂದಾಣಿಕೆಯಾಗುತ್ತದೆ ಎಂದರು. ಇದು ವಿಶ್ವ ಶಾಂತಿ ಮತ್ತು ಆಧ್ಯಾತ್ಮಿಕ ಏಕತೆಯತ್ತ ಸ್ಫೂರ್ತಿದಾಯಕ ಪ್ರಯತ್ನ ಎಂದು ಬಣ್ಣಿಸಿದರು ಮತ್ತು ಎಲ್ಲಾ ನಾಗರಿಕರು ಸೇರುವಂತೆ ಒತ್ತಾಯಿಸಿದರು. ಪ್ರಧಾನ ಮಂತ್ರಿಗಳು ಮಿಷನ್ ಲೈಫ್ ಪರಿಕಲ್ಪನೆಯನ್ನು ಜೈನ ಸಮುದಾಯದ ಜೀವನಶೈಲಿಗೆ ಜೋಡಿಸಿದರು, ಇದು ಯುವ ಪೀಳಿಗೆಗೆ ಹೊಸ ದಿಕ್ಕಿನ ಸಂಕೇತ ಎಂದು ಕರೆದರು. ಪವಿತ್ರ ಜೈನ ನವಕಾರ ಮಂತ್ರದ ಮೂಲಕ ವಿಶ್ವ ಶಾಂತಿಯನ್ನು ಉತ್ತೇಜಿಸುವ ಉದ್ದೇಶವಾಗಿದೆ. ಈ ಕಾರ್ಯಕ್ರಮದಲ್ಲಿ ಎಲ್ಲಾ ಜೈನ ಪಂಗಡಗಳು ಮತ್ತು ವಿವಿಧ ಧರ್ಮಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

**ಅಂಚೆ ಇಲಾಖೆಯು ವಿಶ್ವ ನವಕಾರ ದಿನದ ಪೋಸ್ಟ್ ಕಾರ್ಡ್ ಬಿಡುಗಡೆ ಮಾಡಿತು. ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಕರ್ನಾಟಕ ವೃತ್ತದ ಮುಖ್ಯ ಪೋಸ್ಟ್ ಮಾಸ್ಟರ್ ಜನರಲ್ ಐಪಿಒಎಸ್ ಎಸ್. ರಾಜೇಂದ್ರ ಕುಮಾರ್ ಮತ್ತು ಜಿಐಟಿಒ ಗಣ್ಯರು ಉಪಸ್ಥಿತರಿದ್ದರು. ಜಿತೋ ಬೆಂಗಳೂರು ದಕ್ಷಿಣ ಚಾಪ್ಟರ್ ಅಧ್ಯಕ್ಷ ರಣಜೀತ ಸೋಲಂಕಿ ಮಾತನಾಡಿ, ಜೀತೊದ ಚಟುವಟಿಕೆಗಳು ವಿಶ್ವವ್ಯಾಪಿಯಾಗಿವೆ. ವಿಶ್ವಶಾಂತಿಗೆ ಆದ್ಯತೆ ನೀಡುವುದು ನಮ್ಮ ಗುರಿಯಾಗಿದೆ ಎಂದರು. ಜಿತೋ ದಕ್ಷಿಣ ಚಾಪ್ಟರ್ ಆಧ್ಯಕ್ಷ ವಿಮಲ್ ಕಟಾರಿಯಾ ಮಾನತಾಡಿ, ಜೀತೊ ನವ ಮಾಧ್ಯಮವಾಗಿದೆ ಮತ್ತು ಈ ಕಾರ್ಯಕ್ರಮವು ಎಲ್ಲಾ ಸದಸ್ಯರ ಸಾಮೂಹಿಕ ಪ್ರಯತ್ನಗಳಿಗೆ ಸಾಕ್ಷಿಯಾಗಿದೆ ಎಂದು ಹೇಳಿದರು.**

## ಶಾಸಕ ಅಜಯ್ ಸಿಂಗ್ ಭರವಸೆ ಕೊಟ್ಟು 15 ದಿನ ಕಳೆದರೂ ಇನ್ನೂ ಸಮಸ್ಯೆ ಇತ್ಯರ್ಥವಾಗಿಲ್ಲ

• ಉದಯವಾಹಿನಿ ಜೇವರ್ಗಿ

ಕಳೆದ 15 ದಿನದ ಹಿಂದೆ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಹಾಗೂ ಶಾಸಕರಾದ ಡಾಕ್ಟರ್ ಅಜಯ್ ಸಿಂಗ್ ಧರಣಿ ಸ್ಥಳಕ್ಕೆ ಭೇಟಿ ನೀಡಿ 15 ದಿನ ಕಳೆದರೂ ಇನ್ನೂ ಸಮಸ್ಯೆ ಇತರ್ಥವಾಗಿಲ್ಲ ಮುಂದಿನ ದಿನಗಳಲ್ಲಿ ಶಾಸಕರ ಹಾಗೂ ಅಧಿಕಾರಿಗಳ ವಿರುದ್ಧ ಹೋರಾಟ ರೂಪಿಸಲಾಗುವುದೆಂದು ದಲಿತ ಸಂಘರ್ಷ ಸಮಿತಿ ತಾಲ್ಲೂಕ ಸಂಚಾಲಕ ಸಿದ್ದರಾಮಕಟ್ಟಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಅಧಿಕಾರಿಗಳ ವಿರುದ್ಧ ಹೋರಾಟ**

ನಂತರ ಮಾತನಾಡಿದ ಅವರು ಜಿಲ್ಲಾಧಿಕಾರಿ ಆಪ್ತರ ಕಾರ್ಯದರ್ಶಿ ರಾಘವೇಂದ್ರ, ಗಡೆದ ಬೇಟಿ ಭೇಟಿ ನೀಡಿ ಸಮಸ್ಯೆ ಬಗೆಹರಿಸುವ ಭರವಸೆ ನೀಡಿದರು ಆದರೂ ಕೂಡ ಸಮಸ್ಯೆ ಬಗೆಹರಿದಿಲ್ಲ ಎಂದು ಹೇಳಿದರು.

ಜೇವರ್ಗಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಅಂಬೇಡ್ಕರ್ ವಾದ ಹಾಗೂ ಕರ್ನಾಟಕ ದಲಿತ ಸಂಘರ್ಷ ಸಮಿತಿ ಗುರು ಪ್ರಸಾದ್ ಕೆರಗೋಡು ಬಣದ ನೇತೃತ್ವದಲ್ಲಿ ನಡೆದ ಎರಡು ಜನ ಹೊರಗುತ್ತಿಗೆ ನೌಕರರನ್ನು ಏಕಾಏಕಿ ಕೈಬಿಟ್ಟಿದ್ದನ್ನು ಖಂಡಿಸಿ ಮತ್ತು ಸೇವಾ ಹಿರಿತನದಲ್ಲಿ, ವೇತನದಲ್ಲಿ ತಾರತಮ್ಯ ಮಾಡಿದ ತಪ್ಪಿಸ್ಥ ಅಧಿಕಾರಿಗಳನ್ನು ಅಮಾನತ್ತು ಗೊಳಿಸುವಂತೆ ಒತ್ತಾಯಿಸಿ ದಿನಾಂಕ.21/03/2025 ರಿಂದ ದಿನಾಂಕ. 9/04/2025ರವರೆಗೆ ಅಂದರೆ ಇವತ್ತಿಗೆ ಸುಮಾರು 24 ದಿನಗಳಕಾಲ ನಡೆದ ಅನಿರ್ಧಿಷ್ಟ (ಆಹೋರಾತ್ರಿ) ಧರಣಿ ಸತ್ಯಾಗ್ರಹದ ಸ್ಥಳಕ್ಕೆ ಇಂದು ಜಿಲ್ಲಾಧಿಕಾರಿಗಳ (ಪರ್ಸನಲ್) ಆಪ್ತಕಾರ್ಯದರ್ಶಿಗಳಾದ ರಾಮಚಂದ್ರ, ಗಡೆದ ಧರಣಿ ಸ್ಥಳಕ್ಕೆ ಭೇಟಿ ಭೇಟಿ ನೀಡಿ ಸಮಸ್ಯೆ ಆಲಿಸಿದರು.

ಇವರ ಸಮ್ಮುಖದಲ್ಲಿ ತಾಲೂಕ ದಂಡಾಧಿಕಾರಿಗಳಾದ ಮಲ್ಲಣ್ಣ ಯಲಗೊಡ ,ಮತ್ತು ಪುರಸಭೆಯ ಮುಖ್ಯಾಧಿಕಾರಿಗಳಾದ



ಉದಯವಾಹಿನಿ ಚಿತ್ರ

ಶಂಭುಲಿಂಗ ದೇಸಾಯಿ ಭಾಗವಹಿಸಿ ಪೌರಕಾರ್ಮಿಕರನ್ನು ತೆಗೆದ ಬಗ್ಗೆ ದ ಸಮಸ್ಯೆಯದ ಬಗ್ಗೆ ಚರ್ಚೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಧರಣಿ ನಿರತ ದಲಿತ ಹೋರಾಟಗಾರರಾದ ಸಿದ್ದು ಕೆರೂರ, ಸಿದ್ರಾಮ ಕಟ್ಟಿ, ಶ್ರೀಹರಿ ಕರಕಳ್ಳಿಯವರ ಜೊತೆ ಸುಧೀರ್ಘವಾಗಿ ಚರ್ಚಿಸಿ.

ಅಕ್ರಮವಾಗಿ ಮೇಲ್ವಿಚಾರಕರ ಹುದ್ದೆಗೆ ಬಂದವರ ಬಗ್ಗೆ ಮತ್ತು ತಪ್ಪಿಸ್ಥ ಅಧಿಕಾರಿಗಳ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸುವ ಕುರಿತು ಜಿಲ್ಲಾಧಿಕಾರಿಗಳ ಗಮನಕ್ಕೆ ತರುವುದು ಮತ್ತು ಹೊರಗುತ್ತಿಗೆಯಲ್ಲಿ ಕೈ ಬಿಟ್ಟ ಇಬ್ಬರನ್ನು ಪುನಹ ಸೇವೆಯಲ್ಲಿ ಮುಂದು ವರೆಸುವಂತೆ ಜಿಲ್ಲಾಧಿಕಾರಿಗಳ ಗಮನಕ್ಕೆ ತರುವ ಭರವಶ ನೀಡಿದರು.

ಆದೇಶ ಬರುವವರೆಗೆ ನಮ್ಮ ಧರಣಿ ಮುಂದುವರಿಯುತ್ತದೆ. ದಿನಾಂಕ 3-4-2025ರಂದು ನಡೆದಿರುವ 24ನೇ ದಿನದ ಅಹೋರಾತ್ರಿ ಧರಣಿ ಸತ್ಯಾಗ್ರಹದಲ್ಲಿ ತಾಲ್ಲೂಕ ಸಂಚಾಲಕ ಸಿದ್ರಾಮ ಕಟ್ಟಿ, ಸಿದ್ದು ಕೆರೂರು ಹೊರಗುತ್ತಿಗೆ ನೌಕರರಾದ ಮಲ್ಲಿನಾಥ ಹೆಗಡೆ, ಇತರರು ಇದ್ದರು.

## ಅಂಬಲಗಾ ತಾಂಡಾಗೆ ಜಿಪಂ ಸಿಇಒ ಭೇಟಿ, ಪರಿಶೀಲನೆ



ಉದಯವಾಹಿನಿ ಚಿತ್ರ

• ಉದಯವಾಹಿನಿ ಕಮಲಾಪುರ

ಅಂಬಲಗಾ ಗ್ರಾಮ ವ್ಯಾಪ್ತಿಯ ಅಂಬಲಗಾ ತಾಂಡಾದಲ್ಲಿ ಕುಡಿಯುವ ನೀರು, ಶಾಲಾ ಕಾಂಪೌಂಡ್ ವಾಲಿಬಾಲ್ ಕ್ರೀಡಾಂಗಣ ಗ್ರಾಮಕ್ಕೆ ಬಸ್ಸಿನ ಸೌಕಾರ್ರ್ಯ ಮತ್ತಿತರ ಕಾಮಗಾರಿ ಗಳನ್ನು ಗ್ರಾಮಸ್ಥರ ಬೇಡಿಕೆ. ಕಲ್ಬುರ್ಗಿ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಭೇಟಿ ನೀಡಿ ಪರಿಶೀಲನೆ ಮಾಡಿದರು.

ಕಮಲಾಪುರ ತಾಲ್ಲೂಕಿನ ಅಂಬಲಗಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಂಬಲಗಾ ತಾಂಡಾಗೆ ಭೇಟಿ ನೀಡಿ ವಿವಿಧ ಕಾಮ ಗಾರಿಗಳ ಪರಿಶೀಲನೆ ನಂತರ ಮಾತನಾಡಿದ ಅವರು ಜಿಲ್ಲಾಧಿಕಾರಿ ಅವರ ಭೇಟಿ ನಂತರ ಖಾಸಗಿಯವರ ಬೊರವೆಲ್ ಮೂಲಕ ಅಗತ್ಯ ಕುಡಿಯುವ ನೀರು ಒದಗಿಸಲಾಗುತ್ತಿದೆಯೇ ಎಂದು ಸಾರ್ವಜನಿಕರಿಗೆ ಕೇಳಿದಾಗ ನೀರು ಒದಗಿಸಲಾಗುತ್ತಿದೆ ಎಂಬ ಉತ್ತರ ಬಂದಿತು.

ಮುಂಬರುವ ದಿನಗಳಲ್ಲಿ ಇನ್ನೂ ಹೆಚ್ಚಿನ ಅಭಿವೃದ್ಧಿ ಕಾರ್ಯಗಳು ಮಾಡುವಂತೆ ಗ್ರಾಪಂ ಅಧ್ಯಕ್ಷ ತಾಜುದ್ದಿನ್ ಪಟೇಲ್ ಅವರಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಕಮಲಾಪುರ ತಾಪಂ ಇ ಒ ನೀಲ ಗಂಗಾ ಬಬಲಾದ್, ಅಂಬಲಗಾ ಗ್ರಾಪಂ ಅಧ್ಯಕ್ಷ ತಾಜುದ್ದೀನ್ ಪಟೇಲ್ ಇತರರು ಇದ್ದರು.

### ಈ ಭಾಗದ ಯುವಕರು ಉದ್ಯಮಿಗಳಾಗಲು ಮತ್ತು ಉದ್ಯೋಗ ಸೃಷ್ಟಿಗೆ ಈ ಉಪಕ್ರಮವು ಸಹಾಯ ಮಾಡುತ್ತದೆ

## ಕಲಬುರಗಿ ಮುಂದಿನ ದೊಡ್ಡ ಐಟಿ ಹಬ್ ಆಗಿ ಹೊರಹೊಮ್ಮಲಿದೆ: ಡಿಸಿ

• ಉದಯವಾಹಿನಿ ಕಲಬುರಗಿ

ನಮ್ಮ ಕಲಬುರಗಿ ಜಿಲ್ಲೆ ರಾಜ್ಯದ ಮುಂದಿನ ದೊಡ್ಡ ಐಟಿ ಹಬ್ ಆಗಿ ಹೊರಹೊಮ್ಮಲಿದೆ, ಕರ್ನಾಟಕ ಸರ್ಕಾರ ಹಾಗೂ ನಗರದ ಪಿಡಿಎ ಕಾಲೇಜ್ ಆಫ್ ಇಂಜಿನಿಯರಿಂಗ್ ಸಹಭಾಗಿತ್ವದಲ್ಲಿ ಸ್ಥಳೀಯ ನವ ಉದ್ಯಮಿಗಳಿಗೆ ಪ್ರೋತ್ಸಾಹಿಸಲು ಮತ್ತು ಮಾರ್ಗದರ್ಶನ ನೀಡಲು ಸಹಾಯವಾಗುವಂತೆ ಕಾರ್ಯತಂತ್ರ ಕೇಂದ್ರ ಮತ್ತು ಸಾಫ್ಟ್ ವೇರ್ ಡೆವಲಪ್ಮೆಂಟ್ ಸೆಂಟರ್ ಅನ್ನು ಪ್ರಾರಂಭಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಅವರು ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಖಾಸಗಿ ಸಂಸ್ಥೆಗಳೊಂದಿಗೆ ಒಡಂಬಡಿಕೆಗೆ ಸಹಿ ಹಾಕಿ ಮಾತನಾಡಿದ ಜಿಲ್ಲಾಧಿಕಾರಿಗಳು ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ನಾವೀನ್ಯತೆ ಮತ್ತು ಉದ್ಯಮಶೀಲತೆಯ ಅಭಿವೃದ್ಧಿಗೆ ವೇಗ ನೀಡುವ ಮಹತ್ವದ ಕ್ರಮದಲ್ಲಿ, ಕರ್ನಾಟಕ ಸರ್ಕಾರವು ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ (ಕೆಡಿಇಎಂ) ಮೂಲಕ ಕಲಬುರಗಿಯಲ್ಲಿ ವಿಶ್ವ ದರ್ಜೆಯ ಇನ್ಕ್ಯುಬೇಶನ್ ಸೆಂಟರ್ ಮತ್ತು ಆಫ್ಶೋರ್ ಡೆವಲಪ್ಮೆಂಟ್ ಸೆಂಟರ್ (ಒಡಿಸಿ) ಪ್ರಾರಂಭಿಸುವುದಾಗಿ ಘೋಷಿಸಿದರು.

ಜಾಗತಿಕ ಮಟ್ಟದ ಇನ್ಕ್ಯುಬೇಶನ್ ಸೆಂಟರ್ ತೆರೆಯಲು ಕಲಬುರಗಿಯ ಜಿಲ್ಲಾಧಿಕಾರಿ ಕಚೇರಿ, ಕೆಡಿಇಎಂ ಮತ್ತು ಪಿಡಿಎ ಕಾಲೇಜ್ ಆಫ್ ಇಂಜಿನಿಯರಿಂಗ್ ನಡುವೆ ಒಡಂಬಡಿಕೆಯ ಮೂಲಕ ಇನ್ಕ್ಯುಬೇಷನ್ ಸೆಂಟರ್ ಅನ್ನು ಘೋಷಿಸಿ ಸಹಿ ಮಾಡಲಾಗಿದೆ. ಇದು ಸ್ಟಾರ್ಟ್ ಆ್ಯಪ್‌ಗಳನ್ನು ಪೋಷಿಸಲು, ಉದ್ಯಮಿಗಳನ್ನು ಬೆಂಬಲಿಸಲು ಮತ್ತು ತಂತ್ರಜ್ಞಾನಗಳಲ್ಲಿ ಉದಯೋನ್ಮುಖ

> ಕಲ್ಯಾಣ ಕರ್ನಾಟಕದ ಅಭಿವೃದ್ಧಿಗಾಗಿ ಪಿಡಿಎ ಕಾಲೇಜಿನಲ್ಲಿ ಇನ್ಕ್ಯುಬೇಷನ್ ಸೆಂಟರ್ ಸ್ಥಾಪಿಸಲು ಮುಂದಾಗಿರುವುದು ಮತ್ತು ಈ ಭಾಗದ ಯುವಕರು ಉದ್ಯಮಿಗಳಾಗಲು ಮತ್ತು ಉದ್ಯೋಗ ಸೃಷ್ಟಿಗೆ ಈ ಉಪಕ್ರಮವು ಅಪಾರವಾಗಿ ಸಹಾಯ ಮಾಡುತ್ತದೆ. ಇದು ಸ್ಥಳೀಯ ಪ್ರತಿಭೆಗಳನ್ನು ಉಳಿಸಿಕೊಳ್ಳಲು ಮತ್ತು ಈ ಭಾಗದ ಒಟ್ಟಾರೆ ಕೈಗಾರಿಕಾ ಬೆಳವಣಿಗೆಗೆ ಸಹಕಾರಿಯಾಗಿದೆ
>
> -ಶಶಿಲ್ ಜಿ ನಮೋಶಿ
>
> ಎಚ್ಕೆಇ ಸೊಸೈಟಿ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ

ಪ್ರತಿಭೆಗಳನ್ನು ಪ್ರೋತ್ಸಾಹಿಸಲು ಕಾರ್ಯತಂತ್ರದ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತದೆ. ಈ ಉಪಕ್ರಮವು ಕರ್ನಾಟಕ ಸರ್ಕಾರದ ಬಿಯಾಂಡ್ ಬೆಂಗಳೂರು ಮಿಷನ್ ಅನ್ನು ಬಲಪಡಿಸುತ್ತದೆ, ರಾಜ್ಯದ ಉದಯೋನ್ಮುಖ ನಗರಗಳು ಮತ್ತು ಪ್ರದೇಶಗಳಲ್ಲಿ, ವಿಶೇಷವಾಗಿ ಕಲ್ಯಾಣ ಕರ್ನಾಟಕದಲ್ಲಿ ದೃಢವಾದ ಡಿಜಿಟಲ್ ಮತ್ತು ಐಟಿ ಪರಿಸರ ವ್ಯವಸ್ಥೆಗಳನ್ನು ನಿರ್ಮಿಸುವ ಗುರಿಯನ್ನು ಹೊಂದಿದೆ ಎಂದರು.

ಮತ್ತೊಂದು ಒಡಂಬಡಿಕೆಯನ್ನು ಜಾಗತಿಕವಾಗಿ ಗುರುತಿಸಿಕೊಂಡಿರುವ ಅಮೇರಿಕಾ ದೇಶದ ಎಕ್ಸ್‌ಎಲ್ ಕಾರ್ಪ್ ಸಂಸ್ಥೆಯೊಂದಿಗೆ ಮಾಡಿಕೊಳ್ಳಲಾಗಿದ್ದು, ಈ ಸಂಸ್ಥೆಯು ಕಲಬುರಗಿಯಲ್ಲಿ ಹೊಸ ಕೇಂದ್ರವನ್ನು ಆರಂಭಿಸುತ್ತಿದ್ದು, ಇದರೊಂದಿಗೆ ಕರ್ನಾಟಕದ



ಉದಯವಾಹಿನಿ ಚಿತ್ರ

> ರಾಜ್ಯದ ಬೆಂಗಳೂರು ಕೇಂದ್ರಿತ ಅಭಿವೃದ್ಧಿಯನ್ನು ಹೊರ ಜಿಲ್ಲೆಗಳಾದ ಕಲಬುರಗಿ, ಹುಬ್ಬಳ್ಳಿ-ಧಾರವಾಡ, ಮೈಸೂರು ಮತ್ತು ಮಂಗಳೂರು ಸೇರಿದಂತೆ ಎರಡನೇ ಸಾಲಿನಲ್ಲಿರುವ ನಗರಗಳಲ್ಲಿ ಉದ್ಯಮಶೀಲತೆಯನ್ನು ಹೆಚ್ಚಿಸಲು ಮತ್ತು 5 ಲಕ್ಷ ಉದ್ಯೋಗಗಳನ್ನು ಸೃಷ್ಟಿಸಲು 1,000 ಕೋಟಿ ಅನುದಾನ ಈ ಸಾಲಿನಲ್ಲಿ ರಾಜ್ಯ ಸರ್ಕಾರ ಮೀಸಲಿರಿಸದೆ -ಡಿಸಿ

ಅದರಲ್ಲೂ ಕಲ್ಯಾಣ ಕರ್ನಾಟಕದಲ್ಲಿ ಆರ್‌ಎನ್‌ಡಿ ಹೆಜ್ಜೆ ಗುರುತುಗಳನ್ನು ವಿಸ್ತರಿಸುತ್ತದೆ.

2003ರಿಂದ ಸಾಫ್ಟ್‌ವೇರ್ ಆವಿಷ್ಕಾರದಲ್ಲಿ ಜಾಗತಿಕ ನಾಯಕ, ಭಾರತದಲ್ಲಿ ತನ್ನ ಸಂಶೋಧನೆ ಮತ್ತು ಅಭಿವೃದ್ಧಿ (ಆರ್‌ಎನ್‌ಡಿ) ಕಾರ್ಯಾಚರಣೆಗಳ ಪ್ರಮುಖ ವಿಸ್ತರಣೆಯನ್ನು ಘೋಷಿಸಿದೆ. ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ (ಎಐ), ಜನರೇಟಿವ್ ಅಲ್, ಕ್ವಾಂಟಮ್ ಕಂಪ್ಯೂಟಿಂಗ್, ಡಿಜಿಟಲ್ ಟ್ರಾನ್ಸ್‌ಫರ್ಮೇಷನ್, ಎಂಬೆಡೆಡ್ ಸಿಸ್ಟಮ್ಸ್ ಮತ್ತು ಇಂಟರ್ನೆಟ್ ಆಫ್ ಥಿಂಗ್ಸ್ ನಂತಹ ಅತ್ಯಾಧುನಿಕ ತಂತ್ರಜ್ಞಾನಗಳ ಮೇಲೆ ಕಾರ್ಯತಂತ್ರದ ಗಮನವನ್ನು ಹೊಂದಿರುವ

> ಕರ್ನಾಟಕದ ಐಟಿ ಕ್ಷೇತ್ರವನ್ನು ಬಲಪಡಿಸುವಲ್ಲಿ ಈ ತರಹದ ಒಡಂಬಡಿಕೆಗಳ ಪಾತ್ರ ಮುಖ್ಯವಾಗುತ್ತದೆ. ಕಲಬುರಗಿಯು ರಾಜ್ಯದ ಪ್ರಮುಖ ತಂತ್ರಜ್ಞಾನ ಕೇಂದ್ರವಾಗಿ ಹೊರಹೊಮ್ಮಲು ಅಪಾರ ಸಾಮರ್ಥ್ಯವನ್ನು ಹೊಂದಿದೆ. ಈ ಉಪಕ್ರಮದ ಮೂಲಕ, ನಾವು ಸ್ಟಾರ್ಟ್ ಆ್ಯಪ್‌ಗಳು ಮತ್ತು ಉದ್ಯಮಿಗಳಿಗೆ ಅಗತ್ಯವಾದ ಸಂಪನ್ಮೂಲಗಳನ್ನು ಒದಗಿಸುವ ಗುರಿಯನ್ನು ಹೊಂದಿದ್ದೇವೆ
>
> -ಸಂಜೀವ್ ಕುಮಾರ್ ಗುಪ್ತಾ,
>
> ಕೆಡಿಇಎಂನ ಸಿಇಒ

ಕಂಪನಿಯು ಕಲಬುರಗಿಯಲ್ಲಿ ಹೊಸ ಕೇಂದ್ರವನ್ನು ಪ್ರಾರಂಭಿಸುವ ಮೂಲಕ ಉತ್ತರ ಕರ್ನಾಟಕದಲ್ಲಿ ತನ್ನ ಅಸ್ತಿತ್ವವನ್ನು ಬಲಪಡಿಸುತ್ತಿದೆ. ನ್ಯೂಜೆರ್ಸಿಯಲ್ಲಿ ಪ್ರಧಾನ ಕಚೇರಿಯನ್ನು ಹೊಂದಿರುವ ಎಕ್ಸ್‌ಎಲ್ ಕಾರ್ಪ್ ಈಗಾಗಲೇ ಬೆಂಗಳೂರು, ಚೆನ್ನೈ, ಬೆಳಗಾವಿ, ಮತ್ತು ಹುಬ್ಬಳ್ಳಿ/ಧಾರವಾಡದಾದ್ಯಂತ ಸುಧಾರಿತ ಆರ್‌ಎನ್‌ಡಿ ಹಬ್‌ಗಳನ್ನು ನಿರ್ವಹಿಸುತ್ತಿದೆ. ಕಲಬುರಗಿ ಕೇಂದ್ರದ ಸೇರ್ಪಡೆಯು ಭಾರತದ ಬೆಳೆಯುತ್ತಿರುವ ಟೆಕ್ ಪರಿಸರ ವ್ಯವಸ್ಥೆಯನ್ನು ಬೆಂಬಲಿಸುವಲ್ಲಿ ಮಹತ್ವದ ಹೆಜ್ಜೆಯನ್ನು ಗುರುತಿಸುತ್ತದೆ ಮತ್ತು ಶ್ರೇಣಿ -2 ನಗರಗಳಲ್ಲಿ ಹೆಚ್ಚಿನ ಕೌಶಲ್ಯದ ಉದ್ಯೋಗಗಳನ್ನು ಸೃಷ್ಟಿಸುತ್ತದೆ.

ಎಕ್ಸ್‌ಎಲ್ ಕಾರ್ಪ್‌ನ ಮಿಷನ್ನ ಒಂದು ಅವಿಭಾಜ್ಯ ಅಂಗವೆಂದರೆ ನ್ಯೂಯಾರ್ಕ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್ ಅಂಡ್ ಟೆಕ್ನಾಲಜಿ, ಇಂಜಿನಿಯರಿಂಗ್ ಪದವೀಧರರು ಮತ್ತು ಕೆಲಸ ಮಾಡುವ ವೃತ್ತಿಪರರಿಗೆ ಉದ್ಯಮ-ಸಿದ್ಧ ತರಬೇತಿ ಮತ್ತು ಖಾತರಿಯ ಉದ್ಯೋಗ ನಿಯೋಜನೆಯನ್ನು ನೀಡುವ ಅಂಗಸಂಸ್ಥೆಯಾಗಿದೆ. ಈ ಉಪಕ್ರಮವು ಶಿಕ್ಷಣ ಮತ್ತು ಉದ್ಯಮದ ನಡುವಿನ ಅಂತರವನ್ನು ಕಡಿಮೆ ಮಾಡುತ್ತದೆ.

ಜಿಲ್ಲೆಯ ಬೆಳವಣಿಗೆಗೆ ಸಧಾ ಕ್ರಿಯಾಶೀಲರಾಗಿ ದುಡಿಯುತ್ತಿರುವ ಐಟಿ-ಬಿಟಿ ಮತ್ತು ಆರ್ ಡಿ ಪಿಆರ್ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಕೊಡುಗೆ ಈ ಒಡಂಬಡಿಕೆಯಲ್ಲಿ ಪ್ರಮುಖ ಪಾತ್ರವಹಿಸುತ್ತದೆ. ಅವರ ಕನಸಿನಂತೆ ಕಲಬುರಗಿಯು ಕರ್ನಾಟಕದ ಭವಿಷ್ಯದ ಬೆಳವಣಿಗೆಯ ಕಥೆಯ ಪ್ರಮುಖ ಭಾಗವಾಗಿದೆ.

ಎಕ್ಸ್ಇಎಲ್ ಕಾರ್ಪೊರೇಷನ್ನ ಇನ್ಕ್ಯುಬೇಷನ್ ಸೆಂಟರ್ ಮತ್ತು ಸಾಫ್ಟ್‌ವೇರ್ ಅಭಿವೃದ್ಧಿ ಕೇಂದ್ರದೊಂದಿಗೆ ನಾವು ಸ್ಥಳೀಯ ಯುವಜನತೆಯ ಸಬಲೀಕರಣಕ್ಕೆ ಅಡಿಪಾಯ ಹಾಕುತ್ತಿದ್ದೇವೆ. ಜಾಗತಿಕ ಅವಕಾಶಗಳು ಮತ್ತು ಈ ಕ್ರಿಯಾತ್ಮಕ ಪ್ರದೇಶದಲ್ಲಿ ಹೂಡಿಕೆ ಮಾಡಲು ದೇಶೀಯ ಮತ್ತು ಅಂತರರಾಷ್ಟ್ರೀಯ ಕಂಪನಿಗಳನ್ನು ಆಹ್ವಾನಿಸಿ ಸಾಧ್ಯವಿರುವ ಎಲ್ಲಾ ಬೆಂಬಲವನ್ನು ನೀಡಲು ಜಿಲ್ಲಾಡಳಿತ ಸಿದ್ಧವಾಗಿದೆ ಎಂದರು.

## ನರೇಗಾ ಕೂಲಿಕಾರ್ಮಿಕರಿಗೆ ಉಚಿತ ಆರೋಗ್ಯ ತಪಾಸಣೆ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಗಾರಂಪಳ್ಳಿ ಗ್ರಾಮ ಪಂಚಾಯತನಲ್ಲಿ ರಾಷ್ಟ್ರಿಯ ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಯಡಿಯಲ್ಲಿ ಕೆಲಸ ಮಾಡುವ ಕೂಲಿ ಕಾರ್ಮಿಕರಿಗೆ ಆರೋಗ್ಯವಂತರಾಗಿ ಇರಲಿ ಉಚಿತ ಆರೋಗ್ಯ ತಪಾಸಣೆ ಮಾಡಲಾಯಿತು ಎಂದು ತಾಲ್ಲೂಕಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶಂಕರ ರಾಠೋಡ್ ಹೇಳಿದರು. ತಾಲ್ಲೂಕಿನ ಗಾರಂಪಳ್ಳಿ ಗ್ರಾಮ ಪಂ. ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿಯಲ್ಲಿ ನಾಲಾ ಹೂಳೆತ್ತುವ ಕಾಮಗಾರಿ ನಡೆಯುವ ಸ್ಥಳಕ್ಕೆ ಭೇಟಿ ನೀಡಿ ವಿಕ್ಷಣೆ ಮಾಡಿದ ಅವರು, ಗ್ರಾಮಕ್ಕೆ ಭೇಟಿ ನೀಡಿ ಮಾತನಾಡಿದ ಅವರು, ನರೇಗಾದಲ್ಲಿ ಕೆಲಸ ಮಾಡುವ ಕೂಲಿ ಕಾರ್ಮಿಕರು ಆರೋಗ್ಯವಂತರಾಗಿ ಇರಲು ಆರೋಗ್ಯ ಇಲಾಖೆ ವತಿಯಿಂದ ತಪಾಸಣೆ ಮಾಡಿಸಲಾಯಿತು.

ಉದ್ಯೋಗ ಖಾತ್ರಿ ಯೋಜನೆಯಲ್ಲಿ ಕೆಲಸ ಮಾಡುವವರಿಗೆ ಈಗಾಗಲೇ ಸರ್ಕಾರ 21ರೂ.ಹೆಚ್ಚಳ ಮಾಡಿದ್ದು 370ರೂ. ಕೂಲಿ ಇರಲಿದೆ,ತಾವು ಒಳ್ಳೆಯ ರೀತಿಯಿಂದ ಕೆಲಸ ಮಾಡಿ



ಉದಯವಾಹಿನಿ ಚಿತ್ರ

ಯಾವುದೇ ದುಶ್ಚಟಗಳಿಗೆ ಬಲಿಯಾಗದೆ ಆರೋಗ್ಯವಾಗಿ ಸದೃಢವಾಗಿ ಇರುಬಹುದು ಯಾವುದೇ ಬಿಪಿ ಶೂಗರ್ ಇದ್ದರೆ ಪ್ರಥಮ ಚಿಕಿತ್ಸೆ ದೊರಕಲಿದೆ. ಸದಾಕಾಲ ನಿಮ್ಮೊಂದಿಗೆ ಗ್ರಾಪಂ ಅಧ್ಯಕ್ಷರು ಸದಸ್ಯರು ಮತ್ತು ಅಧಿಕಾರಿಗಳು ಇರುತ್ತಾರೆ ತಮಗೆ ಯಾವುದೇ ತೊಂದರೆ ಇದ್ದರೆ ನಮ್ಮ ಗಮನಕ್ಕೆ ತನ್ನಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ನರೇಗಾ ಎಡಿ ನಾಗೇಂದ್ರಪ್ಪಾ, ಗ್ರಾಪಂ. ಅಧ್ಯಕ್ಷ ಪವನಕುಮಾರ ಪಾಟೀಲ,ಮೋಹನ್ ಗುತ್ತೇದಾರ,ಹಣಮಂತ ಭೋವಿ,ಪಿಡಿಓ ವಾಹೇದ್ ಅಲಿ,ತಾಪಂ.ಡಿಇಓ ಜಗನ್ನಾಥ,ಗ್ರಾಮ ಕಾಯಕ ಮಿತ್ರ ಯಾಸ್ಮೀನ್,ಕ್ಷೇತ್ರ ಸಹಾಯಕ ಶ್ರೀಧರ ವಗ್ಗಿ ಇದ್ದರು.

## ಭಾರತ ಭಾವೈಕ್ಯತೆಗೆ ತವರು

• ಉದಯವಾಹಿನಿ ಸೇಡಂ

ಹಿಂದೂ ಮುಸ್ಲಿಂ ಕ್ರೈಸ್ತ ಜೈನ ಸಿಖ್ ಬ್ರಾಹ್ಮಣ ಧರ್ಮಗಳು ರಂಜಾನ್, ಜಾತ್ರಾ, ಮಹೋತ್ಸವಗಳಲ್ಲಿ ಹಳ್ಳಿಗಳಲ್ಲಿನ ಒಗ್ಗಟ್ಟಿನಿಂದ ಇರುವುದರಿಂದಲೇ ಭಾರತ ಭಾವೈಕ್ಯತೆಗೆ ತವರು ಎಂದು ಯುವ ಉದ್ಯಮಿ ಕ್ರಿಕೆಟ್ ಪ್ರೇಮಿ ಯುವಕರ ಕಣ್ಮಣಿ ಅಬ್ದುಲ್ ಹಫೀಜ್ ಆರ್ ರಂಜೋಳ್ ಹೇಳಿದರು.

ತಾಲ್ಲೂಕಿನ ಸಂಗಾವಿ.ಟಿ ಗ್ರಾಮದಲ್ಲಿ ಶ್ರೀ ಸಂಗಮೇಶ್ವರ ಜಾತ್ರಾ, ಮಹೋತ್ಸವದ ಪ್ರಯುಕ್ತ ಸಿಪಿಎಲ್ ಸೀಸನ್ 2 ಕ್ರಿಕೆಟ್ ಪಂದ್ಯಾವಳಿಯಲ್ಲಿ ಫೈನಲ್(15212 ರೂಪಾಯಿ) ಹಾಗೂ ರನ್ನರ್ ಆಪ್ (10212 ರೂಪಾಯಿ) ತಂಡಕ್ಕೆ ಟ್ರೋಫಿ ಹಾಗೂ ಚೆಕ್ ನೀಡಿ ಅಭಿನಂದಿಸಿ ಮಾತನಾಡಿದ ಅವರು ಕ್ರೀಡೆ ಅಂದರೆ ಸೋಲು ಗೆಲುವು ಸಹಜ , ಸೋಲು ಕಂಡ ತಂಡಗಳು ಮುಂಬರುವ ದಿನಗಳಲ್ಲಿ ಗೆಲುವಿಗಾಗಿ ಹೆಚ್ಚಿನ ಪ್ರಯತ್ನ ಮಾಡಿ ಗೆಲುವು ಸಿಕ್ಕೆ ಸಿಗುತ್ತದೆ ಎಂದು ಯುವಕರಿಗೆ ಕಿವಿಮಾತು ಹೇಳಿದರು. ಗುರುನಾಥ್ ರೆಡ್ಡಿ ಪಾಟೀಲ್, ಅಭಿಷೇಕ್ ದೇಶಮುಖ್, ಹಾಬಳ.ಟಿ, ಶರಣಬಸವರೆಡ್ಡಿ ಪಾಟೀಲ್, ತೆಲ್ಕೂರ , ಸತೀಶ್ ಪೂಜಾರಿ, ಬಸವಂತ್ ರೆಡ್ಡಿ ಇದ್ದರು.

## ಗುರುನಂಜೇಶ್ವರ ಶಿವಯೋಗಿಗಳು ಭಕ್ತರ ಪಾಲಿನ ದೇವರು

• ಉದಯವಾಹಿನಿ ಕಾಳಗಿ

ಪುರಾತನ ಕಾಲದಿಂದಲೂ ವೀರಶೈವ ಮಠಗಳು ಜಾತಿ, ಭೇದ ಎಣಿಸದೆ ಸರ್ವ ಜನಾಂಗದವರಿಗೂ ಅಕ್ಷರ, ಅನ್ನ, ಮತ್ತು ವಸತಿ ನೀಡುತ್ತ ಬಂದಿವೆ.

ಸಮಾಜದ ಅಭಿವೃದ್ಧಿಗೆ ವೀರಶೈವ ಮಠಗಳ ಕೊಡುಗೆ ಅಪಾರವಾಗಿದೆ ಎಂದು ಶ್ರೀಶೈಲ ಪೀಠದ ಜಗದ್ಗುರು ಡಾ. ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ತಾಲ್ಲೂಕಿನ ಭರತನೂರಿನ ವಿರಕ್ತ ಮಠದ ಮಹಾ ತಪಸ್ವಿ ದಾಸೋಹ ಮೂರ್ತಿ ಲಿಂ. ಪೂಜ್ಯ ಗುರು ನಂಜೇಶ್ವರ ಮಹಾಶಿವಯೋಗಿಗಳವರ 31ನೇ ಪುಣ್ಯ ಸ್ಮರಣೋತ್ಸವ ಹಾಗೂ ಪೂಜ್ಯ ಚಿಕ್ಕಗುರುನಂಜೇಶ್ವರ ಮಹಾಸ್ವಾಮಿಗಳ ನಿರಂಜನ ಚರ ಪಟ್ಟಾಧಿಕಾರದ 25ನೇ ರಜತ್ ಮಹೋತ್ಸವ ಸಮಾರಂಭವನ್ನು ಉದ್ಘಾಟಿಸಿ ಆಶೀರ್ವಚನ ನೀಡಿದರು. ಪಂಚಪೀಠ ಮತ್ತು ವಿರಕ್ತ ಪೀಠಗಳ ಮಧ್ಯೆ ಯಾವುದೇ ಮತ ಭೇದ ಭಾವವಿಲ್ಲ, ಭಕ್ತ ಸಮೂಹಕ್ಕೆ ಒಳಿತಾಗಬೇಕೆಂಬುದೆ



ಉದಯವಾಹಿನಿ ಚಿತ್ರ

ಆಶಯವಾಗಿದೆ. ಆದರೆ ಕೆಲವರು ಕಂದಕ ಸೃಷ್ಟಿ ಮಾಡುತ್ತಿರುವುದು ಸರಿಯಲ್ಲ, ಪಂಚಪೀಠ ಮತ್ತು ಗುರು ವಿರಕ್ತ ಪೀಠಗಳು ವೀರಶೈವ ಸಮಾಜದ ಎರಡು ಕಣ್ಣುಗಳಿದ್ದಂತೆ, ಭಕ್ತರಿಂದಲೇ ಮಠಮಾನ್ಯಗಳು, ಪೀಠಗಳು ಬೆಳೆಯಲು ಸಾಧ್ಯ ಎಂದು ಹೇಳಿದರು.

ಭರತನೂರಿನ ಲಿಂ. ಪೂಜ್ಯ ಗುರುನಂಜೇಶ್ವರರು ಮಹಾನ ತಪಸ್ವಿಗಳಾಗಿ ಅನೇಕ ಪವಾಡಗಳನ್ನು ಮಾಡಿದ್ದಾರೆ. ನೊಂದು ಬೆಂದವರಿಗೆ, ಬೇಡಿ ಬಂದ ಭಕ್ತರ ಇಷ್ಟಾರ್ಥಗಳನ್ನು ಈಡೇರಿಸಿ ಭಕ್ತರ ಬಾಳಿಗೆ ಬೆಳಕಾಗಿದ್ದರು. ಪೂಜ್ಯ ಚಿಕ್ಕಗುರುನಂಜೇಶ್ವರ ಮಹಾ ಸ್ವಾಮಿಗಳು ಜಾತಿ, ಕುಲ ಭೇಧ ಭಾವ ಮಾಡದೆ ಸರ್ವ

> ಗದಗ ವೀರೇಶ್ವರ ಪುಣ್ಯಾಶ್ರಮದ ಪೂಜ್ಯ ಡಾ. ಕಲ್ಲಯ್ಯಜ್ಜನವರು ಆಶೀರ್ವಚನ ನೀಡಿ, ಮಕ್ಕಳಲ್ಲಿ ಸಂಸ್ಕಾರದ ಕೊರತೆಯಿಂದಾಗಿ ವೃದ್ಧಾಶ್ರಮಗಳು ಹೆಚ್ಚುತ್ತಿವೆ. ಪಾಲಕರು ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಿದರೆ ಸಾಲದು. ಜೀವನ ಮೌಲ್ಯಗಳನ್ನು ಬಿತ್ತಬೇಕು. ಪಾಲಕರು ಮಕ್ಕಳಿಗೆ ಉತ್ತಮ ಸಂಸ್ಕಾರ, ಸಂಸ್ಕೃತಿ ನೀಡಬೇಕು, ಮಕ್ಕಳಿಗೆ ಮೊಬೈಲ ಕೊಡಿಸುವ ಬದಲು ಒಳ್ಳೆಯ ಪುಸ್ತಕ ಕೊಡಿಸಿ ಮಸ್ತಕ ಓದುವ ಹವ್ಯಾಸ ಬೆಳೆಸಬೇಕು ಎಂದರು.

ಜನಾಂಗದವರಿಗೂ ಅಕ್ಷರ, ಅನ್ನ, ಮತ್ತು ಜ್ಞಾನ ನೀಡುವುದರ ಮೂಲಕ ತ್ರಿವಿಧ ದಾಸೋಹಿಗಳಾಗಿ, ಸಾಮಾಜಿಕ, ಆಧ್ಯಾತ್ಮಿಕ, ಮಾನವೀಯ ಮೌಲ್ಯಗಳನ್ನು ಭೋದಿಸುವ ಕಾರ್ಯವನ್ನು ಮಾಡುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

## ಗುಣಮಟ್ಟದ ರಸ್ತೆಗಳೇ ಕ್ಷೇತ್ರದ ಅಭಿವೃದ್ಧಿಯ ಕಿರೀಟ

• ಉದಯವಾಹಿನಿ ಕೂಡ್ಲಿಗಿ

ಅನ್ನ ಬೆಂದಿದೆ ಎನ್ನುವುದಕ್ಕೆ ಒಂದೆರಡು ಅಗಳು ಪರೀಕ್ಷೆ ಮಾಡಿದರೆ ಗೊತ್ತಾಗುತ್ತದೆ ಅದರಂತೆ ಕ್ಷೇತ್ರದ ಅಭಿವೃದ್ಧಿ ಯಾಗುತ್ತದೆ ಎನ್ನುವುದಕ್ಕೆ ಕ್ಷೇತ್ರದಲ್ಲಿ ನಿರ್ಮಾಣವಾಗುತ್ತಿರುವ ಗುಣಮಟ್ಟದ ರಸ್ತೆಗಳೇ ಕ್ಷೇತ್ರದ ಅಭಿವೃದ್ಧಿ ಕಿರೀಟದಂತೆ ಕಾಣುತ್ತದೆ ಎಂದು ಕೂಡ್ಲಿಗಿ ಶಾಸಕ ಡಾ ಶ್ರೀನಿವಾಸ ಕ್ಷೇತ್ರದ ಅಭಿವೃದ್ಧಿ ಪಥದಲ್ಲಿ ಸಾಗುವುದಕ್ಕೆ ಜನರ ಸಹಕಾರ ಮುಖ್ಯವಾಗಿದೆ ಎಂದು ಸಂತಸದ ನುಡಿ ನುಡಿದರು.

ಅವರು ತಾಲ್ಲೂಕಿನ ಕೆ.ರಾಯಾಪುರ ಗ್ರಾಮದಲ್ಲಿ 2024-25ನೇ ಸಾಲಿನ ಕಲ್ಯಾಣ ಪಥ ಯೋಜನೆಯಡಿ 6 ಕೋಟಿ ರೂ.ಗೂ ಅಧಿಕ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಮಂಗಳವಾರ ಭೂಮಿಪೂಜೆ ನೆರವೇರಿಸಿ ಮಾತನಾಡುತ್ತಾ

ಯಾವುದೇ ದೇಶದ ಅಭಿವೃದ್ಧಿಯನ್ನು ಅಲ್ಲಿನ ರಸ್ತೆಗಳ ಮೇಲೆ ಅಳೆಯಲಾಗುತ್ತಿದೆ. ಹಾಗಾಗಿ, ಕ್ಷೇತ್ರದಲ್ಲಿ ಗುಣಮಟ್ಟದ ರಸ್ತೆಗಳೇ



ಉದಯವಾಹಿನಿ ಚಿತ್ರ

ಅಭಿವೃದ್ಧಿಗೆ ರಹದಾರಿ ಎಂಬುದನ್ನು ಅರಿತು ಕ್ಷೇತ್ರದ ನಾನಾ ಭಾಗದಲ್ಲಿ 18 ಕೋಟಿ ರೂ.ಗೂ ಹೆಚ್ಚಿನ ಅನುದಾನದಲ್ಲಿ ಕಾಮಗಾರಿ ಕೈಗೊಳ್ಳಲಾಗಿದೆ. ಕ್ಷೇತ್ರದ ಜನರ ಸಹಕಾರ, ಪ್ರೋತ್ಸಾಹವೇ ಮುಖ್ಯವಾಗಿದ್ದು, ಯಾವ ಭಾಗಕ್ಕೂ ತಾರತಮ್ಯವಾಗದಂತೆ ಸರ್ವತೋಮುಖ ಅಭಿವೃದ್ಧಿ ಮಾಡುವುದು ನನ್ನ ಗುರಿಯಾಗಿದೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಎಕ್ಕುಂಬಿ -ಮೊಳಕಾಲ್ಲೂರು ರಾಜ್ಯ ಹೆದ್ದಾರಿ -2ರ ಶ್ರೀಕಂಠಾಪುರ ತಾಂಡಾ, ರಾಮದುರ್ಗ, ಹಾಗೂ ಶ್ರೀಕಂಠಾಪುರ ಬಳಿ, ಹುರುಡಿಹಳ್ಳಿಯಿಂದ ಗುಡೇಕೋಟೆ- ಹಾನಗಲ್

> ಹಳ್ಳಿಗಳ ಸಂಪರ್ಕ ರಸ್ತೆಗಳು ಉತ್ತಮವಾಗಿದ್ದರೆ ಬೇರೆ ಜಿಲ್ಲೆ ರಾಜ್ಯಗಳಿಂದ ವ್ಯಾಪಾರ, ವಹಿವಾಟು ನಡೆಯುವುದಕ್ಕೆ ಅನುಕೂಲವಾಗಲಿದೆ. ಕಲ್ಯಾಣ ಪಥ ಯೋಜನೆಯಲ್ಲಿ ಕೈಗೊಂಡ ಕಾಮಗಾರಿಗಳು 5 ವರ್ಷಗಳ ನಿರ್ವಹಣೆ ಇರಲಿವೆ. ಅಲ್ಲದೆ, 6ನೇ ವರ್ಷದಲ್ಲಿ ಮತ್ತೊಮ್ಮೆ ಡಾಂಬರೀಕರಣ ಮಾಡಲಾಗುವುದು. ಹೀಗೆ, ಗುಣಮಟ್ಟದ ರಸ್ತೆಗಳು ಕ್ಷೇತ್ರದ ಎಲ್ಲಾ ಭಾಗದಲ್ಲೂ ಕೈಗೊಳ್ಳುವುದು ನನ್ನ ಸಂಕಲ್ಪವಾಗಿದೆ -ಡಾ ಶ್ರೀನಿವಾಸ

ರಾಜ್ಯ ಹೆದ್ದಾರಿ ವಿಸ್ತರಣೆ ಹಾಗೂ ಅಭಿವೃದ್ಧಿ, ಕಕ್ಕುಪ್ಪಿ ವಿರುಪಾಪುರ ರಸ್ತೆಯಿಂದ ಅಡವಿ ಸೂರವ್ವನಹಳ್ಳಿವರೆಗೆ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

## ಕೌಶಲ್ಯಾಧಾರಿತ ಕೋರ್ಸುಗಳಿಂದ ಉದ್ಯೋಗಸೃಷ್ಠಿ : ಪ್ರೊ.ಎಂ. ಮುನಿರಾಜು

• ಉದಯವಾಹಿನಿ ಬಳ್ಳಾರಿ

ವಿದ್ಯಾರ್ಥಿಗಳು ಕೌಶಲ್ಯಾಧಾರಿತ ಕೋರ್ಸುಗಳನ್ನು ಕಲಿತಲ್ಲಿ ಭವಿಷ್ಯದಲ್ಲಿ ಅವು ಉದ್ಯೋಗ ಸೃಷ್ಟಿಸುತ್ತವೆ ಎಂದು ಶ್ರೀ ಕೃಷ್ಣದೇವರಾಯ ವಿಶ್ವ ವಿದ್ಯಾಲಯದ ಕುಲಪತಿ ಪ್ರೊ.ಎಂ. ಮುನಿರಾಜು ಅವರು ಹೇಳಿದರು.

ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ ಹಾಗೂ ಗಾಲಿ ರುಕ್ಮಣಮ್ಮ ಚೆಂಗಾರೆಡ್ಡಿ ಸ್ಮಾರಕ ಸರ್ಕಾರಿ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ ಕಾಲೇಜು ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸವಣ್ಣ ಎಂಬ ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳು ಇನ್ಫೋಸಿಸ್‌ನ ನಾರಾಯಣ ಮೂರ್ತಿ, ಸುಧಾಮೂರ್ತಿ, ಅಂಬಾನಿ, ಅದಾನಿ ಇನ್ನು ಮುಂತಾದ ಸಾಧನೆಗೈದ ವ್ಯಕ್ತಿಗಳ ಬಗ್ಗೆ ತಿಳಿದುಕೊಳ್ಳಬೇಕು. ಮುಂಬರುವ ದಿನಗಳಲ್ಲಿ ಕೌಶಲ್ಯಾಧಾರಿತ ಕೋರ್ಸ್‌ಗಳನ್ನು ವಿಶ್ವವಿದ್ಯಾಲಯದಲ್ಲಿ ಪ್ರಾರಂಭಿಸಲಾಗುವುದು ಎಂದರು. ಖ್ಯಾತ ಸಾಹಿತಿಯಾದ ಪ್ರೊ. ಎಸ್.ಜಿ ಸಿದ್ದರಾಮಯ್ಯ ಅವರು ಮಾತನಾಡಿ, ದೇಶವು ಸಾಂಪ್ರದಾಯಿಕ ಗುಲಾಮಗಿರಿಯಿಂದ ಮುಕ್ತವಾದರೆ ಮಾತ್ರ ಸಂಪೂರ್ಣ ಸ್ವಾತಂತ್ರ್ಯ ಹೊಂದಬಹುದು ಎಂದು ಹೇಳಿದರು.

## ಗ್ರಾಮಕ್ಕೆ ನೀರು ಪೂರೈಸಲು ಒತ್ತಾಯ

• ಉದಯವಾಹಿನಿ ವಿಜಯಪುರ

ವಿಜಯಪುರ ಜಿಲ್ಲೆಯ 2ನೇ ಅತಿ ದೊಡ್ಡ ಕೆರೆಯಾದ ಜಂಬಗಿ, ಆಹೇರಿ ಗ್ರಾಮದ ಕೆರೆಗೆ ನೀರು ತುಂಬಿಸಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಒತ್ತಾಯಿಸಿ ತಹಶೀಲ್ದಾರ ಅವರಿಗೆ ಮನವಿ ಸಲ್ಲಿಸಲಾಯಿತು.

ತಾಲ್ಲೂಕಾಧ್ಯಕ್ಷ ಮಹಾದೇವಪ್ಪ ಶಿ. ತೇಲಿ ಮಾತನಾಡಿ, ವಿಜಯಪುರ ಜಿಲ್ಲೆಯ ಜಂಬಗಿ-ಆಹೇರಿ ಗ್ರಾಮದ ಜಿಲ್ಲೆಯ 2ನೇ ಅತಿ ದೊಡ್ಡ ಕೆರೆಯಾಗಿದ್ದು, ಇದನ್ನು ಸಂಪೂರ್ಣ ತುಂಬಿಸಬೇಕು ಹಾಗೂ ಅಕ್ರಮವಾಗಿ ನೀರು ಪೋಲ್ ಆಗುವುದನ್ನು ತಡೆಗಟ್ಟಿ ಕೆರೆ ತುಂಬಿಸುವ ಕಾರ್ಯ ಆಗಬೇಕು. ಅಂಕಲಗಿ, ಜಂಬಗಿ, ಆಹೇರಿ, ಹೊನ್ನಳ್ಳಿ, ಹುಣಶ್ಯಾಳ ಮತ್ತು ನಾಗಠಾಣ ಈ ಭಾಗದ ಎಲ್ಲಾ ರೈತರಿಗೆ, ಜನ-ಜಾನುವಾರುಗಳಿಗೆ ಕುಡಿಯುವ ನೀರು ಅವಶ್ಯಕವಾಗಿದ್ದು, ಜಲ ಮೂಲಗಳಿಗೆ ನೀರು ವೃದ್ಧಿಯಾಗಬೇಕು. 2025 ನೇ ಸಾಲಿನ 2 ತಿಂಗಳ ಹಿಂದೆ ಕೆರೆಗೆ ಬಿಟ್ಟದ್ದ ನೀರು ಕೆರೆಗೆ ಬಂದಿರುವುದಿಲ್ಲ ಅರ್ಧದಲ್ಲೇ



ಉದಯವಾಹಿನಿ ಚಿತ್ರ

ನೀರು ಪೋಲ್ ಆಗಿದ್ದು, ಕೆರೆಗೆ ತಲುಪಿರುವುದಿಲ್ಲ. ಆದ ಕಾರಣ ನೀರು ಪೋಲಾಗುವುದನ್ನು ತಡೆಗಟ್ಟಿ ಈ ವರ್ಷ ಬಿಸಿಲಿನ ಬೇಗೆ ಹೆಚ್ಚಾಗಿದ್ದು, ಇಲ್ಲಿಯವರೆಗೆ ಕೆರೆಗೆ ನೀರು ಹರಿಸಿರುವುದಿಲ್ಲ, ತಕ್ಷಣ ನೀರಿನ ಆಹಾಕಾರವನ್ನು ತನ್ನಿಸಬೇಕೆಂದು ಸಂಬಂದಿಸಿದ ಅಧಿಕಾರಿಗಳಿಗೆ ಸೂಚಿಸಿ ಕೆರೆ ತುಂಬಿಸಬೇಕೆಂದು ಒತ್ತಾಯಿಸಿದರು. ರಾಜೇಸಾ ನದಾಫ್, ಅಂಕಲಗಿ ಗ್ರಾಮ ಘಟಕದ ಖಜಾಂಚಿ ನಜೀರ ನದಾಫ್, ತಾಲ್ಲೂಕ ಸಮೂಹ ಮಾದ್ಯಮ ಪ್ರತಿನಿಧಿ ಜಯಸಿಂಗ ರಜಪೂತ, ತೌಸೀಫ್ ಎಲ್. ಮುಲ್ಲಾ, ಟಿ.ಎಲ್. ಮುಲ್ಲಾ, ಸಂತೋಷ ಛಲವಾದಿ, ರಫೀಕ ನದಾಫ್, ಹಣಮಂತ ಮುಂತಾದವರು ಇದ್ದರು.

### ತಾಲ್ಲೂಕಿನಲ್ಲಿರುವ ಕನ್ನಡ ಭವನ ಚಿಕ್ಕದಾಗಿದ್ದು, ಕನ್ನಡ ಚಟುವಟಿಕೆಗಳನ್ನು ನಡೆಸಲು ಅನಾನುಕೂಲವಾಗುತ್ತಿದೆ

## ಔರಾದ-ಕಮಲನಗರದಲ್ಲಿ ನೂತನ ಕನ್ನಡ ಭವನ: ಪ್ರಭು ಚವ್ಹಾಣ

• ಉದಯವಾಹಿನಿ ಔರಾದ

ತಾಲ್ಲೂಕಿನಲ್ಲಿರುವ ಕನ್ನಡ ಭವನ ಚಿಕ್ಕದಾಗಿದ್ದು, ಕನ್ನಡ ಚಟುವಟಿಕೆಗಳನ್ನು ನಡೆಸಲು ಅನಾನುಕೂಲವಾಗುತ್ತಿರುವ ಬಗ್ಗೆ ಗಮನಕ್ಕೆ ಬಂದಿದೆ.

ಕಮಲನಗರದಲ್ಲಿಯೂ ಕನ್ನಡ ಭವನ ನಿರ್ಮಿಸಬೇಕೆಂಬ ಬೇಡಿಕೆಯಿದ್ದು, ನಿವೇಶನಗಳು ಸಿಕ್ಕಲ್ಲಿ ಹೊಸ ಕನ್ನಡ ಭವನಗಳನ್ನು ನಿರ್ಮಿಸಲು ಸಿದ್ಧ ಎಂದು ಶಾಸಕ ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು.

ಪಟ್ಟಣದ ಸಾಯಿ ಕಲ್ಯಾಣ ಮಂಟಪದಲ್ಲಿ ಏ.8ರಂದು ಜರುಗಿದ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ತಾಲ್ಲೂಕು ಪದಾಧಿಕಾರಿಗಳ ಪದಗ್ರಹಣ ಹಾಗೂ ಕಾರ್ಯ ಚಟುವಟಿಕೆಗಳ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು ನಾನು ಓದುವ ಸಂದರ್ಭದಲ್ಲಿ ಊರಲ್ಲಿ ಕನ್ನಡ ಶಾಲೆಗಳಿರಲಿಲ್ಲ. ಹಾಗಾಗಿ ಮರಾಠಿ ಮಾಧ್ಯಮದಲ್ಲಿ ಓದಬೇಕಾಯಿತು. ನನ್ನಂತೆ ಅನೇಕ ಜನ ಕನ್ನಡ ಮಾಧ್ಯಮದಲ್ಲಿ ಶಿಕ್ಷಣ



ಉದಯವಾಹಿನಿ ಚಿತ್ರ

> ಔರಾದ(ಬಿ) ತಾಲ್ಲೂಕಿನಲ್ಲಿ ಕನ್ನಡ ಬೆಳೆಯಲು ಶಾಸಕ ಪ್ರಭು ಚವ್ಹಾಣ ಅವರ ಪಾತ್ರ ಮಹತ್ವದ್ದಾಗಿದೆ. ಕನ್ನಡಕ್ಕಾಗಿ ಶ್ರಮಿಸಿದ್ದ ಪೂಜ್ಯ ಡಾ.ಚನ್ನಬಸವ ಪಟ್ಟದೇವರ ಹೆಸರನ್ನು ಜಿಲ್ಲಾ ರಂಗಮಂದಿರಕ್ಕೆ ಮರು ನಾಮಕರಣ ಮಾಡಿರುವುದು, ನೂತನ ಅನುಭವ ಮಂಟಪಕ್ಕೆ ಭೂಮಿ ಪೂಜೆ ನೆರವೇರಿಸಿರುವುದು ಸೇರಿದಂತೆ ಸಾಕಷ್ಟು ಮಹತ್ತರ ಕೆಲಸ ಕಾರ್ಯಗಳಾಗಿವೆ ಎಂದು ಸ್ಮರಿಸಿದರು -ಗುರುಬಸವ ಪಟ್ಟದೇವರು, ಭಾಲ್ಕಿ ಹಿರೇಮಠ ಸಂಸ್ಥಾನ

ಪಡೆಯುವುದರಿಂದ ವಂಚಿತರಾಗಿದ್ದಾರೆ.

ಇಂತಹ ಪರಿಸ್ಥಿತಿ ಮುಂದಿನ ಪೀಳಿಗೆಗೆ ಬರಬಾರದು ಎಂಬ ಕಾರಣಕ್ಕೆ ಶಾಸಕನಾದ ನಂತರ ಕ್ಷೇತ್ರದೆಲ್ಲೆಡೆ ಕನ್ನಡ ಶಾಲೆಗಳನ್ನು ತಂದಿದ್ದೇನೆ. ನಮ್ಮ ವಿದ್ಯಾರ್ಥಿಗಳು ಕನ್ನಡ ಮಾಧ್ಯಮದಲ್ಲಿ ಓದುತ್ತಿದ್ದಾರೆ. ಔರಾದ(ಬಿ)

> ಕನ್ನಡ ನಮ್ಮ ಮಾತೃಭಾಷೆ, ಕನ್ನಡದ ರಕ್ಷಣೆಗೆ ಎಲ್ಲರೂ ಪಣ ತೊಡಬೇಕು. ನಮ್ಮ ನೆಲ, ಜಲ, ಭಾಷೆ ಸಂಸ್ಕೃತಿಯನ್ನು ಉಳಿಸಲು ಪ್ರಯತ್ನಿಸಬೇಕು. ಎಲ್ಲರೂ ಕನ್ನಡ ಮಾಧ್ಯಮದಲ್ಲಿ ಓದಬೇಕು ಮತ್ತು ಕನ್ನಡದಲ್ಲಿಯೇ ಮಾತನಾಡಬೇಕು
>
> -ಪ್ರಭು ಚವ್ಹಾಣ, ಶಾಸಕ

ತಾಲ್ಲೂಕು ಕನ್ನಡಮವಾಗುತ್ತಿದೆ ಎಂದು ಸಂತೋಷ ವ್ಯಕ್ತಪಡಿಸಿದರು.

ಕನ್ನಡದ ಅಭಿವೃದ್ಧಿಗೆ ಸಾಹಿತ್ಯ ಪರಿಷತ್ತು ಉತ್ತಮ ಕೆಲಸಗಳನ್ನು ಮಾಡುತ್ತಿದೆ. ಜಿಲ್ಲಾಧ್ಯಕ್ಷ ಸುರೇಶ ಚನ್ನಶೆಟ್ಟಿ ಅವರ ನೇತೃತ್ವದಲ್ಲಿ ಉತ್ತಮ ಕೆಲಸ ಕಾರ್ಯಗಳಾಗುತ್ತಿವೆ. ನಿಕಟಪೂರ್ವ ಅಧ್ಯಕ್ಷ ಡಾ.ಶಾಲಿವಾನ ಉದಗೀರೆ ಚನ್ನಾಗಿ ಕೆಲಸ ಮಾಡಿದ್ದಾರೆ. ನೂತನ ಅಧ್ಯಕ್ಷರು ನಿಟಕಪೂರ್ವ ಅಧ್ಯಕ್ಷರ ಸಹಕಾರ ಪಡೆದು ಗಡಿ ಭಾಗದಲ್ಲಿ ಕನ್ನಡ ಕಟ್ಟುವ ಕೆಲಸವನ್ನು ಶ್ರದ್ಧೆಯಿಂದ ಮಾಡಬೇಕು. ನಿಮ್ಮೊಂದಿಗೆ ನಾನಿದ್ದೀನಿ. ಕನ್ನಡ ಕೆಲಸಗಳಿಗೆ ನನ್ನ ಸಹಕಾರ ಸದಾ ಇರುತ್ತದೆ. ನಿರಾತಂಕವಾಗಿ ಕನ್ನಡ ಕೆಲಸಗಳನ್ನು ಮಾಡಿ ಎಂದು ನೂತನ ಪದಾಧಿಕಾರಿಗಳಿಗೆ ತಿಳಿಸಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಸುರೇಶ ಚನ್ನಶೆಟ್ಟಿ ಮಾತನಾಡಿ, ಕನ್ನಡ ಬಗ್ಗೆ ವಿಶೇಷ ಒಲವು ಹೊಂದಿರುವ ಶಾಸಕ ಪ್ರಭು ಚವ್ಹಾಣ ಅವರು ಕನ್ನಡಕ್ಕಾಗಿ ಮಾಡಿರುವ ಕೆಲಸಗಳು ಸ್ಮರಣೀಯವಾಗಿವೆ. ಜಿಲ್ಲೆಯ ಮೊದಲ ಕನ್ನಡ ಭವನ ಔರಾದನಲ್ಲಿ ನಿರ್ಮಿಸಿದ್ದಾರೆ. ಜಿಲ್ಲಾ ಕನ್ನಡ ಭವನ ನಿರ್ಮಿಸಬೇಕೆಂಬುದು ಸುಮಾರು 50 ವರ್ಷಗಳ ಕನಸಾಗಿತ್ತು. ಅವರು ಸಚಿವರಾಗಿದ್ದ ಸಂದರ್ಭದಲ್ಲಿ ಅನುದಾನ ಒದಗಿಸಿ ಕಟ್ಟಡಕ್ಕೆ ಭೂಮಿ ಪೂಜೆ ನೆರವೇರಿಸಿದ್ದರು. ಕವಿ, ಸಾಹಿತಿಗಳನ್ನು ತಿರಸ್ಕಾರದಿಂದ ಕಾಣುವ ಸಂದರ್ಭದಲ್ಲಿ ಅವರ ಮನೆಗೆ ಹೋಗಿ ಗೌರವಿಸುವ ಅಪರೂಪದ ಶಾಸಕರಾಗಿದ್ದಾರೆ ಎಂದು ಹೇಳಿದರು.

## ಲಿಂಗದೀಕ್ಷೆ, ಮಾನವನ ಜನ್ಮ ಸಿದ್ಧ ಹಕ್ಕು

• ಉದಯವಾಹಿನಿ ಬೀದರ

ಸಮಸ್ತ ಮಾನವ ಕುಲಕೋಟಿ ಲಿಂಗದೀಕ್ಷೆಯನ್ನು ಪಡೆದು ಲಿಂಗಧಾರಣೆಯನ್ನು ಮಾಡಿಕೊಳ್ಳುವ ಮೂಲಭೂತ ಸ್ವಾತಂತ್ರವನ್ನು ಹೊಂದಿದೆ ಎಂದು ಶ್ರೀ ಷ.ಬ್ರ. ಡಾ|| ರಾಜಶೇಖರ ಶಿವಾಚಾರ್ಯರು ಅಭಿಪ್ರಾಯಪಟ್ಟರು ಅವರ ಜನವಾಡದ ಶ್ರೀ ಶಿವ ಪಾರ್ವತಿ ಮಂದಿರದಲ್ಲಿ ಮಹಾದೇವ ಬಾರ್ಸಿ 2ನೇ ಜಾತ್ರಾ ಮಹೋತ್ಸವ ನಿಮಿತ್ತವಾಗಿ ನಡೆಯುತ್ತಿರುವ ಸಾಮೂಹಿಕ ಶಿವಯೋಗದಲ್ಲಿ ಸಾಮೂಹಿಕ ಲಿಂಗದೀಕ್ಷಾ ಕಾರ್ಯಕ್ರಮದಲ್ಲಿ ಹೇಳಿದರು.

ವೀರಶೈವ ಲಿಂಗಾಯತ ಪ್ರಾಣ ಜೀವಾಳವಾಗಿರುವ ಇಷ್ಟಲಿಗಂಧಾರಣೆ ಸಂಸ್ಕೃತಿಯು ಪ್ರಪಂಚದ ಅತ್ಯಂತ ಪುರಾತನ ಐತಿಹಾಸಿಕತೆಯನ್ನು ಹೊಂದಿದ್ದು ಇದು ಕೇವಲ ವೀರಶೈವ ಲಿಂಗಾಯತರಿಗಷ್ಟೇ ಅಲ್ಲ ಇಡೀ ಮನುಕುಲದ ಜನ್ಮಸಿದ್ಧ ಹಕ್ಕಾಗಿದೆ. ಲಿಂಗಧಾರಣೆಯು ದೇವ ದಾನವ ಮಾನವರೆಲ್ಲರೂ ಪೂಜಿಸುವ ದೇವ ನಿರ್ಮಿತ ಸಹಜ ಮತ್ತು ಸುಲಭವಾದ ದಿವ್ಯ ಮತ್ತು ಪವಿತ್ರವಾಗಿರುವ ಪವಿತ್ರ ಕರ್ಮವಾಗಿದೆ. ಬ್ರಹ್ಮವಿಷ್ಣು, ಲಕ್ಷ್ಮೀ, ಸರಸ್ವತಿ ಇಂದ್ರ, ಮುಂತಾದ ದೇವ ದೇವತೆಗಳು



ಉದಯವಾಹಿನಿ ಚಿತ್ರ

ಗೌತಮಾದಿ ಋಷಿ ಮುನಿಗಳು ದಾನವ ಚಕ್ರವರ್ತಿಗಳು ಇಷ್ಟಲಿಂಗವನ್ನು ಧರಿಸಿದದ್ದರೆಂದು ಹೇಳಲಾಗುತ್ತಿದೆ. ವೇದಾಗಮ ಶ್ರೀ ಸಿದ್ಧಾಂತ ಶಿಖಾಮಣಿ ಮುಂತಾದ ಪ್ರಾಚೀನ ಗ್ರಂಥಗಳು ಉಲ್ಲೇಖಿಸುತ್ತವೆ. ರಾಮ, ಕೃಷ್ಣ ಮುಂತಾದ ಅವತಾರ ಪುರುಷರು ಶಿವಲಿಂಗ ಆರಾಧಿಸಿ ಶಕ್ತಿ ಪಡೆದ ಉದಾಹರಣೆಗಳಿವೆ.

ಲಿಂಗಧಾರಣೆ ಎಂದರೆ ಬ್ಯಾಂಕನಲ್ಲಿ ಠೇವಣಿ ಹಣ ಇಟ್ಟ ಹಾಗೆ. ನಿತ್ಯವೂ ಪುಣ್ಯವೆಂಬ ಸಂಪತ್ತು ಬೆಳೆಯುತ್ತ ಹೋಗುವುದು.

ಇಷ್ಟಲಿಂಗ ಅರ್ಚನೆಯಿಂದ ಅನಂತ ಜನ್ಮದ ಪಾಪಗಳು ದಾರಿದ್ಯ, ಅನಾರೋಗ್ಯ, ಗೃಹದೋಷ, ಅಶಾಂತಿ, ಪೀಡೆಗಳು ತೊಲಗಿ ಹೋಗುವವು. ಸಕಲ ಸಂಪತ್ತು ದೊರೆಯುವವು ಎಂದು ಶ್ರೀಗಳು ಹೇಳಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ಒಬ್ಬ ಸ್ನೇಹಿತ ನಿಮ್ಮ ಮುಕ್ತ ಮನಸ್ಸನ್ನು ಪರೀಕ್ಷಿಸಬಹುದು. ನೀವು ನಿಮ್ಮ ಮೌಲ್ಯಗಳೊಂದಿಗೆ ರಾಜಿಯಾಗದಿರುವಂತೆ ಮತ್ತು ಸಕಾರಣವಾದ ನಿರ್ಧಾರಗಳನ್ನು ಕೈಗೊಳ್ಳುವಂತೆ ಎಚ್ಚರಿಕೆ ವಹಿಸಬೇಕು.

**ವೃಷಭ** ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಭೂಮಿಯನ್ನು ಖರೀದಿಸಿದ ಮತ್ತು ಈಗ ಅದನ್ನು ಮಾರಾಟ ಮಾಡಲು ಬಯಸುವ ಜನರು ಇಂದು ಉತ್ತಮ ಖರೀದಿದಾರರನ್ನು ಕಾಣಬಹುದು.

**ಮಿಥುನ** ಜ್ಞಾನದಾಹ ನಿಮಗೆ ಹೊಸ ಸ್ನೇಹಿತರನ್ನು ಪಡೆಯಲು ಸಹಾಯ ಮಾಡುತ್ತದೆ. ಪ್ರತಿಯೊಂದು ವಿಷಯದಲ್ಲಿ ಪ್ರೀತಿಯನ್ನು ತೋರಿಸುವುದು ಸರಿಯಿಲ್ಲ, ಇದು ನಿಮ್ಮ ಸಂಬಂಧವನ್ನು ಸುಧಾರಿಸುವ ಬದಲು ಹಾಳುಮಾಡುತ್ತದೆ.

**ಕರ್ಕಾಟಕ** ನೀವು ಇನ್ನು ಮುಂದೆ ನಿಮ್ಮ ಕಾಮಪ್ರಚೋದಕ ಕಲ್ಪನೆಗಳ ಬಗ್ಗೆ ಕನಸು ಕಾಣಬೇಕಾಗಿಲ್ಲ; ಅವು ಇಂದು ನಿಜವಾಗಬಹುದು. ಇಂದು ಖಾಲಿ ಸಮಯವೂ ಕೆಲವು ಅನುಪಯುಕ್ತ ಕೆಲಸಗಳಲ್ಲಿ ಹಾಳಾಗಬಹುದು.

**ಸಿಂಹ** ಕುಟುಂಬದ ಸದಸ್ಯರ ಖುಷಿಯ ಸ್ವಭಾವ ಮನೆಯಲ್ಲಿನ ವಾತಾವರಣವನ್ನು ಹಗುರಗೊಳಿಸುತ್ತದೆ. ಪ್ರಿಯತಮೆಯ ಜೊತೆ ಕೆಲವು ಭಿನ್ನಾಭಿಪ್ರಾಯ ,ನಿಮ್ಮ ಸಂಗಾತಿಗೆ ನಿಮ್ಮ ಸ್ಥಾನವನ್ನು ತಿಳಿಸಕೊಡುವಲ್ಲಿ ಸಮಸ್ಯೆ ಹೊಂದಿರುತ್ತೀರಿ.

**ಕನ್ಯಾ** ಇಂದು ನಿಮ್ಮ ಉಚಿತ ಸಮಯವನ್ನು ಮೊಬೈಲ್ ಅಥವಾ ಟಿವಿ ನೋಡುವುದರಿಂದ ವ್ಯರ್ಥವಾಗಬಹುದು. ಇದರೊಂದಿಗೆ ನಿಮ್ಮ ಜೀವನ ಸಂಗಾತಿಗೆ ನಿಮ್ಮಿಂದ ಅಸಮಾಧಾನವಾಗುತ್ತದೆ.

**ತುಲಾ** ನೀವು ಇಂದು ಮಾಡುವ ಸ್ವಯಂ ಸೇವೆಯ ಕೆಲಸ ನೀವು ಸಹಾಯ ಮಾಡುವವರಿಗೆ ಮಾತ್ರವಲ್ಲದೇ ನಮ್ಮನ್ನು ನೀವೇ ಹೆಚ್ಚು ಸಕಾರಾತ್ಮಕವಾಗಿ ನೋಡಲು ಸಹಾಯ ಮಾಡುತ್ತದೆ.

**ವೃಶ್ಚಿಕ** ನೀವು ಕ್ರೀಡೆಯಲ್ಲಿ ಸಮಯ ಕಳೆಯುವ ಸಾಧ್ಯತೆಗಳಿವೆ. ನಿಮ್ಮ ಅವಾಸ್ತವಿಕ ಯೋಜನೆ ಹಣದ ಕೊರತೆಗೆ ಕಾರಣವಾಗುತ್ತದೆ. ವೈಯಕ್ತಿಕ ವಿಷಯ ಗಳನ್ನು ಬಗೆಹರಿಸುವಲ್ಲಿ ಉದಾರತೆ ತೋರಿ.

**ಧನಸ್ಸು** ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ಕೆಲವು ಪ್ರಮುಖ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತದೆ ಹಾಗೂ ಅವು ನಿಮಗೆ ಹೊಸ ಆರ್ಥಿಕ ಲಾಭ ತರುತ್ತವೆ.

**ಮಕರ** ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ನಿಮ್ಮ ವೈಯಕ್ತಿಕ ರಂಗದಲ್ಲಿ ಮುಖ್ಯ ಬೆಳವಣಿಗೆಯಾಗುತ್ತಿದ್ದು ಇದು ನೀವು ಮತ್ತು ನಿಮ್ಮ ಇಡೀ ಕುಟುಂಬಕ್ಕೆ ಸಂತೋಷ ತರುತ್ತದೆ.

**ಕುಂಭ** ನಿರಾಶಾದಾಯಕ ಮನೋಭಾವವು ಕೇವಲ ನಿಮ್ಮ ಅವಕಾಶಗಳನ್ನು ಸೀಮಿತಗೊಳಿಸುವುದಷ್ಟೇ ಅಲ್ಲದೇ ದೇಹದ ಸಾಮರಸ್ಯವನ್ನೂ ಭಂಗಪಡಿಸುವುದರಿಂದ ಅವುಗಳನ್ನು ತಡೆಯಬೇಕು.

**ಮೀನ** ಇಂದು ನೀವು ಪ್ರಮುಖ ನಿರ್ಧಾರ ಕೈಗೊಳ್ಳಬೇಕು, ಇದು ನಿಮ್ಮನ್ನು ಒತ್ತಡ ಹಾಗೂ ಉದ್ವೇಗಕ್ಕೆ ಒಳಪಡಿಸುತ್ತದೆ. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ತ್ಯರಾಗಿರುತ್ತೀರಿ.

## ಮಹಿಳೆಯ ಸುಟ್ಟ ಮೃತದೇಹ ಪತ್ತೆ

• **ಉದಯವಾಹಿನಿ, ಕಮಲಾಪುರ**

ತಾಲ್ಲೂಕಿನ ಕಿಣ್ಣಿ ಸಡಕ್ ಗ್ರಾಮದ ಸೀಮಾಂತರದಲ್ಲಿರುವ ಹೊಲವೊಂದರ ಬಂದಾರಿನಲಿದ್ದ ತೊಗರಿಯ ಕೊಯ್ಲಿಯಲ್ಲಿ ಅಪರಿಚಿತ ಮಹಿಳೆಯ ಸುಟ್ಟು ಹೋದ ಸ್ಥಿತಿಯಲ್ಲಿದ್ದ ಮೃತ ದೇಹ ಪತ್ತೆಯಾಗಿದೆ. ಈ ಕುರಿತು ಹೊಲದ ಮಾಲೀಕ ನೀಲಕಂಠ ಪಂಚಾಳ ಎಂಬುವವರು ಕಮಲಾಪುರ ಠಾಣೆಗೆ ದೂರು ನೀಡಿದ್ದಾರೆ, ಯಾರೋ ದುಷ್ಕರ್ಮಿಗಳು ಯಾವುದೋ ದುರುದ್ದೇಶದಿಂದ ಅಪರಿಚಿತ ಹೆಣ್ಣು ಮಗಳಿಗೆ ಎಲ್ಲಿಯೋ ಕೊಲೆ ಮಾಡಿ ಸಾಕ್ಷಿ ನಾಶಮಾಡುವ ಉದ್ದೇಶದಿಂದ ನಮ್ಮ ಹೊಲದ ತೊಗರಿಯ ಕೊಯ್ಲಿಯಲ್ಲಿ ಮಹಿಳೆಯ ಮೃತ ದೇಹ ಸುಟ್ಟು ಹಾಕಿರುತ್ತಾರೆ ಎಂದು ದೂರು ನೀಡಿದ್ದಾರೆ. ಪ್ರಕರಣ ದಾಖಲಿಸಿಕೊಂಡ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ಹನುಮ ಜಯಂತಿ ಕಾರ್ಯಕ್ರಮ

• **ಉದಯವಾಹಿನಿ, ಬಾಗಲಕೋಟೆ**

ನವನಗರದ ಸೆಕ್ಟರ್ ನಂ.46ರಲ್ಲಿರುವ ಮಾರುತೇಶ್ವರ ದೇವಸ್ಥಾನದಲ್ಲಿ ಹನುಮ ಜಯಂತಿ ವಿಶೇಷ ಕಾರ್ಯಕ್ರಮಗಳು ನಡೆಯಲಿವೆ. ಏ.11ರಂದು ನವನಗರದ ಎಲ್‌ಐಸಿ ಸರ್ಕಲ್‌ನಿಂದ ಮಾರುತೇಶ್ವರ ಮಂದಿರದವರೆಗೆ ಭವ್ಯ ಮೆರವಣಿಗೆ ಸಂಜೆ 6 ಗಂಟೆಗೆ ಗುಳೇದಗುಡ್ಡದ ಶ್ರೀ ಅಭಿನವ ಒಪ್ಪತೇಶ್ವರ ಸ್ವಾಮೀಜಿಗಳಿಂದ ಆಶೀರ್ವಚನ ನಂತರ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಅರುಣೋದಯ ಶಂಕ್ರಣ್ಣ ಸಂಕಣವರ ವತಿಯಿಂದ ಜಾನಪದ ಕಾರ್ಯಕ್ರಮ ನಡೆಯಲಿದೆ. ಏ.12 ರಂದು ಹನುಮ ಜಯಂತಿ ನಿಮಿತ್ತ ಅಭಿಷೇಕ, ಅಲಂಕಾರ, ಕಳಸಾರೋಹಣ ಹೋಮಹವನ ನಡೆಯಲಿದ್ದು ಮಧ್ಯಾಹ್ನ ಅನ್ನಸಂತರ್ಪಣೆ ನಡೆಯಲಿದೆ ಎಂದು ದೇವಸ್ಥಾನ ಸೇವಾ ಸಮಿತಿ ಸದಸ್ಯ ಮಲ್ಲಿಕಾರ್ಜುನ ಬರ್ಲಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಸ್ ನಿಲ್ದಾಣಕ್ಕೆ ನಾಮಕರಣ

• **ಉದಯವಾಹಿನಿ, ವಿಜಯಪುರ**



☛ ಉದಯವಾಹಿನಿ ಚಿತ್ರ

ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ ಚಾಲಕರು, ನಿರ್ವಾಹಕರು ಸೇರಿದಂತೆ 9000 ಜನರನ್ನು ನೇಮಕಾತಿ ಮಾಡಿಕೊಳ್ಳಲಾಗಿದ್ದು, ಅನುಕಂಪದ ಆಧಾರದ ಮೇಲೆ 1000 ಜನರಿಗೆ ನೇಮಕಾತಿ ಮಾಡಿಕೊಳ್ಳಲಾಗಿದೆ ಎಂದು ಸಾರಿಗೆ ಹಾಗೂ ಮುಜರಾಯಿ ಖಾತೆ ಸಚಿವರಾದ ರಾಮಲಿಂಗಾ ರೆಡ್ಡಿ ಅವರು ಹೇಳಿದರು.

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಜಯಪುರ ವಿಭಾಗದಿಂದ ಸಿಂದಗಿ ಪಟ್ಟಣದಲ್ಲಿ ನಿಗಮದ ಸಿಬ್ಬಂದಿಗಳ ನೂತನ ವಸತಿ ಗೃಹಗಳ ಉದ್ಘಾಟನೆ ಹಾಗೂ ಬಸ್ ನಿಲ್ದಾಣಕ್ಕೆ ಪೂಜ್ಯ ಶ್ರೀ ಚನ್ನವೀರ ಸ್ವಾಮಿ ಬಸ್ ನಿಲ್ದಾಣ ಸಿಂದಗಿ ನಾಮಕರಣ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ನೂತನವಾಗಿ ಹೊಸ ಬಸ್‌ಗಳನ್ನು ಖರೀದಿಸಲಾಗಿದ್ದು, ಕಲ್ಯಾಣ ಕರ್ನಾಟಕ ವಿಭಾಗಕ್ಕೆ 800 ಬಸ್‌ಗಳನ್ನು ಒದಗಿಸಲಾಗಿದೆ ಎಂದು ಅವರು ಹೇಳಿದರು.

ಸಿಂದಗಿಯಲ್ಲಿ ಸುಸಜ್ಜಿತವಾದ ಬಸ್ ನಿರ್ಮಾಣ ಮಾಡಿ, ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವ ದೃಷ್ಟಿಯಿಂದ ಬಸ್ ನಿಲ್ದಾಣಕ್ಕೆ ಜಾಗ ನೀಡಿರುವ ಜ್ಞಾಪಕಾರ್ಥವಾಗಿ ಸ್ವಾಮೀಜಿ ಹೆಸರನ್ನು ಇಡಲಾಗಿದೆ. ಶಾಸಕರ ಮನವಿಯಂತೆ, ಸಿಂದಗಿ ನಗರ 5 ಕಿ.ಮೀ. ವ್ಯಾಪ್ತಿ ಹೊಂದಿರುವುದರಿಂದ ಪ್ರಯಾಣಿಕರು, ವ್ಯಾಪಾರಸ್ಥರು, ವಿದ್ಯಾರ್ಥಿಗಳ ಸುಗಮ ಸಂಚಾರಕ್ಕಾಗಿ, ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವ ದೃಷ್ಟಿಯಿಂದ ಮುಂದಿನ ವಾರದಿಂದಲೇ ಸಿಂದಗಿ ನಗರ ಬಸ್ ಸಂಚಾರ ಕಾರ್ಯಾಚರಣೆ ಅನುಮತಿ ನೀಡಲಾಗುವುದು ಎಂದು ಅವರು ಹೇಳಿದರು.

ದೇವರ ಹಿಪ್ಪರಗಿ ಬಸ್ ನಿಲ್ದಾಣಕ್ಕೆ ಮಡಿವಾಳ ಮಾಚಿದೇವ ಹೆಸರು ನಾಮಕರಣ ಮಾಡಲಾಗಿದೆ. ಸುರಪುರ ಬಸ್ ನಿಲ್ದಾಣಕ್ಕೆ, ರಾಜವೆಂಕಟಪ್ಪ ನಾಯಕ ಹೆಸರು ಇಡಲಾಗಿದೆ. ಶಹಾಪುರ ನಿಲ್ದಾಣದಲ್ಲಿ ಅಂಬೇಡ್ಕರ್ ಮೂರ್ತಿ ಸ್ಥಾಪನೆಗೆ ಸ್ಥಳಾವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು. ವರ್ಗ, ಜಾತಿ, ಸಮುದಾಯಕ್ಕೆ ಸೀಮಿತವಾಗಿಲ್ಲ, ಸರ್ವಜನರ ಬಾಳನ್ನು ಹಸನಾಗಿಸುವ ನಿಟ್ಟಿನಲ್ಲಿ ಸರ್ವ ಪ್ರಯತ್ನವನ್ನು ಸರ್ಕಾರ ಮಾಡುತ್ತಿದೆ ಎಂದು ಅವರು ಹೇಳಿದರು.

### ಕ್ರಿಮಿನಾಶಕ ಸೇವಿಸಲು ಮುಂದಾದ ರೈತರು, ತಡೆಹಿಡಿದ ಪೊಲೀಸರು, ಪ್ರತಿಭಟನಾ ರೈತರ ಬಂಧನ

# ಎಡದಂಡೆ ಕಾಲುವೆಗೆ ಏ.20ರವರೆಗೆ ನೀರು ಬಿಡಲು ರೈತರಿಂದ ಹೋರಾಟ

• **ಉದಯವಾಹಿನಿ ಕಾರಟಗಿ**





☛ ಉದಯವಾಹಿನಿ ಚಿತ್ರ

ತುಂಗಾ ಭದ್ರಾ, ಎಡದಂಡೆ ಕಾಲುವೆಗೆ ಏಪ್ರಿಲ್ 20,(2025) ವರೆಗೆ ನೀರು ಬಿಡಲು ಒತ್ತಾಯಿಸಿ ಹಾಗೂ ರೈತರ ಬೆಳೆಗಳಿಗೆ ಸಮರ್ಪಕವಾಗಿ ನೀರು ಹರಿಸದೆ ರೈತರನ್ನು ಕಡೆಗಣಿಸಿದ ಸಚಿವರಾದ ಶಿವರಾಜ್ ಎಸ್ ತಂಗಡಗಿ ರಾಜೀನಾಮೆಗೆ ಒತ್ತಾಯಿಸಿ ಕಾರಟಗಿಯಲ್ಲಿ ಏ. 09 ರಂದು ಅಖಿಲ ಕರ್ನಾಟಕ ರಾಜ್ಯ ಅನ್ನದಾತ ರೈತ ಸಂಘದ ವತಿಯಿಂದ ಬೃಹತ್ ರೈತರ ಹೋರಾಟ ನಡೆಯಿತು

ಈ ಸಂದರ್ಭದಲ್ಲಿ ಕನಕದಾಸ ವೃತ್ತದಲ್ಲಿ ಜಮಾಯಿಸಿದ ಪ್ರತಿಭಟನಾ ರೈತರನ್ನು ಪೊಲೀಸರು ತಡೆಹಿಡಿದರು ರೈತರು ಸರ್ಕಲ್ ನಲ್ಲಿ ಹೋರಾಟ ಮಾಡುವ ಸಂದರ್ಭದಲ್ಲಿ ಕ್ರಿಮಿನಾಶಕ ಸೇವಿಸಲು ಮುಂದಾದರು ಈ ಸಂದರ್ಭದಲ್ಲಿ ಪೊಲೀಸರು ತಡೆ ಹಿಡಿದು ಪ್ರತಿಭಟನಾ ರೈತರನ್ನು ಬಂಧಿಸಿದರು

ರಾಜಕಾರಣಿಗಳು ಮತ್ತು ಅಧಿಕಾರಿಗಳು ಜಲಾಶಯದ ಮೇಲ್ಭಾಗದ ಕಾರ್ಖಾನೆಗಳಿಗೆ ಮಾರಾಟ ಮಾಡುತ್ತಿದ್ದಾರೆ ಈ ಕುರಿತು ಕೂಡಲೇ ನೀವುಗಳು ತುಂಗಭದ್ರಾ ಜಲಾಶಯದ ನೀರು ಹಂಚಿಕೆಯಲ್ಲಿ ಆಗುತ್ತಿರುವ ಅಕ್ರಮಗಳ ಕುರಿತು ವಿಶೇಷ ತನಿಖಾ ತಂಡವನ್ನು ರಚನೆ ಮಾಡಿ ಎಡದಂಡೆ ಭಾಗದ ರೈತರಿಗೆ ಜಲಾಶಯದ ಅಚ್ಚುಕಟ್ಟು ಪ್ರದೇಶದ ರೈತರಿಗೆ ಸಮರ್ಪಕ ನೀರು ನೀಡಲು ಕ್ರಮ ಕೈಗೊಳ್ಳಬೇಕು,

ತುಂಗಾ ಭದ್ರಾ ಜಲಾಶಯದ ಎಡದಂಡೆ ಭಾಗದಲ್ಲಿ ಮುನಿರಾಬಾದ್ ನಿಂದ ರಾಯಚೂರು ವರೆಗೆ ಸುಮಾರು 100ಕ್ಕೂ ಅಧಿಕ ಉಪ ಕಾಲುವೆಗಳು ಇದ್ದು ಪ್ರತಿಯೊಂದು ಉಪ ಕಾಲುವೆಗಳ ಕೊನೆ ಭಾಗದ ರೈತರಿಗೆ ಬೆಳೆ ಕೈಗೆ ಬರಬೇಕಾದರೆ ಇನ್ನೂ 15 ರಿಂದ 20 ದಿನಗಳು ಬೇಕಾಗುತ್ತದೆ, ಆದರೆ ರಾಜ್ಯ ಸರ್ಕಾರ 123 ನೆಯ ನೀರಾವರಿ ಸಲಹಾ ಸಮಿತಿಯಲ್ಲಿ ಏಪ್ರಿಲ್ 10 (2025) ವರೆಗೆ ನೀರು ಬಿಡಲು ತೀರ್ಮಾನಿಸಿ ಆದೇಶ ಹೊರಡಿಸಲಾಗಿದೆ, ಇದು ರೈತರ ಬದುಕಿಗೆ ಬರೆ ಎಳೆದಂತೆ ಆಗುತ್ತದೆ. ಒಂದು ವೇಳೆ ಏಪ್ರಿಲ್ 10 ಕ್ಕೆ ನೀರು ಬಂದ್ ಮಾಡಿದರೆ ಲಕ್ಷಾಂತರ ರೈತರು ಸಾಲದ ಸುಳಿಯಲ್ಲಿ ಸಿಲುಕುತ್ತಾರೆ, ರೈತರು ಆರ್ಥಿಕ ಸಂಕಷ್ಟಕ್ಕೆ ಒಳಗಾಗುತ್ತಾರೆ, ರೈತರ ಮೇಲೆ ವ್ಯತಿರಿಕ್ತ ಪರಿಣಾಮಗಳು ಉಂಟಾಗುತ್ತದೆ, ಇದನ್ನು ತಡೆಯ ಬೇಕಾದರೆ ಏಪ್ರಿಲ್ 20 ವರೆಗೆ ನೀರು ಬಿಡಬೇಕು, ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ್ ಎಸ್ ತಂಗಡಗಿಯವರು ರೈತರನ್ನು ಸಂಪೂರ್ಣವಾಗಿ ಕಡೆಗಣಿಸಿದ್ದು ರೈತರ ಪರ ಇರುವ ಸರ್ಕಾರದ ಯೋಜನೆಗಳನ್ನು ರೈತರಿಗೆ ತಲುಪಿಸುವಲ್ಲಿ ವಿಫಲರಾಗಿದ್ದಾರೆ ರೈತರ ಪರ ಯೋಜನೆಗಳನ್ನು ಕಾರ್ಯಕತಗೊಳಿಸುವಲ್ಲಿ ನಿರ್ಲಕ್ಷ ವಹಿಸಿದ್ದಾರೆ.

**2024 ರ ಜುಲೈ, ಆಗಸ್ಟ್** ತಿಂಗಳಿನಲ್ಲಿ 100 ಟಿಎಂಸಿ ನೀರು ತುಂಬಿದ ತುಂಗಾ ಭದ್ರಾ ಜಲಾಶಯದಿಂದ ರಾಜ್ಯ ಸರ್ಕಾರ ರೈತರ ಎರಡು ಬೆಳೆಗಳಿಗೆ ಸಮರ್ಪಕ ನೀರು ಒದಗಿಸಬಹುದಾಗಿತ್ತು , ಆದರೆ ಹಿಂಗಾರು ಹಂಗಾಮಿಯ ಎರಡನೆಯ ಬೇಸಿಗೆ ಬೆಳೆಗೆ ಎಡದಂಡೆ ಭಾಗದ ಪಾಲಿನ ನೀರು ಇದ್ದರೂ ಕೂಡ ರೈತರ ಬೆಳೆಗಳಿಗೆ ನೀರು ಹರಿಸಲು ತುಂಗಭದ್ರಾ ನೀರಾವರಿ ಅಧಿಕಾರಿಗಳು ಮತ್ತು ಸಚಿವರಾದ ಶಿವರಾಜ್ ಎಸ್ ತಂಗಡಗಿ ಅವರಿಂದ ಉದಾಸೀನತೆ ಮತ್ತು ನಿರ್ಲಕ್ಷ್ಯ ವಹಿಸಲಾಗುತ್ತಿದೆ, ಅದರಲ್ಲೂ ನೀರಾವರಿ ಸಲಹಾ ಸಮಿತಿಗಳನ್ನು ಕಾಡ ಕಚೇರಿಯಲ್ಲಿ ನಡೆಸದೆ ರೈತರನ್ನು ಕಡೆಗಣಿಸಿ ಬೆಂಗಳೂರಲ್ಲಿ ನಡೆಸಿ ನೀರಿನ ಹಂಚಿಕೆಯ ತಪ್ಪು ಲೆಕ್ಕಗಳನ್ನು ನೀಡಿ ಅನ್ನದಾತರನ್ನು ಒಕ್ಕಲಿಬ್ಬಿಸುವ ಹುನ್ನಾರ ನಡೆಸಲಾಗುತ್ತಿದೆ.

**ಹಕ್ಕೊತ್ತಾಯಗಳು**

ತುಂಗಾ ಭದ್ರಾ, ಎಡದಂಡೆ ಕಾಲುವೆಗೆ ಏಪ್ರಿಲ್ 20 ವರೆಗೆ ನೀರು ಬಿಡಬೇಕು. ಒಂದು ವೇಳೆ ನೀರು ಬಿಡದೇ ರೈತರು ಸಾಲದ ಸುಳಿಯಲ್ಲಿ ಸಿಲುಕಿ ಆತ್ಮಹತ್ಯೆ ಯಂತಹ ಘಟನೆಗಳು ನಡೆದರೆ ಅದಕ್ಕೆ ಸರ್ಕಾರ ಮತ್ತು ಸಚಿವ ಶಿವರಾಜ್ ಎಸ್ ತಂಗಡಗಿ ಅವರನ್ನು ನೇರ ಹೊಣೆ ಮಾಡಬೇಕು.ಕೊನೆ ಭಾಗದ ರೈತರ ಬೆಳೆ ಒಣಗಿದರೆ ಎಕರೆಗೆ 50 ಸಾವಿರ ಪರಿಹಾರ ನೀಡಬೇಕು. ಎಡ ದಂಡೆ ಭಾಗದ ರೈತರ ಬೆಳೆಗಳಿಗೆ ವೈಜ್ಞಾನಿಕ ಬೆಲೆ ನಿಗದಿ ಪಡಿಸಬೇಕು ಭತ್ತ ಖರೀದಿ ಕೇಂದ್ರಗಳು ಸ್ಥಾಪಿಸಬೇಕು. ತುಂಗಾ ಭದ್ರಾ ಜಲಾಶಯದ ನೀರು ಹಂಚಿಕೆಯಲ್ಲಿ ಆಗುತ್ತಿರುವ ಅಕ್ರಮಗಳ ಕುರಿತು ವಿಶೇಷ ತನಿಖಾ ತಂಡ ರಚನೆ ಮಾಡಿ ಕ್ರಮ ಕೈಗೊಳ್ಳಬೇಕು. ನೀರಾವರಿ ಭಾಗದಲ್ಲಿ ರೈತರನ್ನು ಒಕ್ಕಲೆಬ್ಬಿಸುವ ಅಕ್ರಮ ಕಾನೂನು ಬಾಹಿರ ಚಟುವಟಿಕೆಗಳಿಗೆ ಕಡಿವಾಣ ಹಾಕಬೇಕು. ಜಲಾಶಯದ ನೀರನ್ನು ಕಾರ್ಖಾನೆಗಳಿಗೆ ಮಾರಾಟ ಮಾಡುವ ಅಧಿಕಾರಿಗಳ ರಾಜಕಾರಣಿಗಳ ಮೇಲೆ ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು.

## ಸಾಮಾಜಿಕ ಜಾಲತಾಣಗಳಲ್ಲಿ ಕಿಲ್ಕಾರಿ ಯೋಜನೆಯ ಪ್ರಚಾರಾಂದೋಲನ ಯಶಸ್ವಿ ಪ್ರಯೋಗ: ಡಾ.ಜಿ.ಪಿ.ರೇಣುಪ್ರಸಾದ್

• **ಉದಯವಾಹಿನಿ ಚಿತ್ರದುರ್ಗ**



ದಿನಾಂಕ 07-04-2025 ರಂದು ವಿಶ್ವ ಆರೋಗ್ಯ ದಿನವನ್ನು ವಿನೂತನವಾಗಿ ಸಾಮಾಜಿಕ ಜಾಲತಾಣಗಳಲ್ಲಿ ಗರ್ಭಿಣಿ ಬಾಣಂತಿ ಮಕ್ಕಳ ತಾಯಂದಿರಿಗೆ ಕಿಲ್ಕಾರಿ ಯೋಜನೆಯ ಮಹತ್ವ ತಿಳಿಸುವ ಮನೆ ಮನೆ ಬೇಟಿ ತಾಯಂದಿರೊಂದಿಗೆ ಕ್ಷೇತ್ರ ಮಟ್ಟದ ಆಶಾ ಕಾರ್ಯಕರ್ತೆಯರು ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳು, ಆರೋಗ್ಯ ನಿರೀಕ್ಷಣಾಧಿಕಾರಿಗಳು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು, ತಾ. ಮಟ್ಟದ ತಾಲ್ಲೂಕು ಆರೋಗ್ಯಾಧಿಕಾರಿಗಳು ವ್ಯವಸ್ಥಾಪಕರು ಆರೋಗ್ಯ ಶಿಕ್ಷಣಾಧಿಕಾರಿಗಳು, ಜಿಲ್ಲಾಮಟ್ಟದಲ್ಲಿ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳು ಜಿಲ್ಲಾ ವ್ಯವಸ್ಥಾಪಕರು ಡಿ.ಪಿ.ಎಮ್. ಯುನಿಟ್ ಸಿಬ್ಬಂದಿಗಳು ತಂಡೋಪ ತಂಡಗಳನ್ನು ರಚಿಸಿ ಈ ಬಾರಿಯ ವಿಶ್ವ ಆರೋಗ್ಯ ದಿನವನ್ನು ತಾಯಿ ಮಕ್ಕಳ ಆರೋಗ್ಯ ಸುಧಾರಿಸಲು ಕಿಲ್ಕಾರಿ ಯೋಜನೆಯ ಪ್ರಚಾರಾಂದೋಲನ ಸಾಮಾಜಿಕ ಜಾಲತಾಣಗಳ ಬಳಕೆ ಮಾಡಿ ಲಕ್ಷಾಂತರ ಜನರಿಗೆ ಮಾಹಿತಿ ಶಿಕ್ಷಣ ಸಂವಹನ ಪ್ರಕ್ರಿಯೇ ನಡೆಸಿ ರಾಜ್ಯಮಟ್ಟದ ಅಧಿಕಾರಿಗಳಿಂದ ಚಿತ್ರದುರ್ಗ ಜಿಲ್ಲೆ ಪ್ರಶಂಸೆಗೆ ಒಳಪಟ್ಟಿದೆ.

ಈ ಚಟುವಟಿಕೆಗಳನ್ನು ಕೈಗೊಳ್ಳುವ ಪೂರ್ವದಲ್ಲಿ ಜಿಲ್ಲಾ ಕಾರ್ಯನಿರ್ವಾಹಕ ಅಧಿಕಾರಗಳವರ ಅಧ್ಯಕ್ಷತೆಯಲ್ಲಿ ಅಂತರ ಇಲಾಖಾ ಸಮನ್ವಯ ಸಭೆ ನಡೆಸಿ ಎಲ್ಲಾ ಇಲಾಖೆಗಳ ಸಹಕಾರ ಕೋರಲಾಗಿತ್ತು ಅಲ್ಲದೇ ಮಾನ್ಯ ಜಿಲ್ಲಾ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್ ಕೇವಲ ಸಾಮಾಜಿಕ ಟ್ರೆಂಡ್ ಮಾಡದೆ ಕಿಲ್ಕಾರಿ ಯೋಜನೆಯ ಉಪಯುಕ್ತತೆ , ಕರೆಗಳನ್ನು ಸ್ವೀಕರಿಸುವ ರೀತಿ, ಸಮರ್ಪಕವಾಗಿ ಸಮುದಾಯಕ್ಕೆ ತಲುಪಿಸುವಂತೆ ತಿಳಿಸಿದ್ದರು ಅದರಂತೆ ಕ್ರಿಯಾಯೋಜನೆ ತಯಾರಿಸಿ ಎಲ್ಲಾ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಛೇರಿ, ಜಿಲ್ಲಾ ಡಿ.ಪಿ.ಎಮ್. ಯುನಿಟ್ ಗಳಲ್ಲಿ ವಾರ್ ರೂಮ್ ರಚಿಸಿ ದಿನಾಂಕ 07-04-2025 ರಂದು ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ಟ್ವಿಟರ್, ವಾಟ್ಸಾಪ್ ಗ್ರೂಪ್, ಇಸ್ಟಾಗ್ರಾಮ್, ರೀಲ್ಸ್ ತ್ರೆಡ್ ಯೂಟ್ಯೂಬ್




ಖಾತೆಗಳಲ್ಲಿ ಜಿಲ್ಲೆಯ ಎಲ್ಲಾ ಗ್ರಾಮಗಳಿಂದ , ಉಪಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ಖಾಸಗಿ ಆಸ್ಪತ್ರೆ ಮತ್ತು ಇತರೆ ಫಲಾನುಭವಿಗಳು ನೀಡಿದ ವಿಡಿಯೋ ಕ್ಲಿಪ್ ಗಳನ್ನು ಏಕ ಕಾಲದಲ್ಲಿ 12887 ವಿಡಿಯೋ ಫೋಟೋ ಮಾಹಿತಿಗಳನ್ನು ಹಂಚಿಕೊಳ್ಳಲಾಯಿತು .

ಲಕ್ಷಾಂತರ ವಿಕ್ಷಣೆಗಳು ತಲುಪಿವೆ ಈ ನಿಟ್ಟಿನಲ್ಲಿ ಭಾಗವಹಿಸಿದ ಆರೋಗ್ಯ ಇಲಾಖೆಯ ಎಲ್ಲಾ ಸಿಬ್ಬಂದಿಗಳಿಗೆ ಇತರೆ ಇಲಾಖೆಗಳ ಮುಖ್ಯಸ್ಥರಿಗೆ ಹೃದಯ ಪೂರ್ವಕ ಅಭಿನಂದನೆಗಳನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ತಿಳಿಸಿದ್ದಾರೆ.

## ವಿಜೃಂಭಣೆಯಿಂದ ಜರುಗಿದ ನಿಂಗಯ್ಯ ಮುತ್ಯಾನ ಜಾತ್ರೆ

• **ಉದಯವಾಹಿನಿ ಹುಣಸಗಿ**



☛ ಉದಯವಾಹಿನಿ ಚಿತ್ರ

ಗ್ರಾಮೀಣ ಪ್ರದೇಶದ ಕಲಾವಿದರನ್ನು ಹುಡಿಕಿ ಅವರ ಪ್ರತಿಭೆಯನ್ನು ಸಾರ್ವಜನಿಕರಿಗೆ ತೋರಿಸುವ ಮೂಲಕ ರಂಗಭೂಮಿ ಕಲೆ ಉಳಿಸುವ ಬೆಳಸುವದನ್ನು ಮಾಡಬೇಕು ಎಂದು ಬುದಪ್ಪ ಮುತ್ಯಾ ಹೇಳಿದರು. ತಾಲ್ಲೂಕಿನ ಕನ್ನಳ್ಳಿ ಗ್ರಾಮದಲ್ಲಿ ಶ್ರೀ ನಿಂಗಯ್ಯ ಮುತ್ಯಾನ ಜಾತ್ರೆ ಮಹೋತ್ಸವ ವಿಜೃಂಭಣೆಯಿಂದ ಜರುಗಿತು. ಅಯ್ಯಣ ತಾತಾ ಹಾಲಬಾವಿ ಬಳಿಕ ಮಾತನಾಡಿದ ಅವರು, ರಂಗಕಲೆ ನಮ್ಮ ನಾಡಿನ ಸಾಂಸ್ಕೃತಿಕ ವೈಭವ ಈ ಕಲೆ ಮತ್ತು ಕಲಾವಿದರನ್ನು ಪ್ರೋತ್ಸಾಹಿಸೋಣ ಎಂದರು.

ಬೆಳಿಗ್ಗೆ ಗಂಗಾಸ್ಥಾನದ ಬಳಿಕ ವಾದ್ಯ ಮತ್ತು ಡೊಳ್ಳಿನೊಂದಿಗೆ ನಿಂಗಯ್ಯ ಮುತ್ಯಾನ ಪಲ್ಲಕ್ಕಿ ಮೆರವಣಿಗೆ ನಡೆಯಿತು. ನಂತರ ಸುತ್ತ ಮುತ್ತಲ ಊರಿನಿಂದ ಬಂದಂತ ಭಕ್ತಾದಿಗಳಿಗೆ ಅನ್ನಪ್ರಸಾದವನ್ನು ಪ್ರಾರಂಭ ಮಾಡಿದರು. ಜಾತ್ರೆಯಲ್ಲಿ ವಿಶೇಷವಾಗಿ ಗುಂಡು ಮತ್ತು ಚೀಲ ಎತ್ತುವ ಸ್ಪರ್ಧೆ ಆಯೋಜಿಸಲಾಗಿತ್ತು. ವಿಜೇತರಾದ ಸ್ಪರ್ಧಾಳುಗಳಿಗೆ ಬಹುಮಾನ ನೀಡಿ ಗೌರವಿಸಿದರು. ಸಾಯಂಕಾಲ 5 ಗಂಟೆಗೆ ಅದ್ದೂರಿಯಾಗಿ ರಥೋತ್ಸವ ಜರುಗಿತು.

ಗೊಲ್ಲಾಳೇಶ್ವರ ನವ ತರಣ ನಾಟ್ಯ ಸಂಘ ಕಲಾತಂಡದಿಂದ ರಾತ್ರಿ ಪ್ರದರ್ಶನಗೊಂಡ ಸರ್ಕಾರ ನಡೆಸಿದ ಸರದಾರ ಸಾಮಾಜಿಕ ನಾಟಕಕ್ಕೆ ಸಣ್ಣಕೆಪ್ಪ ಮುತ್ಯಾ ಬಂಡೆಪ್ಪನಹಳ್ಳಿ ಚಾಲನೆ ನೀಡಿ ಮಾತನಾಡಿದ ಅವರು, ನಾಟಕ ನಮ್ಮ ನಿತ್ಯ ಬದುಕಿನ ಕನ್ನಡಿಯಂತೆ. ಇದರಲ್ಲಿನ ಒಳ್ಳೇಯ ಸನ್ನಿವೇಶಗಳು ನಿಮ್ಮ ಬಾಳಿಗೆ ದಾರಿದೀಪವಾಗಲಿ.

ಕೆಟ್ಟ ಸನ್ನಿವೇಶಗಳು ಅಗ್ನಿಕುಂಡದಲ್ಲಿ ಸುಟ್ಟು ಹೋಗಲಿ ಎಂದು ಹೇಳಿದರು.

ಶ್ರೀ ನಿಜಲಿಂಗಮ್ಮ.ತಾಯಿ ಧರ್ಮರ ಮಠ ಹೆಗ್ಗನದೊಡ್ಡಿ, ಬಸಯ್ಯ ಹಿರೇಮಠ, ಸಾನ್ನಿಧ್ಯವಹಿಸಿದ್ದರು. ಎಲ್ಲಾ ರಾಜಕೀಯ ಮುಖಂಡರು, ಭಕ್ತಾದಿಗಳು, ಸುತ್ತಮುತ್ತಲ ಊರಿನ ಜನರು, ಕನ್ನಳ್ಳಿ ಗ್ರಾಮದ ಮುಖಂಡರು, ಸಾರ್ವಜನಿಕರು ಇತರು ಇದರು.

## ಜಾಲಿಬೆಂಚಿಯಲ್ಲಿ ಶಾರ್ಟ್ ಸರ್ಕ್ಯೂಟ್,ಇಡೀ ಓಣಿಗೆ ವಿದ್ಯುತ್ ಶಾಕ್,ತತ್ತರಿಸಿದ ಜನ

### ಜೆಸ್ಕಾಂ ಅಧಿಕಾರಿಗಳೇ ನೋಡಿ ಇಲ್ಲಿ.. ಹಳೇ ಟಿಸಿ,ವಿದ್ಯುತ್ ತಂತಿ ಬದಲಿಸಿ ಜನರ ಜೀವ ಉಳಿಸಿ

• **ಉದಯವಾಹಿನಿ ಸುರಪುರ**

ಭಾರೀ ಬಿರುಗಾಳಿ ಬಿಟ್ಟದ್ದರಿಂದ ಶಾರ್ಟ್ ಸರ್ಕ್ಯೂಟ್ ಆಗಿ ಇಡೀ ಓಣಿಗೆ ವಿದ್ಯುತ್ ತಗುಲಿ. ಎಲ್ಲೆಂದರಲ್ಲಿ ವಿದ್ಯುತ್ ಕಂಬಗಳಲ್ಲಿ ಬೆಂಕಿ ಕಿಡಿಗಳು ಕಾಣಿಸಿಕೊಂಡ ಘಟನೆ ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಜಾಲಿಬೆಂಚಿ ಗ್ರಾಮದಲ್ಲಿ ನಡೆದಿದೆ.

ಸಂಜೆಯಿಂದ ಶುರುವಾದ ಬೃಹತ್ ಗಾತ್ರದ ಬಿರುಗಾಳಿಗೆ ಗ್ರಾಮದ ಮಲ್ಲಿಕಾರ್ಜುನ ದೇಗುಲ ಹತ್ತಿರ ಇರುವ 65ರ (ಟಿಸಿ) ಯಿಂದ ಶಾರ್ಟ್ ಸರ್ಕ್ಯೂಟ್ ಆಗಿ ಕಂಬಗಳಲ್ಲಿ ಅಳವಡಿಸಿದ ವಿದ್ಯುತ್ ತಂತಿಗಳು ಕತ್ತರಿಸಿ ತುಂಡಾಗಿ ಬಿದ್ದಿದ್ದು, ಒಂದು ಕ್ಷಣ ಮನೆಯಲ್ಲಿದ್ದ ಜನರು ಜೀವ ಝಲ್ ಎಂದು ಹೋಗಿದೆ. ಇನ್ನು 100ಕ್ಕೂ ಹೆಚ್ಚು ಮನೆಗಳಲ್ಲಿ ಟಿವಿ, ಫ್ರಿಡ್ಜ್, ಫ್ಯಾನ್ ಸೇರಿದಂತೆ ಎಲೆಕ್ಟ್ರಾನಿಕ್ ವಸ್ತುಗಳು ಸುಟ್ಟು ಹೋಗಿದ್ದು, ವಿದ್ಯುತ್ ಶಾರ್ಟ್ ಶಬ್ದಕ್ಕೆ ಜನರು ಬೆಚ್ಚಿ ಬಿದ್ದಿದ್ದಾರೆ.ಇನ್ನು ಗ್ರಾಮದ ರಾಯಪ್ಪ ಪಸಲಾದಿ ಹಾಗೂ ರಾಜ ಅಹ್ಮದ್ ಚನ್ನೂರ ಅವರಿಗೆ ವಿದ್ಯುತ್ ತಗುಲಿದ್ದು, ಚಿಕಿತ್ಸೆಗೆಂದು ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದಾರೆ. ಅದೃಷ್ಟವಶಾತ್ ಇನ್ನುಳಿದವರು ಜೀವಪಾಯದಿಂದ ಪಾರಾಗಿದ್ದಾರೆ.



☛ ಉದಯವಾಹಿನಿ ಚಿತ್ರ

ತಾಲ್ಲೂಕಿನಾದ್ಯಂತ ಅನೇಕ ಹಳ್ಳಿಗಳಲ್ಲಿ 45ಕ್ಕೂ ಹೆಚ್ಚು ವರ್ಷಗಳ ಹಿಂದೆ ಅಳವಡಿಸಿದ ವಿದ್ಯುತ್ ತಂತಿ ಹಳೆಯದಾಗಿ ಕತ್ತರಿಸಿ ಬೀಳುತ್ತಿವೆ ಜೆಸ್ಕಾಂ ಇಲಾಖೆಯ ಅಧಿಕಾರಿಗಳು ಎಚ್ಚೆತ್ತುಕೊಂಡು ಜಾಲಿಬೆಂಚಿ ಹಾಗೂ ತಾಲ್ಲೂಕಿನ ಹಳ್ಳಿಗಳಲ್ಲಿ ಇರುವ ಸಮಸ್ಯೆ ಬಗೆ ಹರಿಸಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ. ಭಯಾನಕ ಶಾರ್ಟ್ ಸರ್ಕ್ಯೂಟ್ ನಡೆದ ಸ್ಥಳದಲ್ಲಿ ದತ್ತು ನಾಯಕ, ದೇವು ಕುಂಬಾರ, ಮಹೇಶ, ಸೇರಿದಂತೆ ಗ್ರಾಮಸ್ಥರು ಇದ್ದು, ಜೆಸ್ಕಾಂ ಅಧಿಕಾರಿಗಳ ವಿರುದ್ಧ ಆಕ್ರೋಶ ಹೊರಹಕಿದ್ದಾರೆ.

### ಉಜ್ಜನಿ ಪೀಠದ ಜಗದ್ಗುರು ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ

# ವೀರಶೈವರು ಪಾಳುಬಿದ್ದ ಗುಡಿಗಳಾಗದೆ, ದೇವರಿದ್ದ ಗುಡಿಗಳಂತೆಯಾಗಿ

• **ಉದಯವಾಹಿನಿ, ಚಿಂಚೋಳಿ**



☛ ಉದಯವಾಹಿನಿ ಚಿತ್ರ

ಪ್ರತಿಯೊಂದು ಧರ್ಮಗಳಲ್ಲಿ ಮಗು ಹುಟ್ಟಿದ ಮೇಲೆ ಧರ್ಮ ಆಧಾರಿತ ಆದರ್ಶ ತತ್ವಗಳು, ಸಂಸ್ಕಾರ ಸಂಸ್ಕೃತಿ ಕಲಿಸುತ್ತಾರೆ,ಆದರೆ ವೀರಶೈವ ಧರ್ಮದವರು ಮಹಿಳೆ 8ತಿಂಗಳ ಗರ್ಭಿಣಿ ಯಿರುವಾಗ ಧರ್ಮಗುರುವಿಗೆ ಅಹ್ವಾನಿಸಿ ಗರ್ಭಧಾರಣೆಗೆ ಲಿಂಗವನ್ನು ಕಟ್ಟಿ ವೀರಶೈವ ಧರ್ಮದ ತತ್ವ ಸಿದ್ಧಾಂತಗಳು ಕಲಿಸುತ್ತದೆ, ವೀರಶೈವರು ಎಲ್ಲೋರು ತಪ್ಪದೆ ಪಾಲಿಸಬೇಕು ಎಂದು ಉಜ್ಜಯಿನಿ ಪೀಠದ ಶ್ರೀಮದ್ ಉಜ್ಜಯಿನಿ ಸದ್ಧರ್ಮ ಸಿಂಹಾಸನಾಧೀಶ್ವರ ಶ್ರೀ ಶ್ರೀ ಶ್ರೀ 1008 ಜಗದ್ಗುರು ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಹೇಳಿದರು.

ಪಟ್ಟಣದ ಹೊರವಲದಯಲ್ಲಿರುವ ಮೌನೇಶ್ವರ ಮಂದಿರ ಹಿಂದುಗಡೆ ರೇವಣಸಿದ್ದೇಶ್ವರ ದೇವಾಸ್ಥಾನದ ಅಡಿಗಲ್ಲು ಸಮಾರಂಭ ಆದಿ ಜಗದ್ಗುರು ರೇಣುಕಾಚಾರ್ಯರ ಜಯಂತ್ಯೋತ್ಸವ ಉದ್ಘಾಟಿಸಿ ಆಶೀರ್ವಚನ ನೀಡಿದ ಅವರು, ಪ್ರತಿಯೊಬ್ಬರು ವೀರಶೈವ ಧರ್ಮದಲ್ಲಿ ಹುಟ್ಟಿದರೆ,ಮಾತನಾಡಲು ಬಂದರೆ ವೀರಶೈವ ಲಿಂಗಾಯತ ಧರ್ಮದವರು ಆಗಲ್ಲ,ಬದಲಿಗೆ ವೀರಶೈವರು ಆಗಲು ಮೊದಲು,ರುದ್ರಾಕ್ಷಿ ತೊಟ್ಟು,ಲಿಂಗ ಧಾರಣೆ ಮಾಡಿ ಮುತ್ತಿನಂತೆ ಸರ್ವರಿಗೂ ಮಾತನಾಡಿ ಎಲ್ಲಾ ಜಾತಿ ಧರ್ಮದವರನ್ನು ಒಕ್ಕೂಡಿ ಹೋದರೆ ಅವರೆ ನಿಜವಾದ ವೀರಶೈವ ಲಿಂಗಾಯತ ಧರ್ಮದವರು. ಕಾಶಿ ಫೀಠದ 1008 ಜಗದ್ಗುರು ಡಾ.ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯರು ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಉಡುಪಿ ಮಲ್ಲಿಕಾರ್ಜುನ,ಕೆಪಿಸಿಸಿ ಉಪಾಧ್ಯಕ್ಷ ಸುಭಾಷ್ ರಾಠೋಡ್,ವೀರಶೈವ ಲಿಂಗಾಯತ ಸಂಘಟನಾ ವೇದಿಕೆ ರಾಷ್ಟ್ರೀಯ ಉಪಾಧ್ಯಕ್ಷೆ ದಿವ್ಯ ಹಾಗರಗಿ ಮಾತನಾಡಿದರು.

ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷ ಶರಣುಪಾಟೀಲ ಸ್ವಾಗತಿಸಿದರು,ಶಿವರುದ್ರಯ್ಯಸ್ವಾಮಿ ನಿರೂಪಿಸಿದರು,ಜಯಂತ್ಯೋತ್ಸವ ಸಮಿತಿ ಅಧ್ಯಕ್ಷ ಶಿವಬಸಯ್ಯಸ್ವಾಮಿ ವಂದಿಸಿದರು.

ಡಾ.ಸಂಗಮೇಶ ಉಪಾಸೆ ವಿಶೇಷ ಉಪನ್ಯಾಸ ನೀಡಿದರು. ಬೀದರ ಸಂಸದ ಸಾಗರ್ ಖಂಡ್ರೆ,ಪುರಸಭೆ ಅಧ್ಯಕ್ಷ ಆನಂದ ಟೈಗರ್, ಬಸವರಾಜ ಮಾಲಿ, ಭೀಮಶೆಟ್ಟಿ ಮುಕ್ಕಾ, ಚಿತ್ರಶೇಖರ ಪಾಟೀಲ,ಗೌತಮ್ ಬೊಮ್ನಳ್ಳಿ, ಶಿವಶರಣಪ್ಪ ಶಂಕರ ಮೆಡಿಕಲ್, ನೀಲಕಂಠ ಸೀಳಿನ,ವೀರೇಶ ಎಂಪಳ್ಳಿ,ಸುರೇಶ ದೇಶಪಾಂಡೆ, ರಾಜಶೇಖರ ನಿಲಂಗಿ ಸೇಡಂ,ಮಲ್ಲಿಕಾರ್ಜುನ ಬುಶೆಟ್ಟಿ, ಮಲ್ಲಿಕಾರ್ಜುನ ಸ್ವಾಮಿ,ರಾಜಶೇಖರ ಮುಸ್ತಾರಿ, ಸಂಗನಬಸಯ್ಯ, ರತ್ನಾಕರಯ್ಯ,ಉಮೇಶ ಬೆಳಕೇರಿ, ಸಿದ್ದಯ್ಯ, ಚಂದು ಅವರಾದಿ,ಸಂಗಯ್ಯಸ್ವಾಮಿ, ಏಕನಾಥ ಅಣವಾರ ಸೇರಿದಂತೆ ಹರಗುರು ಚರಮೂರ್ತಿಗಳು ಅನೇಕರಿದ್ದರು.

> **ಸೂತಕಗಳಿಲ್ಲದ ಧರ್ಮ ವೀರಶೈವ ಧರ್ಮ,ನಾವು ಜಾತಿಧರ್ಮ ಮಾಡದೆ ನಾವೆಲ್ಲರೂ ಮೊದಲು ಭಾರತೀಯರು ಎಂದು ತಿಳಿದುಕೊಳ್ಳಬೇಕು, ಹಿಂದೂ ಧರ್ಮ ಸನಾತನ ಧರ್ಮವನ್ನು ಶಿವನ ಸ್ವರೂಪ ಕೊಟ್ಟಿದ್ದು ಅಂತ್ಯವಿಲ್ಲದ ಇಂದು ಮುಂದೆ ಸದಾ ಇರುವ ಸನಾತನ ಧರ್ಮ,ಹರಪಾ ಮಂಜೋದಾರ್ ನಾಗರೀಕತೆ ಬಗ್ಗೆ ಚರ್ಚಿಸಿ ಬ್ರಿಟಿಷ್ ಆಡಳಿತಗಾರ ಜಾನ್ ಮಾರ್ಷಲ್ ಅನೇಕ ಲಿಂಗಗಳು ಪತ್ತೆಹಚ್ಚಿರು, ಕಿ.ಪೂ.5000ವರ್ಷಗಳ ಹಿಂದಿನ ಇತಿಹಾಸ ಸನಾತನ ಧರ್ಮಕ್ಕಿವಿದೆ**
>
> -ಜಗದ್ಗುರು ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ

> **ವೀರಶೈವ ನಾವೆಲ್ಲರೂ ವೀರಭದ್ರೇಶ್ವರ ವಂಶಸ್ಥರು, ಅನಾಥಿ ಕಾಲದಿಂದ ವೀರಶೈವ ಸಮಾಜವಿದೆ ಮುಂದೆಯೂವಿರುತ್ತೆ,ನಮ್ಮ ಹಿಂದೂ ಧರ್ಮದಲ್ಲಿ ಬಹಳಷ್ಟು ಜನ ಸಮಾಜ ಕೆಡಿಸುವವರು ಇದ್ದಾರೆ,ಅಂಥಹ ಕೆಲಸ ಯಾರು ಮಾಡಬೇಡಿ,ಈಗಿನ ಮೊಬೈಲ್ ಕಾಲದಲ್ಲಿ ನಮ್ಮ ಸಂಸ್ಕೃತಿ ಹಾಳಾಗುತ್ತಿದೆ,ಕುಡಿತದಿಂದ ಜೂಜಾಟದಿಂದ ಸಂಸಾರ ಹಾಳಾಗುತ್ತಿವೆ, ಪೋಷಕರು ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ಜೊತೆ ಉತ್ತಮ ಸಂಸ್ಕೃತಿ,ನಡೆನುಡಿಗಳು ಕಲಿಸಬೇಕು**
>
> -ಷ.ಬ್ರ.ಕರುಣೇಶ್ವರ ಶಿವಾಚಾರ್ಯರು
> ನಿಡಗುಂದಾದ ಕಂಚಾಳಕುಂಟಿ
> ನಂದೀಶ್ವರ ಮಠದ

## ಭಗವಾ ಧ್ವಜ ಹರಿಬಿಟ್ಟ ಆರೋಪಿಯ ವಿರುದ್ಧ ಕ್ರಮಕೈಗೊಳ್ಳಲು ಆಗ್ರಹ

• **ಉದಯವಾಹಿನಿ ಕಲಬುರಗಿ**

ಧಾರ್ಮಿಕ ಭಾವನೆ, ಸೌಹಾರ್ದತೆಗೆ ಧಕ್ಕೆಯನ್ನುಂಟು ಮಾಡುವ ದುರುದ್ದೇಶದಿಂದ ರಾಮನವಮಿ ಉತ್ಸವದ ಹೆಸರಿನಲ್ಲಿ ಉತ್ಸವದ ದೃಶ್ಯವಳಿಗಳನ್ನು ಎಡಿಟ್ ಮಾಡಿ ಭಗವಾ ಧ್ವಜವನ್ನು ನಗರದ ಸುಪರ ಮಾರುಕಟ್ಟೆಯ ಮಹೆಬಸ್ ಮಸೀದಿಯ ಮೇಲೆ ಅಳವಡಿಸಿದಂತೆ ಮಾಡಲಾದ ವಿಡಿಯೋ ಚಿತ್ರವನ್ನು ಇನ್ ಸ್ಟಾಗ್ರಾಂನಲ್ಲಿ ಶರಣ-0777 ಹೆಸರಿನಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ಹರಿ ಬಿಡುವ ಮೂಲಕ ಧಾರ್ಮಿಕ ಪ್ರಚೋದನೆಗೆ ಕುಮ್ಮಕ್ಕು ನೀಡಿದ ಆರೋಪಿಯ ವಿರುದ್ಧ ಪ್ರಕರಣ ದಾಖಲಿಸಿ ಕೂಡಲೇ ಬಂಧಿಸುವಂತೆ ನಗರದ ಬ್ರಹ್ಮಪುರ ಪೊಲೀಸ ಠಾಣೆಯಲ್ಲಿ ಮಹ್ಮದ ಮೆಹೆಬೂಬ ರಶೀದ ತಂದೆ ಅಬ್ದುಲ ನಬಿ ತಾಜ್ ನಗರದ ಎಂಬುವವರು ದೂರು ನೀಡಿದ್ದಾರೆ. ಮಸೀದಿಯ ಬಳಿ ಮಹ್ಮದ ಮೆಹೆಬೂಬ ತನ್ನ ಗೆಳೆಯರಾದ ಸೈಯದ ಅಲಿಂ ಮತ್ತು ಮಹ್ಮದ ರಹೆಮಾನ ಅವರೊಂದಿಗೆ ಮೊಬೈಲ್ ನೋಡುತ್ತಿರುವಾಗ, ಧಾರ್ಮಿಕ ಭಾನೆಗಳಿಗೆ ಧಕ್ಕೆ ತರುವಂತಹ ಅಪಾಯಕಾರಿಯ ಈ ದೃಷ್ಯವಳಿಗಳನ್ನು ಸಮಾಜಿಕ ಜಾಲತಾಣದಲ್ಲಿ ನೋಡಿದ್ದು, ಇರುತ್ತದೆ, ಈ ಕುರಿತು ತನಿಖೆಗೆ ಕೈಗೊಂಡು ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಮೂರು ಜನರು ಪೊಲೀಸ ಠಾಣೆಗೆ ಹಾಜರಾಗಿ ಲಿಖಿತ ದೂರು ನೀಡಿದ್ದಾರೆ.

## ಬೆಳಗುಂಪಾ ಮರಳು ದಕ್ಕಾದಲ್ಲಿ ಬಿದ್ದು ಕುರಿಗಾಯಿ ಸಾವು

• **ಉದಯವಾಹಿನಿ ಚಿತ್ತಾಪುರ**

ಬೆಳಗುಂಪಾ ಗ್ರಾಮದ ಮರಳು ದಕ್ಕಾದಲ್ಲಿ ಕರಿಗಾಯಿ ಶ್ರೀಧರ್ ಅಮೃತ ನವಲಕರ್ (28) ಕಾಲು ಜಾರಿ ಬಿದ್ದು ಮೃತಪಟ್ಟ ಘಟನೆ ಜರುಗಿದೆ.

ನಿತ್ಯ ಕುರಿಗಳನ್ನು ಕಾಯುತ್ತಾ ಹೋಗುತಿದ್ದ ಶ್ರೀಧರ್ ಮನೆಗೆ ಬಾರದೇ ಇರುವುದರಿಂದ ಮನೆಯವರು ಎಲ್ಲಾಕಡೆ ಹುಡುಕಾಡಿದರು.

ಕೊನೆಗೆ ಮರಳುಗಾರಿಕೆಗಾಗಿ ಆಳವಾಗಿ ತೊಡಿದ ನೀರು ತುಂಬಿದ ಬೃಹದಾಕಾರದ ಗುಂಡಿಯಲ್ಲಿ ಮೃತ ದೇಹ ಪತ್ತೆಯಾಗಿದೆ. ವಿಷಯ ತಿಳಿಯುತ್ತಿದ್ದಂತೆ ಕೋಲಿ ಕಬ್ಬಲಿಗಾ ಸಮನ್ವಯ ಸಮಿತಿಯ ಜಿಲ್ಲಾ ಮುಖಂಡರಾದ ಅವ್ವಣ್ಣ ಮ್ಯಾಕೇರಿ, ಬಸವರಾಜ ಬೂದಿಹಾಳ, ಗುಂಡು ಐನಾಪುರ, ಕೋಲಿ ಸಮಾಜದ ತಾಲ್ಲೂಕು ಅಧ್ಯಕ್ಷ ಶಿವುಕುಮಾರ ಯಾಗಾಪೂರ ನೇತೃತ್ವದಲ್ಲಿ ನೂರಾರು ಮುಖಂಡರು ಘಟನೆಯನ್ನು ಖಂಡಿಸಿ ಪ್ರತಿಭಟಿಸಿದರು.

## ಜಿಲ್ಲೆಯ ಪಿಯುಸಿ ದ್ವಿತೀಯ ಫಲಿತಾಂಶದಲ್ಲಿ ಸುಧಾರಣೆ

• **ಉದಯವಾಹಿನಿ, ಧಾರವಾಡ**



☛ ಉದಯವಾಹಿನಿ ಚಿತ್ರ

ಧಾರವಾಡ ಜಿಲ್ಲೆಯಲ್ಲಿ ಶೈಕ್ಷಣಿಕ ಸುಧಾರಣೆ ಆರಂಭವಾಗಿದ್ದು, ಕಳೆದ ವರ್ಷ ಧಾರವಾಡ ಜಿಲ್ಲೆ ಪಿಯುಸಿ ದ್ವಿತೀಯ ವರ್ಷದ ಫಲಿತಾಂಶದಲ್ಲಿ 23ನೇ ರ್ಯಾಂಕನಲ್ಲಿತ್ತು, ಆದರೆ ಈ ವರ್ಷ ಅದು ರಾಜ್ಯಕ್ಕೆ 17ನೇ ರ್ಯಾಂಕ್‌ಗೆ ಬಡ್ತಿ ಪಡೆದಿದೆ. ಜೊತೆಗೆ ರಾಜ್ಯಕ್ಕೆ ಕಲಾ ವಿಭಾಗದಲ್ಲಿ 2, ವಾಣಿಜ್ಯ ವಿಭಾಗದಲ್ಲಿ 2 ಮತ್ತು ವಿಜ್ಞಾನ ವಿಭಾಗದಲ್ಲಿ 5 ರ್ಯಾಂಕ್‌ಗಳನ್ನು ಜಿಲ್ಲೆಯ ವಿದ್ಯಾರ್ಥಿಗಳು ಪಡೆದುಕೊಂಡಿದ್ದು, ಒಟ್ಟು ಒಂಬತ್ತು ರ್ಯಾಂಕ್‌ಗಳು ಜಿಲ್ಲೆಗೆ ಬಂದಿದೆ ಎಂದು ಮಿಷನ್ ವಿದ್ಯಾಕಾಶಿ ಯೋಜನೆಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ಪ್ರಕಟವಾದ ಪಿಯುಸಿ ದ್ವಿತೀಯ ವರ್ಷದ ಫಲಿತಾಂಶ ಕುರಿತು ಪತ್ರಿಕಾಗೋಷ್ಠಿ ಜರುಗಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಶೈಕ್ಷಣಿಕ ಬದಲಾವಣೆ ಆರಂಭವಾಗಿದೆ. ಕಳೆದ ವರ್ಷ ಜಿಲ್ಲೆಯ ಫಲಿತಾಂಶ ಕಲಾವಿಭಾಗದಲ್ಲಿ ಶೇ. 53 ರಷ್ಟಾಗಿತ್ತು. ಅದು ಪ್ರಸಕ್ತ ವರ್ಷ ಶೇ. 55.21 ಆಗಿದೆ. ಕಲಾವಿಭಾಗದಲ್ಲಿ 6,044 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಅದರಲ್ಲಿ 3,337 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ವಾಣಿಜ್ಯ ವಿಭಾಗದಲ್ಲಿ ಪ್ರಸ್ತುತ ವರ್ಷ ಫಲಿತಾಂಶ ಶೇ. 65.44 ರಷ್ಟಾಗಿದೆ. 6,849 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 4,482 ಜನ ಉತ್ತೀರ್ಣರಾಗಿದ್ದಾರೆ. ವಿಜ್ಞಾನ ವಿಭಾಗದಲ್ಲಿ ಪ್ರಸ್ತುತ ವರ್ಷ ಶೇ. 84.29 ರಷ್ಟು ಫಲಿತಾಂಶವಾಗಿದೆ. 12,570 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ, ಅದರಲ್ಲಿ 10,595 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಒಟ್ಟಾರೆ ಜಿಲ್ಲೆಯಲ್ಲಿ 2024-25 ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ-1 ರಲ್ಲಿ 25,463 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಅದರಲ್ಲಿ 18,414 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಜಿಲ್ಲೆಯ ಒಟ್ಟು ಫಲಿತಾಂಶ ಶೇ. 72.32 ರಷ್ಟಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

# ಛತ್ತೀಸ್‌ಗಢದಲ್ಲಿ ಶಸ್ತ್ರ ತ್ಯಜಿಸಿ ಶರಣಾದ 22 ನಕ್ಸಲರು

**ಬಿಜಾಪುರ:** ಛತ್ತೀಸ್ ಗಢದ ಬಿಜಾಪುರ ಜಿಲ್ಲೆಯಲ್ಲಿ ಆರು ಮಹಿಳೆಯರು ಸೇರಿದಂತೆ ಕನಿಷ್ಠ 22 ನಕ್ಸಲರು ಭದ್ರತಾ ಪಡೆಗಳ ಮುಂದೆ ಶರಣಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ನೆರೆಯ ದಾಂತೇವಾಡ ಜಿಲ್ಲೆಯಲ್ಲಿ 26 ನಕ್ಸಲರು ನಿಷೇಧಿತ ಸಿಪಿಐ ತೊರೆದ ಒಂದು ದಿನದ ನಂತರ ಈ ಘಟನೆ ನಡೆದಿದೆ. ಆರು ಮಹಿಳೆಯರು ಸೇರಿದಂತೆ ಕಾರ್ಯಕರ್ತರು ಪೊಲೀಸ್ ಮತ್ತು ಕೇಂದ್ರ ಮೀಸಲು ಪೊಲೀಸ್ ಪಡೆಗಳ ಹಿರಿಯ ಅಧಿಕಾರಿಗಳ ಮುಂದೆ ಶರಣಾಗಿದ್ದು, ಟೊಳ್ಳು ಮತ್ತು ಅಮಾನವೀಯ ಮಾವೋವಾದಿ ಸಿದ್ಧಾಂತದ ಬಗ್ಗೆ ನಿರಾಶೆ ಮತ್ತು ಸಂಘಟನೆಯಲ್ಲಿ ಹೆಚ್ಚುತ್ತಿರುವ ಸಭಿನ್ನಾಭಿಪ್ರಾಯಗಳನ್ನು ಉಲ್ಲೇಖಿಸಿದ್ದಾರೆ ಎಂದು ಬಿಜಾಪುರ ಪೊಲೀಸ್ ವರಿಷ್ಠಾಧಿಕಾರಿ ಜಿತೇಂದ್ರ ಕುಮಾರ್ ಯಾದವ್ ತಿಳಿಸಿದ್ದಾರೆ.

ಭದ್ರತಾ ಶಿಬಿರಗಳ ಸುತ್ತಮುತ್ತಲಿನ ದೂರದ ಹಳ್ಳಿಗಳಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಸುಗಮಗೊಳಿಸುವ ಗುರಿಯನ್ನು ಹೊಂದಿರುವ ರಾಜ್ಯ ಸರ್ಕಾರದ ನಿಯಾದ್ ನೆಲ್ಲನಾರ್ (ನಿಮ್ಮ ಉತ್ತಮ ಗ್ರಾಮ) ಯೋಜನೆಯಿಂದ ಅವರು ಪ್ರಭಾವಿತರಾಗಿದ್ದಾರೆ ಎಂದು ಯಾದವ್ ಹೇಳಿದರು. ಒಳನಾಡಿನ ಪ್ರದೇಶಗಳು ಮತ್ತು ಹಳ್ಳಿಗಳಲ್ಲಿನ ಅಭಿವೃದ್ಧಿ ಕಾರ್ಯಗಳು ಮೂಲಭೂತ ಸೌಕರ್ಯಗಳಿಗೆ ಪ್ರವೇಶವನ್ನು ಪಡೆಯುವುದು ಸಹ ಶರಣಾಗತಿಗೆ ಪ್ರಮುಖ ಕಾರಣಗಳಾಗಿವೆ ಎಂದು ಅವರು ಹೇಳಿದರು.

ಶರಣಾದ ಕಾರ್ಯಕರ್ತರಲ್ಲಿ ಪಿಎಲ್ ಸದಸ್ಯ ಕಮ್ಲಿ ಹೇಮ್ಲಾ (32) ಸೇರಿದ್ದಾರೆ. ಮಾವೋವಾದಿಗಳ ಪಿಎಲ್‌ಜಿಎ (ಪೀಪಲ್ಸ್ ಲಿಬರೇಶನ್ ಗೆರಿಲ್ಲಾ ಆರ್ಮಿ) ಬೆಟಾಲಿಯನ್ ಸಂಖ್ಯೆ 1 ರ ಸದಸ್ಯ ಮತ್ತು ತೆಲಂಗಾಣ ರಾಜ್ಯ ಸಮಿತಿಯ ಅಡಿಯಲ್ಲಿ ಕಂಪನಿಯ ಪಕ್ಷದ ಸದಸ್ಯ ಮುಯಾ ಮಾಡ್ವಿ (19) ತಲಾ 8 ಲಕ್ಷ ರೂ.ಗಳ ಬಹುಮಾನವನ್ನು ಹೊಂದಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ.



ಮಾವೋವಾದಿಗಳ ಪಶ್ಚಿಮ ಬಸ್ತಾರ್ ವಿಭಾಗದ ಪತ್ರಿಕಾ ತಂಡದ ಕಮಾಂಡರ್ ಸೋನು ತಾಟಿ (28) ಮತ್ತು ಭೈರಮ್‌ಘಢ ಪ್ರದೇಶ ಸಮಿತಿಯ ಪಿಎಲ್‌ಜಿಎ ಸದಸ್ಯ ಮಹೇಶ್ ಪೂನೆಮ್ ಅವರಿಗೆ ತಲಾ 5 ಲಕ್ಷ ರೂ. ಈ ವರ್ಷ ಜಿಲ್ಲೆಯಲ್ಲಿ ಈವರೆಗೆ 179 ನಕ್ಸಲರು ಹಿಂಸಾಚಾರವನ್ನು ತೊರೆದಿದ್ದಾರೆ ಎಂದು ಎಸ್ಪಿ ಹೇಳಿದರು. ಇದಲ್ಲದೆ, ಈ ಅವಧಿಯಲ್ಲಿ ಜಿಲ್ಲೆಯಲ್ಲಿ ನಡೆದ ಪ್ರತ್ಯೇಕ ಘಟನೆಗಳಲ್ಲಿ 83 ನಕ್ಸಲಿಯನ್ನರು ಸಾವನ್ನಪ್ಪಿದ್ದಾರೆ .

172 ಜನರನ್ನು ಬಂಧಿಸಲಾಗಿದೆ ಎಂದು ಅವರು ಹೇಳಿದರು. ಶರಣಾದ ನಕ್ಸಲರಿಗೆ ತಲಾ 50,000 ರೂ.ಗಳ ನೆರವು ನೀಡಲಾಗಿದ್ದು, ಸರ್ಕಾರದ ನೀತಿಯ ಪ್ರಕಾರ ಅವರಿಗೆ ಹೆಚ್ಚಿನ ಪುನರ್ವಸತಿ ಕಲ್ಪಿಸಲಾಗುವುದು ಎಂದು ಅವರು ಹೇಳಿದರು. ಬಿಜಾಪುರ ಮತ್ತು ದಾಂತೇವಾಡ ಸೇರಿದಂತೆ 7 ಜಿಲ್ಲೆಗಳನ್ನು ಒಳಗೊಂಡ ಬಸ್ತಾರ್ ಪ್ರದೇಶದಲ್ಲಿ 2024 ರಲ್ಲಿ ಕನಿಷ್ಠ 792 ನಕ್ಸಲರು ಶರಣಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

### ಜಂಟಿ ಆರ್ಥಿಕ ಸಮರಾಭ್ಯಾಸಕ್ಕೆ ರೆಕ್ಕೆ-ಪುಕ್ಕ, ಅಮೆರಿಕದ ಸುಂಕ ಸಮರ ಎದುರಿಸಲು ಚೀನಾಗೆ ಬೇಕಿದೆ ಭಾರತದ ಸಹಾಯ

# ಭಾರತ-ಚೀನಾ ದೋಸ್ತಿ ಗಟ್ಟಿ ಮಾಡುತ್ತಿದೆ ಟ್ರಂಪ್ ಸುಂಕ

**ಹೊಸದಿಲ್ಲಿ:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹೊಸ ಸುಂಕ ನೀತಿ, ಇಡೀ ಜಗತ್ತಿನ ಆರ್ಥಿಕತೆಯನ್ನು ಡೋಲಾಯಮಾನ ಸ್ಥಿತಿಗೆ ತಳ್ಳಿದೆ. ಸುಂಕ ನೀತಿಗೆ ಸಂಬಂಧಿಸಿದಂತೆ ಟ್ರಂಪ್ ಹಠಮಾರಿ ಧೋರಣೆ ಜಗತ್ತಿಗೆ ಯಾವ ಒಳಿತನ್ನೂ ಮಾಡುತ್ತಿಲ್ಲ. ಆದರೆ ಈ ಜಾಗತಿಕ ವಾಣಿಜ್ಯ ಸಮರ ಭಾರತ ಮತ್ತು ಚೀನಾ ಪರಸ್ಪರ ಹತ್ತಿರ ಬರುವಂತೆ ಮಾಡುತ್ತಿದೆ.

ಕಳೆದ ಏ.2ರಂದು ಡೊನಾಲ್ಡ್ ಟ್ರಂಪ್ ಸುಂಕ ನೀತಿ ಘೋಷಣೆ ಮಾಡುತ್ತಿದ್ದಂತೇ, ಇದು ಡ್ರ್ಯಾಗನ್-ಆನೆಯ ಜಂಟಿ ನೃತ್ಯದ ಸಮಯ ಎಂದು ಸೂಚ್ಯವಾಗಿ ಹೇಳಿದ್ದ ಚೀನಾ, ಇದೀಗ ಮತ್ತೊಮ್ಮೆ ಭಾರತವನ್ನು ಓಲೈಸುವ ಕಾರ್ಯಕ್ಕೆ ಚಾಲನೆ ನೀಡಿದೆ. ಅದರಲ್ಲೂ ಡೊನಾಲ್ಡ್ ಟ್ರಂಪ್ ಅವರು ಚೀನಾದ ಮೇಲೆ ಶೇ.104ರಷ್ಟು ಸುಂಕ ವಿಧಿಸಿದ ಬಳಿಕ, ಭಾರತದ ನೆರವಿಗೆ ಚೀನಾ ಹಾತೊರೆಯುತ್ತಿದೆ.

ಅಮೆರಿಕದ ಸುಂಕದ ಹೊಡೆತಗಳನ್ನು ಎದುರಿಸಲು ಭಾರತ ಮತ್ತು ಚೀನಾ ಒಟ್ಟಿಗೆ ಕೆಲಸ ಮಾಡಬೇಕಿದೆ. ಎಂದು ಚೀನಾ ರಾಯಭಾರ ಕಚೇರಿಯು ಕರೆ ಕೊಟ್ಟಿದ್ದು, ಅಮೆರಿಕವನ್ನು ಎದುರಿಸಲು ಚೀನಾಗೆ ಭಾರತದ ನೆರವು ಅತ್ಯಗತ್ಯ ಎಂಬುದನ್ನು ಮತ್ತೊಮ್ಮೆ ಸ್ಪಷ್ಟಪಡಿಸಿದೆ.

- ಅಮೆರಿಕದ ಸುಂಕ ಸಮರ ಎದುರಿಸಲು ಚೀನಾಗೆ ಬೇಕಿದೆ ಭಾರತದ ಸಹಾಯ
- ಜಂಟಿ ಆರ್ಥಿಕ ಸಮರಾಭ್ಯಾಸಕ್ಕೆ ಕರೆ ನೀಡಿದ ಚೀನಾ
- ಭಾರತ-ಚೀನಾ ಒಟ್ಟಾಗಿ ಸಂಕಷ್ಟಗಳನ್ನು ಎದುರಿಸುವಂತೆ ಚೀನಾ ರಾಯಭಾರಿ ಮನವಿ
- ಚೀನಾದ ನೆರವಿನ ಕೋರಿಕೆಗೆ ಭಾರತದ ಪ್ರತಿಕ್ರಿಯೆ ಏನಿರಲಿದೆ

ಈ ಕುರಿತು ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಟ್ವೀಟ್ ಮಾಡಿರುವ ಚೀನಾದ ರಾಯಭಾರ ಕಚೇರಿ ವಕ್ತಾರೆ ಯು ಜಿಂಗ್, ಭಾರತ ಮತ್ತು ಚೀನಾ ಒಟ್ಟಾಗಿ ಈ ಆರ್ಥಿಕ ಕಷ್ಟಗಳನ್ನು ನಿವಾರಿಸಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಮುಂದುವರೆದು, ಅಮೆರಿಕದ ಸುಂಕಗಳು ಅಭಿವೃದ್ಧಿಶೀಲ ರಾಷ್ಟ್ರಗಳ ಹಕ್ಕುಗಳನ್ನಿ ಕಸಿದುಕೊಳ್ಳುತ್ತಿವೆ. ಆದ್ದರಿಂದ ಇದರ



ವಿರುದ್ಧ ಭಾರತ ಮತ್ತು ಚೀನಾ ಒಟ್ಟಾಗಿ ನಿಲ್ಲಬೇಕು ಎಂದು ಯು-ಜಿಂಗ್ ಟ್ವೀಟ್ ಮಾಡಿದ್ದಾರೆ.

ಇನ್ನು ಅಮೆರಿಕದ ಸುಂಕ ಯುದ್ಧದಲ್ಲಿ ಒಟ್ಟಾಗಿ ಹೋರಾಡುವಂತೆ ಕರೆ ನೀಡಿರುವ ಭಾರತಕ್ಕೆ ಚೀನಾದ ರಾಯಭಾರಿ ಕ್ಸು ಫೈಹಾಂಗ್, ಪ್ರಸ್ತುತ ಸನ್ನಿವೇಶದಲ್ಲಿ ಸರಕು ಮತ್ತು ಸೇವೆಗಳ ರಫ್ತು ಬೆಳವಣಿಗೆಯಲ್ಲಿ, ಭಾರತ ಮತ್ತು ಚೀನಾ ಮುಂಚೂಣಿಯಲ್ಲಿವೆ. ಇದಕ್ಕಾಗಿ ಎರಡೂ ದೇಶಗಳಿಗೆ ಅಭಿನಂದನೆಗಳು ಎಂದು ಟ್ವೀಟ್ ಮಾಡಿರುವುದು ಜಾಗತಿಕವಾಗಿ ಗಮನ ಸೆಳೆದಿದೆ. ಚೀನಾ ಜಾಗತಿಕ ಆರ್ಥಿಕತೆಗೆ ಶೇ 30 ರಷ್ಟು ಕೊಡುಗೆ ನೀಡುತ್ತದೆ. ಬಹುಪಕ್ಷೀಯ ವ್ಯಾಪಾರ ವ್ಯವಸ್ಥೆಯನ್ನು ಕಾಪಾಡಲು ನಾವು ಪ್ರಪಂಚದ ಉಳಿದ ಭಾಗಗಳೊಂದಿಗೆ ಕೆಲಸ ಮಾಡುತ್ತೇವೆ. ಭಾರತದೊಂದಿಗೂ ನಾವು ಕೆಲಸ ಮಾಡಲು ಸಿದ್ಧ.. ಎಂದು ಚೀನಾದ ರಾಯಭಾರ ಕಚೇರಿ ಸ್ಪಷ್ಟಪಡಿಸಿದೆ.

ಚೀನಾದ ನಿರಂತರ ಮನವಿಗಳ ಹೊರತಾಗಿಯೂ ಭಾರತ ಈ ಬಗ್ಗೆ ಯಾವುದೇ ಅಧಿಕೃತ ಪ್ರತಿಕ್ರಿಯೆಯನ್ನು ನೀಡಿಲ್ಲ. ಸುಂಕ ಯುದ್ಧದ ವಿಚಾರವಾಗಿ ಭಾರತ ಎಚ್ಚರಿಕೆಯ ಹೆಜ್ಜೆಗಳನ್ನಿಡುತ್ತಿದ್ದು, ಅಮೆರಿಕದೊಂದಿಗಿನ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಬಗ್ಗೆ ಹೆಚ್ಚಿನ ಗಮನ ಹರಿಸಿದೆ.

### ಚೀನಾದ ಮೇಲೆ ಟ್ರಂಪ್ ಪ್ರಹಾರ

**ಚೀನಾದ ಮೇಲೆ ಸುಂಕ ಗದಾಪ್ರಹಾರವನ್ನು ಮುಂದುವರೆಸಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಮೊದಲ ಸುತ್ತಿನಲ್ಲಿ ಡ್ರ್ಯಾಗನ್ ರಾಷ್ಟ್ರದ ಮೇಲೆ ಶೇ. 34ರಷ್ಟು ತೆರಿಗೆ ವಿಧಿಸಿದ್ದರು. ಇದಕ್ಕೆ ಪ್ರತಿಯಾಗಿ ಚೀನಾ ಕೂಡ ಅಮೆರಿಕದ ವಸ್ತುಗಳ ಮೇಲೆ ಶೇ.34ರಷ್ಟು ತೆರಿಗೆ ವಿಧಿಸಿದ್ದರಿಂದ ಕುಪಿತಗೊಂಡಿರುವ ಟ್ರಂಪ್, ಇದೀಗ ಚೀನಾದ ಸರಕುಗಳ ಮೇಲಿನ ಸುಂಕವನ್ನು ಶೇ. 104ಕ್ಕೆ ಏರಿಕೆ ಮಾಡಿದ್ದಾರೆ.**

**ಚೀನಾದ ಆರ್ಥಿಕತೆಯು ಸ್ಥಿರವಾದ ಬೆಳವಣಿಗೆಯನ್ನು ಖಚಿತಪಡಿಸುತ್ತದೆ. ಚೀನಾದ ಉತ್ಪಾದನೆಯು ನಿರಂತರವಾಗಿ ಮೇಲ್ದರ್ಜೆಗೇರಿಸುವ ಕೈಗಾರಿಕಾ ವ್ಯವಸ್ಥೆ, ಆರ್‌ಡಿಯಲ್ಲಿನ ಹೂಡಿಕೆ ಮತ್ತು ನಾವೀನ್ಯತೆಯ ಮೇಲೆ ಬಲವಾದ ಗಮನವನ್ನು ಹೊಂದಿದೆ. ವ್ಯಾಪಾರ ಮತ್ತು ಸುಂಕದ ಯುದ್ಧಗಳಲ್ಲಿ ಯಾವುದೇ ವಿಜೇತರು ಇರುವುದಿಲ್ಲ ಎಂದು ಪರೋಕ್ಷವಾಗಿ ಅಮೆರಿಕಕ್ಕೆ ಎಚ್ಚರಿಕೆ ನೀಡಿರುವ ಚೀನಾ, ಈ ಯುದ್ಧದಲ್ಲಿ ಕೊನೆಯ ಹಂತದವರೆಗೂ ಹೋರಾಡುವ ದೃಢ ಸಂಕಲ್ಪ ಮಾಡಿದೆ.**

## ಪಂಜಾಬ್‌ನ ಬಿಜೆಪಿ ಮುಖಂಡ ಕಾಲಿಯಾ ನಿವಾಸದ ಮೇಲೆ ಗ್ರೆನೇಡ್ ದಾಳಿ, ಇಬ್ಬರ ಸೆರೆ

**ಚಂಡೀಗಢ:** ಪಂಜಾಬ್‌ನ ಬಿಜೆಪಿ ಮುಖಂಡ ಮನೋರಂಜನ್ ಕಾಲಿಯಾ ಅವರ ನಿವಾಸದ ಮೇಲೆ ಗ್ರೆನೇಡ್ ದಾಳಿ ನಡೆಸಿದ ಪ್ರಕರಣವನ್ನು ಭೇದಿಸಿರುವ ಪೊಲೀಸರು ಇಬ್ಬರು ಶಂಕಿತರನ್ನು ಬಂಧಿಸಿದ್ದಾರೆ.ಜಲಂಧರ್‌ನ ಶಾಸ್ತ್ರಿ ಮಾರ್ಕೆಟ್ ಸಮೀಪ ಇರುವ ಕಾಲಿಯಾ ಅವರ ನಿವಾಸದ ಮೇಲೆ ಅಪರಿಚಿತ ವ್ಯಕ್ತಿಗಳು ನಿನ್ನೆ ನಸುಕಿನ ಜಾವ 1 ಗಂಟೆಯ ವೇಳೆಯಲ್ಲಿ ಗ್ರೆನೇಡ್ ದಾಳಿ ನಡೆಸಿದ್ದರು, ಕಾಲಿಯಾ ಅವರು ಈ ಸಂದರ್ಭದಲ್ಲಿ ಮನೆಯಲ್ಲಿದ್ದರು.



**ಕೋಮುಗಲಭೆ ಸೃಷ್ಟಿಸುವುದು ಹಿಂದಿನ ಉದ್ದೇಶ**

ಘಟನೆಯಲ್ಲಿ ಯಾರಿಗೂ ಗಾಯಗಳಾಗಿಲ್ಲ. ಬಳಿಕ ಇಬ್ಬರನ್ನು ಸೆರೆಹಿಡಿದ ಪೊಲೀಸರು ಇದು ಪಾಕಿಸ್ತಾನ ಮೂಲದ ಇಂಟರ್ ಸರ್ವೀಸಸ್ ಇಂಟೆಲಿಜೆನ್ಸ್ (ಐಎಸ್‌ಐ) ಬೇಹುಗಾರಿಕಾ ಸಂಸ್ಥೆ ಮತ್ತು ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್‌ನ ಸದಸ್ಯರ ಕೃತ್ಯವಾಗಿದ್ದು, ಪಂಜಾಬ್‌ನಲ್ಲಿ ಕೋಮುಗಲಭೆ ಸೃಷ್ಟಿಸುವುದು ಇದರ ಹಿಂದಿನ ಉದ್ದೇಶವಾಗಿತ್ತು ಎಂದು ತಿಳಿಸಿದ್ದಾರೆ.

ಅಪರಾಧ ಕೃತ್ಯಕ್ಕೆ ಬಳಸಿದ ಎಲೆಕ್ಟ್ರಿಕ್ ರಿಕ್ಷಾವೊಂದನ್ನು ಸಹ ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸ್ ಮಹಾ ನಿರ್ದೇಶಕ (ಕಾನೂನು ಮತ್ತು ಸುವ್ಯವಸ್ಥೆ) ಅರ್ಪಿತ್ ಶುಕ್ಲಾ ಅವರು ಹೇಳಿದ್ದಾರೆ. ಘಟನೆ ನಡೆದ 12 ಗಂಟೆಗಳಲ್ಲೇ ಪೊಲೀಸರು ಆರೋಪಿಗಳನ್ನು ಬಂಧಿಸಿದ್ದಾರೆ ಎಂದು ಅವರು ಶ್ಲಾಘಿಸಿದ್ದಾರೆ. ಇದು ಪಾಕಿಸ್ತಾನದ ಐಎಸ್‌ಐ ನ ಭಾರಿ ಪಿತೂರಿಯಾಗಿದ್ದು, ಲಾರೆನ್ಸ್ ಬಿಷ್ಣೋಯ್ ಗ್ಯಾಂಗನ ಸಹರರ ಝೀಶನ್ ಅಖ್ತರ್ ಮತ್ತು ಪಾಕಿಸ್ತಾನದ ಪಾತಕಿ ಶೆಹಜಾದ್ ಭಟ್ಟಿ ಎಂಬುವರು ಈ ಸಂಚಿನ ರೂವಾರಿಗಳು ಎಂದು ಶುಕ್ಲಾ ವಿವರಿಸಿದ್ದಾರೆ.

ಆರೋಪಿಗಳಿಗೆ ಪಾಕಿಸ್ತಾನ ಮೂಲದ ಬಬ್ಬರ್ ಖಾಲ್ಸಾ ಇಂಟರ್ ನ್ಯಾಷನಲ್ ಮಾಸ್ಟರ್‌ಮೈಂಡ್ ಹಲ್ವಿಂದರ್ ಸಿಂಗ್ ಅಲಿಯಾಸ್ ರಿಂಡಾ ಮತ್ತು ಗ್ಯಾಂಗ್‌ಸ್ಟರ್ ಹ್ಯಾಪಿ ಪಸ್ಸಿಯಾನ ಸಂಪರ್ಕ ಇರುವ ಸಾಧ್ಯತೆಗಳನ್ನು ಅವರು ಅಲ್ಲಗಳೆಯಲಿಲ್ಲ. ಈ ನಿಟ್ಟಿನಲ್ಲಿ ತನಿಖೆ ಮುಂದುವರೆದಿದೆ ಎಂದು ಅವರು ನುಡಿದರು.

## ಮಹಿಳೆಯರನ್ನು ಥಳಿಸಿದ ಪುಂಡರು

**ಥಾಣೆ:** ಮರಾಠಿಯಲ್ಲಿ ಮಾತನಾಡುವ ಬದಲು ಎಕ್ಸ್ ಕ್ಯೂಸ್ ಮೀ ಎಂದು ಹೇಳಿದ್ದಕ್ಕೆ ಇಬ್ಬರು ಮಹಿಳೆಯರನ್ನು ಥಳಿಸಿದ ಘಟನೆ ಥಾಣೆ ಜಿಲ್ಲೆಯ ಡೊಂಬಿವಿಲಿಯಲ್ಲಿ ನಡೆದಿದೆ.

ಘಟನೆಯ ವಿಡಿಯೋ ವೈರಲ್ ಆಗುತ್ತಿದ್ದಂತೆ, ಪೊಲೀಸರು ಪ್ರಾಥಮಿಕ ತನಿಖೆ ನಡೆಸುತ್ತಿದ್ದಾರೆ ಎಂದು ತಿಳಿದು ಬಂದಿದೆ. ಬೆಳಿಗ್ಗೆ ದ್ವಿಚಕ್ರ ವಾಹನದಲ್ಲಿದ್ದ ಮಹಿಳೆಯರು ತಾವು ವಾಸಿಸುತ್ತಿದ್ದ ಹೌಸಿಂಗ್ ಸೊಸೈಟಿಯ ಆವರಣವನ್ನು ಪ್ರವೇಶಿಸುತ್ತಿದ್ದಾಗ ಈ ಘಟನೆ ನಡೆದಿದೆ. ಸ್ಕೂಟರ್‌ನಲ್ಲಿ ಪ್ರಯಾಣಿಸುತ್ತಿದ್ದ ಮಹಿಳೆ ಪ್ರವೇಶದ್ವಾರಕ್ಕೆ ಅಡ್ಡಿಪಡಿಸುತ್ತಿದ್ದ ಯುವಕನಿಗೆ ಎಕ್ಸ್ ಕ್ಯೂಸ್ ಮೀ ಎಂದು ಹೇಳಿದಾಗ, ಅವನು ಕೋಪಗೊಂಡು, ಮರಾಠಿಯಲ್ಲಿ ಮಾತನಾಡುವಂತೆ ಒತ್ತಾಯಿಸಿದನು ಎಂದು ಅವರು ಹೇಳಿದ್ದಾರೆ.

ಅದೇ ಕಟ್ಟಡದ ನೆಲಮಹಡಿಯಲ್ಲಿ ವಾಸಿಸುವ ವ್ಯಕ್ತಿ ಹಿಂಬದಿ ಸವಾರನ ತೋಳನ್ನು ತಿರುಚಿದ್ದಾನೆ ಎಂದು ವಿಷ್ಣುನಗರ ಪೊಲೀಸ್ ಠಾಣೆಯಲ್ಲಿ ದಾಖಲಾದ ದೂರಿನಲ್ಲಿ ತಿಳಿಸಿದ್ದಾರೆ.ಅವರ ಕುಟುಂಬದ ನಾಲ್ಕು ಅಥವಾ 5 ಮಹಿಳೆಯರು ಮತ್ತು ಇಬ್ಬರು ಯುವಕರು ಒಟ್ಟುಗೂಡಿದರು ಮತ್ತು ಇಬ್ಬರು ಮಹಿಳೆಯರನ್ನು ಥಳಿಸಿದ್ದಾರೆ ಎಂದು ಆರೋಪಿಸಲಾಗಿದೆ. 9 ತಿಂಗಳ ಮಗುವಿನ ಬಗ್ಗೆ ಅವರು ಯಾವುದೇ ಕಾಳಜಿಯನ್ನು ತೋರಿಸಲಿಲ್ಲ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

## ಮಹಿಳೆಗೆ ಲೈಂಗಿಕ ಕಿರುಕುಳ: ಭಾರತೀಯ ವ್ಯಕ್ತಿ ಬಂಧನ

**ನ್ಯೂಯಾರ್ಕ್:** ಅಮೆರಿಕದಲ್ಲಿ ವಿಮಾನ ಹಾರಾಟ ಸಮಯದಲ್ಲಿ ಮಹಿಳಾ ಪ್ರಯಾಣಿಕಳ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಭಾರತೀಯ ಮೂಲದ ವ್ಯಕ್ತಿಯೊಬ್ಬನನ್ನು ಅಮೆರಿಕದಲ್ಲಿ ಬಂಧಿಸಲಾಗಿದೆ. ಆರೋಪಿಯನ್ನು ಭವೇಶ್ ಕುಮಾರ್ ದಹಿಯಾಭಾಯ್ ಶುಕ್ಲಾ ಎಂದು ಗುರುತಿಸಲಾಗಿದೆ.

ನ್ಯೂಜೆರ್ಸಿಯ ಲೇಕ್ ಹಿಯಾವಥದ 36 ವರ್ಷದ ಭವೇಶ್‌ಕುಮಾರ್ ದಹ್ಯಾಭಾಯ್ ಶುಕ್ಲಾ, ತನ್ನೊಂದಿಗೆ ಪ್ರಯಾಣಿಸುತ್ತಿದ್ದ ಮಹಿಳಾ ಪ್ರಯಾಣಿಕರೊಂದಿಗೆ ಅನುಚಿತ, ಅನಗತ್ಯ ಲೈಂಗಿಕ ಸಂಪರ್ಕ ಹೊಂದಿದ್ದ ಆರೋಪ ಹೊರಿಸಲಾಗಿದೆ.

ಈ ಘಟನೆ ಜನವರಿ 26, 2025 ರಂದು ಬೋಜ್‌ಮನ್ (ಮೊಂಟಾನಾ) ನಿಂದ ಡಲ್ಲಾಸ್ (ಟೆಕ್ಸಾಸ್)ಗೆ ಹೋಗುತ್ತಿದ್ದ ಅಮೇರಿಕನ್ ಏರ್‌ಲೈನ್ಸ್ ವಿಮಾನದಲ್ಲಿ ನಡೆದಿದೆ. ಭವೇಶ್ ಕುಮಾರ್ ವಿರುದ್ಧ ದುರುಪಯೋಗದ ಲೈಂಗಿಕ ಸಂಪರ್ಕದ ಆರೋಪ ಹೊರಿಸಲಾಗಿದೆ ಎಂದು ಮಾಂಟಾನಾ ಫೆಡರಲ್ ಪ್ರಾಸಿಕ್ಯೂಟರ್ ಕರ್ಟ್ ಎಲ್ಮೆ ಹೇಳಿದ್ದಾರೆ. ತಪ್ಪಿತಸ್ಥರೆಂದು ಸಾಬೀತಾದರೆ, ಶುಕ್ಲಾ ಎರಡು ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು 250,000 (ಸುಮಾರು ರೂ. 2 ಕೋಟಿ) ವರೆಗೆ ದಂಡ ಮತ್ತು ಕನಿಷ್ಠ ಐದು ವರ್ಷಗಳ ಮೇಲ್ವಿಚಾರಣೆಯ



ಬಿಡುಗಡೆಯನ್ನು ಎದುರಿಸಬೇಕಾಗುತ್ತದೆ.

ಈ ಪ್ರಕರಣವನ್ನು ಎಫ್‌ಬಿಐ, ಐಸಿಇ ಮತ್ತು ಡಲ್ಲಾಸ್ ಫೋರ್ಟ್ ವರ್ತ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಏಪ್ರಿಲ್ 17, 2025 ರಂದು ಶುಕ್ಲಾ ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗುವುದು, ಅಲ್ಲಿ ಅವರ ವಿರುದ್ಧದ ಆರೋಪಗಳ ಕುರಿತು ಔಪಚಾರಿಕ ವಿಚಾರಣೆ ನಡೆಯಲಿದೆ. ವಿಶೇಷ ವಿಮಾನ ನ್ಯಾಯವ್ಯಾಪ್ತಿಎಂದರೇನು, ಇದು ಅಮೆರಿಕದ ವಿಶೇಷ ಕಾನೂನಾಗಿದ್ದು, ಯಾವುದೇ ಅಮೇರಿಕನ್ ವಿಮಾನದಲ್ಲಿ ಮಾಡಿದ ಅಪರಾಧಗಳನ್ನು ಫೆಡರಲ್ ಮಟ್ಟದಲ್ಲಿ ವಿಚಾರಣೆಗೆ ಒಳಪಡಿಸಲಾಗುತ್ತದೆ, ಅದು ವಿಮಾನವು ಅಮೆರಿಕದ ಮೇಲಿರಲಿ ಅಥವಾ ಅಂತರರಾಷ್ಟ್ರೀಯ ಗಡಿಯಲ್ಲಿರಲಿ.

ಈ ಕಾನೂನಿನಡಿಯಲ್ಲಿ, ಅಪರಾಧಗಳನ್ನು ಗಂಭೀರವೆಂದು ಪರಿಗಣಿಸಲಾಗುತ್ತದೆ ಮತ್ತು ಕಠಿಣ ಶಿಕ್ಷೆಗೆ ಅವಕಾಶವಿದೆ.

## ಮಿನಿ ನ್ಯೂಸ್

### ಸುಶಾಂತ್ ಸಿಂಗ್ ಸಾವಿನ ಪ್ರಕರಣದ ಮುಕ್ತಾಯ ವರದಿ ವರ್ಗಾವಣೆಗೆ ಅನುಮತಿ

**ಮುಂಬೈ:** ಬಾಲಿವುಡ್ ನಟ ಸುಶಾಂತ್ ಸಿಂಗ್ ರಜಪೂತ್ ಸಾವಿನ ಪ್ರಕರಣದ ಮುಕ್ತಾಯ ವರದಿಯ ವಿಚಾರಣೆಯನ್ನು ನಿಯೋಜಿತ ನ್ಯಾಯಾಲಯಕ್ಕೆ ವರ್ಗಾಯಿಸಲು ಸಿಬಿಐಗೆ ಇಲ್ಲಿನ ನ್ಯಾಯಾಲಯ ಅನುಮತಿ ನೀಡಿದೆ. ಕೇಂದ್ರ ತನಿಖಾ ಸಂಸ್ಥೆ ಕಳೆದ ತಿಂಗಳು ಬಾಂದ್ರಾ ಮೆಟ್ರೋ ಪಾಲಿಟನ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಸಾವಿನ ಪ್ರಕರಣದ ಮುಕ್ತಾಯ ವರದಿಯನ್ನು ಸಲ್ಲಿಸಿತ್ತು. ಜೂನ್ 14, 2020 ರಂದು ತಮ್ಮ 34 ನೇ ವಯಸ್ಸಿನಲ್ಲಿ ಮುಂಬೈನ ಬಾಂದ್ರಾ ಪ್ರದೇಶದ ತಮ್ಮ ಅಪಾರ್ಟ್ ಮೆಂಟ್‌ನಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ನಟ ಪತ್ತೆಯಾಗಿದ್ದರು. ಆಲ್ ಇಂಡಿಯಾ ಇನ್ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸಸ್ (ಏಮ್ಸ್) ನ ವಿಧಿವಿಜ್ಞಾನ ತಜ್ಞರು ಸಿಬಿಐಗೆ ನೀಡಿದ ನಿರ್ಣಾಯಕ ವೈದ್ಯಕೀಯ-ಕಾನೂನು ಅಭಿಪ್ರಾಯದಲ್ಲಿ, ಈ ಪ್ರಕರಣದಲ್ಲಿ ವಿಷ ಮತ್ತು ಕತ್ತು ಹಿಸುಕಲಾಗಿದೆ ಎಂಬ ಹೇಳಿಕೆಗಳನ್ನು ತಳ್ಳಿಹಾಕಿದ್ದಾರೆ ಎಂದು ಸಿಬಿಐ ತನ್ನ ವರದಿಯಲ್ಲಿ ತಿಳಿಸಿದೆ.

### ಅತ್ಯಾಚಾರವೆಸಗಿ, ಬಾಲಕಿಯ ಕೊಲೆ

**ಥಾಣೆ:** ಹತ್ತು ವರ್ಷದ ಬಾಲಕಿಯನ್ನು ಅಪಹರಿಸಿ ಅತ್ಯಾಚಾರ ಎಸಗಿದ ವ್ಯಕ್ತಿಯೊಬ್ಬ ಆಕೆಯ ಕತ್ತು ಸೀಳಿ ಕೊಲೆ ಮಾಡಿ ಶವವನ್ನು ಬಾತ್ ರೂಮ್ ಕಿಟಕಿಯಿಂದ ಎಸೆದಿರುವ ಘಟನೆ ಮಹಾರಾಷ್ಟ್ರದ ಥಾಣೆ ನಗರದಲ್ಲಿ ನಡೆದಿದೆ. ಮುಂಬ್ರಾ ಪ್ರದೇಶದ ಸಾಮ್ರಾಟ್ ನಗರದ 10 ಅಂತಸ್ತಿನ ಕಟ್ಟಡದಲ್ಲಿ ಈ ಘಟನೆ ನಡೆದಿದ್ದು, ಅಪರಾಧಕ್ಕಾಗಿ 20 ವರ್ಷದ ಆಸಿಫ್ ಆಕ್ಟರ್ ಮನ್ಸೂರಿ ಎಂಬ ವ್ಯಕ್ತಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಥಾಣೆ ಮುನ್ಸಿಪಲ್ ಕಾರ್ಪೊರೇಷನ್ನ ವಿಪತ್ತು ನಿರ್ವಹಣಾ ಕೋಶಕ್ಕೆ ಈ ಘಟನೆ ವರದಿಯಾಗಿದೆ ಎಂದು ಅದರ ಮುಖ್ಯಸ್ಥ ಯಾಸಿನ್ ತಡ್ವಿ ತಿಳಿಸಿದ್ದಾರೆ.

### ಬಿರು ಬೇಸಿಗೆಯಲ್ಲಿ ಬ್ಲಾಂಕೆಟ್ ವಿತರಿಸಿದ ಬಿಹಾರ ಸಚಿವ

**ಪಾಟ್ನಾ:** ಜನ ಬಿಸಿಲಿನಿಂದ ತತ್ತರಿಸಿದ್ದು, ರಾಜ್ಯದಲ್ಲಿ ತಾಪಮಾನ 40 ಡಿಗ್ರಿ ಸೆಲ್ಸಿಯಸ್ ದಾಟಿದೆ. ಇಂತಹ ಸಂದರ್ಭದಲ್ಲಿ ಬಿಹಾರ ಕ್ರೀಡಾ ಸಚಿವ ಸುರೇಂದ್ರ ಕುಮಾರ್ ಮೆಹ್ತಾ ಅವರು ಜನರಿಗೆ ಬ್ಲಾಂಕೆಟ್ ವಿತರಿಸುತ್ತಿರುವ ವಿಡಿಯೋ ಪೋಸ್ಟ್ ಮಾಡಿ ವಿವಾದಕ್ಕೆ ಸಿಲುಕಿದ್ದಾರೆ.

ಬಿಜೆಪಿಯ ಸಂಸ್ಥಾಪನಾ ದಿನದ ಅಂಗವಾಗಿ ಬೇಗುಸರಾಯ್ ಜಿಲ್ಲೆಯ ಮನ್ಸೂರ್ಚಕ್ ಬ್ಲಾಕ್‌ನ ಅಹಿಯಾಪುರ್ ಗ್ರಾಮದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಚಿವರು, ಆರ್ಥಿಕವಾಗಿ ದುರ್ಬಲ ವರ್ಗಗಳಿಗೆ ಸೇರಿದ ಸುಮಾರು 700 ಜನರಿಗೆ ಸಾಂಪ್ರದಾಯಿಕ ಬಟ್ಟೆಗಳು ಮತ್ತು ಬ್ಲಾಂಕೆಟ್ ಗಳನ್ನು ವಿತರಿಸಿದರು.

ಏಪ್ರಿಲ್ 6ರಂದು ಪಕ್ಷದ ಸಂಸ್ಥಾಪನಾ ದಿನದ ಅಂಗವಾಗಿ ಸಚಿವರು ಜನರಿಗೆ 'ಅಂಗ್ ವಸ್ತ್ರ' ಹಸ್ತಾಂತರಿಸುವ ಮೂಲಕ ಗೌರವಿಸಿದರು ಬಿಜೆಪಿಯ ಹಿರಿಯ ನಾಯಕರೊಬ್ಬರು ಹೇಳಿದ್ದಾರೆ. ಫಲಾನುಭವಿಗಳಿಗೆ ಬಟ್ಟೆಗಳ ಅಗತ್ಯ ಇತ್ತು. ಅವರಿಗೆ ಸಾಂಪ್ರದಾಯಿಕ 'ಅಂಗ್ ವಸ್ತ್ರವನ್ನು ನೀಡಲು ನಾವು ಈ ಸಂದರ್ಭವನ್ನು ಆಯ್ಕೆ ಮಾಡಿಕೊಂಡೆವು. ಇದೇ ವೇಳೆ ಜನರಿಗೆ ಬ್ಲಾಂಕೆಟ್ ಅನ್ನು ಸಹ ಹಸ್ತಾಂತರಿಸಲಾಯಿತು'' ಎಂದು ಸಚಿವರ ಆಪ್ತರೊಬ್ಬರು ಈ ವರದಿಗಾರರಿಗೆ ದೂರವಾಣಿ ಮೂಲಕ ತಿಳಿಸಿದ್ದಾರೆ. ಬಿರು ಬೇಸಿಗೆಯಲ್ಲಿ ಸಚಿವರು ಬ್ಲಾಂಕೆಟ್ ವಿತರಿಸುವ ವಿಡಿಯೋ ಕ್ಲಿಪ್ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದ್ದು, ಚುನಾವಣೆ ಸಮೀಪಿಸುತ್ತಿರುವ ಬಿಹಾರದಲ್ಲಿ ಅವರ ಈ ಕ್ರಮ ರಾಜಕೀಯ ಟೀಕೆಗೆ ಕಾರಣವಾಗಿದೆ.

## ಹಿಂದೂಗಳ ಪವಿತ್ರ ಕ್ಷೇತ್ರ ವಾರಣಾಸಿಯಲ್ಲೇ ಯುವತಿ ಮೇಲೆ 22 ಜನರಿಂದ 1 ವಾರ ನಿರಂತರ ಗ್ಯಾಂಗ್ ರೇಪ್

**ವಾರಣಾಸಿ:** ಹಿಂದೂಗಳ ಪವಿತ್ರ ಧಾರ್ಮಿಕ ಶ್ರದ್ಧಾ ಕೇಂದ್ರವೆಂದೇ ಹೇಳುವ ಉತ್ತರಪ್ರದೇಶದ ವಾರಣಾಸಿಯಲ್ಲಿ 19 ವರ್ಷದ ಯುವತಿಯನ್ನು ಒಂದು ವಾರದಲ್ಲಿ 22 ಜನರು ಅಪಹರಿಸಿ ಸಾಮೂಹಿಕ ಅತ್ಯಾಚಾರ ನಡೆಸಿರುವ ಆಘಾತಕಾರಿ ಘಟನೆ ನಡೆದಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಆರು ಜನರನ್ನು ಬಂಧಿಸಲಾಗಿದ್ದು, ಉಳಿದವರಿಗಾಗಿ ಶೋಧ ಕಾರ್ಯ ಮುಂದುವರೆಸಿದ್ದಾರೆ.

ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಪೊಲೀಸರು ಎಲ್ಲಾ ಆರೋಪಿಗಳ ವಿರುದ್ಧ ಬಿಎನ್‌ಎಸ್‌ನ ಸೆಕ್ಷನ್ 70(1) (ಸಾಮೂಹಿಕ ಅತ್ಯಾಚಾರ), 74 (ಮಾನಸಿಕ ದೌರ್ಜನ್ಯ), 123 (ವಿಷ ಅಥವಾ ಹಾನಿಕಾರಕ ವಸ್ತು ನೀಡುವುದು), 126(2) (ಚಲನೆಗೆ ಅಡ್ಡಿಪಡಿಸುವುದು), 127(2) (ಅಕ್ರಮ ಬಂಧನ), ಮತ್ತು 351(2) (ಕ್ರಿಮಿನಲ್ ಬೆದರಿಕೆ) ಅಡಿ ದೂರು ದಾಖಲಿಸಿದ್ದಾರೆ. ಉತ್ತರ ವಾರಣಾಸಿಯ ಲಾಲ್‌ಪುರ ಪ್ರದೇಶದ ನಿವಾಸಿಯಾಗಿರುವ ಹದಿಹರೆಯದ ಬಾಲಕಿ ಮಾರ್ಚ್ 29ರಂದು ಸ್ನೇಹಿತನನ್ನು ಭೇಟಿ ಮಾಡಲು ಮನೆಯಿಂದ ಹೊರಟಿದ್ದಳು. ಅದೇ ದಿನ, ಆಕೆಯನ್ನು ಅಪಹರಿಸಿದವರು ಭೇದಕದಲ್ಲಿ ಮಾದಕದ್ರವ್ಯ ಸೇವಿಸಿ ಬಿಡುಗಡೆ ಮಾಡಿದ್ದರು. ಸಂತ್ರಸ್ಥೆಯೂ ಹೇಗೋ ಹತ್ತಿರದ ಸ್ನೇಹಿತನ ಮನೆಗೆ ಹೋಗಿದ್ದರು. ನಂತರ ಅವಳು ತನ್ನ ತಂದೆಗೆ ನಡೆದ ಘಟನೆಯನ್ನು ವಿವರಿಸಿದ್ದಳು. ಬಳಿಕ ಪೊಲೀಸರಿಗೆ ದೂರು ನೀಡಿದಾಗ ಈ ಘಟನೆ ಬೆಳಕಿಗೆ ಬಂದಿದೆ. ಈಘಟನೆಯೂ ಹುಕ್ಕಾ ಬಾರ್, ಹೋಟೆಲ್, ಲಾಡ್ಜ್ ಮತ್ತು ಅತಿಥಿ ಗೃಹದಲ್ಲಿ ನಡೆದಿವೆ ಎಂದು ವರದಿಯಾಗಿದೆ. ಇದರಲ್ಲಿ ವಿವಿಧ ಜನರು ಭಾಗಿಯಾಗಿದ್ದರು.



22 ಜನರು ಅವಳ ಮೇಲೆ ಅತ್ಯಾಚಾರ ಮಾಡಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಪ್ರಕರಣ ದಾಖಲಿಸಲಾಗಿದ್ದು, ಪೊಲೀಸರು ಆರೋಪಿಗಳನ್ನು ವಿಚಾರಣೆ ನಡೆಸುತ್ತಿದ್ದಾರೆ. ಬಂಧಿತರಲ್ಲಿ ಕೆಲವರು ಹುಕುಲ್‌ಗಂಜ್ ಮತ್ತು ಲಲ್ಲಾಪುರ ಪ್ರದೇಶಗಳವರಾಗಿದ್ದು, ಅದೇ ರಾತ್ರಿ ಅವರನ್ನು ವಶಕ್ಕೆ ಪಡೆಯಲಾಗಿದೆ. ಆದರೆ ಅವರಲ್ಲಿ ಕೆಲವರು ಅಪ್ರಾಪ್ತ ವಯಸ್ಕರಾಗಿರಬಹುದು ಎಂಬ ಕಾರಣಕ್ಕೆ ಪೊಲೀಸರು ಯಾವುದೇ ವಿವರ ನೀಡಲು ಹಿಂಜರಿಯುತ್ತಿದ್ದಾರೆ. ಸಂತ್ರಸ್ತ ಅಥವಾ ಆಕೆಯ ಕುಟುಂಬ ಆರಂಭದಲ್ಲಿ ಲೈಂಗಿಕ ದೌರ್ಜನ್ಯದ ದೂರು ದಾಖಲಿಸಿರಲಿಲ್ಲ. ಅತ್ಯಾಚಾರ ದೂರು ಏ. 6 ರಂದು ಮಾತ್ರ ದಾಖಲಾಗಿದೆ.

### ವಿದ್ಯಾರ್ಥಿ ವೀಸಾಗಳ ಮೇಲೆ ಕಣ್ಣು ಹಾಕಿದ ಡೊನಾಲ್ಡ್ ಟ್ರಂಪ್ ಆಡಳಿತ

# ಟ್ರಾಫಿಕ್ ನಿಯಮ ಉಲ್ಲಂಘಿಸಿದರೂ ವಿದ್ಯಾರ್ಥಿ ವೀಸಾ ರದ್ದು

**ವಾಷಿಂಗ್ಟನ್ ಡಿಸಿ:** ಕಠಿಣ ವಲಸೆ ನೀತಿ ಅನುಸರಿಸುತ್ತಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತ, ಉನ್ನತ ಶಿಕ್ಷಣಕ್ಕಾಗಿ ಅಮೆರಿಕಕ್ಕೆ ಬರುವ ಅಥವಾ ಈಗಾಗಲೇ ಅಮೆರಿಕದಲ್ಲಿ ಉನ್ನತ ಶಿಕ್ಷಣ ಪಡೆಯುತ್ತಿರುವ ವಿದೇಶಿ ವಿದ್ಯಾರ್ಥಿಗಳಲ್ಲೂ ಇದೀಗ ಆತಂಕ ಸೃಷ್ಟಿಸಿದೆ.

ಅಮೆರಿಕದಲ್ಲಿ ಓದುತ್ತಿರುವ ವಿದೇಶಿ ವಿದ್ಯಾರ್ಥಿಗಳು ಈಗಾಗಲೇ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇದೀಗ ಅವರ ವಿದ್ಯಾರ್ಥಿ ವೀಸಾವನ್ನು ರದ್ದುಗೊಳಿಸುವ ಸಾಧ್ಯತೆ ಇದೆ.

ಎಫ್-1 ವೀಸಾವು ವಿದೇಶಿ ವಿದ್ಯಾರ್ಥಿಗಳಿಗೆ ಅಮೆರಿಕದ ಖಾಸಗಿ ಅಡಿಯಲ್ಲಿ ಬರುವ ಶಾಲೆಗಳಲ್ಲಿ ಓದಲು ಅನುಮತಿ ನೀಡುತ್ತದೆ. ಆದರೆ ವಿದೇಶಿ ವಿದ್ಯಾರ್ಥಿಗಳು ಈ ವೀಸಾವನ್ನು ಪಡೆಯಲು, ಡೊನಾಲ್ಡ್ ಟ್ರಂಪ್ ಆಡಳಿತವು ಇದೀಗ ಕೆಲವು ಕಟ್ಟುನಿಟ್ಟಿನ ನಿಯಮಗಳನ್ನು ಜಾರಿಗೊಳಿಸಿದೆ. ಈ ನಿಯಮಗಳನ್ನು ಪಾಲಿಸದಿದ್ದರೆ ವಿದ್ಯಾರ್ಥಿ ವೀಸಾ ರದ್ದಾಗಬಹುದು.

ಡೊನಾಲ್ಡ್ ಟ್ರಂಪ್ ಆಡಳಿತದ ಹೊಸ ವೀಸಾ ನೀತಿಗಳು ವಿದ್ಯಾರ್ಥಿಗಳಿಗೆ ಇನ್ನಷ್ಟು ತೊಂದರೆಯನ್ನುಂಟು ಮಾಡಲಿದೆ. ಸಣ್ಣ ತಪ್ಪುಗಳಿಗೂ ವೀಸಾವನ್ನು ರದ್ದುಗೊಳಿಸುವ ನಿರ್ಧಾರ, ಅಮೆರಿಕದಲ್ಲಿ ಶಿಕ್ಷಣ ಪಡೆಯುವ ವಿದೇಶಿ ವಿದ್ಯಾರ್ಥಿಗಳ ಕನಸನ್ನು ನುಚ್ಚುನೂರು ಮಾಡಲಿದೆ.



- ವಿದ್ಯಾರ್ಥಿ ವೀಸಾಗಳ ಮೇಲೆ ಕಣ್ಣು ಹಾಕಿದ ಡೊನಾಲ್ಡ್ ಟ್ರಂಪ್ ಆಡಳಿತ
- ಭಾರೀ ಸಂಖ್ಯೆಯಲ್ಲಿ ವಿದ್ಯಾರ್ಥಿ ವೀಸಾಗಳನ್ನು ರದ್ದು ಮಾಡುತ್ತಿರುವ ಅಮೆರಿಕ
- ಟ್ರಾಫಿಕ್ ನಿಯಮ ಉಲ್ಲಂಘನೆಗೂ ವಿದ್ಯಾರ್ಥಿಗಳಿಗೆ ವೀಸಾ ರದ್ದತಿ ಶಿಕ್ಷೆ
- ವಿದ್ಯಾರ್ಥಿ ವೀಸಾ ಉಳಿಸಿಕೊಳ್ಳಲು ನೀವೇನು ಮಾಡಬೇಕು? ಇಲ್ಲಿದೆ ಮಾಹಿತಿ

ಟ್ರಾಫಿಕ್ ನಿಯಮ ಉಲ್ಲಂಘನೆ, ಪ್ಯಾಲೆಸ್ಟೈನ್ ಪರ ನಿಲುವು, ಸಾಮಾಜಿಕ ಜಾಲತಾಣಗಳಲ್ಲಿ ಸಂದೇಹಾಸ್ಪದ ಚಟುವಟಿಕೆ ಮುಂತಾದ ಕಾರಣಗಳಿಗೆ ವಿದ್ಯಾರ್ಥಿ ವೀಸಾ ರದ್ದಾಗುವ ಸಾಧ್ಯತೆ ದಟ್ಟವಾಗಿದೆ.

ಕೆಲವು ದೇಶಗಳಿಗೆ ನಿರ್ದಿಷ್ಟವಾದ ವೀಸಾ ನೀತಿಗಳನ್ನು ಜಾರಿಗೆ ತರಲಾಗಿದೆಯಲ್ಲದೇ, ಶಿಕ್ಷಣ ಸಂಸ್ಥೆಗಳಿಗೆ ವಿದ್ಯಾರ್ಥಿಗಳ ವೀಸಾ ರದ್ದತಿಯ ಬಗ್ಗೆ ಮಾಹಿತಿಯನ್ನೇ ನೀಡುತ್ತಿಲ್ಲ. ಆಊಖ ಮತ್ತು ಖಅಇ ಸಂಸ್ಥೆಗಳು ಶಾಲಾ ದಾಖಲೆಗಳನ್ನು ಪರಿಶೀಲಿಸುತ್ತಿವೆ. ಇದರಿಂದ ವೀಸಾ ರದ್ದತಿ ಪ್ರಮಾಣ ಸಾಧ್ಯತೆ ಹೆಚ್ಚಿದೆ. ಯಾವುದೇ ಸಮಯದಲ್ಲಿ ವೀಸಾವನ್ನು ರದ್ದು ಮಾಡಬಹುದಾಗಿದ್ದು, ಇದು ಅಮೆರಿಕದಲ್ಲಿ ವ್ಯಾಸಾಂಗ ಮಾಡುತ್ತಿರುವ ವಿದೇಶಿ ವಿದ್ಯಾರ್ಥಿಗಳ ಆತಂಕವನ್ನು ಹೆಚ್ಚಿಸಿದೆ.

ಡೊನಾಲ್ಡ್ ಟ್ರಂಪ್ ಆಡಳಿತವು ದೇಶ-ನಿರ್ದಿಷ್ಟ ವೀಸಾ ನೀತಿಗಳನ್ನು ಜಾರಿಗೆ ತಂದಿದೆ.

### ವಿದ್ಯಾರ್ಥಿಗಳ ಸವಾಲುಗಳು

**ಡೊನಾಲ್ಡ್ ಟ್ರಂಪ್ ಆಡಳಿತದ ವಲಸೆ ನೀತಿಗಳು ಅಂತಾರಾಷ್ಟ್ರೀಯ ವಿದ್ಯಾರ್ಥಿಗಳಿಗೆ ಹೊಸ ಸವಾಲುಗಳನ್ನು ತಂದಿವೆ. ಸಣ್ಣ ತಪ್ಪುಗಳಿಗೂ ವೀಸಾಗಳನ್ನು ರದ್ದು ಮಾಡಲಾಗುತ್ತಿದೆ. ಹಳೆಯ ಟ್ರಾಫಿಕ್ ಉಲ್ಲಂಘನೆ ಪ್ರಕರಣಗಳಲ್ಲೂ ವಿದ್ಯಾರ್ಥಿ ವೀಸಾಗಳನ್ನು ರದ್ದು ಮಾಡಲಾಗುತ್ತಿದೆ. ವಿದ್ಯಾರ್ಥಿಗಳಿಗೆ ಯಾವುದೇ ಮುನ್ಸೂಚನೆ ನೀಡದೆ ವೀಸಾವನ್ನು ರದ್ದು ಮಾಡುತ್ತಿರುವುದು ತೀವ್ರ ವಿವಾದವನ್ನು ಸೃಷ್ಟಿಸಿದೆ. ಇದರಿಂದ ವಿದ್ಯಾರ್ಥಿಗಳು ಗೊಂದಲಕ್ಕೀಡಾಗಿದ್ದು, ಅಮೆರಿಕದಲ್ಲಿ ಉನ್ನತ ಶಿಕ್ಷಣ ಮತ್ತು ಉತ್ತಮ ಉದ್ಯೋಗದ ಕನಸನ್ನು ನನಸು ಮಾಡಿಕೊಳ್ಳಲು ಕಷ್ಟಪಡಬೇಕಿದೆ.**

### ಹಣಕಾಸಿನ ಅಪಾಯಗಳು

**ಶಿಕ್ಷಣಕ್ಕಾಗಿ ಹಣಕಾಸಿನ ನೆರವು ತೋರಿಸಲು ಸಾಧ್ಯವಾಗದಿದ್ದರೆ ವಿದೇಶಿ ವಿದ್ಯಾರ್ಥಿಗಳ ವಿದ್ಯಾರ್ಥಿ ವೀಸಾ ರದ್ದಾಗಬಹುದು. ಕೇವಲ ಆರಂಭಿಕ ಪುರಾವೆ ತೋರಿಸಿದರೆ ಸಾಲದು. ಪ್ರವೇಶ ಪತ್ರಗಳು, ಅಂಕಪಟ್ಟಿಗಳು, ಹಣಕಾಸು ದಾಖಲೆಗಳು ಅಥವಾ ತಿರುಚಿದ ಮಾಹಿತಿಯಂತಹ ನಕಲಿ ದಾಖಲೆಗಳನ್ನು ಸಲ್ಲಿಸಿದರೆ, ವಿದ್ಯಾರ್ಥಿ ವೀಸಾವನ್ನು ಕೂಡಲೇ ರದ್ದುಪಡಿಸಲಾಗುತ್ತದೆ ಎಂದು ಡೊನಾಲ್ಡ್ ಟ್ರಂಪ್ ಆಡಳಿತ ಎಚ್ಚರಿಸಿದೆ.**

## ಡೊಮಿನಿಕನ್ ರಿಪಬ್ಲಿಕ್ ನೈಟ್‌ಕ್ಲಬ್ ಛಾವಣಿ ಕುಸಿತ: 79 ಮಂದಿ ಸಾವು

**ಸ್ಯಾಂಟೊ ಡೊಮಿಂಗೊ:** ಡೊಮಿನಿಕನ್ ರಾಜಧಾನಿಯಲ್ಲಿ ಐಕಾನಿಕ್ ನೈಟ್‌ಕ್ಲಬ್‌ನ ಛಾವಣಿ ಕುಸಿದಿದ್ದರಿಂದ ಕನಿಷ್ಠ 79 ಜನರು ಸಾವನ್ನಪ್ಪಿದ್ದಾರೆ. ಈ ದುರಂತದಲ್ಲಿ ಸುಮಾರು 160 ಜನರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಪ್ರತಿಷ್ಠಿತ ನೈಟ್ ಕ್ಲಬ್‌ನಲ್ಲಿ ನಡೆಯುತ್ತಿದ್ದ ಸಂಗೀತ ಕಚೇರಿಯಲ್ಲಿ ರಾಜಕಾರಣಿಗಳು, ಕ್ರೀಡಾಪಟುಗಳು ಮತ್ತು ಇತರರು ಭಾಗವಹಿಸಿದ್ದರು ಎಂದು ತಿಳಿದು ಬಂದಿದೆ, ಬದುಕುಳಿದವರಿಗಾಗಿ ತೀವ್ರ ಶೋಧ ನಡೆಸಲಾಗುತ್ತಿದೆ.

ಜೆಟ್ ಸೆಟ್ ನೈಟ್‌ಕ್ಲಬ್‌ನಲ್ಲಿ ಸಂಭವಿಸಿದ ದುರಂತದಲ್ಲಿ ಜನಪ್ರಿಯ ಗಾಯಕ, ಪ್ರಾಂತೀಯ ಗವರ್ನರ್ ಮತ್ತು ಇಬ್ಬರು ಮಾಜಿ ಮೇಜರ್ ಲೀಗ್‌ನ ಬೇಸ್‌ಬಾಲ್ ಆಟಗಾರರಾದ ಆಕ್ಟೇವಿಯೊ ಡೋಟೆಲ್ ಮತ್ತು ಟೋನಿ ಬ್ಲಾಂಕೊ ಮೃತಪಟ್ಟಿದ್ದಾರೆ



ಸ್ಯಾಂಟೊ ಡೊಮಿಂಗೊದಲ್ಲಿನ ಒಂದು ಅಂತಸ್ತಿನ ಜೆಟ್ ಸೆಟ್ ನೈಟ್‌ಕ್ಲಬ್‌ನ ಅವಶೇಷಗಳಡಿಯಲ್ಲಿ ಬದುಕುಳಿದವರಿಗಾಗಿ ರಕ್ಷಣಾ ಸಿಬ್ಬಂದಿ ಹುಡುಕಾಟ ನಡೆಸುತ್ತಿದ್ದಾರೆ.

ತುರ್ತು ಕಾರ್ಯಾಚರಣೆಗಳ ನಿರ್ದೇಶಕ ಜುವಾನ್ ಮ್ಯಾನುಯೆಲ್ ಮೆಂಡೆಜ್ ಹೇಳಿದ್ದಾರೆ. ನಾವು ಅವಶೇಷಗಳನ್ನು ತೆರವುಗೊಳಿಸು ವುದರ ಜತೆಗೆ ಅದರಲ್ಲಿ ಸಿಲುಕಿಕೊಂಡವರಿಗಾಗಿ ಹುಡುಕಾಟ ನಡೆಸುತ್ತಿದ್ದೇವೆ ಎಂದು ರಾತ್ರಿ ಮಾಧ್ಯಮ ಗಳೊಂದಿಗೆ ಮಾತನಾಡಿ ತಿಳಿಸಿದ್ದಾರೆ.

ನೈಟ್‌ಕ್ಲಬ್‌ನ ಛಾವಣಿ ಕುಸಿದು ಸುಮಾರು 12 ಗಂಟೆಗಳ ನಂತರ ರಕ್ಷಣಾ ಸಿಬ್ಬಂದಿಗಳು ಅವಶೇಷಗಳಡಿಯಿಂದ ಬದುಕುಳಿದವರನ್ನು ಹೊರತೆಗೆಯುತ್ತಿದ್ದಾರೆ. ಅಗ್ನಿಶಾಮಕ ದಳದವರು ಮುರಿದ ಕಾಂಕ್ರೀಟ್‌ನ ಬ್ಲಾಕ್‌ಗಳನ್ನು ತೆಗೆದು ಹಾಕುತ್ತಿದ್ದಾರೆ.

ರಕ್ಷಣಾ ಸಿಬ್ಬಂದಿ ಕ್ಲಬ್‌ನಲ್ಲಿನ ಮೂರು ಪ್ರದೇಶಗಳಿಗೆ ಆದ್ಯತೆ ನೀಡುತ್ತಿದ್ದಾರೆ ಎಂದು ಮೆಂಡೆಜ್ ಮಾಹಿತಿ ನೀಡಿದ್ದಾರೆ.

ಅವಶೇಷಗಳ ಅಡಿ ಸಿಲುಕಿದವರ ಆರ್ತನಾದ ಹೊರ ಬರುತ್ತಿದ್ದು, ಕಾಪಾಡಿ ಕಾಪಾಡಿ ಎಂಬ ಶಬ್ದ ಕೇಳಿ ಬರುತ್ತಿದೆ ಎಂದು ರಕ್ಷಣಾ ಕಾರ್ಯಾಚರಣೆ ಸಿಬ್ಬಂದಿ ಹೇಳುತ್ತಿದ್ದಾರೆ ಎಂದು ವರದಿಯಾಗಿದೆ.

## ಫಾರ್ಮಾ ವಲಯಕ್ಕೂ ಹೆಚ್ಚಿನ ಸುಂಕ: ಔಷಧಗಳ ಬೆಲೆ ಗಗನಕ್ಕೆ

**ನ್ಯೂಯಾರ್ಕ್:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅಮೆರಿಕ ಮತ್ತು ಹೊರಗಿನ ತೀವ್ರ ವಿರೋಧದ ಹೊರತಾಗಿಯೂ ತಮ್ಮ ಪರಸ್ಪರ ಸುಂಕ ನೀತಿಯ ಬಗ್ಗೆ ಹೋರಾಟ ಮುಂದುವರಿಸಿದ್ದಾರೆ. ಇದು ಔಷಧ ಕ್ಷೇತ್ರದ ಮೇಲೆಯೂ ಪರಿಣಾಮ ಉಂಟು ಮಾಡಿದೆ.

ಅಮೆರಿಕ ಅಧ್ಯಕ್ಷರು ಫಾರ್ಮಾ ವಲಯದ ಮೇಲಿನ ಸುಂಕಗಳು ಶೀಘ್ರದಲ್ಲೇ ಬರಲಿವೆ ಎಂದು ಘೋಷಿಸಿದ್ದಾರೆ. ಈ ವಲಯಕ್ಕೆ ಇಲ್ಲಿಯವರೆಗೆ ಸುಂಕಗಳಿಂದ ವಿನಾಯಿತಿ ನೀಡಲಾಗಿದೆ.

ರಾಷ್ಟ್ರೀಯ ರಿಪಬ್ಲಿಕನ್ ಕಾಂಗ್ರೆಸ್ ಸಮಿತಿಯ ಭೋಜನಕೂಟದಲ್ಲಿ ಮಾತನಾಡಿದ ಟ್ರಂಪ್, ನಾವು ನಮ್ಮ ಸ್ವಂತ ಫಾರ್ಮಾ ಔಷಧಿಗಳನ್ನು ತಯಾರಿಸದ ಕಾರಣ ಫಾರ್ಮಾ ಮೇಲಿನ ಸುಂಕಗಳು ಇರುತ್ತವೆ, ಅವುಗಳನ್ನು ಬೇರೆ ದೇಶದಲ್ಲಿ ತಯಾರಿಸಲಾಗುತ್ತದೆ. ಯುಎಸ್‌ನಲ್ಲಿ ಅದೇ ಪ್ಯಾಕೆಟ್‌ನ ಬೆಲೆ 10 ಅಥವಾ



ಅದಕ್ಕಿಂತ ಹೆಚ್ಚು. ಕಂಪನಿಗಳು ಶೀಘ್ರದಲ್ಲೇ ನಮ್ಮ ಬಳಿಗೆ ಧಾವಿಸಿ ಬರುವ ರೀತಿಯಲ್ಲಿ ನಾವು ಫಾರ್ಮಾ ಮೇಲೆ ಸುಂಕ ವಿಧಿಸಲಿದ್ದೇವೆ.

ನಮಗಿರುವ ಅನುಕೂಲವೆಂದರೆ, ನಾವು ಬಹಳ ದೊಡ್ಡ ಮಾರುಕಟ್ಟೆ. ಶೀಘ್ರದಲ್ಲೇ, ಫಾರ್ಮಾ ಮೇಲೆ ಪ್ರಮುಖ ಸುಂಕವನ್ನು ಘೋಷಿಸುತ್ತೇವೆ ಮತ್ತು ಈ ಕಂಪನಿಗಳು ಅದನ್ನು ಕೇಳಿದಾಗ, ಅವರು ಚೀನಾ ಮತ್ತು ಇತರ ದೇಶಗಳನ್ನು ತೊರೆಯುತ್ತಾರೆ ಏಕೆಂದರೆ ಅವರ ಹೆಚ್ಚಿನ ಉತ್ಪನ್ನಗಳು ಇಲ್ಲಿ ಮಾರಾಟವಾಗುತ್ತವೆ. ಮತ್ತು ಅವರು ಇಲ್ಲಿ ತಮ್ಮ ಘಟಕಗಳನ್ನು ತೆರೆಯುತ್ತಾರೆ ಎಂದು ಹೇಳಿದ್ದಾರೆ.

**ಚೀನಾದ ಮೇಲೆ ಶೇ.104ರಷ್ಟು ಸುಂಕ:** ಹೊಸ ತೆರಿಗೆ ಇಂದು ಮಧ್ಯರಾತ್ರಿಯಿಂದ ಜಾರಿ ಭಾರತೀಯ ಜೆನೆರಿಕ್ ಔಷಧ ತಯಾರಕರು ಅಮೆರಿಕದ ಆರೋಗ್ಯ ರಕ್ಷಣಾ ವ್ಯವಸ್ಥೆಯಲ್ಲಿ ಮಹತ್ವದ ಪಾತ್ರವಹಿಸಿದ್ದಾರೆ. ದೇಶಕ್ಕೆ ಆಮದು ಮಾಡಿಕೊಳ್ಳುವ ಸುಮಾರು 40 ಪ್ರತಿಶತದಷ್ಟು ಜೆನೆರಿಕ್ ಔಷಧಿಗಳನ್ನು ಭಾರತದಿಂದ ಪೂರೈಕೆ ಮಾಡಲಾಗುತ್ತದೆ.

ಆರ್ಥಿಕ ವರ್ಷ 2024 ರಲ್ಲಿ, ಭಾರತದಿಂದ ಸರಿಸುಮಾರು 8 ಶತಕೋಟಿ ಮೌಲ್ಯದ ಔಷಧ ರಫ್ತಾಗಿದ್ದು, ಆರ್ಥಿಕ ವರ್ಷ 2015-2024 ರ ನಡುವೆ ಉದ್ಯಮವು 8 ಪ್ರತಿಶತ ಸಂಯುಕ್ತ ವಾರ್ಷಿಕ ಬೆಳವಣಿಗೆ ದರವನ್ನು ಕಂಡಿದೆ.




# ಮುಂದುವರೆದ ಗಿಲ್ ಸೇನೆಯ ಗುಜರಾತ್ ಗೆಲುವಿನ ಓಟ

## ■ ಸಾಯಿ ಸುದರ್ಶನ್ ಬ್ಯಾಟಿಂಗ್ ಆರ್ಭಟ.. ■ ಬಿಗ್ ಟಾರ್ಗೆಟ್ ಚೇಸ್ ಮಾಡಲು ಬಳಲಿದ ರಾಜಸ್ಥಾನ್ ತಂಡ

ರಾಜಸ್ಥಾನ್ ರಾಯಲ್ಸ್ ವಿರುದ್ಧ ನಡೆದ 23ನೇ ಐಪಿಎಲ್ ಪಂದ್ಯದಲ್ಲಿ ಓಪನರ್ ಸಾಯಿ ಸುದರ್ಶನ್ ಅವರ ಅದ್ಭುತವಾದ ಅರ್ಧಶತಕದ ನೆರವಿನಿಂದ ಗುಜರಾತ್ ಟೈಟನ್ಸ್ 58 ರನ್‌ಗಳಿಂದ ವಿಜಯಶಾಲಿಯಾಗಿದೆ. ಇನ್ನು ಟೂರ್ನಿಯಲ್ಲಿ ಶುಭ್‌ಮನ್ ಗಿಲ್ ಪಡೆಯ ಗೆಲುವಿನ ಓಟ ಮುಂದುವರೆದಿದೆ.

ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಗೆದ್ದ ರಾಜಸ್ಥಾನ್ ರಾಯಲ್ಸ್ ತಂಡದ ನಾಯಕ ಸಂಜು ಸ್ಯಾಮ್ಸನ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡರು. ಗುಜರಾತ್ ತಂಡವನ್ನು ಬ್ಯಾಟಿಂಗ್‌ಗೆ ಆಹ್ವಾನ ಮಾಡಿದರು. ಓಪನರ್ ಆಗಿ ಕ್ರೀಸ್‌ಗೆ ಆಗಮಿಸಿದ ಸಾಯಿ ಸುದರ್ಶನ್ ಹಾಗೂ ಗುಜರಾತ್ ನಾಯಕ ಗಿಲ್ ಅವರ ಬ್ಯಾಟಿಂಗ್ ಆರಂಭ ಚೆನ್ನಾಗಿರಲಿಲ್ಲ.

ಗಿಲ್ ಕೇವಲ 2 ರನ್‌ಗೆ ಕ್ಲೀನ್ ಬೋಲ್ಡ್ ಆಗಿ ಹೊರ ನಡೆದರು. ಬಳಿಕ ಬಂದ ಜೋಶ್ ಬಟ್ಲರ್ ಸಾಯಿ ಸುದರ್ಶನ್‌ಗೆ ಒಳ್ಳೆಯ ಸಾಥ್ ಕೊಟ್ಟರು. ಇದರಿಂದ ಸಾಯಿ ಸುದರ್ಶನ್ ಅಮೋಘವಾದ ಅರ್ಧಶತಕ ಸಿಡಿಸಿದರು. 53 ಎಸೆತಗಳಲ್ಲಿ ಭರ್ಜರಿ 82 ರನ್ ಗಳಿಸಿದರು. ಬಟ್ಲರ್ ಹಾಗೂ ಶಾರುಖ್ ಖಾನ್ ತಲಾ 36 ರನ್‌ಗೆ ವಿಕೆಟ್ ಒಪ್ಪಿಸಿದರು. ರಾಹುಲ್ ತೆವಾಟಿಯಾ 24, ರಶೀದ್ ಖಾನ್ ಅವರ 12 ರನ್‌ಗಳ ಕಾಣಿಕೆಯಿಂದ ಗುಜರಾತ್ 6 ವಿಕೆಟ್‌ಗೆ 218 ರನ್‌ಗಳ ಬಿಗ್ ಟಾರ್ಗೆಟ್ ನೀಡಿತ್ತು.

ಈ ಗುರಿ ಬೆನ್ನು ಹತ್ತಿದ್ದ ರಾಜಸ್ಥಾನ್ ಪಂದ್ಯದಲ್ಲಿ ಹೋರಾಡಿ ಕೊನೆಗೆ ತಲೆ ಬಾಗಿದೆ. ಕಳೆದ ಪಂದ್ಯದಲ್ಲಿ ಅರ್ಧಶತಕ ಸಿಡಿಸಿದ್ದ ರಾಜಸ್ಥಾನ್ ಪರ ಯಶಸ್ವಿ ಜೈಸ್ವಾಲ್ ಮತ್ತೆ ಬ್ಯಾಟಿಂಗ್‌ನಲ್ಲಿ ವಿಫಲವಾಗಿ 6 ರನ್‌ಗೆ ಔಟ್ ಆಗಿದ್ದಾರೆ. ಕ್ಯಾಪ್ಟನ್ ಸಂಜು 41 ರನ್‌ಗಳಿಂದ ಗುಜರಾತ್ ಬೌಲರ್‌ಗಳನ್ನು ಕಾಡಿದರು. ಆದರೆ ನಿತೀಶ್ ರಾಣ, ಶುಭಂ ದುಬೆ ತಲಾ ಒಂದೊಂದು ರನ್‌ಗೆ ಔಟ್ ಆಗಿ ಹೊರ ನಡೆದರು. ರಿಯಾನ್ 26, ಧೃವ್ ಜುರೆಲ್ 05 ರನ್ನಿಂಗ್ ಬ್ಯಾಟಿಂಗ್ ಚೆನ್ನಾಗಿ ಮಾಡಲಿಲ್ಲ. ಜೋಫ್ರಾ ಆರ್ಚರ್ 1 ರನ್‌ಗೆ ಔಟ್ ಆದರು.

ಶಿಮ್ರಾನ್ ಹೆಟ್ಮೆಯರ್ ಅವರು ಕೊನೆಯಲ್ಲಿ ಭರ್ಜರಿ ಹೋರಾಟ ಮಾಡಿದರೂ ಬಾಲ್‌ಗಳಿಗಿಂತ ರನ್‌ಗಳು ಅಧಿಕವಾಗಿದ್ದರಿಂದ ತಂಡವನ್ನು ಗೆಲ್ಲಿಸುವಲ್ಲಿ ವಿಫಲವಾದರು. ಆದರೆ ಭರ್ಜರಿ ಬ್ಯಾಟಿಂಗ್ ಮಾಡಿದ ಹೆಟ್ಮೆಯರ್ 32 ಎಸೆತಗಳಿಗೆ 52 ರನ್ ಗಳಿಸಿ ಪ್ರಸಿದ್ಧ್ ಕೃಷ್ಣ ಬೌಲಿಂಗ್‌ನಲ್ಲಿ ಕ್ಯಾಚ್ ಕೊಟ್ಟರು. ಉಳಿದ ಬ್ಯಾಟರ್‌ಗಳು ಬಂದಷ್ಟೇ ವೇಗವಾಗಿ ಪೆವಿಲಿಯನ್‌ಗೆ ಹೆಜ್ಜೆ ಹಾಕಿದರು. ಹೀಗಾಗಿ ರಾಜಸ್ಥಾನ್ ರಾಯಲ್ಸ್ 19.2 ಓವರ್‌ಗಳಲ್ಲಿ 159 ರನ್‌ಗಳಿಗೆ ಆಲೌಟ್ ಆಗುವ ಮೂಲಕ ಸೋಲೊಪ್ಪಿಕೊಂಡಿತು. ಸದ್ಯ ಗುಜರಾತ್ ಟೈಟನ್ಸ್ 5 ಪಂದ್ಯಗಳಲ್ಲಿ 4ರಲ್ಲಿ ಗೆಲುವು ಸಾಧಿಸಿ ತನ್ನ ವಿಜಯ ಪತಾಕೆ ಮುಂದುವರೆಸಿದೆ.

ಜಿಟಿಗೆ ಗೆಲುವಿನ ನಗಾರಿ



## ಸಿಕ್ಸ್ ಹೊಡೆಸಿಕೊಳ್ಳದೇ ಒಂದೇ ಎಸೆತದಲ್ಲಿ ರನ್ ನೀಡಿದ ಶಾರ್ದೂಲ್

ಇಂಡಿಯನ್ ಪ್ರೀಮಿಯರ್ ಲೀಗ್‌ನ 21ನೇ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ತಂಡದ ಆಲ್‌ರೌಂಡರ್ ಶಾರ್ದೂಲ್ ಠಾಕೂರ್ ಅನಪೇಕ್ಷಿತ ದಾಖಲೆ ಬರೆದಿದ್ದಾರೆ. ಅದು ಕೂಡ ಒಂದೇ ಎಸೆತದಲ್ಲಿ 6 ರನ್‌ಗಳನ್ನು ನೀಡುವ ಮೂಲಕ. ವಿಶೇಷ ಎಂದರೆ ಈ ಆರು ರನ್‌ಗಳಲ್ಲಿ ಸಿಕ್ಸ್ ಮೂಡಿಬಂದಿಲ್ಲ. ಫೋರ್ ಅನ್ನು ಸಹ ನೀಡಿಲ್ಲ. ಇದಾಗ್ಯೂ ಒಂದೇ ಎಸೆತದಲ್ಲಿ 6 ರನ್ ನೀಡಲು ಹೇಗೆ ಸಾಧ್ಯ ಎಂಬ ಪ್ರಶ್ನೆ ಮೂಡುವುದು ಸಹಜ. ಈ ಪ್ರಶ್ನೆಗೆ ಉತ್ತರ 5 ವೈಡ್‌ಗಳು. ಕೊಲ್ಕತ್ತಾ ನೈಟ್ ರೈಡರ್ಸ್ ತಂಡದ ಇನಿಂಗ್ಸ್‌ನ 13ನೇ ಓವರ್ ಎಸೆಯಲು ಬಂದ ಶಾರ್ದೂಲ್ ಠಾಕೂರ್ ಬ್ಯಾಕ್ ಟು ಬ್ಯಾಕ್ 5 ವೈಡ್‌ಗಳನ್ನು ಎಸೆದಿದ್ದಾರೆ. ಅಂದರೆ 5 ಎಸೆತಗಳಲ್ಲಿ 5 ರನ್ ನೀಡಿದರೂ ಶಾರ್ದೂಲ್ ಅವರ ಓವರ್ ಕೌಂಟ್ ಶುರುವಾಗಿರಲಿಲ್ಲ. ಇನ್ನು ಆರನೇ ಎಸೆತದಲ್ಲಿ ಒಂದು ರನ್ ನೀಡುವ ಮೂಲಕ ಮೊದಲ ಎಸೆತವನ್ನು ಪೂರೈಸಿದರು.

ಈ ಮೂಲಕ ಶಾರ್ದೂಲ್ ಠಾಕೂರ್ ಒಂದೇ ಎಸೆತದಲ್ಲಿ 6 ರನ್‌ಗಳನ್ನು ನೀಡಿ ಅನಗತ್ಯ ದಾಖಲೆಯನ್ನು ತಮ್ಮದಾಗಿಸಿಕೊಂಡರು. ಅಲ್ಲದೆ ಐಪಿಎಲ್ ಇತಿಹಾಸದಲ್ಲಿ ಒಂದೇ ಓವರ್‌ನಲ್ಲಿ ಅತೀ ಹೆಚ್ಚು ಎಸೆತಗಳನ್ನು ಎಸೆದ ಮೂರನೇ ಬೌಲರ್ ಎಂಬ ಹೀನಾಯ ದಾಖಲೆಯೊಂದನ್ನು ಸಹ ಬರೆದರು. ಇದಕ್ಕೂ ಮುನ್ನ ಇಂತಹದೊಂದು ದಾಖಲೆ ಮೊಹಮ್ಮದ್ ಸಿರಾಜ್ ಹಾಗೂ ತುಷಾರ್ ದೇಶಪಾಂಡೆ ಹೆಸರಿನಲ್ಲಿತ್ತು. 2023 ರಲ್ಲಿ ಆರ್‌ಸಿಬಿ ಪರ ಕಣಕ್ಕಿಳಿದಿದ್ದ ಸಿರಾಜ್ ಒಂದೇ ಓವರ್‌ನಲ್ಲಿ 11 ಎಸೆತಗಳನ್ನು ಎಸೆದಿದ್ದರು.

ಇದೇ ವರ್ಷ ಸಿಎಸ್‌ಕೆ ಪರ ಆಡಿದ್ದ ತುಷಾರ್ ದೇಶಪಾಂಡೆ ಕೂಡ 11 ಎಸೆತಗಳೊಂದಿಗೆ ಓವರ್ ಪೂರ್ಣಗೊಳಿಸಿದ್ದರು.

ಇದೀಗ ಕೊಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ 11 ಎಸೆತಗಳನ್ನು ಎಸೆಯುವ ಮೂಲಕ ಶಾರ್ದೂಲ್ ಠಾಕೂರ್ ಕೂಡ ಐಪಿಎಲ್‌ನಲ್ಲಿ ದೀರ್ಘಾವಧಿ ಬೌಲಿಂಗ್ ಮಾಡಿದ ಬೌಲರ್‌ಗಳ ಪಟ್ಟಿಗೆ ಸೇರ್ಪಡೆಯಾಗಿದ್ದಾರೆ. ಈ ಮೂಲಕ ಐಪಿಎಲ್‌ನ ಅನಗತ್ಯ ದಾಖಲೆ ಶೂರರ ಪಟ್ಟಿಗೆ ತಮ್ಮ ಹೆಸರನ್ನು ಸೇರ್ಪಡೆಗೊಳಿಸಿದ್ದಾರೆ.



## ಹೊಸ ಸೆಲೆಬ್ರೇಷನ್ ಪರಿಚಯಿಸಿದ ದಿಗ್ವೇಶ್

ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ನೋಟ್‌ಬುಕ್ ಸೆಲೆಬ್ರೇಷನ್‌ನೊಂದಿಗೆ ದಿಗ್ವೇಶ್ ರಾಠಿ ಸಂಚಲನ ಸೃಷ್ಟಿಸಿದ್ದಾರೆ. ಪಂಜಾಬ್ ಕಿಂಗ್ಸ್ ವಿರುದ್ಧದ ಪಂದ್ಯದಲ್ಲಿ ಪ್ರಿಯಾಂಶ್ ಆರ್ಯ ಅವರನ್ನು ಔಟ್ ಮಾಡಿ ನೋಟ್ ಬುಕ್ ಸೆಲೆಬ್ರೇಷನ್ ಮಾಡಿದ್ದ ದಿಗ್ವೇಶ್‌ಗೆ ಪಂದ್ಯ ಶುಲ್ಕದ ಶೇ.25 ರಷ್ಟು ದಂಡ ವಿಧಿಸಿದ್ದರು. ಅಲ್ಲದೆ ಒಂದು ಡಿಮೆರಿಟ್ ಪಾಯಿಂಟ್ ನೀಡಲಾಗಿತ್ತು. ಇದಾದ ಬಳಿಕ ಮುಂಬೈ ಇಂಡಿಯನ್ಸ್ ವಿರುದ್ಧದ ಪಂದ್ಯದಲ್ಲಿ ಮತ್ತದೇ ನೋಟ್ ಬುಕ್ ಸೆಲೆಬ್ರೇಷನ್‌ನೊಂದಿಗೆ ದಿಗ್ವೇಶ್ ರಾಠಿ ಕಾಣಿಸಿಕೊಂಡಿದ್ದರು. ಅಲ್ಲದೆ ಐಪಿಎಲ್ ನಿಯಮ ಉಲ್ಲಂಘಿಸಿದ್ದಕಾಗಿ ಈ ಬಾರಿ ದಿಗ್ವೇಶ್‌ಗೆ ಪಂದ್ಯ ಶುಲ್ಕದ ಶೇ. 50 ರಷ್ಟು ದಂಡ ಹಾಗೂ 2 ಡಿಮೆರಿಟ್ ಪಾಯಿಂಟ್ ನೀಡಲಾಗಿತ್ತು. ಇದೀಗ ಕೊಲ್ಕತ್ತಾ ನೈಟ್ ರೈಡರ್ಸ್ ವಿರುದ್ಧದ ಪಂದ್ಯದಲ್ಲೂ ಸುನಿಲ್ ನರೈನ್ ಅವರ ವಿಕೆಟ್ ಪಡೆದು ನೋಟ್ ಬುಕ್ ಸೆಲೆಬ್ರೇಷನ್ ಮಾಡಿದ್ದಾರೆ. ಆದರೆ ಈ ಬಾರಿ ಅವರು ಆಟಗಾರರನ್ನು ಗುರಿಯಾಗಿಸಿಲ್ಲ. ಬದಲಾಗಿ ಮೈದಾನದ ಮೇಲೆ ಸಹಿ ಹಾಕುವ ಮೂಲಕ ಸಂಭ್ರಮಿಸಿದ್ದಾರೆ. ಈ ಮೂಲಕ ದಿಗ್ವೇಶ್ ರಾಠಿ ಮೈದಾನದ ಮೇಲೆ ಸಹಿ ಹಾಕುವ ಸಂಭ್ರಮಕ್ಕೆ ಮುನ್ನುಡಿ ಬರೆದಿದ್ದಾರೆ. ಆದರೆ ಈ ಸೆಲೆಬ್ರೇಷನ್‌ಗೆ ಬಿಸಿಸಿಐ ಅವರಿಗೆ ಮತ್ತೆ ದಂಡ ಹಾಕಲಿದೆಯಾ ಎಂಬುದನ್ನು ಕಾದು ನೋಡಬೇಕಿದೆ.



## ಮ್ಯಾಕ್ಸ್‌ವೆಲ್‌ಗೆ ಶೇ.25 ರಷ್ಟು ದಂಡ

### ಮ್ಯಾಕ್ಸ್‌ವೆಲ್ ವಿರುದ್ಧ ಮ್ಯಾಚ್ ರೆಫರಿ ಕ್ರಮ

ಇಂಡಿಯನ್ ಪ್ರೀಮಿಯರ್ ಲೀಗ್ 2025 ರ 22ನೇ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಆಲ್‌ರೌಂಡರ್ ಗ್ಲೆನ್ ಮ್ಯಾಕ್ಸ್‌ವೆಲ್ ಅವರ ವರ್ತನೆಗೆ ಮ್ಯಾಚ್ ರೆಫರಿ ದಂಡದ ಶಿಕ್ಷೆ ವಿಧಿಸಿದ್ದಾರೆ. ಈ ಪಂದ್ಯದ ವೇಳೆ ಅನುಚಿತವಾಗಿ ವರ್ತಿಸಿದ್ದ ಮ್ಯಾಕ್ಸ್‌ವೆಲ್‌ಗೆ ಪಂದ್ಯ ಶುಲ್ಕದ ಶೇಕಡಾ 25 ರಷ್ಟು ದಂಡ ವಿಧಿಸಲಾಗಿದೆ. ಅಲ್ಲದೆ ಒಂದು ಡಿಮೆರಿಟ್ ಪಾಯಿಂಟ್ ಕೂಡ ನೀಡಿದ್ದಾರೆ. ಐಪಿಎಲ್ ಬಿಡುಗಡೆ ಮಾಡಿದ ಮಾಧ್ಯಮ ವರದಿ ಪ್ರಕಾರ, ಪಂದ್ಯದ ವೇಳೆ ನಿಯಮಗಳನ್ನು ಉಲ್ಲಂಘಿಸಿದ್ದಕ್ಕಾಗಿ ಮ್ಯಾಕ್ಸ್‌ವೆಲ್ ಈ ಶಿಕ್ಷೆಯನ್ನು ನೀಡಲಾಗಿದೆ. ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧದ ಪಂದ್ಯದ ವೇಳೆ ಮ್ಯಾಕ್ಸಿ ಕೆಲ ನಿಯಮಗಳನ್ನು ಉಲ್ಲಂಘಿಸಿದ್ದು, ಹೀಗಾಗಿ ಅವರಿಗೆ ಒಂದು ಡಿಮೆರಿಟ್ ಪಾಯಿಂಟ್ ಹಾಗೂ ಪಂದ್ಯ ಶುಲ್ಕದ ಶೇ.25 ರಷ್ಟು ದಂಡ ವಿಧಿಸಿರುವುದಾಗಿ ತಿಳಿಸಿದ್ದಾರೆ. ಈ ಘಟನೆಯ ನಂತರ, ಗ್ಲೆನ್ ಮ್ಯಾಕ್ಸ್‌ವೆಲ್ ಲೆವೆಲ್ 1 ಅಪರಾಧವನ್ನು ಮತ್ತು ನೀತಿ ಸಂಹಿತೆ 2.2 ಅನ್ನು ಉಲ್ಲಂಘಿಸಿರುವುದನ್ನು ಒಪ್ಪಿಕೊಂಡಿದ್ದಾರೆ. ಇದು ಪಂದ್ಯಗಳ ಸಮಯದಲ್ಲಿ ಫಿಕ್ಸ್ಚರ್‌ಗಳು ಮತ್ತು ಫಿಟ್ಟಿಂಗ್‌ಗಳ ದುರುಪಯೋಗಕ್ಕೆ ಸಂಬಂಧಿಸಿದ್ದಾಗಿದ್ದು, ಹೀಗಾಗಿ ಮ್ಯಾಚ್ ರೆಫರಿ ಮ್ಯಾಕ್ಸ್‌ವೆಲ್ ವಿರುದ್ಧ ಕ್ರಮ ಕೈಗೊಂಡಿದ್ದಾರೆ.

ಇನ್ನು ಈ ಪಂದ್ಯದಲ್ಲೂ ಗ್ಲೆನ್ ಮ್ಯಾಕ್ಸ್‌ವೆಲ್ ಬ್ಯಾಟ್‌ನಿಂದ ನಿರೀಕ್ಷಿತ ಪ್ರದರ್ಶನ ಮೂಡಿಬಂದಿಲ್ಲ. 6ನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಮ್ಯಾಕ್ಸ್‌ವೆಲ್ ಅವರನ್ನು ಕೇವಲ 1 ರನ್‌ಗೆ ಔಟ್ ಮಾಡುವಲ್ಲಿ ಸಿಎಸ್‌ಕೆ ತಂಡದ ಹಿರಿಯ ಸ್ಪಿನ್ನರ್ ರವಿಚಂದ್ರನ್ ಅಶ್ವಿನ್ ಯಶಸ್ವಿಯಾಗಿದ್ದರು. ಇದಾಗ್ಯೂ ಬೌಲಿಂಗ್ ಮೂಲಕ ಗ್ಲೆನ್ ಮ್ಯಾಕ್ಸ್‌ವೆಲ್ ಪಂಜಾಬ್ ಕಿಂಗ್ಸ್ ತಂಡದ ಗೆಲುವಿಗೆ ಕೊಡುಗೆ ನೀಡಿದ್ದಾರೆ.





## ಪಾರು ಪಾರ್ವತಿ ಪ್ರೈಮ್ ವಿಡಿಯೋದಲ್ಲಿ ಲಭ್ಯ!

ಚಿತ್ರದ ಟ್ರೇಲರ್ ಅನ್ನು ನಟ ಕಿಚ್ಚ ಸುದೀಪ್ ಬಿಡುಗಡೆ ಮಾಡಿ, ತಂಡಕ್ಕೆ ಶುಭ ಹಾರೈಸಿದ್ದರು. ಜನವರಿ 31ರಂದು ಕರ್ನಾಟಕದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾದ ಈ ಚಿತ್ರ ಪ್ರೇಕ್ಷಕರಿಂದ ಉತ್ತಮ ಪ್ರತಿಕ್ರಿಯೆ ಪಡೆಯಿತು. ರೋಹಿತ್ ಕೀರ್ತಿ ನಿರ್ದೇಶನದ ಬಿಗ್ ಬಾಸ್ ಮಾಜಿ ಸ್ಪರ್ಧಿ ಮತ್ತು ನಟಿ ದೀಪಿಕಾ ದಾಸ್ ಅಭಿನಯದ ಇತ್ತೀಚೆಗಷ್ಟೇ ಬಿಡುಗಡೆಯಾದ 'ಪಾರು ಪಾರ್ವತಿ' ಚಿತ್ರ ಇದೀಗ ಪ್ರೈಮ್ ವಿಡಿಯೋದಲ್ಲಿ ವೀಕ್ಷಣೆಗೆ ಲಭ್ಯವಿದೆ. ದೀಪಿಕಾ ದಾಸ್ ಹೊರತಾಗಿ, ಚಿತ್ರದ ತಾರಾಗಣದಲ್ಲಿ ಪೂನಂ ಸಿರ್ನಾಯಕ್ ಮತ್ತು ಫವಾಜ್ ಅಶ್ರಫ್ ಪ್ರಮುಖ ಪಾತ್ರಗಳಲ್ಲಿದ್ದಾರೆ.

ಇದೊಂದು ಪ್ರಯಾಣ ಆಧರಿತ ಚಿತ್ರವಾಗಿದ್ದು, ಬೆಂಗಳೂರು, ಗೋವಾ, ಮಹಾರಾಷ್ಟ್ರ, ರಾಜಸ್ಥಾನ ಮತ್ತು ಉತ್ತರಾಖಂಡದಾದ್ಯಂತ ಚಿತ್ರಿಸಲಾಗಿದೆ. ಪಾರು ಪಾರ್ವತಿ ವಾಸ್ತವ ಮತ್ತು ಭಾವನಾತ್ಮಕ ಪ್ರಯಾಣವನ್ನು ಒಳಗೊಂಡಿದೆ. ವೈವಿಧ್ಯಮಯ ಭೂದೃಶ್ಯಗಳು ಮತ್ತು ಆಂತರಿಕ ರೂಪಾಂತರಗಳನ್ನು ಸೆರೆಹಿಡಿಯುತ್ತದೆ. ಚಿತ್ರದ ಟ್ರೇಲರ್ ಅನ್ನು ನಟ ಕಿಚ್ಚ ಸುದೀಪ್ ಬಿಡುಗಡೆ ಮಾಡಿ, ತಂಡಕ್ಕೆ ಶುಭ ಹಾರೈಸಿದ್ದರು. ಜನವರಿ 31ರಂದು ಕರ್ನಾಟಕದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾದ ಈ ಚಿತ್ರ ಪ್ರೇಕ್ಷಕರಿಂದ ಉತ್ತಮ ಪ್ರತಿಕ್ರಿಯೆ ಪಡೆಯಿತು. ಪಿಬಿ ಪ್ರೇಮನಾಥ್ ನಿರ್ಮಿಸಿರುವ ಈ ಚಿತ್ರಕ್ಕೆ ಅಬಿನ್ ರಾಜೇಶ್ ಅವರ ಛಾಯಾಗ್ರಹಣ, ಆರ್. ಹರಿ ಅವರ ಸಂಗೀತ ಮತ್ತು ಸಿಕೆ ಕುಮಾರ್ ಅವರ ಸಂಕಲನವಿದೆ.





### ಈ ವರ್ಷವೇ ನನ್ನ ಮದುವೆ

## ಹುಡುಗನ ಬಗ್ಗೆ ಅನುಶ್ರೀ ಮಾತು

ಕನ್ನಡದ ಖ್ಯಾತ ನಿರೂಪಕಿ ಅನುಶ್ರೀ ಇದೀಗ ಮದುವೆಯ ಬಗ್ಗೆ ಮಾತಾಡಿದ್ದಾರೆ. ನಾನಾ ಕಾರ್ಯಕ್ರಮಗಳಲ್ಲಿ ಅನುಶ್ರೀಗೆ ಮದುವೆಯ ಬಗ್ಗೆ ಪ್ರಶ್ನಿಸಿದಾಗ ಅಡ್ಡಗೋಡೆಯ ಮೇಲೆ ದೀಪವಿಟ್ಟಂತೆ ಉತ್ತರ ನೀಡುತ್ತಿದ್ದರು. ಇದೀಗ ಅಧಿಕೃತವಾಗಿಯೇ ಮದುವೆಯ ಬಗ್ಗೆ ಅನುಶ್ರೀ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಇದೇ ವರ್ಷವೇ ತಾವು ಮದುವೆ ಆಗೋದಾಗಿ ಹೇಳಿದ್ದಾರೆ.

ಮದುವೆ ಬಗ್ಗೆ ಅಷ್ಟೇ ಅಲ್ಲ, ಮದುವೆಯಾಗೋ ಹುಡುಗ ಕೂಡ ಹೇಗಿರಬೇಕು ಎಂದು ಅನುಶ್ರೀ ಮನಬಿಚ್ಚಿ ಮಾತನಾಡಿದ್ದಾರೆ.

ಸೋಶಿಯಲ್ ಮೀಡಿಯಾದಲ್ಲಿ ಲೈವ್‌ಗೆ ಬಂದಿದ್ದ ಅನುಶ್ರೀಗೆ ನಟಿ ಮಲೈಕಾ ವಸುಪಾಲ್ ಹಾಗೂ ನಟ ನಾಗಭೂಷಣ್ ಮದುವೆ ಕುರಿತು ಪ್ರಶ್ನಿಸಿದ್ದಾರೆ. ನಿಮ್ಮ ಹುಡುಗ ಹೇಗಿರಬೇಕು ಮದುವೆ ಯಾವಾಗ ಎಂದು ಕೇಳಿದ್ದಾರೆ. ಅದಕ್ಕೆ ಮಾತನಾಡಿದ ನಿರೂಪಕಿ, ಹುಡುಗ ತುಂಬ ರೆಸ್ಪಾನ್ಸಿಬಲ್ ಆಗಿರಬೇಕು. ನನ್ನ ಪರವಾಗಿ ಅಲ್ಲ ಅವನ ಲೈಫ್ ಪರವಾಗಿ ರೆಸ್ಪಾನ್ಸಿಬಲ್ ಆಗಿದ್ರೆ ಸಾಕು. ಅವನು ಬದುಕಬೇಕು, ನನ್ನನ್ನು ಬದುಕೋಕೆ ಬಿಡಬೇಕು ಎಂದಿದ್ದಾರೆ. ಈ ವರ್ಷವೇ ಮದುವೆ ಆಗುತ್ತೆ ಗ್ಯಾರಂಟಿ ಎಂದು ಖುಷಿಯಿಂದ ಹೇಳಿಕೊಂಡಿದ್ದಾರೆ. ಅನುಶ್ರೀ ಮಾತಿಗೆ ಮಲೈಕಾ ವಸುಪಾಲ್ ಮತ್ತು ನಾಗಭೂಷಣ್ ಹೌದಾ ಎಂದು ಮತ್ತೊಮ್ಮೆ ಕೇಳಿದ್ದಾರೆ. ಹೌದು. ಈ ವರ್ಷವೇ ಮದುವೆ ಆಗ್ತೀನಿ ಎಂದು ಅಧಿಕೃತವಾಗಿ ಹೇಳಿದ್ದಾರೆ. ಇತ್ತೀಚೆಗಷ್ಟೇ ಮಾರ್ಚ್‌ನಲ್ಲಿ ಸಿಹಿ ಸುದ್ದಿ ಕೊಡುವುದಾಗಿ ಅವರು ಹೇಳಿಕೊಂಡಿದ್ದರು.

ಅಪ್ಪು ಕಟ್ಟಾ ಅಭಿಮಾನಿಯಾಗಿರುವ ಅನುಶ್ರೀ ಅವರು ಪುನೀತ್ ಹುಟ್ಟಿದಹಬ್ಬದಂದು ಸರ್ಪ್ರೈಸ್ ಇದೆ ಅಂತೆಲ್ಲಾ ಅವರದ್ದೇ ಯೂಟ್ಯೂಬ್ ಚಾನೆಲ್‌ನ ಸಂದರ್ಶನದಲ್ಲಿ ಹೇಳಿಕೊಂಡಿದ್ದರು. ಆದರೆ, ಅಂದು ಯಾವ ಸರ್ಪ್ರೈಸ್ ಕೊಡಲಿಲ್ಲ. ಈಗ ತಮ್ಮ ಇನ್‌ಸ್ಟಾದಲ್ಲಿ ಲೈವ್ ಮಾಡಿದ್ದ ಸಮಯದಲ್ಲಿ 2025ರ ಒಳಗೆ ಮದುವೆ ಆಗೋದಾಗಿ ಘೋಷಿಸಿದ್ದಾರೆ.

## ಏ.22ರಿಂದ ಸಿನಿಮಾದ ಶೂಟಿಂಗ್ ಶುರು

'ದೇವರ' ಸಿನಿಮಾ ಬಳಿಕ 'ಕೆಜಿಎಫ್' ಖ್ಯಾತಿಯ ಪ್ರಶಾಂತ್ ನೀಲ್ ಜೊತೆ ಜ್ಯೂ.ಎನ್‌ಟಿಆರ್ ಕೈಜೋಡಿಸಿದ್ದಾರೆ. ಇಬ್ಬರ ಕ್ರೇಜಿ ಕಾಂಬಿನೇಷನ್ ಸಿನಿಮಾದ ಶೂಟಿಂಗ್ ಶುರುವಾಗೋದು ಯಾವಾಗ ಎಂಬ ಅಭಿಮಾನಿಗಳ ಪ್ರಶ್ನೆಗೆ ಇದೀಗ ಉತ್ತರ ಸಿಕ್ಕಿದೆ. ನಿರ್ಮಾಣ ಸಂಸ್ಥೆ ಈ ಕುರಿತು ಅಧಿಕೃತವಾಗಿ ಘೋಷಿಸಿದೆ. ಕೆಲ ತಿಂಗಳುಗಳ ಹಿಂದೆ ಜ್ಯೂ.ಎನ್‌ಟಿಆರ್ ಮತ್ತು ಪ್ರಶಾಂತ್ ನೀಲ್ ಸಿನಿಮಾಗೆ ಅದ್ದೂರಿಯಾಗಿ ಚಾಲನೆ ನೀಡಲಾಗಿತ್ತು. ಆದರೆ ಚಿತ್ರದ ಶೂಟಿಂಗ್ ಪ್ರಾರಂಭ ಆಗೋದು ಯಾವಾಗ ಎಂದು ತಿಳಿಸಿರಲಿಲ್ಲ. ಈಗ ಅಫಿಷಿಯಲ್ ಅನೌನ್ಸ್‌ಮೆಂಟ್ ಹೊರಬಿದ್ದಿದೆ. ಏ.22ರಿಂದ ಜ್ಯೂ. ಎನ್‌ಟಿಆರ್ ಹೊಸ ಸಿನಿಮಾದ ಚಿತ್ರೀಕರಣ ಶುರು ಆಗಲಿದೆ ಎಂದು ಸೋಷಿಯಲ್ ಮೀಡಿಯಾದಲ್ಲಿ ಮೈತ್ರಿ ಮೂವಿ ಮೇಕರ್ಸ್ ನಿರ್ಮಾಣ ಸಂಸ್ಥೆ ತಿಳಿಸಿದೆ. ಸದ್ಯ ಜ್ಯೂ.ಎನ್‌ಟಿಆರ್ ಬಾಲಿವುಡ್‌ನ 'ವಾರ್ 2' ಚಿತ್ರದಲ್ಲಿ ತೊಡಗಿಸಿಕೊಂಡಿದ್ದಾರೆ. ಒಪ್ಪಿಕೊಂಡಿರೋ ಕಮಿಟ್‌ಮೆಂಟ್ ಮುಗಿಸಿ ಏ.22ರಂದು ಪ್ರಶಾಂತ್ ನೀಲ್ ನಿರ್ದೇಶನದ ಸಿನಿಮಾತಂಡವನ್ನು ಅವರು ಸೇರಿಕೊಳ್ಳಲಿದ್ದಾರೆ.





## ತೆರೆಗಾಣಲು ಸಜ್ಜಾದ ವಿದ್ಯಾಪತಿ!

ಡಾಲಿ ಧನಂಜಯ ನಿರ್ಮಾಣ ಮಾಡಿರುವ ಬಹುನಿರೀಕ್ಷಿತ ಚಿತ್ರ 'ವಿದ್ಯಾಪತಿ' ಅಂದರೆ, ಏಪ್ರಿಲ್ 10ರಂದು ರಾಜ್ಯಾದ್ಯಂತ ರಿಲೀಸ್ ಆಗಲಿದೆ. ನಾನಾ ಪಾತ್ರಗಳನ್ನು ಮಾಡುತ್ತಾ, ಇತ್ತೀಚಿನ ದಿನಗಳಲ್ಲಿ ನಟನಾಗಿ ನೆಲೆ ಕಂಡುಕೊಳ್ಳುತ್ತಿರುವ ನಾಗಭೂಷಣ್ ಈ ಚಿತ್ರದಲ್ಲಿ ನಾಯಕನಾಗಿ ನಟಿಸಿದ್ದಾರೆ. ಈ ಸಿನಿಮಾದ ಕಥೆ ಯಾವ ಥರದ್ದಿರಬಹುದೆಂಬ ಕುತೂಹಲ ಇತ್ತೀಚೆಗೆ ಬಿಡುಗಡೆಯಾದ ಟ್ರೈಲರ್ ಮೂಲಕ ತಣಿದಿದೆ. ಆ ಮೂಲಕ ಜಾಹೀರಾಗಿದ್ದ ದೃಶ್ಯಗಳಲ್ಲಿನ ಕ್ವಾಲಿಟಿ, ವಿಭಿನ್ನ ಕಥಾನಕದ ಸುಳಿವುಗಳೇ 'ವಿದ್ಯಾಪತಿ'ಯ ಸುತ್ತ ಗಾಢ ಕೌತುಕ ಮೂಡಿಕೊಳ್ಳುವಂತೆ ಮಾಡಿದೆ. ಹೇಳಿ ಕೇಳಿ ಇದು ಬೇಸಿಗೆ ರಜೆಯ ಕಾಲಮಾನ. ಈ ಘಳಿಗೆಯಲ್ಲಿ ಕುಟುಂಬ ಸಮೇತರಾಗಿ ಕೂತು ನೋಡುವಂಥ ಚಿತ್ರವಾಗಿಯೂ 'ವಿದ್ಯಾಪತಿ' ಗಮನ ಸೆಳೆದಿದೆ. ವಿದ್ಯಾಪತಿ ಚಿತ್ರವನ್ನು ಇಶಾಂ ಹಾಗೂ ಹಸೀನ್ ಸೇರಿ ನಿರ್ದೇಶನ ಮಾಡಿದ್ದಾರೆ. ನಾಗಭೂಷಣ್ ನಾಯಕರಾಗಿದ್ದಾರೆ

ಅಂದಮೇಲೆ ಅಲ್ಲಿ ಹಾಸ್ಯದ ಇರುವಿಕೆ ಇರುತ್ತದೆಂದೇ ಅರ್ಥ. 'ವಿದ್ಯಾಪತಿ' ಚಿತ್ರದಲ್ಲಿ ಎಲ್ಲಿಯೂ ಮುಜುಗರ ತಂದೊಡ್ಡದ ಎಚ್ಚರಿಕೆಯಿಂದಲೇ ಭರಪೂರ ಮನರಂಜನೆ ನೀಡುವ ಫಾರ್ಮುಲಾವನ್ನು ಪ್ರಯೋಗಿಸಲಾಗಿದೆ. ಅದರ ಸ್ಪಷ್ಟ ಸೂಚನೆ ಟ್ರೈಲರ್‌ನಲ್ಲಿ ಕಾಣಿಸಿದೆ. 'ಹಿಟ್ಲರ್ ಸೀರಿಯಲ್' ಮೂಲಕ ಪ್ರಸಿದ್ಧಿ ಪಡೆದುಕೊಂಡು, ಸಿನಿಮಾ ರಂಗಕ್ಕೆ ಪಾದಾರ್ಪಣೆ ಮಾಡಿದ್ದ ಮಲೈಕಾ ವಸುಪಾಲ್ ಈ ಸಿನಿಮಾದಲ್ಲಿ ಸ್ಟಾರ್ ನಟಿಯಾಗಿ, ನಾನಾ ಚಹರೆಗಳನ್ನು ಒಳಗೊಂಡಿರುವ ಪಾತ್ರಕ್ಕೆ ಜೀವ ತುಂಬಿದ್ದಾರೆ.

ನಾಗಭೂಷಣ್‌ಗೂ ಕೂಡ ಅವರೇ ಹೇಳಿಕೊಂಡಂತೆ ಬೋನಸ್ ನಂಥಾ ಚೆಂದದ ಪಾತ್ರವೇ ಸಿಕ್ಕಿದೆ. ಸಾಮಾನ್ಯವಾಗಿ, ಬೇಸಿಗೆ ರಜೆ ಬರುತ್ತಲೇ ಕುಟುಂಬ ಸಮೇತರಾಗಿ ಚಿತ್ರಮಂದಿರಗಳಿಗೆ ತೆರಳುವ ಕ್ರೇಜ್ ಮೂಡಿಕೊಳ್ಳುತ್ತದೆ.



## 800 ಕೋಟಿ ಬಜೆಟ್‌ನಲ್ಲಿ ಮೂಡಿ ಬರಲಿದೆ ಅಲ್ಲು ಅರ್ಜುನ್, ಅಟ್ಲಿ ಸಿನಿಮಾ

'ಜವಾನ್' ಡೈರೆಕ್ಟರ್ ಅಟ್ಲಿ ಜೊತೆ ಅಲ್ಲು ಅರ್ಜುನ್ ಸಿನಿಮಾ ಮಾಡೋದರ ಬಗ್ಗೆ ಅಧಿಕೃತ ಘೋಷಣೆ ಆಗಿದೆ. ಈ ಬೆನ್ನಲ್ಲೇ ಸಿನಿಮಾದ ಬಜೆಟ್ ಬಗ್ಗೆ ಚರ್ಚೆ ಶುರುವಾಗಿದೆ. ಅಲ್ಲು ಅರ್ಜುನ್ ಸಿನಿಮಾವನ್ನು ಅದ್ಧೂರಿಯಾಗಿ 800 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲಿದ್ದಾರೆ ಎನ್ನಲಾದ ವಿಚಾರವೊಂದು ಈಗ ಚರ್ಚೆಗೆ ಗ್ರಾಸವಾಗಿದೆ. 'ಪುಷ್ಪ 2' ಸಕ್ಸಸ್ ಬಳಿಕ ಅಟ್ಲಿ ಜೊತೆ ಸಿನಿಮಾ ಮಾಡಲು ಅಲ್ಲು ಅರ್ಜುನ್ ಮುಂದಾಗಿದ್ದಾರೆ. ಅದಕ್ಕಾಗಿ ಅಟ್ಲಿ ಜೊತೆ ವಿದೇಶಕ್ಕೆ ತೆರಳಿ ಗಿಈಫಿ ತಂತ್ರಜ್ಞರೊಂದಿಗೆ ಅಲ್ಲು ಅರ್ಜುನ್ ಮಾತನಾಡಿದ್ದಾರೆ. ವಿಎಫ್‌ಎಕ್ಸ್‌ಗಾಗಿ ನಟನ ಮುಖದ ಮತ್ತು ದೇಹದ ಮಾದರಿಗಳನ್ನು ತೆಗೆದುಕೊಳ್ಳಲಾಗಿದೆ. ಹಾಗಾಗಿ ಹಾಲಿವುಡ್ ರೇಂಜ್‌ನಲ್ಲಿ ಅದ್ಧೂರಿಯಾಗಿ ಗ್ರಾಫಿಕ್ಸ್ ಮೂಡಿ ಬರಲಿದೆ ಎಂಬ ಸುಳಿವು ಸಿಕ್ಕಿದೆ. ಹೀಗಿರುವಾಗ ಅಟ್ಲಿ ಜೊತೆಗಿನ ಅಲ್ಲು ಅರ್ಜುನ್ ಸಿನಿಮಾ 800 ಕೋಟಿ ರೂ. ಬಜೆಟ್‌ನಲ್ಲಿ ಬರಲಿದೆ ಎಂಬ ಸುದ್ದಿ ಈಗ ಸಿಕ್ಕಾಪಟ್ಟೆ ಚರ್ಚೆ ನಡೆಯುತ್ತಿದೆ. ಅದರಲ್ಲಿ 175 ಕೋಟಿ ರೂ. ಸಂಭಾವನೆಯನ್ನು ಅಲ್ಲು ಅರ್ಜುನ್ ಚಾರ್ಜ್ ಮಾಡಿದ್ದಾರೆ ಎನ್ನಲಾಗಿದೆ. ಒಟ್ನಲ್ಲಿ ದುಬಾರಿ ವೆಚ್ಚದಲ್ಲಿ ಸಿನಿಮಾ ಬರುತ್ತಿದೆ ಎಂದು ಕೇಳಿಯೇ ಫ್ಯಾನ್ಸ್ ದಂಗಾಗಿದ್ದಾರೆ. ಸಿನಿಮಾ ಮೇಲಿನ ನಿರೀಕ್ಷೆ ದುಪ್ಪಟ್ಟಾಗಿದೆ.

800 ಕೋಟಿ ರೂ. ಬಜೆಟ್

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966